ಸಂಪುಟ: 22, ಸಂಚಿಕೆ: 10, ಪುಟಗಳು: 8, ಶನಿವಾರ, 19 ಅಕ್ಟೋಬರ್ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3

### ಸುಭಾಷಿತ

ಎಲ್ಲವೂ ಸರಿಯಿಲ್ಲದಿರುವಾಗ ಯಾವುದು ತಪ್ಪು ಎಂಬ ಪ್ರಶ್ನೆಗೆ ಉತ್ತರಿಸುವುದು ಕಷ್ಟ- ಅನಾಮಿಕ

### ಪಂಚಾಂಗ

(ಶನಿವಾರ 19, ಅಕ್ಟೋಬರ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ, ಶರದೃತು,
- ಆಶ್ವಯುಜ ಮಾಸ,
- ಕೃಷ್ಣ ಪಕ್ಷ, ದ್ವಿತೀಯ/ತೃತೀಯ,
- ಭರಣಿ ನಕ್ಷತ್ರ/ಕೃತಿಕ ನಕ್ಷತ್ರ
- ರಾಹುಕಾಲ: 09:10 ರಿಂದ 10:39
- ಗುಳಿಕಕಾಲ: 06:13 ರಿಂದ 07:41
- ಯಮಗಂಡಕಾಲ: 01:37 ರಿಂದ 03:06



# ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of Newspapers | Tabloids | Magazines



# ಗೋಪಾಲ್ ಜೋಶಿ ತಪ್ಪು ಮಾಡಿದ್ದರೆ ಶಿಕ್ಷೆಯಾಗಲಿ!

**ಹುಬ್ಬಳ್ಳಿ:** ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಸಹೋದರ ಗೋಪಾಲ್ ಜೋಶಿ ವಿರುದ್ಧ ಗಂಭೀರ ಆರೋಪ ಕೇಳಿ ಬಂದಿದೆ. ಕಳೆದ ಬಾರಿಯ ಲೋಕಸಭಾ ಚುನಾವಣೆಗೆ ಟಿಕೆಟ್ ಕೊಡಿಸುವುದಾಗಿ ನಂಬಿಸಿ 1 ಕೋಟಿ 75 ಲಕ್ಷ ಹಣ ಪಡೆದು ವಂಚನೆ ಎಸಗಿದ್ದಾರೆ ಅಂತ ಮಾಜಿ ಶಾಸಕ ದೇವಾನಂದ ಚೌಹಾಣ್ ಪತ್ನಿ ಸುನಿತಾ ಚೌಹಾಣ್ ಎನ್ನುವವರು ದೂರು ನೀಡಿದ್ದರು. ಇದೀಗ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಖುದ್ದು ಪ್ರಹ್ಲಾದ್ ಜೋಶಿಯವರೇ ಪ್ರತಿಕ್ರಿಯೆ ನೀಡಿದ್ದಾರೆ. ಗೋಪಾಲ್ ಜೋಶಿ ಪ್ರಕರಣಕ್ಕೂ, ನನಗೂ ಸಂಬಂಧವಿಲ್ಲ ಅಂತ ಪ್ರಹ್ಲಾದ್ ಜೋಶಿ ಹೇಳಿದ್ದಾರೆ.

**ಗೋಪಾಲ್ ಜೋಶಿ ಕೇಸ್‌ಗೂ, ನನಗೂ ಸಂಬಂಧವಿಲ್ಲ:** ಕೇಸ್ ಬಗ್ಗೆ ಪ್ರತಿಕ್ರಿಯೆ ನೀಡಿದ ಪ್ರಹ್ಲಾದ್ ಜೋಶಿ, ಗೋಪಾಲ್ ಜೋಶಿ ತಪ್ಪು ಮಾಡಿದ್ದರೆ ಕಾನೂನು ಕ್ರಮವಾಗಲಿ. ಗೋಪಾಲ್ ಜೋಶಿ ಮೇಲಿನ ಪ್ರಕರಣಕ್ಕೂ ನನಗೂ ಯಾವುದೇ ಸಂಬಂಧವಿಲ್ಲ ಅಂತ ಪ್ರಹ್ಲಾದ್ ಜೋಶಿ ಹೇಳಿದ್ದಾರೆ. ನನಗೆ ಯಾರೂ ಸಹೋದರಿ ಇಲ್ಲ. ವಿಜಯಲಕ್ಷ್ಮಿ ಯಾರೆಂಬುದೇ ಗೊತ್ತಿಲ್ಲ. ನನ್ನ ತಾಯಿಗೆ ಗೋಪಾಲ್ ಜೋಶಿ ಸೇರಿ ನಾಲ್ವರು ಮಕ್ಕಳು ಇದ್ದೀವಿ ಅಂತ ಪ್ರಹ್ಲಾದ್ ಜೋಶಿ ಹೇಳಿದ್ದಾರೆ

**ನನಗೂ, ಅದಕ್ಕೂ ಸಂಬಂಧವಿಲ್ಲ:** ನನ್ನ ಹೆಸರು ದುರುಪಯೋಗ ಪಡಿಸಿಕೊಳ್ಳುತ್ತಿದ್ದರೆ ಅದಕ್ಕೂ ನನಗೂ ಯಾವುದೇ ಸಂಬಂಧವಿಲ್ಲ. ಈ ಪ್ರಕರಣದಲ್ಲಿ ನನಗೂ, ನನ್ನ ಕುಟುಂಬಕ್ಕೂ ಹಾಗೂ ಬಿಜೆಪಿ ಪಕ್ಷಕ್ಕೂ ಸಂಬಂಧವಿಲ್ಲ ಅಂತ ಪ್ರಹ್ಲಾದ್ ಜೋಶಿ ಹೇಳಿದ್ದಾರೆ.



**ಕಾಂಗ್ರೆಸ್‌ನ ಮುತ್ಠಾಳತನ ಪ್ರದರ್ಶನ:** ಬಿಜೆಪಿ ಟಿಕೆಟ್ ಕೊಡಿಸುವುದಾಗಿ ಹೇಳಿ ಗೋಪಾಲ್ ಜೋಶಿ ಹಣ ಪಡೆದಿದ್ದಾರೋ ಇಲ್ಲವೋ ಗೊತ್ತಿಲ್ಲ. ಇದು ತನಿಖೆಯಿಂದ ಸಾಬೀತಾಗಬೇಕಿದೆ. ಈ ಪ್ರಕರಣದಲ್ಲಿ ಕಾಂಗ್ರೆಸ್ ಪಕ್ಷ ಅತ್ಯಂತ ಬೌದ್ಧಿಕ ದಿವಾಳಿತನ ಪ್ರದರ್ಶನ ಮಾಡುತ್ತಿದೆ. ನನ್ನನ್ನು ಬಂಧಿಸಬೇಕೆನ್ನುವ ಮೂಲಕ ಕಾಂಗ್ರೆಸ್ ಮುತ್ಠಾಳತನ ತೋರುತ್ತಿದೆ. ಸತ್ಯಾಸತ್ಯತೆ ವಿಮರ್ಶೆ ಮಾಡದೆ ಹುಂಬತನ ಪ್ರದರ್ಶಿಸುತ್ತಿದೆ ಅಂತ ಪ್ರಹ್ಲಾದ್ ಜೋಶಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಳೆದ 25 ವರ್ಷಗಳಿಂದ ರಾಜಕೀಯ ಜೀವನದಲ್ಲಿ ಇದ್ದೇನೆ. ಯಾವತ್ತೂ ಕೈ ಮಸಿ ಮಾಡಿಕೊಂಡಿಲ್ಲ. ಇಂದಿಗೂ ಶುದ್ಧ ಹಸ್ತನಾಗಿದ್ದೇನೆ ಅಂತ ನವ ದೆಹಲಿಯಲ್ಲಿ ಪ್ರಹ್ಲಾದ್ ಜೋಶಿ ಪ್ರತಿಕ್ರಿಯೆ ನೀಡಿದ್ದಾರೆ.

**ಏನಿದು ಆರೋಪ?:** 2018ರಲ್ಲಿ ನಾಗಠಾಣಾ ಕ್ಷೇತ್ರದಿಂದ ದೇವಾನಂದ್ ಚೌಹಾಣ್ ಜೆಡಿಎಸ್ ಪಕ್ಷದ ಶಾಸಕರಾಗಿದ್ದರು, ಆದರೆ 2023ರಲ್ಲಿ ಸೋಲು ಕಂಡಿದ್ದರು. ಆ ಬಳಿಕ ದೇವಾನಂದ್ ದಂಪತಿ ಗೋಪಾಲ್ ಜೋಶಿಯವರನ್ನು ಭೇಟಿ ಮಾಡಿದ್ದರಂತೆ. ಈ ವೇಳೆ ಲೋಕಸಭಾ ಚುನಾವಣೆಯಲ್ಲಿ ಟಿಕೆಟ್ ಕೊಡಿಸ್ತೀನಿ ಅಂತ ಹಂತ ಹಂತವಾಗಿ 1 ಕೋಟಿ 75 ಲಕ್ಷ ಹಣ ಪಡೆದು ವಂಚಿಸಿದ್ದಾರೆ ಅಂತ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

**ಗೋಪಾಲ್ ಜೋಶಿ ವಿರುದ್ಧ ಎಫ್‌ಐಆರ್:** ಸದ್ಯ ಮಾಜಿ ಶಾಸಕ ದೇವಾನಂದ್ ಚೌಹಾಣ್ ಪತ್ನಿಯಾಗಿರುವ ಸುನೀತಾ ಚೌಹಾಣ್ ಅವರು ನೀಡಿದ ದೂರಿನನ್ವಯ ಬೆಂಗಳೂರಿನ ಬಸವೇಶ್ವರ ನಗರ ಠಾಣೆಯಲ್ಲಿ ವಂಚನೆ, ಜಾತಿ ನಿಂದನೆ ಆರೋಪದಡಿ ಎಫ್‌ಐಆರ್ ದಾಖಲಾಗಿದೆ.

ಪುಟ 2

## ಸಂಕ್ಷಿಪ್ತ ಸುದ್ದಿ

### ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿಗೆ ಅನುದಾನ ಬಿಡುಗಡೆ

**ಬೆಂಗಳೂರು:** ಕ್ಷೇತ್ರ ಅಭಿವೃದ್ಧಿಗೆ ಅನುದಾನ ಬಿಡುಗಡೆ ವಿಚಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕರ್ನಾಟಕ ಸರ್ಕಾರ ತಾರತಮ್ಯ ಮಾಡುತ್ತಿದೆ ಎಂದು ಬಿಜೆಪಿ ಮತ್ತು ಜೆಡಿಎಸ್ ಶಾಸಕರು ಆರೋಪ ಮಾಡಿದ್ದರು. ಆದರೆ, ಇದೀಗ ರಾಜ್ಯ ಸರ್ಕಾರ ಬಿಜೆಪಿ ಮತ್ತು ಜೆಡಿಎಸ್ ಸೇರಿದಂತೆ 45 ಶಾಸಕರ ಕ್ಷೇತ್ರಗಳಿಗೆ ಕ್ರಿಯಾ ಯೋಜನೆ ಅಡಿ ಅಲ್ಪಸಂಖ್ಯಾತರ ಕಾಲೋನಿಗಳ ಅಭಿವೃದ್ಧಿಗೆ 161 ಕೋಟಿ ರೂ. ಬಿಡುಗಡೆ ಮಾಡಿದೆ. ಅಲ್ಪಸಂಖ್ಯಾತರ ಕಾಲೋನಿಗಳ ಅಭಿವೃದ್ಧಿಗೆ ಇದೇ ವರ್ಷ ಜನವರಿಯಲ್ಲಿ ರಾಜ್ಯ ಸರ್ಕಾರ 176 ಶಾಸಕರ ಕ್ಷೇತ್ರಗಳಿಗೆ ಅನುದಾನ ನೀಡಿತ್ತು. ಈ ವೇಳೆ ಬಿಜೆಪಿ ಶಾಸಕರ ಕ್ಷೇತ್ರಗಳಿಗೆ ಅನುದಾನ ಬಿಡುಗಡೆ ಬಾಕಿ ಉಳಿದಿತ್ತು. ಇದೀಗ ಶಾಸಕರ ಒತ್ತಡದ ಮೇರೆಗೆ ಅನುದಾನ ನೀಡಲಾಗಿದೆ.



ಪುಟ 2

### ತಡರಾತ್ರಿವರೆಗೂ ದೇವರಾಜ್ ಮನೆಯಲ್ಲಿ ಇಡಿ ವಿಚಾರಣೆ



**ಬೆಂಗಳೂರು:** ಮುಡಾ ನಿವೇಶನ ಹಂಚಿಕೆ ಹಗರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಕೆಂಗೇರಿಯಲ್ಲಿರುವ ದೇವರಾಜ್ ನಿವಾಸದ ಮೇಲೆ ಶುಕ್ರವಾರ ದಾಳಿ ನಡೆಸಿದ್ದ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ತಡರಾತ್ರಿವರೆಗೂ ವಿಚಾರಣೆ ನಡೆಸಿದರು. ಭೂ ಮಾಲೀಕ ದೇವರಾಜ್ ಮನೆ ಮೇಲೆ ದಾಳಿ ನಡೆಸಿದ್ದ ಇ.ಡಿ ಅಧಿಕಾರಿಗಳು ಮಧ್ಯರಾತ್ರಿ 12 ಗಂಟೆ ವರೆಗೂ ವಿಚಾರಣೆ ನಡೆಸಿದರು. ಈ ವೇಳೆ ಪ್ರಮುಖ ದಾಖಲೆಗಳ ಪರಿಶೀಲನೆ ಮಾಡಿದರು. ವಿಚಾರಣೆ ಬಳಿಕ ಹೊರಟು ನಿಂತ ಅಧಿಕಾರಿಗಳಿಗೆ ದೇವರಾಜ್ ಅವರು ಶೇಕ್ ಹ್ಯಾಂಡ್ ಮಾಡಿ ಕಳಿಸಿಕೊಟ್ಟರು. ದೇವರಾಜ್ ಕುಟುಂಬಕ್ಕೆ ಮೈಸೂರಿನ ಜಾಮೀನು ಬಂದಿದ್ದು ಹೇಗೆ? ಅದರ ಮೂಲ ಯಾವುದು? ಅದನ್ನ ಯಾವಾಗ ಮಾರಾಟ ಮಾಡಿದ್ದು?

ಪುಟ 2

## ಮುಡಾದಲ್ಲಿ 1992ರ ಪ್ರಮುಖ ದಾಖಲೆಗಳೇ ನಾಪತ್ತೆ

# ಇ.ಡಿ ಅಧಿಕಾರಿಗಳು ಶಾಕ್!

**ಬೆಂಗಳೂರು:** ಮುಡಾ ಸೈಟ್ ಹಗರಣಕ್ಕೆ ಸಂಬಂಧಿಸಿದಂತೆ ಇ.ಡಿ ಅಧಿಕಾರಿಗಳ ಕಾರ್ಯಾಚರಣೆ ವೇಳೆ ಅಚ್ಚರಿದಾಯಕ ಸುದ್ದಿ ಹೊರಬಿದ್ದಿದೆ. ಮೈಸೂರಿನ ಮುಡಾ ಕಚೇರಿಯಲ್ಲಿ ಇ.ಡಿ ಅಧಿಕಾರಿಗಳ ದಾಳಿ ವೇಳೆ 1992ರ ಪ್ರಮುಖ ದಾಖಲೆಯೇ ನಾಪತ್ತೆಯಾಗಿರುವ ಪ್ರಕರಣ ಬೆಳಕಿಗೆ ಬಂದಿದೆ.



ಸಿಎಂ ಸಿದ್ದರಾಮಯ್ಯ ವಿರುದ್ಧದ ಮುಡಾ ಬಹುಕೋಟಿ ಹಗರಣ ಪ್ರಕರಣದಲ್ಲಿ ಶುಕ್ರವಾರ ಮುಡಾ ಕಚೇರಿ ಮೇಲೆ ಇ.ಡಿ ಅಧಿಕಾರಿಗಳು ದಾಳಿ ನಡೆಸಿದರು. ಈ ವೇಳೆ ಮಹತ್ವದ ದಾಖಲೆಗಳನ್ನು ವಶಕ್ಕೆ ಪಡೆದು ಪರಿಶೀಲನೆ ನಡೆಸಿದರು. ಕಾದು ದಾಳಿ ಮಾಡಿದ್ದ ಇಡಿ ಅಧಿಕಾರಿಗಳು ಅಚ್ಚರಿಗೆ ಒಳಗಾಗಿದ್ದಾರೆ.

ಡಿನೋಟಿಫೈ ಮಾಡಿ ನೋಟಿಫೈ ಮಾಡಲು ತೆಗೆದುಕೊಂಡ ನಿರ್ಧಾರದ ದಾಖಲೆಗಳೇ ನಾಪತ್ತೆಯಾಗಿವೆ. 1992 ರ ಫೆಬ್ರವರಿ ತಿಂಗಳಿನ ಕೆಲ ದಾಖಲೆಗಳು ಮಿಸ್ಸಿಂಗ್ ಆಗಿವೆ. ಅದೇ ಸಂದರ್ಭದಲ್ಲಿ ಡಿನೋಟಿಫೈ ಆಗಿದ್ದ ಭೂಮಿಯ ಪರಭಾರೆಯಾಗಿತ್ತು.

ಮುಡಾದ ತೆಕ್ಕೆಯಲ್ಲಿದ್ದ ಜಮೀನು ಮತ್ತೆ ಕೃಷಿ ಭೂಮಿ ಅಂತಾ ಮಾಡಲು ತೆಗೆದುಕೊಂಡ ಕ್ರಮ,

ಪುಟ 2



### ಸಿದ್ದರಾಮಯ್ಯ ಪತ್ನಿಗೆ ಹಂಚಿಕೆಯಾಗಿದ್ದ 14 ಸೈಟ್‌ಗಳ ದಾಖಲೆ ಪರಿಶೀಲಿಸಿದ ಇಡಿ

# ಪ್ರಶ್ನೆಗಳ ಸುರಿಮಳೆ

**ಮೈಸೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಕಚೇರಿ ಮತ್ತು ಮುಡಾ ಪ್ರಕರಣದ ಎ4 ದೇವರಾಜು ಮನೆ ಮೇಲೆ ಶುಕ್ರವಾರ (ಅ.18) ರಂದು ಜಾರಿ ನಿರ್ದೇಶನಾಲಯ ಅಧಿಕಾರಿಗಳು ದಾಳಿ ಮಾಡಿದ್ದರು. ರಾತ್ರಿವರೆಗೂ ಅಧಿಕಾರಿಗಳು ಮುಡಾ ಕಚೇರಿಯಲ್ಲಿ ದಾಖಲೆಗಳನ್ನು ಪರಿಶೀಲಿಸಿದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿಯವರಿಗೆ ಹಂಚಿಕೆಯಾಗಿದ್ದ 14 ನಿವೇಶನ ಮತ್ತು ಕೆಸರೆ ಗ್ರಾಮದ ಸರ್ವೆ ನಂ.464ರ ಜಮೀನಿನ ದಾಖಲೆಗಳನ್ನು ಇಡಿ ಅಧಿಕಾರಿಗಳು ಪರಿಶೀಲಿಸಿದರು. ಜೊತೆಗೆ ಇಡಿ ಅಧಿಕಾರಿಗಳು ತಾಲೂಕು ಕಚೇರಿಯಲ್ಲೂ ಸರ್ವೆ ನಂ.464ರ ಜಮೀನುಗಳ ದಾಖಲೆ ಪರಿಶೀಲನೆ ನಡೆಸಿದರು. ಮೈಸೂರು ತಾಲೂಕಿನ ಕೆಸರೆ ಗ್ರಾಮದ ಸರ್ವೆ ನಂ.464 ಭೂಮಿಗೆ ಸಂಬಂಧಿಸಿದ 1970 ನೇ ಇಸವಿಯ ಎಂಆರ್ ಪ್ರತಿಯನ್ನು ಪಡೆದರು. ಅಲ್ಲದೇ ತಹಶೀಲ್ದಾರ್, ಎಫ್‌ಡಿಎ, ಎಸ್‌ಡಿಎ ಸೇರಿದಂತೆ ಇತರರ ಬಳಿ ಹಲವು ಮಾಹಿತಿ ಕೇಳಿ ಪಡೆದರು.

ಪುಟ 2

## ಶಿಕ್ಷಕರ ಬೋಧನೆ, ಮಕ್ಕಳ ಕಲಿಕೆ ವೃದ್ಧಿಗೆ ಎಐ ಆ್ಯಪ್

**ಬೆಂಗಳೂರು:** ಎಐ ತಂತ್ರಜ್ಞಾನದ ನೆರವಿನೊಂದಿಗೆ ಸರ್ಕಾರಿ ಶಾಲಾ ಶಿಕ್ಷಕರ ಬೋಧನಾ ಗುಣಮಟ್ಟ, ವಿದ್ಯಾರ್ಥಿಗಳ ಕಲಿಕಾ ಸಾಮರ್ಥ್ಯ ವೃದ್ಧಿಸಲು ಸಿದ್ದಪಡಿಸಿರುವ 'ಶಿಕ್ಷ ಕೋಪೈಲಟ್' ಆಪ್ ಅನ್ನು ಶಿಕ್ಷಣ ಸಚಿವ ಮಧು ಬಂಗಾರಪ್ಪ ವಿಧಾನಸೌಧದಲ್ಲಿ ಬಿಡುಗಡೆ ಮಾಡಿದರು.

ಬಳಿಕ ಮಾತನಾಡಿದ ಅವರು, ಸಮಗ್ರ ಶಿಕ್ಷಣ ಕರ್ನಾಟಕ ಮತ್ತು ಶಾಲಾ ಶಿಕ್ಷಣ ಇಲಾಖೆಯು, ಮೈಕ್ರೋಸಾಫ್ಟ್ ಮತ್ತು ಶಿಕ್ಷಣ ಫೌಂಡೇಷನ್ ಸಹಯೋಗದಲ್ಲಿ ರಚಿಸಿರುವ ಈ ಆಪ್ ಅನ್ನು ಪ್ರಾಯೋಗಿಕವಾಗಿ ರಾಜ್ಯದ ಆಯ್ದ 750 ಶಾಲೆಗಳ 1000 ಶಿಕ್ಷಕರಿಗೆ ಒದಗಿಸಲಾಗಿದೆ.



ಪ್ರಾರಂಭಿಕವಾಗಿ ವಿಜ್ಞಾನ, ಸಮಾಜ ವಿಜ್ಞಾನ ಸೇರಿದಂತೆ ನಾಲ್ಕು ವಿಷಯಗಳನ್ನು ಈ ಆಪ್‌ನಲ್ಲಿ ಒದಗಿಸಲಾಗುತ್ತಿದೆ. ಮುಂದೆ ಎಲ್ಲ ವಿಷಯಗಳಿಗೆ ಅನ್ವಯವಾಗಲಿದೆ.

ಪುಟ 2

### ಒಂದೇ ವಾರದಲ್ಲಿ ಬೋನಿಗೆ ಬಿದ್ದ 3 ಚಿರತೆಗಳು

## ಆತಂಕದಲ್ಲಿ ಸ್ಥಳೀಯರು

**ಮೈಸೂರು:** ಹೆಚ್.ಡಿ.ಕೋಟೆ ಪಟ್ಟಣದ ಬಳಿಯ ಡ್ರೈವರ್ ಕಾಲೋನಿ ಸಮೀಪ 7 ವರ್ಷದ ಗಂಡು ಚಿರತೆಯೊಂದು ಅರಣ್ಯ ಇಲಾಖೆ ಇರಿಸಿದ್ದ ಬೋನಿಗೆ ಬಿದ್ದಿದೆ. ಒಂದೇ ವಾರದಲ್ಲಿ ಒಂದೇ ಜಾಗದಲ್ಲಿ 3 ಚಿರತೆ ಸೆರೆಸಿಕ್ಕಿರುವುದರಿಂದ, ಸುತ್ತಮುತ್ತಲ ಗ್ರಾಮಸ್ಥರು, ರೈತರು ಕಾಡು ಪ್ರಾಣಿಗಳ ದಾಳಿಯ ಆತಂಕಕ್ಕೆ ಒಳಗಾಗಿದ್ದಾರೆ.

ಬೋನಿನಲ್ಲಿ ಬಿದ್ದಿರುವ ಚಿರತೆ, ಚಿರತೆ ನೋಡಲು ಸೇರಿರುವ ಜನರು. ಇದೆಲ್ಲಾ ಎಲ್ಲಿ ಅನ್ಕೊಂಡ್ರಾ? ಮೈಸೂರಿ ಜಿಲ್ಲೆಯ ಹೆಚ್.ಡಿ.ಕೋಟೆ ಪಟ್ಟಣದ ಬಳಿಯ ಡ್ರೈವರ್ ಕಾಲೋನಿ ಸಮೀಪ ಕಂಡುಬಂದ ದೃಶ್ಯ. ಸುಮಾರು 7 ವರ್ಷದ ಗಂಡು ಚಿರತೆಯೊಂದು ಅರಣ್ಯ ಇಲಾಖೆ ಸಿಬ್ಬಂದಿ ಇರಿಸಿದ್ದ ಬೋನಿಗೆ ಬಿದ್ದಿದೆ.

**ಒಂದು ವಾರದಲ್ಲಿ 3 ಚಿರತೆ ಸೆರೆ:** ಡ್ರೈವರ್ ಕಾಲೋನಿಯ ಬಳಿ ಒಂದು ವಾರದಲ್ಲಿ ಸೆರೆಸಿಕ್ಕಿರುವ ಮೂರನೇ ಚಿರತೆ ಇದು. ಹೌದು, ಇದೇ ಸ್ಥಳದಲ್ಲಿ ಒಂದು ವಾರದ ಅಂತರದಲ್ಲಿ 2 ಗಂಡು ಚಿರತೆಗಳು ಬೋನಿಗೆ ಬಿದ್ದಿದ್ದವು. ಈಗ ಮೂರನೇ ಚಿರತೆ ಸೆರೆಸಿಕ್ಕಿದೆ.



ಪುಟ 2

### ನಿರುದ್ಯೋಗ ನಿವಾರಣೆಗೆ ವಿಂಗ್

## ಸ್ಥಾಪನೆ

**ಮಂಡ್ಯ:** ಕರ್ನಾಟಕ ಸೇರಿದಂತೆ ದೇಶದ ನಿರುದ್ಯೋಗ ಯುವಕ, ಯುವತಿಯರಿಗೆ ಉದ್ಯೋಗ ಕಲ್ಪಿಸುವ ನಿಟ್ಟಿನಲ್ಲಿ ಕೇಂದ್ರ ಕೈಗಾರಿಕಾ ಇಲಾಖೆಯಿಂದ ವಿಂಗ್ ಸ್ಥಾಪನೆಗೆ ನಿರ್ಧರಿಸಲಾಗಿದೆ ಎಂದು ಕೇಂದ್ರ ಉಕ್ಕು ಹಾಗೂ ಭಾರೀ ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ ತಿಳಿಸಿದರು.



ಪುಟ 2

# ಅಬುಜ್ಮಾರ್ ಎನ್‌ಕೌಂಟರ್‌ನಲ್ಲಿ 38 ಮಾವೋವಾದಿಗಳ ಹತ್ಯೆ

**ರಾಯಪುರ:** ಛತ್ತೀಸ್‌ಗಢನ ಅಬುಜ್ಮಾರ್‌ನಲ್ಲಿ ಅ.3ರಂದು ನಡೆದ ಎನ್‌ಕೌಂಟರ್‌ನಲ್ಲಿ 38 ಮಾವೋವಾದಿಗಳು ಹತರಾಗಿದ್ದು, ಬಸ್ತಾರ್‌ನಲ್ಲಿ ನಡೆದ ಅತೀ ದೊಡ್ಡ ಎನ್‌ಕೌಂಟರ್ ಇದಾಗಿದೆ.

ಶುಕ್ರವಾರ ದಂತೇವಾಡ ಪೊಲೀಸರು 9 ಗಂಟೆಗಳ ಕಾಲ ನಡೆಸಿದ ಗುಂಡಿನ ದಾಳಿಯಲ್ಲಿ ಒಟ್ಟು 38 ಮಾವೋವಾದಿಗಳನ್ನು ಹೊಡೆದುರುಳಿಸಿದ್ದಾರೆ. ಒಟ್ಟು 2.6 ಕೋಟಿ ರೂ.ಗೂ ಅಧಿಕ ಬಹುಮಾನವನ್ನು ಪಡೆದುಕೊಂಡಿದ್ದಾರೆ.

ಎನ್‌ಕೌಂಟರ್ ನಡೆದ ಒಂದು ದಿನದ ಬಳಿಕ 13 ಮಹಿಳೆಯರು ಸೇರಿದಂತೆ 31 ಮಾವೋವಾದಿಗಳ ಶವವನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ. ಅ.13 ರಂದು ಮಾವೋವಾದಿಗಳು ತಮ್ಮ ಹೇಳಿಕೆಯನ್ನು ಬಿಡುಗಡೆಗೊಳಿಸಿದ್ದಾರೆ. ಹೇಳಿಕೆಯ ಪ್ರಕಾರ ಒಟ್ಟು 35 ಮಾವೋವಾದಿಗಳು ಸಾವನ್ನಪ್ಪಿದ್ದು, ಅವರ ಹೆಸರುಗಳನ್ನು ಬಹಿರಂಗಪಡಿಸಿದ್ದಾರೆ. ಬಳಿಕ ತಮ್ಮ ಬಳಿಯಿದ್ದ ಮಾವೋವಾದಿಗಳ ಪಟ್ಟಿಯನ್ನು ಹಾಗೂ ಬಿಡುಗಡೆಗೊಳಿಸಿದ ಪಟ್ಟಿಯನ್ನು ತಾಳೆ ಮಾಡಿದಾಗ 7 ಹೆಚ್ಚುವರಿ ಹೆಸರಿರುವುದು ಗಮನಕ್ಕೆ ಬಂದಿದೆ.



ದಂತೇವಾಡ ಎಸ್‌ಪಿ ಗೌರವ್ ರೈ ಮಾಹಿತಿ ಪ್ರಕಾರ, ಎನ್‌ಕೌಂಟರ್ ಸ್ಥಳದಿಂದ ಭದ್ರತಾ ಪಡೆಗಳು ಶವಗಳನ್ನು ಸಾಗಿಸದೇ ಇರುವ ಸಂದರ್ಭದಲ್ಲಿ ಕೆಲವು ನಕ್ಸಲರು ತಮ್ಮ ಕಾರ್ಯಕರ್ತರಿಂದ ಆ ಶವಗಳನ್ನು ಸಾಗಿಸುತ್ತಾರೆ ಎಂದು ಸ್ಪಷ್ಟನೆ ನೀಡಿದರು.

ಪುಟ 2

### ಅಕ್ರಮ ಹಣ ವರ್ಗಾವಣೆ ಕೇಸ್

# ಹಿರಿಯ ಐಎಎಸ್ ಅಧಿಕಾರಿ, ಆರ್‌ಜೆಡಿ ಮಾಜಿ ಶಾಸಕ ಅರೆಸ್ಟ್

**ಪಾಟ್ನಾ:** ಬಿಹಾರ ವಿದ್ಯುತ್ ಸಚಿವಾಲಯದಲ್ಲಿ ನಡೆದಿದೆ ಎನ್ನಲಾದ ಟೆಂಡರ್ ಹಗರಣ ಪ್ರಕರಣಕ್ಕೆ ಸಬಂಧಿಸಿದಂತೆ ಬಿಹಾರದ ಹಿರಿಯ ಐಎಎಸ್ ಅಧಿಕಾರಿ ಮತ್ತು ಆರ್‌ಜೆಡಿ ಮಾಜಿ ಶಾಸಕರೊಬ್ಬರನ್ನ ಜಾರಿ ನಿರ್ದೇಶನಾಲಯ ಬಂಧಿಸಿದೆ.

ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ ಸೆಕ್ಷನ್‌ಗಳ ಅಡಿಯಲ್ಲಿ ಇಬ್ಬರನ್ನು ಬಂಧಿಸಲಾಗಿದೆ. ಸಂಜೀವ್ ಹನ್ಸ್ ಅವರನ್ನ ಪಾಟ್ನಾದಲ್ಲಿ ಮತ್ತು ಗುಲಾಬ್ ಯಾದವ್ ಅವರನ್ನ ದೆಹಲಿಯಲ್ಲಿ ಬಂಧಿಸಿ ವಿಚಾರಣೆಗೆ ಒಳಪಡಿಸಲಾಗಿದೆ. ಬಿಹಾರದ ವಿದ್ಯುತ್ ಸಚಿವಾಲಯದ ಟೆಂಡರ್ ಹಗರಣದಲ್ಲಿ ಭಾಗಿಯಾಗಿದ್ದರು ಎಂಬ ಆರೋಪ ಇವರ ಮೇಲಿದೆ.




ಬಿಹಾರ ಕೇಡರ್ ಐಎಎಸ್ ಅಧಿಕಾರಿ ಸಂಜೀವ್ ಹನ್ಸ್ ರಾಜ್ಯ ವಿದ್ಯುತ್ ಇಲಾಖೆಗೆ ಪ್ರಧಾನ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸಿದ್ದರು. ಕಾನೂನು ಜಾರಿ ನಿರ್ದೇಶನಾಲಯ ಅವರ ನಿವಾಸದ ಮೇಲೆ ಮೊದಲು ದಾಳಿ ನಡೆಸಿತ್ತು. ಶೋಧ ಕಾರ್ಯಾಚರಣೆ ಬಳಿಕ ಅವರನ್ನು ಸಾಮಾನ್ಯ ಆಡಳಿತ ವಿಭಾಗಕ್ಕೆ ಆಗಸ್ಟ್‌ನಲ್ಲಿ ವರ್ಗಾಯಿಸಲಾಗಿತ್ತು. ಝುಂಜಾರ್ಪುರ್‌ರ ಮಾಜಿ ಶಾಸಕ ಗುಲಾಬ್ ಯಾದವ್, ಹನ್ಸ್ ಅವರ ನಿಕಟವರ್ತಿ ಎಂದು ಮೂಲಗಳು ತಿಳಿಸಿವೆ.

ಹನ್ಸ್ ಹಾಗೂ ಯಾದವ್ ಅವರಿಗೆ ಸೇರಿದ ಹಲವು ಆಸ್ತಿಗಳ ಮೇಲೆ ಗುರುವಾರ ಕೊನೆಯ ಸುತ್ತಿನ ದಾಳಿ ನಡೆಸಿ ಶೋಧ ಕಾರ್ಯ ನಡೆಸಿತ್ತು. ಬಳಿಕ ಶುಕ್ರವಾರ ಪಾಟ್ನಾದಲ್ಲಿ ಹನ್ಸ್ ಅವರನ್ನು ಬಂಧಿಸಿದ್ದರೆ, ಯಾದವ್ ಅವರನ್ನು ಹಣ ದುರ್ಬಳಕೆ ಕಾಯ್ದೆಯಡಿ ದೆಹಲಿಯಲ್ಲಿ ಬಂಧಿಸಲಾಗಿದೆ.

ಪುಟ 2

## ಉಪಚುನಾವಣೆಯಲಿ 3 ಕ್ಷೇತ್ರಗಳಲ್ಲೂ ನಾವು ಗೆಲ್ತೀವಿ

**ಕಾರವಾರ:** ಉಪಚುನಾವಣೆಯಲ್ಲಿ ಮೂರು ಕ್ಷೇತ್ರಗಳಲ್ಲೂ ನಾವು ಗೆಲ್ತೀವಿ ಎಂದು ಸಚಿವ ಮಂಕಾಳ ವೈದ್ಯ ಹೇಳಿದರು.

ಕಾರವಾರದಲ್ಲಿ ಮಾತನಾಡಿದ ಅವರು, ನಮ್ಮ ಅಭ್ಯರ್ಥಿ ಗೆಲ್ಲುವುದಕ್ಕೆ ಎಲ್ಲ ರೀತಿಯ ಸಹಾಯ ಸಹಕಾರ ಮಾಡ್ತೀವಿ. ಪಕ್ಷದ ಆದೇಶದ ಪ್ರಕಾರ ಹೇಳಿದ ಕ್ಷೇತ್ರಕ್ಕೆ ಹೋಗಿ ಪ್ರಚಾರ ಮಾಡ್ತೀನಿ. ಇದುವರೆಗೂ ಎಲ್ಲಿಗೆ ಯಾರು ಹೋಗಬೇಕು ಅಂತಾ ಹೇಳಿಲ್ಲ. ಅಭ್ಯರ್ಥಿಗಳ ಆಯ್ಕೆ ಬಳಿಕ ಪ್ರಚಾರದ ಬಗ್ಗೆ ಹೇಳ್ತಾರೆ ಎಂದು ತಿಳಿಸಿದರು. ಉತ್ತರ ಕನ್ನಡ ಅಪರ ಜಿಲ್ಲಾಧಿಕಾರಿ ಕುರ್ಚಿ ಖಾಲಿ ವಿಚಾರವಾಗಿ ಮಾತನಾಡಿ, ಅಧಿಕಾರಿಗಳು ವರ್ಗಾವಣೆ ಆದ ಬಳಿಕ ಬರೋದು ಹೋಗುವುದು ಸಾಮಾನ್ಯ. ಈ ಹಿಂದೆ ಎಷ್ಟೋ ತಿಂಗಳುಗಳ ಕಾಲ ಕುರ್ಚಿ ಖಾಲಿ ಇತ್ತು. ಆರ್ಡರ್ ಆಗಿ 20 ದಿನ ಆದ್ರೂ, ಬರದೆ ಇರೋದು ದೊಡ್ಡ ವಿಷಯ ಅಲ್ಲ. ಈ ಹಿಂದೆ ತಿಂಗಳುಗಟ್ಟಲೇ ಕುರ್ಚಿ ಖಾಲಿ ಇತ್ತು ಎಂದರು. ಅವರು ಅಧಿಕಾರ ಸ್ವೀಕರಿಸಿಲ್ಲ ಅಂತಾ ಯಾರಿಗಾದ್ರೂ ಸಮಸ್ಯೆ ಆಗಿದೆಯಾ? ಜಿಲ್ಲಾಡಳಿತದ ಕೆಲಸಗಳು ಎಲ್ಲವೂ ಎಂದಿನಂತೆ ನಡೆಯುತ್ತಿವೆ. ವರ್ಗಾವಣೆ ಆದವರು ಆದಷ್ಟು ಬೇಗ ಹಾಜರಾಗಬಹುದು ಎಂದು ಹೇಳಿದರು.



## ಸಂಡೂರು ಕ್ಷೇತ್ರಕ್ಕೆ ನಾನು ಆಕಾಂಕ್ಷಿಯಲ್ಲ: ಶ್ರೀರಾಮುಲು ಸ್ಪಷ್ಟನೆ

**ಬೆಂಗಳೂರು:** ಸಂಡೂರು ಕ್ಷೇತ್ರಕ್ಕೆ ನಾನು ಆಕಾಂಕ್ಷಿಯಲ್ಲ, ಅಭ್ಯರ್ಥಿಯೂ ಅಲ್ಲ ಎಂದು ಮಾಜಿ ಸಚಿವ ಶ್ರೀರಾಮುಲು ಸ್ಪಷ್ಟನೆ ನೀಡಿದ್ದಾರೆ. ಸಂಡೂರು ಸೇರಿದಂತೆ ಮೂರು ಕ್ಷೇತ್ರಗಳಿಗೆ ಉಪ ಚುನಾವಣೆ ಘೋಷಣೆಯಾಗುತ್ತಿದ್ದಂತೆ, ಅಭ್ಯರ್ಥಿಗಳ ಬಗ್ಗೆ ಊಹಾಪೋಹಗಳು ಶುರುವಾಗಿದೆ, ರಾಜಕೀಯ ವಲಯದಲ್ಲಿ ಸಂಡೂರಿನಿಂದ ಶ್ರೀರಾಮುಲು ಚುನಾವಣೆಗೆ ಸ್ಪರ್ಧಿಸಲಿದ್ದಾರೆ ಎನ್ನುವ ಮಾತುಗಳು ಕೇಳಿಬಂದಿತ್ತು. ಈ ಹಿನ್ನೆಲೆಯಲ್ಲಿ ಶ್ರೀರಾಮುಲು ಸ್ಪಷ್ಟನೆ ನೀಡಿದ್ದು, ನಾನು ಆಕಾಂಕ್ಷಿಯೂ ಅಲ್ಲ, ಅಭ್ಯರ್ಥಿಯೂ ಅಲ್ಲ ಎಂದು ಹೇಳಿದ್ದಾರೆ.ರಾಜ್ಯದಲ್ಲಿ ಪಕ್ಷದ ಸಂಘಟನೆಯಷ್ಟೇ ನನ್ನ ಮುಂದಿನ ಹೆಜ್ಜೆಯಾಗಿರಲಿದೆ, ನಾನು ಸ್ಪರ್ಧೆ ಮಾಡುವ ಕುರಿತು ಯಾವ ಚರ್ಚೆಯೂ ನಡೆಸಿಲ್ಲ, ಕಾರ್ಯಕರ್ತರಲ್ಲಿ ಈ ಕುರಿತು ಯಾವುದೇ ಗೊಂದಲ ಬೇಡ ಎಂದು ಹೇಳಿದ್ದಾರೆ. ಅಷ್ಟೇ ಅಲ್ಲದೆ, ಸಾಮಾನ್ಯ ಕಾರ್ಯಕರ್ತರಾಗಿ ಸಂಡೂರು ಗೆಲುವಿಗೆ ಶ್ರಮಿಸುತ್ತೇವೆ, ಮತ್ತೆ ಬಳ್ಳಾರಿ ಬಿಜೆಪಿ ಭದ್ರಕೋಟೆಯಾಗಲಿದೆ ಎಂದು ಹೇಳಿದ್ದಾರೆ. ಸಂಡೂರು ಸೇರಿ 3 ಕ್ಷೇತ್ರಗಳಲ್ಲೂ ಗೆಲ್ಲಬೇಕೆಂಬುದೇ ನಮ್ಮ ಗುರಿಯಾಗಿದೆ, ನಮ್ಮ ಕಾರ್ಯಕರ್ತರ ಶಕ್ತಿ ಮುಂದೆ ಕಾಂಗ್ರೆಸ್ ಧೂಳೀಪಟ ಆಗುತ್ತದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಮಾಜಿ ಸಚಿವ ಶ್ರೀರಾಮುಲು ಪೋಸ್ಟ್ ಮಾಡಿದ್ದಾರೆ. ಬಳ್ಳಾರಿಯಿಂದ ಕಾಂಗ್ರೆಸ್ ಗೇಟ್‌ಪಾಸ್‌ಗೆ ಸಿದ್ಧವಾಗಿದೆ, ನನ್ನ ಹೆಸರು, ಮೋದಿ ಹೆಸರು ಹೇಳುತ್ತಿರುವ ಕಾಂಗ್ರೆಸ್ ನಾಯಕರಿಗೆ ನನ್ನ ಕಿವಿಮಾತಿದೆ, ಜಮೀರ್ ಅಲ್ಲ, ಮುಖ್ಯಮಂತ್ರಿಗಳು ಸಿದ್ದರಾಮಯ್ಯನವರು ನಿಂತರೂ ಈ ಬಾರಿ ಗೆಲುವು ಬಿಜೆಪಿಯದ್ದೇ. ನಮ್ಮ ಕಾರ್ಯಕರ್ತನ ಶಕ್ತಿ ಮುಂದೆ ಕಾಂಗ್ರೆಸ್ ಧೂಳೀಪಟ ಆಗಲಿದೆ ಎಂದು ಭರವಸೆ ವ್ಯಕ್ತಪಡಿಸಿದರು.



## ಬೆಂಗಳೂರು ಕಾಲೇಜಿಗೆ ಬಾಂಬ್ ಬೆದರಿಕೆ ಹಾಕಿದ್ದ ಆರೋಪಿ ಬಂಗಾಳದಲ್ಲಿ ಅರೆಸ್ಟ್

**ಬೆಂಗಳೂರು:** ನಗರದ ಬಸವನಗುಡಿಯ ಬಿಐಟಿ ಕಾಲೇಜಿಗೆ ಬಾಂಬ್ ಬೆದರಿಕೆ ಹಾಕಿದ್ದ ಆರೋಪಿಯನ್ನು ಬೆಂಗಳೂರಿನ ವಿವಿ ಪುರಂ ಪೊಲೀಸರು ಪಶ್ಚಿಮ ಬಂಗಾಳದಲ್ಲಿ ಬಂಧಿಸಿದ್ದಾರೆ.



ಇದೇ ಅಕ್ಟೋಬರ್ 4ರಂದು ಬಸವನಗುಡಿಯ ಬಿಐಟಿ ಕಾಲೇಜಿಗೆ ಇ-ಮೇಲ್ ಮೂಲಕ ಆರೋಪಿಯು ಬಾಂಬ್ ಬೆದರಿಕೆ ಹಾಕಿದ್ದ. ಕಾಲೇಜು ಆವರಣದಲ್ಲೇ ಹೈಡ್ರೋಜನ್ ಸುಧಾರಿತ ಐಇಡಿ ಇಟ್ಟಿದ್ದು, ಅದನ್ನು ಸ್ಫೋಟಿಸುವುದಾಗಿ ಬೆದರಿಕೆ ಹಾಕಿದ್ದ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದ ವಿವಿ ಪುರಂ ಪೊಲೀಸರು ಪಶ್ಚಿಮ ಬಂಗಾಳದ ಡಾರ್ಜಿಲಿಂಗ್‌ನಲ್ಲಿ ಆರೋಪಿಯನ್ನ ಬಂಧಿಸಿದ್ದಾರೆ.

ಆರೋಪಿಯಿಂದ ಲ್ಯಾಪ್‌ಟಾಪ್, ಮೊಬೈಲ್ ಫೋನ್‌ಗಳನ್ನ ವಶಕ್ಕೆ ಪಡೆಯಲಾಗಿದೆ. ಇನ್ನೂ ವಿಚಾರಣೆ ವೇಳೆ ಆರೋಪಿಯು ಇದೇ ರೀತಿ 10 ಪ್ರಕರಣಗಳಲ್ಲಿ ಭಾಗಿಯಾಗಿರುವುದು ಗೊತ್ತಾಗಿದೆ. ಈ ಬೆನ್ನಲ್ಲೇ ನಗರದ ಇತರ ಶಾಲೆಗಳಿಗೆ ಬಾಂಬ್ ಬೆದರಿಕೆ ಪ್ರಕರಣಗಳ ಸಂಬಂಧವೂ ತನಿಖೆ ನಡೆಸುತ್ತಿರುವ ಪೊಲೀಸರು, ಟ್ರಾನ್ಸಿಟ್ ವಾರೆಂಟ್ ಅಡಿಯಲ್ಲಿ ಆರೋಪಿಯನ್ನ ಕಸ್ಟಡಿಗೆ ನೀಡುವಂತೆ ಮನವಿ ಪಶ್ಚಿಮ ಬಂಗಾಳದ ಸ್ಥಳೀಯ ನ್ಯಾಯಾಲಯಕ್ಕೆ ಪೊಲೀಸರು ಮಾಡಿದ್ದರು. ಇದೇ ವೇಳೆ ಆರೋಪಿಗಳಿಗೆ ಕೋರ್ಟ್ ಜಾಮೀನು ಮಂಜೂರು ಮಾಡಿದೆ ಎಂದು ಮೂಲಗಳು ತಿಳಿಸಿವೆ.

## ಸಿಸಿಬಿ ಪೊಲೀಸರ ಭರ್ಜರಿ ಬೇಟೆ 21 ಕೋಟಿ ಮೌಲ್ಯದ ಮಾದಕ ವಸ್ತು ಜಪ್ತಿ

**ಬೆಂಗಳೂರು:** ಭರ್ಜರಿ ಕಾರ್ಯಾಚರಣೆಯೊಂದರಲ್ಲಿ ಸಿಸಿಬಿ ಪೊಲೀಸರು ಸುಮಾರು 21 ಕೋಟಿ ರೂ. ಮೌಲ್ಯದ ಮಾದಕ ವಸ್ತುಗಳನ್ನು ಜಪ್ತಿ ಮಾಡಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ಭಾರತೀಯ ಅಂಚೆ ಮೂಲಕ ವಿವಿಧ ದೇಶಗಳಿಂದ ಪೋಸ್ಟ್ ಮೂಲಕ ಬಂದಿದ್ದ ಮಾದಕ ವಸ್ತುಗಳನ್ನು ವಶಕ್ಕೆ ಪಡೆದಿರುವ ಬೆಂಗಳೂರಿನ ಸಿಸಿಬಿ ಪೊಲೀಸರು ಮೂವರನ್ನು ಬಂಧಿಸಿದ್ದಾರೆ. ಹೌದು. ಅಮೆರಿಕ, ಯುಕೆ, ಬೆಲ್ಜಿಯಂ, ಥೈಲ್ಯಾಂಡ್, ನೇದರ್‌ಲ್ಯಾಂಡ್ ಹಾಗೂ ಇತರೆ ದೇಶಗಳಿಂದ ಭಾರತೀಯ ಅಂಚೆ ಇಲಾಖೆ ಮೂಲಕ ಸುಮಾರು 3,500 ಅನುಮಾನಾಸ್ಪದ ಅಂಚೆ ಪೋಸ್ಟ್‌ಗಳು ಬಂದಿದ್ದವು. ಈ ಬಗ್ಗೆ ಸಿಸಿಬಿ ಅಧಿಕಾರಿಗಳು ತೀವ್ರ ಪರಿಶೀಲನೆ ನಡೆಸಿದ್ದರು. 3,500 ಪೋಸ್ಟ್‌ಗಳ ಪೈಕಿ 606 ಅಂಚೆ ಪೋಸ್ಟ್‌ಗಳಲ್ಲಿ ಪಾರ್ಸೆಲ್ ರೂಪದಲ್ಲಿ ನಿಷೇಧಿತ ಮಾದಕ ವಸ್ತುಗಳು ಪತ್ತೆಯಾಗಿವೆ.



ಈ ಮಾದಕ ವಸ್ತುಗಳನ್ನು ವಿದೇಶದಿಂದ ಬೆಂಗಳೂರಿಗೆ ತರಿಸಿಕೊಂಡು ಹೆಚ್ಚಿನ ಹಣಕ್ಕೆ ಮಾರಾಟ ಮಾಡುತ್ತಿದ್ದರು ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಸದ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಆರೋಪಿಗಳನ್ನು ಬಂಧಿಸಿರುವ ಸಿಸಿಬಿ ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ.

# ಕಾಂಗ್ರೆಸ್ ಸರ್ಕಾರಕ್ಕೆ ನಾನೇ ಪ್ರಮುಖ ಟಾರ್ಗೆಟ್

**ಮಂಡ್ಯ:** ಕಾಂಗ್ರೆಸ್ ಸರ್ಕಾರಕ್ಕೆ ನಾನೇ ಪ್ರಮುಖ ಟಾರ್ಗೆಟ್ ಎಂದು ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಹೇಳಿದರು.

ಜಿಲ್ಲೆಯ ವಿಶ್ವೇಶ್ವರಯ್ಯ ಕ್ರೀಡಾಂಗಣದಲ್ಲಿ ನಡೆದ ಮಂಡ್ಯ ಟೂ ಇಂಡಿಯಾ ಬೃಹತ್ ಉದ್ಯೋಗ ಮೇಳದಲ್ಲಿ ಭಾಗವಹಿಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನನ್ನ ಮೇಲೆ ತನಿಖೆ ನಡೆಸುತ್ತಿರುವುದು ಯಾವ ಉದ್ದೇಶಕ್ಕೆ? ನನ್ನ ಮೇಲೆ ಮೊನ್ನೆ ಯಾವ ಆಧಾರದ ಮೇಲೆ ಕಂಪ್ಲೇಟ್ ಕೊಟ್ಟಿದ್ದೀರಾ? ಮೊನ್ನೆ ಯಾವುದೋ ಒಂದು ಎನ್‌ಸಿಆರ್ ಹಾಕಿದ್ದಾರೆ. ಎಫ್‌ಐಆರ್ ಮಾಡಿಸಲೇಬೇಕೆಂದು ಸಿಎಂ ಮನೆಗೆ ಅಧಿಕಾರಿಗಳನ್ನು ಕರೆಸಿಕೊಂಡಿದ್ದಾರೆ. ಏನೇನೂ ಚರ್ಚೆ ಮಾಡಿದ್ದಾರೆ. ಕಾಂಗ್ರೆಸ್ ಸರ್ಕಾರಕ್ಕೆ ಪ್ರಮುಖ ಟಾರ್ಗೆಟ್ ಎಂದರೆ ನಾನೇ. ಆದರೆ ನಾನು ನ್ಯಾಯಬದ್ಧವಾಗಿ ನ್ಯಾಯಾಲಯಕ್ಕೆ ಬಿಟ್ಟಿದ್ದೇನೆ ಎಂದು ಹೇಳಿದರು.

ಕೇಂದ್ರ ಸರ್ಕಾರಕ್ಕೆ ಇಡಿ, ಎಸ್‌ಐಟಿ ಅಸ್ತ್ರ ಎಂದು ಹೇಳುತ್ತಾರೆ. ಸಿಎಂ ಮತ್ತು ಡಿಕೆಶಿಗೆ ಇನ್ವೆಸ್ಟಿಗೇಶನ್ ಟೀಮ್‌ಗಳಾಗಿವೆ. ಇವರ ಪ್ರಕಾರ ಎಸ್‌ಐಟಿ ಎಂದರೆ ಅಸ್ತ್ರಗಳು ಎಂದರ್ಥ. ದೆಹಲಿಯಿಂದ ವಕೀಲರನ್ನು ಕರೆಸಿದ್ದಾರೆ. ಪರ ವಿರೋಧ ವಾದಗಳಾಗಿವೆ. ಅದರ ಆಧಾರದ ಮೇಲೆ ಕೋರ್ಟ್ ಯಾವ ರೀತಿ ತನಿಖೆ ಆಗಬೇಕೆಂದು ಹೇಳಿದ್ದು, ನ್ಯಾಯಯುತ ತನಿಖೆ ಆಗಬೇಕಿದೆ. ಲೋಕಾಯುಕ್ತದಲ್ಲಿ ನಿಮ್ಮ ಅಧಿಕಾರಿಗಳಿಂದ ತನಿಖೆ ಮಾಡಲು ಸಾಧ್ಯನಾ? ನಿಮ್ಮಂತ ನಡವಳಿಕೆ ಇರುವ ಸರ್ಕಾರದಲ್ಲಿ ಸತ್ಯಾಂಶ ಹೊರಬರಲ್ಲ. ಈಗ ಇಡಿ ಬಂದಿದೆ ಮುಂದೆ ಏನು ಆಗುತ್ತದೆ ಎಂಬುವುದನ್ನು ನೋಡೋಣ ಎಂದರು.

**ಸೈಟ್ ಕೊಟ್ಟಿದ್ದು ಯಾಕೆ?:** ಇಡಿ ಅಧಿಕಾರಿಗಳು ಮುಡಾ ಕಚೇರಿ ಹಾಗೂ ತಹಸೀಲ್ದಾರ್ ಕಚೇರಿ ಮೇಲೆ ದಾಳಿ ನಡೆಸಿರುವ ಕುರಿತು ಮಾತನಾಡಿದ ಅವರು, ಮುಡಾ ಹಗರಣ ಅತ್ಯಂತ ಕೆಟ್ಟ ರೀತಿಯಲ್ಲಿ ಆಗಿದೆ. ಸರ್ಕಾರದ ಭೂಮಿಯನ್ನು ಕಬಳಿಸಿದ್ದಾರೆ ಆದಕಾರಣ ಸೈಟ್‌ನ್ನು ವಾಪಸ್ಸು ಕೊಟ್ಟಿರಬಹುದು. ಕಾನೂನು ಬದ್ಧವಾಗಿ ಸೈಟ್ ಪಡೆದಿದ್ದರೆ ಯಾಕೆ ವಾಪಸ್ಸು ಕೊಟ್ಟಿದ್ದೀರಾ? ಸೈಟ್ ಹಂಚಿಕೆಯಲ್ಲಿ ತಪ್ಪು ಮಾಡಿದ್ದೀರಿ ಅದಕ್ಕೆ ವಾಪಸ್ ಕೊಟ್ಟಿದ್ದೀರಿ. ನಿಮ್ಮ ಲೋಕಾಯುಕ್ತ ಅಧಿಕಾರಿಗಳಿಂದ ಸರಿಯಾಗಿ ತನಿಖೆ ಆಗಿಲ್ಲ ಎಂದು ಕಿಡಿಕಾರಿದರು.ಇದನ್ನೂ ಓದಿ:ಮುಡಾ ಕೇಸ್‌ನಲ್ಲಿ ಹಣಕಾಸು ವಹಿವಾಟು ನಡೆದಿಲ್ಲ, ಹಣಕಾಸಿನ ವಿಚಾರ ಎಲ್ಲೂ ತನಿಖೆಯಾಗಿಲ್ಲ: ಡಿ.ಕೆ.ಸುರೇಶ್



ಬೆಂಗಳೂರು ನಗರದಲ್ಲಿ ತಮ್ಮ ಹಣದ ದಾಹಕ್ಕೆ ಕೆಂಪೇಗೌಡರು ಕಟ್ಟಿದ ಕೆರೆಗಳನ್ನು ನುಂಗಿದ್ದಾರೆ. ಹೀಗಾಗಿ ಬೆಂಗಳೂರಿನಲ್ಲಿ ಮಳೆ ಅವಾಂತರ ಆಗುತ್ತಿದೆ. ನಿಮ್ಮ ಭೂ, ಹಣದ ದಾಹದಿಂದ ಬೆಂಗಳೂರು ಹೀಗೆ ಆಗಿದೆ. ನಾನು ಕೇಂದ್ರ ಸಚಿವನಾಗಿದ್ದೇನೆ ಎಂದು ಮಳೆ ಬಂದು ಮುಳುಗುತ್ತಿಲ್ಲ. ಕೆರೆಗಳು, ರಾಜಕಾಲುವೆಗಳನ್ನು ಯಾಕೆ ಉಳಿಸಿಲ್ಲ. ಬಡಾವಣೆ ಹೆಸರಿನಲ್ಲಿ ಕೆರೆ, ಕಾಲುವೆಗಳನ್ನು ಮುಚ್ಚಿದ್ದಾರೆ. ಪುಟ್ಟೇನಹಳ್ಳಿ, ಬಿಳೇಕೆಳ್ಳನಹಳ್ಳಿ ಕೆರೆಗಳನ್ನು ಮುಚ್ಚಿ ಡಾಲರ್ಸ್ ಕಾಲೋನಿ ಎಂದು ಮಾಡಿದರು. ನನ್ನ ಬಗ್ಗೆ ಮಾತನಾಡುವವರು ಇದರ ಬಗ್ಗೆ ಸ್ವಲ್ಪ ತಿಳಿದುಕೊಳ್ಳಬೇಕು ಎಂದರು. ಕುಮಾರಸ್ವಾಮಿ ಬಗ್ಗೆ ಮಾತನಾಡಲು ಯಾವ ನೈತಿಕತೆ ಇವರಿಗೆ ಇಲ್ಲ. ಮಳೆ ಬಂದರೆ ಇವರು ಅರ್ಧ ಗಂಟೆಯಲ್ಲಿ ಮೋಟಾರು ಹಾಕಿ ನೀರು ಖಾಲಿ ಮಾಡುತ್ತಾರಾ? ನಾನು ಜವಾಹರಲಾಲ್ ನೆಹರು ರಾಷ್ಟ್ರೀಯ ನಗರ ನವೀಕರಣ ಯೋಜನೆಗಾಗಿ 110 ಹಳ್ಳಿಗಳನ್ನು ಬೆಂಗಳೂರಿಗೆ ಸೇರಿಸಿದ್ದೇನೆ. ಅದರಲ್ಲಿ ಡಿಸಿಎಂ 50 ಲಕ್ಷ ಜನರಿಗೆ ನೀರು ಕೊಡುತ್ತೇವೆ ಎಂದು ಹೇಳಿದ್ದಾರೆ. ಅಲ್ಲಿ 50 ಲಕ್ಷ ಜನ ಇರಲು ಸಾಧ್ಯಾನಾ? ಒಂದು ವೇಳೆ ಇದ್ದರೆ ಬೆಂಗಳೂರು ಜನಸಂಖ್ಯೆ ಎಷ್ಟು? ಸುಳ್ಳು ಹೇಳಲು ಒಂದು ಇತಿಮಿತಿ ಬೇಡವಾ? ಇದೊಂದು ನಗೆಯ ಪಾಟಲು ಎಂದು ವ್ಯಂಗ್ಯವಾಡಿದರು.

**ಕೆರೆ ಎಷ್ಟು ಭರ್ತಿಯಾಗಿದೆ?:** ಕೆಆರ್‌ಎಸ್ ಡ್ಯಾಂ 2 ಬಾರಿ ಬರ್ತಿಯಾಗಿದೆ. ಮಂಡ್ಯ ಜಿಲ್ಲೆಯ ಕೆಆರ್‌ಎಸ್ ಡ್ಯಾಂ ವ್ಯಾಪ್ತಿಯಲ್ಲಿ 900 ಕೆರೆಗಳು ಇವೆ. ಎಷ್ಟು ಕೆರೆಗಳನ್ನು ಈ ಸರ್ಕಾರ ತುಂಬಿಸಿದೆ? ಎಲ್ಲಾ ನೀರನ್ನು ತಮಿಳುನಾಡಿಗೆ ಬಿಟ್ಟಿದ್ದಾರೆ. ನನಗೆ ಮೇಕೆದಾಟಿಗೆ ಪ್ರಧಾನಿಗಳ ಹತ್ತಿರ ಅನುಮತಿ ಕೊಡಿಸಿ ಎಂದು ಹೇಳುತ್ತಿರಾ? ತಮಿಳುನಾಡಿನವರು ನಿಮ್ಮ ಸ್ನೇಹಿತರು ಅವರ ಹತ್ತಿರ ಮಾತಾಡಿ ಒಪ್ಪಿಸಿ. ಬಳಿಕ ಕರೆದುಕೊಂಡು ಬನ್ನಿ ಐದು ನಿಮಿಷದಲ್ಲಿ ಸಹಿ ಹಾಕಿಸಿಕೊಡ್ತೀನಿ ಎಂದು ತಿರುಗೇಟು ನೀಡಿದರು.

## ಧರ್ಮಸ್ಥಳಕ್ಕೆ ಬೇಕಾದ್ರೆ ಬನ್ನಿ, ನಾನು ಮುಡಾ ದಾಖಲಾತಿ ತಂದಿಲ್ಲ

**ಬೆಂಗಳೂರು:** ನಾನು ಯಾವುದೇ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ದಾಖಲಾತಿ ತೆಗೆದುಕೊಂಡು ಬಂದಿಲ್ಲ. ನನ್ನ ಮೇಲೆ ಆರೋಪ ಮಾಡೋ ಕುಮಾರಸ್ವಾಮಿ, ಛಲವಾದಿ ನಾರಾಯಣಸ್ವಾಮಿ ಚಾಮುಂಡೇಶ್ವರಿ ಅಥವಾ ಧರ್ಮಸ್ಥಳಕ್ಕಾಗಲಿ ಬರಲಿ ಅಲ್ಲಿ ಪ್ರಮಾಣ ಮಾಡುತ್ತೇನೆ ಎಂದು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಸವಾಲು ಎಸೆದಿದ್ದಾರೆ.

ಮುಡಾ ಕಚೇರಿ ಮೇಲೆ ಇಡಿ ದಾಳಿ ಸಂಬಂಧ ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣದಲ್ಲಿ ಮಾತನಾಡಿದ ಅವರು, ನಾನು ಮುಡಾದ ಯಾವುದೇ ಫೈಲ್ ತಂದಿದ್ದರೆ ಶಿಕ್ಷೆಯಾಗಲಿ. ಕುಮಾರಸ್ವಾಮಿ ಮನೆಯಲ್ಲಿ ಫೈಲ್ ಇರಬಹುದು. ಛಲವಾದಿ ನಾರಾಯಣಸ್ವಾಮಿ ಫೈಲ್ ಕದ್ದಿರಬಹುದು. ನಾನು ಅಂತಹ ಕೆಲಸ ಮಾಡಿಲ್ಲ ಎಂದು ತಿರುಗೇಟು ನೀಡಿದರು.

ಚಾಮುಂಡೇಶ್ವರಿಗೋ, ಮಂಜುನಾಥ ದೇವಸ್ಥಾನಕ್ಕೋ ಅವರು ಬರಲಿ. ನಾನೂ ದೇವಸ್ಥಾನಕ್ಕೆ ಬಂದು ಪ್ರಮಾಣ ಮಾಡುತ್ತೇನೆ. ಇಡಿಯವರು ದಾಖಲೆಗಳನ್ನು ಕೇಳಿದ್ದಾರೆ. ಎಷ್ಟು ದಾಖಲೆಗಳನ್ನು ಕೇಳುತ್ತಾರೋ ಅಷ್ಟೂ ದಾಖಲೆಗಳನ್ನು ಕೊಡುತ್ತೇವೆ ಎಂದರು.

ಒಂದೇ ಒಂದು ಸಣ್ಣ ಪೇಪರ್ ನಾನು ತಂದಿದ್ದರೆ ದೇವರು ಕೊಡಬಾರದ ಶಿಕ್ಷೆ ಕೊಡಲಿ. ಸುಳ್ಳು ಹೇಳಿ ಹೇಳಿ ಹಾಳಾಗಿ ಹೋಗುತ್ತಾರೆ. ನಾನೂ ನಿಮ್ಮಂತೆ ದೇಶದ ಪ್ರಜೆ. ಇಡಿ ನನಗೆ ನೋಟಿಸ್ ನೀಡಿದರೆ ನಾನೂ ಉತ್ತರ ಕೊಡುತ್ತೇನೆ ಎಂದು ಹೇಳಿದರು.



## ಮಾಡಿದ್ದರೆ ಶಿಕ್ಷೆಯಾಗಲಿ!

ಪ್ರಹ್ಲಾದ್ ಜೋಶಿ ಸಹೋದರ ಗೋಪಾಲ್ ಜೋಶಿ ಸೇರಿದಂತೆ ಸಹೋದರಿ ವಿಜಯಲಕ್ಷ್ಮಿ ಜೋಶಿ, ಪುತ್ರ ಅಜಯ್ ಜೋಶಿ ವಿರುದ್ಧವೂ ಕೇಸ್ ದಾಖಲಾಗಿದೆ.

## ಇ.ಡಿ ಅಧಿಕಾರಿಗಳು ಶಾಕ್!

ತಹಶೀಲ್ದಾರ್ ಮತ್ತು ಆಗಿನ ಜಿಲ್ಲಾಧಿಕಾರಿಗಳು ಮಾಡಿದ ಶಿಫಾರಸ್ಸಿನ ಪತ್ರಗಳು, ಈ ದಾಖಲೆಯ ಪ್ರಮುಖ ಶಿಫಾರಸಿನ ಪತ್ರಗಳು, ಕೃಷಿ ಭೂಮಿ ಮಾಡಲು ತೆಗೆದುಕೊಂಡ ತೀರ್ಮಾನ ನಡಾವಳಿಯ ಪತ್ರಗಳು ನಾಪತ್ತೆಯಾಗಿವೆ.

ಈ ಪ್ರಮುಖ ದಾಖಲೆಗಳನ್ನೇ ವಶಕ್ಕೆ ಪಡೆಯಲು ಇಡಿ ಸಂಪೂರ್ಣ ಪ್ರಯತ್ನ ಮಾಡುತ್ತಿದೆ. 16 ಗಂಟೆಗಳ ನಿರಂತರ ದಾಳಿಯಲ್ಲಿ ಪ್ರಮುಖ ದಾಖಲೆಗಾಗಿ ಅಧಿಕಾರಿಗಳು ಹುಡುಕಾಟ ನಡೆಸಿದ್ದಾರೆ.

## ಪ್ರಶ್ನೆಗಳ ಸುರಿಮಳೆ

**ಮುಡಾ ಆಯುಕ್ತರಿಗೆ ಇಡಿ ಅಧಿಕಾರಿಗಳಿಂದ 41 ಪ್ರಶ್ನೆ:** ಮುಡಾ ಕಚೇರಿ ಮೇಲೆ ದಾಳಿ ಮಾಡಿದ ಇಡಿ ಅಧಿಕಾರಿಗಳು ಮುಡಾ ಅಕ್ರಮ, 14 ಸೈಟ್, ಅಧಿಸೂಚನೆ, ಡಿನೋಟಿಫಿಕೇಷನ್, ಭೂಸ್ವಾಧೀನ, ಪರಿಹಾರ, ಹಂಚಿಕೆ ಪತ್ರ, ಸಿಎಂ ಪತ್ನಿ ಪಡೆದಿದ್ದಾರೆ ಎನ್ನಲಾದ 14 ಸೈಟ್‌ಗಳು ಸೇರಿದಂತೆ ಇಡಿ ಮುಡಾದಲ್ಲಿ ನಡೆದಿರುವ ಹಗರಣದ ಬಗ್ಗೆ ಇಡಿ ಪ್ರಶ್ನೆ ಕೇಳಿತ್ತು. ಒಂದಲ್ಲ ಎರಡಲ್ಲ ಬರೋಬ್ಬರಿ 41 ಪ್ರಶ್ನೆಗಳ ಮುಡಾ ಆಯುಕ್ತರ ಮುಂದಿಟ್ಟಿತ್ತು.

ಇಡಿ ಅಧಿಕಾರಿಗಳು ಶುಕ್ರವಾರ ದೇವರಾಜು ಅವರ ಮನೆಯಲ್ಲಿ ಕೆಸರೆ ಗ್ರಾಮದ ಸರ್ವೆ ನಂ.464ರ ಭೂ ದಾಖಲೆಗಳನ್ನು ವಶಕ್ಕೆ ಪಡೆದರು. ಈ ದಾಖಲೆಗಳನ್ನು ಇಟ್ಟುಕೊಂಡು ಇಡಿ ಅಧಿಕಾರಿಗಳು ಪ್ರಾಥಮಿಕ ವಿಚಾರಣೆ ನಡೆಸಿದರು. ಜಮೀನಿ ಪರಭಾರೆ, ಮಾಲೀಕತ್ವ ಸೇರಿ ಕೆಲ ವಿಚಾರಗಳ ಬಗ್ಗೆ ದೇವರಾಜು ಅವರನ್ನು ಪ್ರಶ್ನಿಸಿ ಉತ್ತರ ಪಡೆದರು.

ಅಲ್ಲದೇ ಅಗತ್ಯವಿದ್ದಾಗ ನೋಟಿಸ್ ಜಾರಿ ಮಾಡಿದಾಗ ಅಗತ್ಯ ದಾಖಲೆಗಳೊಂದಿಗೆ ವಿಚಾರಣೆಗೆ ಹಾಜರಾಗುವಂತೆ ಇಡಿ ಅಧಿಕಾರಿಗಳು ಸೂಚನೆ ನೀಡಿದರು. ಹಾಗೇ ಪ್ರಕರಣ ಗಂಭೀರವಾಗಿದ್ದು ತನಿಖೆಗೆ ಸಹಕರಿಸುವಂತೆ ತಾಕೀತು ಮಾಡಿದರು.

**ಇಂದೂ ದಾಖಲೆ ಪರಿಶೀಲನೆ:** ಇಡಿ ಅಧಿಕಾರಿಗಳು ಇಂದೂ ಸಹ ಮುಡಾ ಕಚೇರಿಯಲ್ಲಿ ದಾಖಲೆ ಪರಿಶೀಲನೆ ಮಾಡಲಿದ್ದಾರೆ. ಬೆಳಗ್ಗೆ 10 ಗಂಟೆಗೆ ಮುಡಾ ಕಚೇರಿಗೆ ಇಡಿ ಅಧಿಕಾರಿಗಳು ತೆರಳಲಿದ್ದಾರೆ. ಶುಕ್ರವಾರ ಬೆಳಗ್ಗೆ 11 ರಿಂದ ರಾತ್ರಿ 11ರವರೆಗೂ ಇಡಿ ಅಧಿಕಾರಿಗಳು ಪರಿಶೀಲನೆ ನಡೆಸಿದ್ದರು. ಸತತ 12 ಗಂಟೆಗಳ ಕಾಲ ಮುಡಾ ಅಧಿಕಾರಿಗಳಿಂದ ಮಾಹಿತಿ ಪಡೆದಿದ್ದರು.

## ಸ್ಥಾಪನೆ

ನಗರದಲ್ಲಿ ಕೇಂದ್ರ ಕೈಗಾರಿಕಾ ಇಲಾಖೆ, ಜಿಲ್ಲಾಡಳಿತ ಹಾಗೂ ವಿವಿಧ ಖಾಸಗಿ ಸಂಸ್ಥೆಗಳ ಸಹಕಾರದೊಂದಿಗೆ ಆಯೋಜಿಸಲಾಗಿದ್ದ ಬೃಹತ್ ಉದ್ಯೋಗ ಮೇಳ (ಮಂಡ್ಯ ಟು ಇಂಡಿಯಾ) ಕ್ಕೆ ಚಾಲನೆ ನೀಡಿ ಮಾತನಾಡಿದರು. ಕೇಂದ್ರದ ಕೈಗಾರಿಕಾ ಸಚಿವನಾಗಿ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸುವುದೇ ನನ್ನ ಮೊದಲ ಆದ್ಯತೆ ಎಂದರು.

ಮಂಡ್ಯ, ಮೈಸೂರು, ತುಮಕೂರು, ಹಾಸನ, ಕಲ್ಯಾಣ ಕರ್ನಾಟಕ, ಕಿತ್ತೂರು ಕರ್ನಾಟಕದ ಹಲವು ನಗರಗಳಲ್ಲಿ ಕೈಗಾರಿಕೋದ್ಯಮ ಸ್ಥಾಪನೆಯ ಚಿಂತನೆಯಿದೆ. ಬಂಡವಾಳ ಹೂಡಿಕೆದಾರರು ಮುಂದೆ ಬಂದಿದ್ದಾರೆ. ಜೊತೆಗೆ ರಾಜ್ಯ ಸರ್ಕಾರದ ಸಹಕಾರ ಬೇಕು. ಕೈಗಾರಿಕೋದ್ಯಮಿಗಳ ಜೊತೆಗೆ ಚರ್ಚೆ ನಡೆಸಿದ್ದು, ಕೆಲಸಗಳು ಶೀಘ್ರ ಪ್ರಾರಂಭವಾಗಲಿವೆ ಎಂದರು.

ಕೇಂದ್ರದ ಕೈಗಾರಿಕಾ ಸಚಿವನಾಗಿರುವ ನನ್ನ ಜೊತೆ ಕೈಗಾರಿಕಾಭಿವೃದ್ಧಿ ಬಗ್ಗೆ ಚರ್ಚಿ ಸಲು ರಾಜ್ಯ ಸರ್ಕಾರದ ಒಬ್ಬ ಮಂತ್ರಿಯೂ ನನ್ನನ್ನು ಭೇಟಿಯಾಗಿಲ್ಲ. ಅವರಿಗೆ ರಾಜ್ಯ ವನ್ನು ಅಭಿವೃದ್ಧಿ ಮಾಡ ಬೇಕೆಂಬ ಹೃದಯ ವೈಶಾಲ್ಯತೆ ಇಲ್ಲ ಎಂದರು.

## ಆತಂಕದಲ್ಲಿ ಸ್ಥಳೀಯರು

**ಚಿರತೆ ಸೆರೆಯಿಂದ ಗ್ರಾಮಸ್ಥರಲ್ಲಿ ಆತಂಕ:** ರೈತ ರಾಮಕೃಷ್ಣ ಅವರ ಜಮೀನಿನಲ್ಲಿ ಕೋಟೆ ವಲಯ ಅರಣ್ಯಾಧಿಕಾರಿಗಳು ಇರಿಸಿದ್ದ ಬೋನಿನಲ್ಲಿ ಚಿರತೆ ಸೆರೆಯಾಗಿದೆ. ಒಂದು ವಾರದ ಹಿಂದೆ ರೈತ ಗುಂಡು ಮಲ್ಲು ಅವರ ಜಮೀನಿನಲ್ಲಿ 2 ಚಿರತೆಗಳು ಸೆರೆಸಿಕ್ಕಿದ್ದವು. 5 ವರ್ಷದ ಗಂಡು ಚಿರತೆ ಬೋನಿಗೆ ಬಿದ್ದ ಮೂರೇ ದಿನದಲ್ಲಿ ಮತ್ತೊಂದು ಚಿರತೆ ಬೋನಿಗೆ ಬಿದ್ದಿತ್ತು. ಇದೀಗ ಏಳು ವರ್ಷದ ಗಂಡು ಚಿರತೆ ಬೋನಿಗೆ ಬಿದ್ದಿರುವುದು ಆತಂಕಕ್ಕೆ ಕಾರಣವಾಗಿದೆ.

ಒಂದು ವಾರದ ಅಂತರದಲ್ಲಿ 3 ಚಿರತೆಗಳು ಸೆರೆಸಿಕ್ಕಿರುವುದು ಅಕ್ಕ-ಪಕ್ಕದ ಜಮೀನಿನ ರೈತರು, ಸಮೀಪದ ಗ್ರಾಮಸ್ಥರ ಆತಂಕಕ್ಕೆ

## ಮೊದಲನೇ ಪುಟದಿಂದ...

ಕಾರಣವಾಗಿದೆ. ಈ ಪ್ರದೇಶದಲ್ಲಿ ಇನ್ನಷ್ಟು ಕಾಡುಪ್ರಾಣಿಗಳಿರುವ ಸಾಧ್ಯತೆಯಿದ್ದು ಜನರ ಮೇಲೆ ದಾಳಿ ಮಾಡಿದರೆ ಎಂಬುದು ಸ್ಥಳೀಯರ ಆತಂಕವಾಗಿದೆ.

## ಎಐ ಆ್ಯಪ್

ಒಂದು ಲಕ್ಷ ಶಿಕ್ಷಕರಿಗೆ ಈ ಸೌಲಭ್ಯ ನೀಡುವ ಯೋಜನೆಯಿದೆ ಎಂದರು. ಎಐ ಆಧಾರಿತ ಡಿಜಿಟಲ್ ತಂತ್ರಜ್ಞಾನ ಬಳಸಿಕೊಂಡು ಶಿಕ್ಷಕರು ಅಗತ್ಯಾನುಸಾರ ಪಠ್ಯಕ್ರಮ, ಸಂದರ್ಭಕ್ಕೆ ತಕ್ಕಂತೆ ಕಡಿಮೆ ಅವಧಿಯಲ್ಲಿ ಪಾಠ ಯೋಜನೆ (ಲೆಸೆನ್ ಪ್ಲಾನ್) ಸಿದ್ದಪಡಿಸಿಕೊಳ್ಳುವುದು. ಹೊಸ ಪಾಠ, ಪ್ರಯೋಗಗಳನ್ನು ಸಂಯೋಜಿಸುವುದು ಸೇರಿದಂತೆ ಸಮಗ್ರ ಬೋಧನಾ ಸಂಪನ್ಮೂಲ ರಚನೆಗೆ ಸಹಕಾರಿ. ಬೋಧನಾ ಗುಣಮಟ್ಟ ಮಕ್ಕಳ ಕಲಿಕಾ ಸಾಮರ್ಥ ಹೆಚ್ಚಿಸಲು ಸಹಕಾರಿಯಾಗಲಿದೆ. ಪ್ರಯೋಗಗಳನ್ನು ಚಟುವಟಿಕೆ ಆಧಾರಿತವಾಗಿ ನಡೆಸು ವುದು. ವಿದ್ಯಾರ್ಥಿಗಳ ಭಾಗವಹಿಸುವಿಕೆ ಪ್ರೇರೇಪಿಸುತ್ತದೆ ಎಂದರು.

## ಶಾಸಕ ಅರೆಸ್ಟ್

ಬಿಹಾರ ಪೊಲೀಸರು ದಾಖಲಿಸಿದ ಎಫ್‌ಐಆರ್‌ನಲ್ಲಿ ಹಣ ದುರುಪಯೋಗ ಆರೋಪ ಹೊರಿಸಲಾಗಿದೆ. ಸರ್ಕಾರಿ ಉದ್ಯೋಗ ಕೊಡಿಸಲು ನೆರವಾಗುವ ನೆಪದಲ್ಲಿ ಮಹಿಳೆಯೊಬ್ಬರಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪವೂ ಹನ್ಸ್ ಮೇಲಿತ್ತು. ಆದರೆ ಪಾಟ್ನಾ ಹೈಕೋರ್ಟ್ ಈ ಪ್ರಕರಣವನ್ನು ಕಳೆದ ಆಗಸ್ಟ್‌ನಲ್ಲಿ ವಜಾಗೊಳಿಸಿತ್ತು.

## ಮಾವೋವಾದಿಗಳ ಹತ್ಯೆ

ಎನ್‌ಕೌಂಟರ್ ವೇಳೆ ಹಲವಾರು ನಕ್ಸಲರು ಗಾಯಗೊಂಡಿದ್ದು, ಕೆಲವರ ಸ್ಥಿತಿ ಗಂಭೀರವಾಗಿದೆ. ಇನ್ನೂ ಕೆಲವರು ಅಲ್ಲಿಂದ ತಪ್ಪಿಸಿಕೊಳ್ಳುವಾಗ ಕೆಲವರನ್ನು ಎಳೆದುಕೊಂಡು ಹೋಗಿರಬಹುದು. ಆದರೆ ಅವರಿಗೆ ವೈದ್ಯಕೀಯ ಆರೈಕೆಯಿಲ್ಲದೆ ಬದುಕುಳಿಯುವುದು ಕಷ್ಟ ಎಂದು ತಿಳಿಸಿದರು.

ಬಸ್ತಾರ್ ರೇಂಜ್ ಐಜಿಪಿ ಸುಂದರರಾಜ್ ಮಾತನಾಡಿ, ಹತ್ಯೆಯಾದವರಲ್ಲಿ ದಂಡಕಾರಣ್ಯ ವಿಶೇಷ ವಲಯ ಸಮಿತಿ ಸದಸ್ಯ, ವಿಭಾಗೀಯ ಸಮಿತಿ ಸದಸ್ಯ, ಪಿಎಲ್‌ಜಿಎ ಕಂಪನಿಯ 18 ಜನ, ಡಿಕೆಎಸ್ ಜೆಡ್‌ಸಿ 2 ಗಾರ್ಡ್‌ಗಳು, 9 ಜನ ಕಮಿಟಿ ಸದಸ್ಯರು ಹಾಗೂ ಪ್ರದೇಶ ಕಮಿಟಿ ಸದಸ್ಯರು ಇದ್ದರು ಎಂದು ತಿಳಿಸಿದರು.

ನಾರಾಯಣಪುರ ಮತ್ತು ದಾಂತೇವಾಡದಿಂದ ಜಿಲ್ಲಾ ಮೀಸಲು ಪಡೆ ಮತ್ತು ವಿಶೇಷ ಕಾರ್ಯಪಡೆಯ ಸುಮಾರು 1,500 ಯೋಧರು 72 ಗಂಟೆಗಳ ಕಾಲ ಬೃಹತ್ ಕಾರ್ಯಾಚರಣೆಯನ್ನು ನಡೆಸಿದ್ದು, 303 ಬಂದೂಕುಗಳನ್ನು ವಶಪಡಿಸಿಕೊಂಡಿದ್ದಾರೆ.

## ಬಿಡುಗಡೆ

ಕಳೆದ ವರ್ಷ ಡಿಸೆಂಬರ್‌ನಲ್ಲಿ ನಡೆದಿದ್ದ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಸತಿ ಇಲಾಖೆಗಳ ಪ್ರಗತಿ ಪರಿಶೀಲನೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಲ್ಪಸಂಖ್ಯಾತರ ವಸತಿ ಕಾಲೋನಿಗಳನ್ನು ಅಭಿವೃದ್ಧಿಪಡಿಸಲು 1,000 ಕೋಟಿ ರೂಪಾಯಿಗಳ ಕ್ರಿಯಾ ಯೋಜನೆ ರೂಪಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದರು. ಇದೇ ವೇಳೆ ಮುಂದಿನ ವರ್ಷದಿಂದ ಹೆಚ್ಚಿನ ಅನುದಾನ ನೀಡಲು ನಿರ್ಧರಿಸಲಾಗಿದೆ ಎಂದು ಹೇಳಿದ್ದರು. ಅದರಂತೆ ಇದೀಗ ಎರಡು ಹಂತದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಣ ಬಿಡುಗಡೆ ಮಾಡಿದ್ದಾರೆ.

**ವಿದ್ಯಾರ್ಥಿ ವೇತನ:** ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನವನ್ನು ನೀಡಲು ಬಜೆಟ್‌ನಲ್ಲಿ 60 ಕೋಟಿ ರೂ.ಗಳನ್ನು ಮೀಸಲಿಟ್ಟಿರುವುದರಿಂದ 6.4 ಲಕ್ಷ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಬಿಡುಗಡೆ ಮಾಡಲು ಸಿದ್ಧವಾಗಿದೆ ಎಂದು ಸಿದ್ದರಾಮಯ್ಯ ಹೇಳಿದ್ದರು. ಇಲಾಖೆಯಲ್ಲಿ ಲಭ್ಯವಿರುವ ಹಣದಿಂದ ಮರುಹಂಚಿಕೆ ಮಾಡುವ ಮೂಲಕ ಹೆಚ್ಚುವರಿಯಾಗಿ 40 ಕೋಟಿ ರೂ. ಪಾವತಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದರು.

## ವಿಚಾರಣೆ

ಹೀಗೆ ನಾನಾ ವಿಚಾರಗಳ ಬಗ್ಗೆ ಹಾಗೂ ದಾಖಲೆಗಳ ಬಗ್ಗೆ ಇ.ಡಿ ಅಧಿಕಾರಿಗಳು ಸುದೀರ್ಘ ವಿಚಾರಣೆ ನಡೆಸಿದರು.

ಸಿಎಂ ವಿರುದ್ಧದ ಮುಡಾ ಹಗರಣ ಆರೋಪ ಪ್ರಕರಣದಲ್ಲಿ ಸೈಟ್‌ನ ಮೂಲ ಮಾಲೀಕ ದೇವರಾಜ್. ಲೋಕಾಯುಕ್ತ ದಾಖಲಿಸಿಕೊಂಡಿರುವ ದೂರಿನಲ್ಲಿ ಅವರು ಎ4 ಆರೋಪಿಯಾಗಿದ್ದಾರೆ. ಸಿಎಂ ಸಿದ್ದರಾಮಯ್ಯ ಅವರ ಬಾಮೈದಾ ಮಲ್ಲಿಕಾರ್ಜುನ್‌ಗೆ ದೇವರಾಜ್ ಜಮೀನು ಮಾರಿದ್ದರು.

## ಸಿಎಂಗೆ ಸಂಕಷ್ಟ ತರುತ್ತಾ ವೈಟ್ನರ್ ಹಾಕಿದ ದಾಖಲೆ

**ಮೈಸೂರು:** ಮುಡಾ ಹಗರಣ ಸಂಬಂಧ ಮೈಸೂರಿನ ಕಚೇರಿ ಮೇಲೆ ಜಾರಿ ನಿರ್ದೇಶನಾಲಯ ಅಧಿಕಾರಿಗಳು ದಾಳಿ ನಡೆಸಿದ್ದು, ಎರಡನೇ ದಿನವಾದ ಶನಿವಾರವೂ ದಾಖಲೆಗಳ ಪರಿಶೀಲನೆ ಮುಂದುವರಿದಿದೆ. ಹಗರಣ ಬೆಳಕಿಗೆ ಬಂದ ಬೆನ್ನಲ್ಲೇ ಮುಡಾ ಸಂಬಂಧ ದಾಖಲೆಯೊಂದಕ್ಕೆ ವೈಟ್ನರ್ ಹಾಕಿರುವುದು ಬೆಳಕಿಗೆ ಬಂದಿತ್ತು. ಇದೀಗ ಇಡಿ ಅಧಿಕಾರಿಗಳ ಗಮನ ಅತ್ತ ಸೆಳೆದಿದೆ. ಪರಿಣಾಮವಾಗಿ ವೈಟ್ನರ್ ವಿಚಾರ ಸಿಎಂ ಸಿದ್ದರಾಮಯ್ಯಗೆ ಮತ್ತಷ್ಟು ಸಂಕಷ್ಟ ತಂದೊಡ್ಡಲಿದೆಯೇ ಎಂಬ ಅನುಮಾನ ಹೆಚ್ಚಾಗಿದೆ.



ಶನಿವಾರ ಬೆಳಗ್ಗೆ 10 ಗಂಟೆ ಸುಮಾರಿಗೆ ಮುಡಾ ಕಚೇರಿಗೆ ಆಗಮಿಸಿದ ಇಡಿ ಅಧಿಕಾರಿಗಳ ಜತೆ ಎಫ್‌ಎಸ್‌ಎಲ್ ಅಧಿಕಾರಿ ಕೂಡ ಆಗಮಿಸಿದ್ದಾರೆ. ಸಿದ್ದರಾಮಯ್ಯ ಪತ್ನಿ ಪಾರ್ವತಿ ಮುಡಾಗೆ ನೀಡಿದ್ದ ಮನವಿ ಪತ್ರದಲ್ಲಿದ್ದ ವೈಟ್ನರ್ ವಿಚಾರವಾಗಿ ಅವರು ಪರಿಶೀಲನೆ ನಡೆಸುವ ಸಾಧ್ಯತೆ ದಟ್ಟವಾಗಿದೆ. ಮನವಿ ಪತ್ರದ ಎರಡನೇ ಪುಟದಲ್ಲಿದ್ದ ಖಾಲಿ ಜಾಗಕ್ಕೆ ವೈಟ್ನರ್ ಹಾಕಲಾಗಿತ್ತು. ಆ ಬಗ್ಗೆ ಚರ್ಚೆ ಆದಾಗ ಬಿಡುಗಡೆ ವಿಡಿಯೋ ಬಿಡುಗಡೆ ಮಾಡಿ ಸ್ಪಷ್ಟನೆ ನೀಡಿದ್ದ ಸಿದ್ದರಾಮಯ್ಯ, ಟಾರ್ಚ್ ಬಿಟ್ಟು ವೈಟ್ನರ್ ಹಿಂದೆ ಏನಿತ್ತು ಎಂಬುದನ್ನು ತೋರಿಸಲು ಯತ್ನಿಸಿದ್ದರು. ಈಗ ಅದೇ ದಾಖಲೆಯ ಅಸಲಿಯತ್ತು ಪತ್ತೆಗೆ ಇಡಿ ಮುಂದಾಗಿದೆ.

ವೈಟ್ನರ್ ಹಾಕಿದ್ದ ದಾಖಲೆ ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿತ್ತು. ಸಿಎಂ ಬಿಡುಗಡೆ ಮಾಡಿದ್ದ ದಾಖಲೆ, ಆರ್ ಟಿಐ ಅಡಿ ಮುಡಾ ನೀಡಿದ್ದ ದಾಖಲೆ ಬೇರೆ ಬೇರೆಯಾಗಿರುವುದು ನಂತರ ಬೆಳಕಿಗೆ ಬಂದಿತ್ತು. 2 ದಾಖಲೆಗಳಲ್ಲಿ ಸಿಎಂ ಪತ್ನಿಯ ಸಹಿಯಲ್ಲಿ ವ್ಯತ್ಯಾಸ ಕಂಡು ಬಂದಿತ್ತು. ಅಷ್ಟೇ ಅಲ್ಲದೆ 2 ದಾಖಲೆಗಳಲ್ಲಿ ಹಲವು ವ್ಯತ್ಯಾಸಗಳು ಕಂಡು ಬಂದಿದ್ದವು. ಈ ಬಗ್ಗೆ ಮುಡಾ ಅಧಿಕಾರಿಗಳಿಗೆ ಹಲವು ಪ್ರಶ್ನೆಗಳನ್ನು ಇಡಿ ಅಧಿಕಾರಿಗಳು ಈಗಾಗಲೇ ಕೇಳಿದ್ದಾರೆ.

**ಏನಿದು ವೈಟ್ನರ್ ಪ್ರಕರಣ:** ಸಿಎಂ ಸಿದ್ದರಾಮಯ್ಯ ಪತ್ನಿ ತಮ್ಮ ಭೂಮಿಗೆ 50:50 ಅನುಪಾತದಲ್ಲಿ ಪರ್ಯಾಯ ನಿವೇಶನ ಕೊಡುವಂತೆ ಮನವಿ ಮಾಡಿ ಮುಡಾಗೆ ಸಲ್ಲಿಸಿರುವ ಪತ್ರಕ್ಕೆ ವೈಟ್ನರ್ ಹಾಕಿರುವುದು ಕೆಲವು ಸಮಯ ಹಿಂದೆ ಬೆಳಕಿಗೆ ಬಂದಿತ್ತು. ಇದರಿಂದಾಗಿ, ಹಗರಣದ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿರುವ ಸಂದರ್ಭದಲ್ಲೇ ಅಧಿಕಾರಿಗಳು ದಾಖಲೆಯನ್ನು ತಿರುಚಿದ್ದಾರೆಯೇ ಎಂಬ ಅನುಮಾನ ಮೂಡಿತ್ತು. ವಿಜಯನಗರದ 2 ಮತ್ತು ಮೂರನೇ ಹಂತದಲ್ಲೇ ನಿವೇಶನ ಕೊಡುವಂತೆ ಸಿದ್ದರಾಮಯ್ಯ ಪತ್ನಿ ಕೇಳಿದ್ದರೇ ಎಂಬ ಪ್ರಶ್ನೆಯೂ ಈಗ ಉದ್ಭವಿಸಿದೆ. ವೈಟ್ನರ್ ಹಾಕಿ ಅಳಿಸಿರುವುದರಿಂದ ಈ ಪ್ರಶ್ನೆ ಮೂಡಿತ್ತು.

ನಂತರ ಪ್ರತಿಪಕ್ಷಗಳಾದ ಬಿಜೆಪಿ, ಜೆಡಿಎಸ್ ಇದನ್ನೇ ಮುಂದಿಟ್ಟುಕೊಂಡು ಸಿಎಂ ವಿರುದ್ಧ ಆರೋಪಗಳ ಸುರಿಮಳೆ ಮಾಡಿದ್ದವು. ನಂತರ ನಕಲಿ ಸಹಿ ಆರೋಪದಲ್ಲಿ ಸಿಎಂ ಸಿದ್ದರಾಮಯ್ಯ ಪತ್ನಿ ಪಾರ್ವತಿ ವಿರುದ್ಧ ಮೈಸೂರಿನಲ್ಲಿ ದೂರು ದಾಖಲಾಗಿತ್ತು.

ಈ ವಿಚಾರವಾಗಿ ಸ್ಪಷ್ಟನೆ ನೀಡಿದ್ದ ಸಿದ್ದರಾಮಯ್ಯ, ಪತ್ನಿ ಪಾರ್ವತಿ ಬದಲಿ ಭೂಮಿ ಕೇಳಿದ್ದು ತನ್ನದೇ ಜಮೀನನ್ನು ಮುಡಾ ವಶಕ್ಕೆ ಪಡೆದು ಅಭಿವೃದ್ಧಿಪಡಿಸಿದ ದೇವನೂರು 3ನೇ ಹಂತದ ಬಡಾವಣೆಯಲ್ಲಿ ಅಥವಾ ನಂತರ ಪ್ರಾಧಿಕಾರವು ಅಭಿವೃದ್ಧಿ ಪಡಿಸಿದ ಸಮಾನಾಂತರ ಬಡಾವಣೆಯಲ್ಲಿ. ಅಲ್ಲಿ ನಿವೇಶನಗಳು ಲಭ್ಯವಿರದ ಕಾರಣಕ್ಕೆ ದೇವನೂರು 3ನೇ ಹಂತದ ಬಡಾವಣೆಯಲ್ಲಿ ಅಥವಾ ನಂತರ ಎಂಬ ನಾಲ್ಕೈದು ಪದಗಳಿಗೆ ವೈಟ್ನರ್ ಹಾಕಿ, ಪ್ರಾಧಿಕಾರ ಅಭಿವೃದ್ಧಿ ಪಡಿಸಿದ ಸಮಾನಂತರ ಬಡಾವಣೆಯಲ್ಲಿ ನಿವೇಶನ ನೀಡಬೇಕೆಂಬ ಮನವಿ ಮಾಡಲಾಗಿತ್ತು ಎಂದಿದ್ದರು.

ಇದೀಗ ವೈಟ್ನರ್ ವಿಚಾರವನ್ನು ಗಂಭೀರವಾಗಿ ಪರಿಗಣಿಸಿರುವ ಇಡಿ ಆ ಬಗ್ಗೆ ಹೆಚ್ಚಿನ ಪರಿಶೀಲನೆ ನಡೆಸುತ್ತಿದೆ. ಇದಕ್ಕಾಗಿ ವಿಧಿವಿಜ್ಞಾನ ಪ್ರಯೋಗಾಯಲಯ ಅಧಿಕಾರಿಯ ನೆರವನ್ನೂ ಪಡೆಯುತ್ತಿದೆ.

### ಕಾಲುಬಾಯಿ ರೋಗ ಲಸಿಕಾ ಅಭಿಯಾನ

## ಗುರಿ ಪೂರ್ಣಗೊಳಿಸಲು ಡಿಸಿ ಸೂಚನೆ

**ಬೆಂಗಳೂರು ನಗರ ಜಿಲ್ಲೆ:** ರೈತರನ್ನು ಆರ್ಥಿಕ ಸಂಕಷ್ಟಕ್ಕೆ ದೂಡುವ ಜಾನುವಾರುಗಳಲ್ಲಿ ಕಂಡು ಬರುವ ಕಾಲುಬಾಯಿ ರೋಗದಿಂದ ಬೆಂಗಳೂರು ನಗರ ಜಿಲ್ಲೆಯನ್ನು ಮುಕ್ತಗೊಳಿಸಲು ಪಶುಪಾಲನ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ಸಹಯೋಗದಲ್ಲಿ 21-10-2024 ಇಂದ 20-11-2024 ವರೆಗೆ ಹಮ್ಮಿಕೊಂಡಿರುವ ಆರನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಅಭಿಯಾನದ ನೂರರಷ್ಟು ಗುರಿ ಮುಟ್ಟಲು ಕ್ರಮವಹಿಸುವಂತೆ ಬೆಂಗಳೂರು ನಗರ ಜಿಲ್ಲಾಧಿಕಾರಿಗಳಾದ ಜಿ ಜಗದೀಶ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಅವರು ಇಂದು ತಮ್ಮ ಕಚೇರಿ ಸಭಾಂಗಣದಲ್ಲಿ ನಡೆದ ಕೇಂದ್ರ ಪುರಸ್ಕೃತ ಕಾಲುಬಾಯಿ ರೋಗ ಲಸಿಕ ಕಾರ್ಯಕ್ರಮದ ಜಿಲ್ಲಾಮಟ್ಟದ ನಿರ್ವಹಣಾ ಸಮಿತಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು.

ಕಾಲುಬಾಯಿ ರೋಗವು ಮಾರಣಾಂತಿಕವಲ್ಲದಿದ್ದರೂ ಜಾನುವಾರುಗಳ ಸಹಜ ಕಾರ್ಯ ಚಟುವಟಿಕೆಗಳಿಗೆ , ಹಾಲು ಉತ್ಪನ್ನ ಹಾಗೂ ಸಂತಾನೋತ್ಪತ್ತಿಯಲ್ಲಿ ತಡೆ ಉಂಟುಮಾಡುವುದರಿಂದ ರೈತರಿಗೆ ಆರ್ಥಿಕ ಹೊಡೆತ ಬೀಳುತ್ತದೆ. ಆದ್ದರಿಂದ ಈ ಅಭಿಯಾನವನ್ನು ಪ್ರಥಮಾಧ್ಯತೆ ಮೇರೆಗೆ ಯಶಸ್ವಿಗೊಳಿಸಲು ಅಧಿಕಾರಿಗಳು ಒಟ್ಟಾಗಿ ಶ್ರಮಿಸಬೇಕೆಂದು ಅವರು ಸಲಹೆ ನೀಡಿದರು.

ಕೆಲವು ರೈತರು ಈ ಲಸಿಕೆ ನೀಡಿಕೆಯನ್ನು ವಿರೋಧಿಸುವ ಸಂಭವವಿರುವುದರಿಂದ ಅಧಿಕಾರಿಗಳು ಅವರ ಮನವೊಲಿಸಿ ಈ ಲಸಿಕಾ ಕಾರ್ಯಕ್ರಮವನ್ನು ಶೇಕಡ 100ರಷ್ಟು ಪೂರ್ಣಗೊಳಿಸಲು ಶ್ರಮಿಸಬೇಕು. ಅಲ್ಲದೆ, ಯಾವುದೇ ಅಹಿತಕರ ಘಟನೆಗಳು ಆಗದಂತೆ ಎಚ್ಚರಿಕೆಯಿಂದ ಲಸಿಕೆ ಕಾರ್ಯಕ್ರಮವನ್ನು ಪೂರ್ಣಗೊಳಿಸಲು ಅವರು ಸೂಚಿಸಿದರು.



2019ರ ಸಾಲಿನ ಜಾನುವಾರು ಗಣತಿ ಪ್ರಕಾರ ಬೆಂಗಳೂರು ನಗರ ಜಿಲ್ಲೆಯಲ್ಲಿ 1,53, 861 ಹಸುಗಳು ಇದ್ದು, 11,168 ಎಮ್ಮೆಗಳು ಇದೆ. ಇವುಗಳಲ್ಲಿ ಆರನೇ ಸುತ್ತಿನ ಕಾಲು ಬಾಯಿ ರೋಗಕ್ಕೆ ಲಭ್ಯವಿರುವ ರಾಸುಗಳ ಸಂಖ್ಯೆ 1,28,787 ಹಾಗೂ 4,086 ಎಮ್ಮೆಗಳು ಎಂದು ಪಶುಪಾಲನಾ ಇಲಾಖೆಯ ಜಿಲ್ಲಾ ಉಪ ನಿರ್ದೇಶಕರಾದ ಡಾ. ಚಂದ್ರಶೇಖರ್ ಅವರು ತಿಳಿಸಿದರು.

ಈ ಅಭಿಯಾನಕ್ಕಾಗಿ ಕಳೆದ ಬಾರಿ ಅಂದರೆ ಐದನೇ ಸುತ್ತಿನಲ್ಲಿ ಉಳಿಕೆಯಾದಂತಹ 9,813 ಡೋಸ್ ಗಳು ಹಾಗೂ ಈ ಬಾರಿ ಲಭ್ಯವಿರುವ ಒಂದು ಲಕ್ಷದ 1,26,000 ಡೋಸ್ ಗಳನ್ನು ಸೇರಿ ಒಟ್ಟು 1,35,813 ಲಸಿಕೆಗಳು ಲಭ್ಯವಿವೆ ಎಂದು ಅವರು ಸಭೆಗೆ ತಿಳಿಸಿದರು.

ಈ ಅಭಿಯಾನವನ್ನು ಯಶಸ್ವಿಗೊಳಿಸಲು ನಗರ ಜಿಲ್ಲೆಯಾದ್ಯಂತ 184 ವ್ಯಾಕ್ಸಿನೇಟರ್ ಗಳನ್ನು ಗುರುತಿಸಲಾಗಿದ್ದು ಪಶು ವೈದ್ಯರು, ವೆಟರ್ನರಿ ನಿರೀಕ್ಷಕರು, ಜಾನುವಾರು ಅಧಿಕಾರಿಗಳು, ಮೈತ್ರಿ ಕೆಲಸಗಾರರು ಹಾಗೂ ಪಶು ಸಖಿಯರು ಒಂದು ತಂಡವಾಗಿ ಕಾರ್ಯನಿರ್ವಹಿಸಲಿದ್ದಾರೆ ಎಂದು ತಿಳಿಸಿದರು.

ಹರಿಯಾಣ ರಾಜ್ಯವನ್ನು ಹೊರತುಪಡಿಸಿದರೆ ಕರ್ನಾಟಕ ರಾಜ್ಯವು ಕಾಲುಬಾಯಿ ರೋಗ ಲಸಿಕಾ ಅಭಿಯಾನವನ್ನು ಅನುಷ್ಠಾನಗೊಳಿಸುವಲ್ಲಿ ಉತ್ತಮ ಸ್ಥಾನದಲ್ಲಿದೆ ಎಂದು ತಿಳಿಸಿದ ಡಾ. ಚಂದ್ರಶೇಖರ್ 2030 ರಷ್ಟರಲ್ಲಿ ಸಂಪೂರ್ಣವಾಗಿ ಈ ರೋಗವನ್ನು ದೇಶದಿಂದ ನಿರ್ಮೂಲನೆ ಗೊಳಿಸುವ ಗುರಿಯನ್ನು ಹೊಂದಲಾಗಿದೆ ಎಂದವರು ತಿಳಿಸಿದರು.

ಸಭೆಯಲ್ಲಿ ಬೆಂಗಳೂರು ನಗರ ಅಪರ ಜಿಲ್ಲಾಧಿಕಾರಿಗಳಾದ ಜಗದೀಶ್ ನಾಯಕ್, ಪ್ರೊಫೆಸರ್ ಬಿ ಎಂ ವೀರೇಗೌಡ, ಡಾಕ್ಟರ್ ಧರಣೇಶ್, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಜಂಟಿ ನಿರ್ದೇಶಕರಾದ ಡಾ. ಚಂದ್ರಯ್ಯ, ಬೆಂಗಳೂರು ನಗರ ಜಿಲ್ಲೆಯ ಎಲ್ಲಾ ತಾಲೂಕು ಮಟ್ಟದ ಪಶುಪಾಲನ ಇಲಾಖೆಯ ಸಹಾಯಕ ನಿರ್ದೇಶಕರು, ಲಸಿಕಾ ಕಾರ್ಯಕ್ರಮದ ಜಿಲ್ಲಾ ನೋಡಲ್ ಅಧಿಕಾರಿಯಾದ ಮೀನಾ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪನಿರ್ದೇಶಕರಾದ ಪಲ್ಲವಿ ಹೊನ್ನಾಪುರ ಸೇರಿದಂತೆ ಇಲಾಖೆ ಸಿಬ್ಬಂದಿ ಉಪಸ್ಥಿತರಿದ್ದರು.

### ಸಾಹಿತ್ಯ ಸಮ್ಮೇಳನದ ಪ್ರಚಾರ ಸಭೆ ಚಾಲನೆ ನುಡಿ ಹಬ್ಬಕ್ಕೆ ಎಲ್ಲರೂ ಸಹಕಾರ ನೀಡಿ

# ನಾಗಮಂಗಲ ನೆಲದ ಒಡಲಲ್ಲಿ ಹುಟ್ಟುವುದು ಪುಣ್ಯ: ಮಹೇಶ್ ಜೋಶಿ



**ನಾಗಮಂಗಲ;** ಕರ್ನಾಟಕದಲ್ಲಿ ಹುಟ್ಟುವುದು ಅದರಲ್ಲೂ ಮಂಡ್ಯ ಜಿಲ್ಲೆಯಲ್ಲಿ ಅದಕ್ಕಿಂತ ಮಿಗಿಲಾಗಿ ನಾಗಮಂಗಲದಲ್ಲಿ ಹುಟ್ಟುವುದು ನಮ್ಮ ಪೂರ್ವಜನ್ಮದ ಪುಣ್ಯ ಎಂದು ಕನ್ನಡ ಸಾಹಿತ್ಯ ಪರಿಷತ್ನ ಅಧ್ಯಕ್ಷರಾದ ಶ್ರೀ ಡಾ. ಮಹೇಶ್ ಜೋಶಿ ರವರು ಅಭಿಪ್ರಾಯಪಟ್ಟರು.

ನಾಗಮಂಗಲದ ಗುರುಭವನದಲ್ಲಿ ಅಖಿಲ ಭಾರತ ಸಾಹಿತ್ಯ ಸಮ್ಮೇಳನ ಮಂಡ್ಯ ಜಿಲ್ಲೆಯಲ್ಲಿ ಡಿಸೆಂಬರ್ ತಿಂಗಳಲ್ಲಿ ನಡೆಯುವ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಪ್ರಚಾರ ಸಭೆಯ ಉದ್ಘಾಟನೆ ಮಾಡುತ್ತಾ ಮಾತನಾಡಿದರು.

ನಮ್ಮ ಕರ್ನಾಟಕ ಒಂದು ಪುಣ್ಯಭೂಮಿ ಇಲ್ಲಿ ಹುಟ್ಟುವುದೇ ನಮಗೆ ಪುಣ್ಯ ಇಲ್ಲಿ ಇರುವಂತಹ ಸಾಹಿತ್ಯ ಕನ್ನಡ ಭಾಷೆಯ ಪ್ರೌಢಿಮೆ ಇಡೀ ವಿಶ್ವದ ಪ್ರಮುಖ ಮೂರು ಭಾಷೆಗಳಲ್ಲಿ ಕನ್ನಡವು ಒಂದಾಗಿದೆ ಎಂದು ತಿಳಿಸಿದರು .

ನಾಗಮಂಗಲ ಒಂದು ಪುರಾಣ ಪ್ರಸಿದ್ಧವಾದ ಸ್ಥಳ, ಇಲ್ಲಿನ ನರಸಿಂಹ ಸ್ವಾಮಿ ದೇವಸ್ಥಾನ ಇಲ್ಲಿನ ಇತಿಹಾಸವನ್ನು ನಾಗಮಂಗಲ ಎಂಬ ಹೆಸರು ಬರಲು ಕಾರಣವನ್ನು ತಿಳಿಸುತ್ತದೆ . ಇದು ಕೆಲವರಿಗೆ ಬೇಡವಾದರು ನಂಬಲೇಬೇಕಾದ ಜನರಿದ್ದಾರೆ. ನಂಬಿಕೆ ಎಂಬುದು ಅತಿ ಮುಖ್ಯ ನಂಬಿಕೆಯನ್ನು ನಂಬಿ ಹೋದರೆ ನಾವು ಯಶಸ್ಸನ್ನು ಕಾಣುತ್ತೇವೆ. ಅದೇ ರೀತಿ ಪ್ರತಿಯೊಬ್ಬರಲ್ಲಿ ನಾವು ವಿಶ್ವಾಸವನ್ನು ಇಟ್ಟು ಬೆಳೆಯಬೇಕಾಗಿದೆ.

ಈ ನಿಟ್ಟಿನಲ್ಲಿ ಮಂಡ್ಯದಲ್ಲಿ ನಡೆಯಲಿರುವಂತಹ ಅಖಿಲ ಭಾರತ ಕನ್ನಡದ ಸಾಹಿತ್ಯ ಸಮ್ಮೇಳನದಲ್ಲಿ ನಾಗಮಂಗಲದ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು. ನಾಗಮಂಗಲ ಬಿ ಎಂ ಶ್ರೀ ರವರಿಂದ ಹಿಡಿದು ಅನೇಕ ಕವಿಗಳು ,ಜಾನಪದ ಕವಿಗಳು, ಕಾದಂಬರಿ ಕಾರರು ಹಾಗೆ ರಾಜರಾಮಣ್ಣನಂತಹ ಅಣು ವಿಜ್ಞಾನಿಗಳು ಹುಟ್ಟಿದಂತಹ ತಾಲೂಕು, ತಾಲೂಕಿನ ಜನ ಎಲ್ಲ ರಂಗದಲ್ಲೂ ಮುಂದಿದ್ದಾರೆ. ಇದನ್ನು ನೀವು ಗಮನದಲ್ಲಿಟ್ಟು ಮುಂದಿನ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ನೀವೇ ಬರಬೇಕು, ಇದು ನನ್ನ ಸಮ್ಮೇಳನ ನಾವೇ ಇದರ ಬಾಗಿಗಳು ಎಂಬುದನ್ನು ತಿಳಿದು ನೀವೆಲ್ಲರೂ ಭಾಗವಹಿಸಿ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಹೆಚ್ಚಿನ ಸಹಕಾರವನ್ನು ನೀಡಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಸಾರ್ವಜನಿಕರ ಸಲಹೆಗಳನ್ನು ಕೇಳಲಾಗಿ ಕನ್ನಡ ಸಾಹಿತ್ಯ ಪರಿಷತ್ ಹಿಂದಿನ ಖಜಾಂಚಿ ಶ್ರೀನಿವಾಸ್ ದೇಶಪ್ರೇಮಿ ರವರು ಮಾತನಾಡಿ, ಸಾಹಿತ್ಯ ಸಮ್ಮೇಳನದಲ್ಲಿ ಇಲಾಖೆ ಕಾರ್ಯಕ್ರಮಗಳನ್ನೇ ವೇದಿಕೆ ಕಾರ್ಯಕ್ರಮಗಳಲ್ಲಿ ಮಾಡಿದಂತೆ ಸಾಹಿತ್ಯಕ್ಕೆ ಪೂರಕವಾದ ಕೆಲಸಗಳನ್ನು ವೇದಿಕೆಯ ಕಾರ್ಯಕ್ರಮವಾಗಿ ಮಾಡುವಂತೆ ಸಲಹೆ ನೀಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಮಹೇಶ್ ಜೋಶಿ ರವರು ಅಖಿಲ ಭಾರತ ಕನ್ನಡದ ಸಾಹಿತ್ಯ ಸಮ್ಮೇಳನದಲ್ಲಿ ಸಾಹಿತ್ಯಕ್ಕೆ ಪೂರಕವಾದ ಕಾರ್ಯಕ್ರಮಗಳೇ ಇರುತ್ತವೆ. ಇದರಲ್ಲಿ ಯಾವುದೇ ಅನುಮಾನ ಬೇಡವೆಂದು ತಿಳಿಸಿದರು. ಜಿಲ್ಲಾ ಅಧ್ಯಕ್ಷರಾದ ಮೀರಾ ಶಿವಲಿಂಗಯ್ಯ ,ತಾಲೂಕು ಅಧ್ಯಕ್ಷರಾದ ಚಂದ್ರಶೇಖರ್ ಹಾಗೂ ಜಿಲ್ಲಾ ಮತ್ತು ತಾಲೂಕು ಮಟ್ಟದ ಪದಾಧಿಕಾರಿಗಳು ಉಪಸ್ಥಿತರಿದ್ದು ,ಕನ್ನಡ ಸಾಹಿತ್ಯ ಪರಿಷತ್ ನ ಹಿರಿಯ ಸದಸ್ಯರುಗಳು ಹಾಗೂ ತಾಲೂಕಿನ ಹಿರಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

## ಕೃಷಿ ಡಿಪ್ಲೊಮಾ ಕೋರ್ಸ್‌ನ ಉಳಿಕೆ ಸೀಟುಗಳಿಗೆ ಅ.25 ರಂದು ಕೌನ್ಸಿಲಿಂಗ್

**ಬೆಂಗಳೂರು:** ಶಿವಮೊಗ್ಗದ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಅಧೀನದಲ್ಲಿರುವ ಕೃಷಿ ಡಿಪ್ಲೊಮಾ ಕಾಲೇಜು ಬ್ರಹ್ಮಾವರದಲ್ಲಿ 2024-25ನೇ ಶೈಕ್ಷಣಿಕ ಸಾಲಿನ 2 ವರ್ಷಗಳ ಡಿಪ್ಲೊಮಾ ಕೃಷಿ ಕೋರ್ಸ್‌ಗೆ ಭರ್ತಿಯಾಗದೆ ಖಾಲಿ ಉಳಿದಿರುವ ಸೀಟುಗಳಿಗೆ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಕೃಷಿ ಡಿಪ್ಲೊಮಾವನ್ನು ಕನ್ನಡ ಮಾಧ್ಯಮದಲ್ಲಿ ಸೆಮಿಸ್ಟರ್ (4 ಸೆಮಿಸ್ಟರ್) ಪದ್ಧತಿಯಲ್ಲಿ ಬೋಧಿಸಲಾಗುವುದು.

ಕೃಷಿ ಡಿಪ್ಲೊಮಾ ಕೋರ್ಸ್‌ಗೆ ಪ್ರವೇಶ ಬಯಸುವ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಕನ್ನಡ ಪಠ್ಯವನ್ನು ಭಾಷೆಯಾಗಿ ಅಭ್ಯಸಿಸಿ ಕನಿಷ್ಟ ಶೇ. 45 ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ಪ.ಜಾ./ಪ.ಪಂ./ಪ್ರವರ್ಗ-1ರವರುಗಳಿಗೆ ಕನಿಷ್ಟ ಶೇ. 40 ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ರೈತರ ಹಾಗೂ ಕೃಷಿ ಕಾರ್ಮಿಕರ ಮಕ್ಕಳಿಗೆ ಶೇ. 50 ರಷ್ಟು ಸೀಟುಗಳನ್ನು ಕೃಷಿ ಡಿಪ್ಲೊಮಾ ಪ್ರವೇಶಾತಿಗೆ ಮೀಸಲಿಡಲಾಗಿದೆ. ಅರ್ಜಿ ಹಾಗೂ ಮಾಹಿತಿ ಪುಸ್ತಕವನ್ನು ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ. ಶಿವಮೊಗ್ಗದ ವೆಬ್‌ಸೈಟ್ : ತಿತಿತಿ.ಣಚಿಟ.ಜಜಣ.ಟಿ ನಲ್ಲಿ ಡೌನ್ ಲೋಡ್ ಮಾಡಬಹುದು. ಭರ್ತಿಮಾಡಿದ ಅರ್ಜಿಗಳನ್ನು, ಅರ್ಜಿಯ ನಿಗದಿತ ಶುಲ್ಕವನ್ನು ಡಿ.ಡಿ. ರೂಪದಲ್ಲಿ ಲಗತ್ತಿಸಿ ಮುಕ್ತ ಕೌನ್ಸಿಲಿಂಗ್ ದಿನ ತರುವುದು.

ಸಾಮಾನ್ಯ ವರ್ಗದವರಿಗೆ ಅರ್ಜಿ ಶುಲ್ಕ ರೂ. 500/-, ಪ.ಜಾ./ಪ.ಪಂ./ಪ್ರವರ್ಗ-1 ರವರಿಗೆ ರೂ. 250/- ಆಗಿದ್ದು, ರಾಷ್ಟ್ರೀಕೃತ ಬ್ಯಾಂಕ್‌ಗಳ ಡಿಡಿಯನ್ನು ಅಂಟಂಣಿಡಿಂಟಟಜಡಿ, ಏಖಿಓಗಂಊಖ, ಖಿತಚಿಟಂರಂಚಿ - 577 412 ಇವರ ಹೆಸರಿನಲ್ಲಿ ಪಡೆದು ಎಲ್ಲಾ ಅಗತ್ಯ ಅಡಕಗಲೊಂದಿಗೆ ಭರ್ತಿ ಮಾಡಿದ ಅರ್ಜಿಗಳನ್ನು ಅಕ್ಟೋಬರ್ 25 ರಂದು ಬೆಳಿಗ್ಗೆ 10.30 ಗಂಟೆಗೆ ಖುದ್ದಾಗಿ ಎಂಪಿ ಹಾಲ್, ಕೃಷಿ ವಿಶ್ವವಿದ್ಯಾಲಯ, ನವಿಲೆ, ಶಿವಮೊಗ್ಗ ಈ ವಿಳಾಸಕ್ಕೆ ಅರ್ಜಿಗಳನ್ನು ಸಲ್ಲಿಸಬೇಕು. ನಿಗಧಿತ ಸಮಯದ ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

### ಪ್ರವೇಶ ಮತ್ತು ಆಯ್ಕೆ ವಿಧಾನ

**ಸರ್ಕಾರದ ಆದೇಶಗಳ ಅನ್ವಯ ಉಳಿದಿರುವ ಸೀಟುಗಳನ್ನು ಮುಕ್ತ ಕೌನ್ಸಿಲಿಂಗ್ ಆಯ್ಕೆ ಪ್ರಕ್ರಿಯೆ ಮೂಲಕ ಭರ್ತಿ ಮಾಡಲಾಗುವುದು. ಅರ್ಹ ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ರೋಸ್ಟರ್ ಪದ್ಧತಿಯನ್ನು ಅಳವಡಿಸಿ, ಪ್ರವೇಶಕ್ಕೆ ಆಯ್ಕೆ ಮಾಡಿ ಆಯ್ಕೆಯಾದ ಅಭ್ಯರ್ಥಿಗಳು ರೂ. 6,190/- ಪ್ರವೇಶ ಶುಲ್ಕವನ್ನು ನಗದಾಗಿ ಸ್ಥಳದಲ್ಲಿಯೇ ಕಡ್ಡಾಯವಾಗಿ ಪಾವತಿಸಬೇಕಾಗಿರುತ್ತದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳ ಪೋಷಕರ ಆದಾಯ ರೂ. 2.5 ಲಕ್ಷದೊಳಗಿದ್ದರೆ ಅಂತಹ ಅಭ್ಯರ್ಥಿಗಳು ರೂ. 2,000/- ಪ್ರದೇಶ ಶುಲ್ಕವನ್ನು ನಗದಾಗಿ ಸ್ಥಳದಲ್ಲಿಯೇ ಕಡ್ಡಾಯವಾಗಿ ಪಾವತಿಸಬೇಕಾಗಿರುತ್ತದೆ ಎಂದು ಶಿವಮೊಗ್ಗದ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ರಿಜಿಸ್ಟ್ರಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

### ರಾಜ್ಯಾದ್ಯಂತ ಅನುಷ್ಠಾನ: ಸಚಿವ ಎಸ್. ಮಧುಬಂಗಾರಪ್ಪ

# ಶಿಕ್ಷ ಕೋಪೈಲಟ್ ಜಾರಿಗೆ ಕ್ರಮ



**ಬೆಂಗಳೂರು:** ಕೃತಕ ಬುದ್ದಿಮತ್ತೆ ಉಪಯೋಗಿಸಿ ಡಿಜಿಟಲ್ ಮಾಧ್ಯಮದಿಂದ ಶಿಕ್ಷಕರು ಮಕ್ಕಳಿಗೆ ಶಿಕ್ಷಣ ನೀಡುವ ಶಿಕ್ಷ ಕೋಪೈಲಟ್ ಕಾರ್ಯಕ್ರಮ ರಾಜ್ಯಾದ್ಯಂತ ಶಾಲೆಗಳಲ್ಲಿ ಜಾರಿಗೊಳ್ಳುತ್ತದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸಚಿವ ಎಸ್. ಮಧುಬಂಗಾರಪ್ಪ ಅವರು ತಿಳಿಸಿದರು.

ವಿಧಾನಸೌಧದಲ್ಲಿ ಈ ಶಿಕ್ಷಣ ಕೋಪೈಲಟ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಸಚಿವರು, ಪ್ರಸ್ತುತ ಹಾಗೂ ಭವಿಷ್ಯದ ಶಾಲಾ ಶಿಕ್ಷಣವನ್ನು ಗಮನದಲ್ಲಿಟ್ಟುಕೊಂಡು ಈ ಕಾರ್ಯಕ್ರಮವನ್ನು ರೂಪಿಸಲಾಗಿದೆ. ಡಿಜಿಟಲ್ ಆ್ಯಪ್ ಮೂಲಕ ಪಠ್ಯದ ಸಂಪೂರ್ಣ ನಕ್ಷೆಯನ್ನು ಇದರಲ್ಲಿ ಸಿದ್ದಪಡಿಸಿದ್ದು, ಶಿಕ್ಷಕರು ವಿಷಯಕ್ಕೆ ಅನುಗುಣವಾಗಿ ಮಕ್ಕಳಿಗೆ ಶಿಕ್ಷಣ ನೀಡಬಹುದು. ಶಿಕ್ಷಣದಲ್ಲಿ ಗುಣಮಟ್ಟ, ತಲುಪಿವಿಕೆ ಸಮಾನತೆಯನ್ನು ಗಮನದಲ್ಲಿರಿಕೊಂಡು ಮಕ್ಕಳಿಗೆ ಇದನ್ನು ನೀಡುವ ಉದ್ದೇಶ ನಮ್ಮದಾಗಿದೆ.

ಇಂದಿನ ತಂತ್ರಜ್ಞಾನ ಯುಗದಲ್ಲಿ ಈ ರೀತಿಯ ಕಲಿಕೆ ಬಹಳ ಮುಖ್ಯವಾಗಿದೆ. ಅದರಲ್ಲೂ ಗ್ರಮೀಣ ಭಾಗಗಳ 750ಕ್ಕೂ ಹೆಚ್ಚು ಸರ್ಕಾರಿ ಶಾಲೆಗಳ ಸುಮಾರು 1000 ಶಿಕ್ಷಕರನ್ನು ಈ ಕಾರ್ಯಕ್ರಮದಡಿ ತರಬೇತಿಗೆ ಆಯ್ಕೆ ಮಾಡಲಾಗಿದೆ. ಈ ಕಾರ್ಯಕ್ರಮಕ್ಕೆ ಶಿಕ್ಷಣ ಫೌಂಡೇಷನ್ ಮತ್ತು ಮೈಕ್ರೋಸಾಫ್ಟ್ ಕಂಪನಿಗಳು ಸಹಕಾರ ನೀಡಿದೆ.

ರಾಜ್ಯಾದ್ಯಂತ 57 ಲಕ್ಷ ಮಕ್ಕಳು ಸರ್ಕಾರಿ ಅನುದಾನಿತ ಶಾಲೆಗಳಲ್ಲಿ ಕಲಿಯುತ್ತಿದ್ದಾರೆ. ಶಾಲೆಗಳಲ್ಲಿ ಉತ್ತಮ ಫಲಿತಾಂಶವನ್ನು ಗಳಿಸುವುದರ ಜೊತೆಗೆ ಉತ್ತಮ ಬೋಧನ ಸಂಪನ್ಮೂಲ ಕಲಿಕಾ ಅನುಭವ ನೀಡುವುದು ನಮ್ಮ ಗುರಿ ಎಂದು ಸಚಿವರು ತಿಳಿಸಿದರು.

ಇದರಲ್ಲಿ ಸ್ವಯಂ ಕಲಿಕೆ ಮತ್ತು ಸಂವಾದಾತ್ಮಕ ವಿಷಯ ರಚನೆಗಾಗಿ ಶಿಕ್ಷಕರಿಗೆ ಚಾಟ್ ಬಾತ್ ಸಹ ಒದಗಿಸಲಾಗಿದೆ. ಅಜೀಂ ಪ್ರೇಂಜಿ ಫೌಂಡೇಷನ್‌ರವರು 1591 ಕೋಟಿ ರೂ ಮೊತ್ತವನ್ನು ಮೂರು ವರ್ಷದ ಅವಧಿಗೆ ಮಕ್ಕಳಿಗೆ ಮೊಟ್ಟೆ, ಚಿಕ್ಕಿ ಮತ್ತು ಬಾಳೆಹಣ್ಣು ಒದಗಿಸಲು ನೀಡಿದೆ. ಸರ್ಕಾರವು ಶಾಲೆಗಳ ವಿಜ್ಞಾನ ಪ್ರಯೋಗಾಲಯಕ್ಕೆ ಬಜೆಟ್‌ನಲ್ಲಿ ಅನುದಾನ ಒದಗಿಸಿದೆ.

25 ಸಾವಿರ ಮಕ್ಕಳಿಗೆ ನೀಟ್ ಮತ್ತು ಸಿ.ಇ.ಟಿ ಪ್ರವೇಶ ತರಬೇತಿಗೆ ಅವಕಾಶ ಕಲ್ಪಿಸಿಕೊಡಲಾಗಿದೆ. ದಿಕ್ಸೂಚಿ ಕಾರ್ಯಕ್ರಮದಡಿ 4 ಲಕ್ಷ ಮಕ್ಕಳಿಗೆ ತರಬೇತಿ ನೀಡಲಾಗುತ್ತಿದೆ. ಸರ್ಕಾರ ಮತ್ತು ಸರ್ಕಾರೇತರ ಸಂಸ್ಥೆಗಳು ಸಹ ನಮ್ಮ ಕಾರ್ಯಕ್ರಮಗಳಿಗೆ ಕೈ ಜೋಡಿಸಿವೆ. ಮಕ್ಕಳು ಅನುತ್ತೀರ್ಣವಾದರೂ ಸಹ ವಿದ್ಯಾಭ್ಯಾಸವನ್ನು ಮೊಟಕುಗೊಳಿಸದೆ ಪೋಷಕರು ಶಿಕ್ಷಣ ಮುಂದುವರೆಸಲು ಪ್ರೋತ್ಸಾಹಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಿತೀಶ್ ಕುಮಾರ್ ಸಿಂಗ್, ಆಯುಕ್ತರಾದ ಕೆ.ವಿ. ತ್ರಿಲೋಕಚಂದ್ರ, ಮೈಕ್ರೋಸಾಫ್ಟ್ ರಿಸರ್ಚ್ ಇಂಡಿಯಾ ಹಾಗೂ ಶಿಕ್ಷಣ ಫೌಂಡೇಷನ್‌ನ ಮುಖ್ಯಸ್ಥರು ಉಪಸ್ಥಿತರಿದ್ದರು.

## ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ, ವಿದ್ಯಾಸಿರಿ ಯೋಜನೆ ಸೌಲಭ್ಯ ಅರ್ಜಿ ಆಹ್ವಾನ

**ಚಾಮರಾಜನಗರ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2024-25ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ನೀಡಲಾಗುವ ವಿದ್ಯಾರ್ಥಿವೇತನ, ಶುಲ್ಕಮರುಪಾವತಿ, ವಿದ್ಯಾಸಿರಿ (ಊಟ ಮತ್ತು ವಸತಿ ಸಹಾಯ ಯೋಜನೆ) ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಮೆಟ್ರಿಕ್ ನಂತರದ ಕೋರ್ಸುಗಳಾದ ಸ್ನಾತಕೋತ್ತರ ಪದವಿ, ವೃತ್ತಿಪರ ಪದವಿ, ವೃತ್ತಿಪರ ಸ್ನಾತಕೋತ್ತರ ಪದವಿ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ಹಾಗೂ ಪ್ರವರ್ಗ-1ರ ಅಲೆಮಾರಿ, ಅರೆ ಅಲೆಮಾರಿ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ವೆಬ್‌ಸೈಟ್ https://ssp.postmatric.karnataka.gov.in ನಲ್ಲಿ ನವೆಂಬರ್ 30ರೊಳಗೆ ಅರ್ಜಿ ಸಲ್ಲಿಸಬೇಕು.

ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ವೆಬ್‌ಸೈಟ್ https://bcwd.karnataka.gov.in,, ಇಲಾಖಾ ಸಹಾಯವಾಣಿ ದೂ.ಸಂ 8050770005, ಇ-ಮೇಲ್ bcwdhelpline@gmail.in, ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇ-ಮೇಲ್ postmatrichelp@karnataka.gov.in ಮತ್ತು ದೂ.ಸಂ 1902 ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಗರದ ಜಿಲ್ಲಾಡಳಿತ ಭವನದಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ದೂ.ಸಂ 08226-222180 ಸಂಪರ್ಕಿಸುವಂತೆ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪತ್ರಕರ್ತರ ಮೇಲೆ ಪೊಲೀಸ್ ದೌರ್ಜನ್ಯ; ಸೂಕ್ತ ಕ್ರಮದ ಭರವಸೆ ನೀಡಿದ ಗೃಹ ಸಚಿವ

**ಬೆಂಗಳೂರು:** ಮಾಧ್ಯಮದವರ ಮೇಲೆ ಪೊಲೀಸ್ ದೌರ್ಜನ್ಯವಾಗದಂತೆ ಸೂಕ್ತ ಕ್ರಮ ಕೈಗೊಳ್ಳಲು ಹಿರಿಯ ಅಧಿಕಾರಿಗಳಿಗೆ ಕೂಡಲೇ ನಿರ್ದೇಶನ ನೀಡಲಾಗುವುದು ಎಂದು ಗೃಹ ಸಚಿವ ಜಿ.ಪರಮೇಶ್ವರ ಅವರು ಭರವಸೆ ನೀಡಿದ್ದಾರೆ. ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಶುಕ್ರವಾರ ವಿಧಾನಸೌಧದಲ್ಲಿ ಗೃಹ



ಸಚಿವರನ್ನು ಭೇಟಿ ಮಾಡಿ, ಮೈಸೂರಿನಲ್ಲಿ ದಸರಾ ಸಂದರ್ಭದಲ್ಲಿ ಕರ್ತವ್ಯನಿರತ ಫೋಟೋಗ್ರಾಫರ್ಸ್‌ಗಳ ಮೇಲೆ ಪೊಲೀಸರು ಮಾಡಿರುವ ದೌರ್ಜನ್ಯ ಮತ್ತು ಶಿವಮೊಗ್ಗ ಜಿಲ್ಲೆ ತೀರ್ಥಹಳ್ಳಿಯಲ್ಲಿ ಪತ್ರಕರ್ತರ ಮೇಲೆ ನಡೆದ ದೌರ್ಜನ್ಯದ ಘಟನೆಗಳನ್ನು ಗೃಹ ಸಚಿವರ ಗಮನಕ್ಕೆ ತಂದರು. ಕರ್ತವ್ಯ ನಿರತ ಪತ್ರಕರ್ತರು, ಫೋಟೋಗ್ರಾಫರ್ಸ್, ವಿಡಿಯೋ ಜರ್ನಲಿಸ್ಟ್‌ಗಳ ಮೇಲೆ, ಆಗಿಂದಾಗ್ಗೆ ದೌರ್ಜನ್ಯ ಘಟನೆಗಳು ಮರುಕಳಿಸದಂತೆ ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳುವಂತೆ ಕೆಯುಡಬ್ಲ್ಯೂಜೆ ಒತ್ತಾಯಿಸಿತು.

ಮನವಿ ಸ್ವೀಕರಿಸಿ ಪ್ರತಿಕ್ರಿಯಿಸಿದ ಸಚಿವರು, ಮಾಧ್ಯಮದವರು ಮೇಲೆ ಈ ರೀತಿಯ ಘಟನೆಗಳು ಆಗಬಾರದು. ಹಿರಿಯ ಅಧಿಕಾರಿಗಳ ಹಂತದಲ್ಲಿ ಈ ರೀತಿಯ ಘಟನೆಗಳು ಆಗುವುದಿಲ್ಲ, ಆದರೆ, ತಳ ಹಂತದಲ್ಲಿ ಒಮ್ಮೊಮ್ಮೆ ಘಟನೆಗಳು ನಡೆದಿರುವುದು ನನ್ನ ಗಮನಕ್ಕೆ ಬಂದಿದೆ ಎಂದರು.

ಮೈಸೂರಿನಲ್ಲಿ ಫೋಟೋಗ್ರಾಫರ್ಸ್ ಮೇಲೆ ನಡೆದಿರುವ ಘಟನೆಯ ಬಗ್ಗೆ ಮೈಸೂರು ಪೊಲೀಸ್ ಆಯುಕ್ತರ ಜೊತೆ ಮಾತನಾಡುತ್ತೇನೆ. ತೀರ್ಥಹಳ್ಳಿ ಘಟನೆ ಬಗ್ಗೆಯೂ ಪರಿಶೀಲಿಸುತ್ತೇನೆ. ಎರಡೂ ಘಟನೆಗಳ ಬಗ್ಗೆ ಸೂಕ್ತ ಕ್ರಮಕ್ಕೆ ಸೂಚಿಸುವುದಾಗಿ ತಿಳಿಸಿದರು.

## ಕೇಂದ್ರ ಸಚಿವ ವಿ.ಸೋಮಣ್ಣರಿಗೆ ಅಭಿನಂದನೆ

**ತಿಪಟೂರು:** ನಗರದ ರೈಲ್ವೆ ನಿಲ್ದಾಣದಲ್ಲಿ ಹುಬ್ಬಳ್ಳಿ ಜನಶತಾಬ್ಧಿ ಹಾಗೂ ಶಿವಮೊಗ್ಗ ಜನಶತಾಬ್ಧಿ ರೈಲುಗಳನ್ನು ನಿಲುಗಡೆ ಕೇಂದ್ರ, ರೈಲ್ವೆ ಸಚಿವಾಲಯ ಅನುಮೋದನೆ ನೀಡಿದ್ದು, ಸಾರ್ವಜನಿಕರ ಬಹುದಿನಗಳ ಬೇಡಿಕೆಯನ್ನು ತ್ವರಿತ ಗತಿಯಲ್ಲಿ ಈಡೇರಿಸಲು ಸ್ಪಂದಿಸಿದ ತುಮಕೂರು ಜಿಲ್ಲಾ ಸಂಸದರು ಹಾಗೂ ರಾಜ್ಯ ರೈಲ್ವೆ ಸಚಿವ ವಿ.ಸೋಮಣ್ಣನವರಿಗೆ ತಿಪಟೂರು ಶಾಸಕ ಕೆ.ಷಡಕ್ಷರಿ ಹಾಗೂ ಮಾಜಿ ಶಿಕ್ಷಣ ಸಚಿವ ಬಿ.ಸಿ ನಾಗೇಶ್ ಅಭಿನಂದನೆಯನ್ನು ಸಲ್ಲಿಸಿದ್ದಾರೆ. ಶ್ರೀಮಠದ ಭಕ್ತ, ಕೇಂದ್ರ, ರೈಲ್ವೆ ಸಚಿವ ವಿ. ಸೋಮಣ್ಣ ಲೋಕಸಭಾ ಸದಸ್ಯರಾಗಿ ಆಯ್ಕೆಯಾಗಿ ಶ್ರೀ ಮಠಕ್ಕೆ ಆಗಮಿಸಿದಾಗ ಹುಬ್ಬಳ್ಳಿ ಭಾಗದ ನೂರಾರು ಭಕ್ತಾಧಿಗಳು ಪ್ರತಿನಿತ್ಯ ಆಗಮಿಸುತ್ತಾರೆ, ಭಕ್ತರಿಗಾಗಿ ಮತ್ತು ತಾಲ್ಲೂಕಿನ ಜನರ ಅನುಕೂಲಕ್ಕಾಗಿ ರೈಲು ನಿಲುಗಡೆಗೆ ಖುದ್ದು ನಾನೇ ಬೇಡಿಕೆ ಇಟ್ಟಿದ್ದೆ ಈಡೇರಿಸಿದ ಪುಣ್ಯಕೋಟಿ ಮನಸ್ಸಿನ ಸದ್ಭಕ್ತ ಸೋಮಣ್ಣನವರಿಗೆ ಜಿಲ್ಲೆಯ ಅಭಿವೃದ್ಧಿಯ ಇಚ್ಛಾಶಕ್ತಿ ವೃದ್ಧಿಸಲಿ, ಜಿಲ್ಲೆಯ ರೈತರು ನಿರುದ್ಯೋಗಿಗಳು, ವ್ಯಾಪಾರಿಗಳು, ಅಭಿವೃದ್ಧಿಗೆ ಶ್ರಮಿಸಲಿ. ರಾಜಕಾರಣಿಗೆ ಅಧಿಕಾರ ಶಾಶ್ವತವಲ್ಲ ಜನರು ನೀಡಿದ ಅಧಿಕಾರದಲ್ಲಿ ಜನಸಾಮಾನ್ಯನಾಗಿ ಸೇವೆ ಸಲ್ಲಿಸಬೇಕು ಎಂದು ಡಾ. ಕರಿವೃಷಭದೇಶಿಕೇಂದ್ರ, ಶಿವಯೋಗೀಶ್ವರ ಸ್ವಾಮೀಜಿ ತಿಳಿಸಿದರು.

## ಬಹಿರಂಗ ಹರಾಜು ಪ್ರಕ್ರಿಯೆ

**ಮೈಸೂರು:** ಮೈಸೂರು ಜಿಲ್ಲಾ ಗ್ರಾಹಕರ ಆಯೋಗದಲ್ಲಿ ಬಳಸುತ್ತಿದ್ದ ಪೀಠೋಪಕರಣಗಳಲ್ಲಿ ಕೆಲವು ಅನುಪಯುಕ್ತ ಪೀಠೋಪಕರಣಗಳು, ಹಳೆಯ ರದ್ದಿ ಹಾಗೂ ದಿನಪತ್ರಿಕೆಗಳನ್ನು ಅಕ್ಟೋಬರ್ 23 ರಂದು ಮದ್ಯಾಹ್ನ 12.30 ಗಂಟೆಗೆ ಜಿಲ್ಲಾ ಗ್ರಾಹಕರ ಆಯೋಗದ ಆವರಣದಲ್ಲಿ ಬಹಿರಂಗ ಹರಾಜು ಹಾಕಲಾಗುತ್ತಿದ್ದು, ಆಸಕ್ತರು ಹರಾಜಿನಲ್ಲಿ ಭಾಗವಹಿಸಬಹುದಾಗಿದೆ. ಅನುಪಯುಕ್ತ ಪೀಠೋಪಕರಣಗಳು ಯಾವ ಸ್ಥಿತಿಯಲ್ಲಿದೆಯೋ ಅದೇ ಸ್ಥಿತಿಯಲ್ಲಿ ಬಹಿರಂಗ ಹರಾಜು ಹಾಕಲಾಗುವುದು. ಹರಾಜಿನಲ್ಲಿ ಭಾಗವಹಿಸುವವರು ಮುಂಗಡವಾಗಿ ನಗದು ರೂ.1,000 ಗಳನ್ನು ಠೇವಣಿಯಾಗಿ ಇಡತಕ್ಕದ್ದು. ಅಂತಿಮ ಬಿಡ್ದಾರರನ್ನು ಹೊರತುಪಡಿಸಿ ಉಳಿದವರು ಇಟ್ಟಿದ್ದ ಠೇವಣಿಯನ್ನು ಸ್ಥಳದಲ್ಲಿಯೇ ಹಿಂದಿರುಗಿಸಲಾಗುವುದು. ಅಂತಿಮ ಬಿಡ್ದಾರರು ಹರಾಜಾದ ಅನುಪಯುಕ್ತ ಪೀಠೋಪಕರಣ ಹಣವನ್ನು ಸ್ಥಳದಲ್ಲಿಯೇ ಪಾವತಿಸಿ ಅನುಪಯುಕ್ತ ಪೀಠೋಪಕರಣವನ್ನು ತಮ್ಮ ವಶಕ್ಕೆ ಪಡೆದುಕೊಳ್ಳತಕ್ಕದ್ದು. ಹರಾಜನ್ನು ಒಪ್ಪುವ ಹಾಗೂ ತಿರಸ್ಕರಿಸುವ ಅಧಿಕಾರವನ್ನು ಜಿಲ್ಲಾ ಗ್ರಾಹಕರ ಆಯೋಗದ ಅಧ್ಯಕ್ಷರು ಹೊಂದಿರುತ್ತಾರೆ ಎಂದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸಹಾಯಕ ರಿಜಿಸ್ಟರ್ ಹಾಗೂ ಸಹಾಯಕ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಸೌಲಭ್ಯಗಳಿಗೆ ಅರ್ಜಿ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ, ಖಾಸಗಿ, ಅನುದಾನಿತ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮೆಟ್ರಿಕ್-ನಂತರದ ಕೋರ್ಸುಗಳಾದ ಪಿ.ಯು.ಸಿ ಮತ್ತು ಸಮನಾಂತರ, ಸಾಮಾನ್ಯ ಪದವಿ ಮತ್ತು ಸಂಯೋಜಿತ ಉಭಯ ಪದವಿ ಕೋರ್ಸುಗಳಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1 ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ, 2024-25ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ, ಮತ್ತು ವಿದ್ಯಾಸಿರಿ (ಊಟ ಮತ್ತು ವಸತಿ ಸಹಾಯ ಯೋಜನೆ) ಸೌಲಭ್ಯಕ್ಕಾಗಿ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಅಕ್ಟೋಬರ್ 31 ರೊಳಗೆ https://ssp.postmatric.karnataka.gov.in ನಲ್ಲಿ ಸಲ್ಲಿಸಬೇಕು. ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ವೆಬ್ ಸೈಟ್ ವಿಳಾಸ: https://bcwd.karnataka.gov.in, ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ 8050770005 ಇಮೇಲ್: bcwdhelpline@gmail.com ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇ-ಮೇಲ್: : postmatrichelp@karnataka.gov.in, ದೂರವಾಣಿ ಸಂಖ್ಯೆ: 1902 ಗೆ ಸಂಪರ್ಕಿಸಬಹುದೆಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಕೆ.ವಿ ಮುನಿರತ್ನಮ್ಮ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಮೆಟ್ರಿಕ್-ನಂತರದ ಕೋರ್ಸ್ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1 ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ 2024-25ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ''ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ'' ''ಶುಲ್ಕ ವಿನಾಯಿತಿ,'' ''ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ'' ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಿದ್ದು, ಅರ್ಜಿಗಳನ್ನು ಸಲ್ಲಿಸುವ ಅವಧಿಯನ್ನು ನವೆಂಬರ್ 30 ರೊಳಗೆ ವಿಸ್ತರಿಸಲಾಗಿದೆ. ಆನ್ಲೈನ್ ಮೂಲಕ ಅರ್ಜಿಸಲ್ಲಿಸಬೇಕಾದ ವೆಬ್ ಸೈಟ್ ವಿಳಾಸ: https://ssp.postmatric.karnataka.gov.in ಸಹಾಯವಾಣಿ ಸಂಖ್ಯೆ 8050770005, ದೂರವಾಣಿ ಸಂಖ್ಯೆ: 08156-277053, ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಇಮೇಲ್ bcwdhelpline@gmail.com, postmatrichelp@karnataka.gov.in ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ https://bcwd.karnataka.gov.in ಅನ್ನು ಸಂಪರ್ಕಿಸಬಹುದೆಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಕೆ.ವಿ ಮುನಿರತ್ನಮ್ಮ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದರಪಟ್ಟಿ ಆಹ್ವಾನ

**ಮಂಡ್ಯ:** ಮಂಡ್ಯಜಿಲ್ಲಾಕಾರಾಗೃಹದಲ್ಲಿ ಪ್ಯಾನಲ್ ಬೋರ್ಡ್‌ನಿಂದಕಚೇರಿಗೆ ಬಂದಿರುವಯು.ಜಿ.ಕೇಬಲ್ ಸುಟ್ಟುಹೋಗಿದ್ದು, ಇದರಿಂದಾಗಿಕಚೇರಿಗೆ ವಿದ್ಯುತ್ ಸಂಪರ್ಕ ಸ್ಥಗಿತಗೊಂಡಿರುತ್ತದೆ. ಪ್ಯಾನಲ್ ಬೋರ್ಡ್‌ನಿಂದಕಚೇರಿಗೆಯು.ಜಿ.ಕೇಬಲ್ ಅಳವಡಿಸಲು ಇಚ್ಛೆವುಳ್ಳ ದರಖಾಸ್ತುದಾರರು ಏಳು ದಿನದೊಳಗೆ ದರಪಟ್ಟಿಗಳನ್ನು ನೀಡುವುದು.ಅಕ್ಟೋಬರ್ 21 ರ ನಂತರ ಬರುವ ದರಪಟ್ಟಿಗಳನ್ನು ಸ್ವೀಕರಿಸುವುದಿಲ್ಲ.

## ದರಪಟ್ಟಿ ಆಹ್ವಾನ

**ಮಂಡ್ಯ:** ಮಂಡ್ಯಜಿಲ್ಲಾಕಾರಾಗೃಹದಲ್ಲಿ 12 ಸಂಖ್ಯೆ ಸೋಲಾರ್ ಪವರ್ ಪ್ಯಾಕ್ ಸಿಸ್ಟಮ್ ಮತ್ತು 17 ಸಂಖ್ಯೆ ಸೋಲಾರ್ ಸ್ಟ್ರೀಟ್ ಲೈಟ್‌ಗಳು ಇರುತ್ತದೆ. ಪ್ರಸ್ತುತ ಸೋಲಾರ್ ಸಿಸ್ಟಮ್‌ಗೆ ಸಂಬಂಧಿಸಿದಂತೆ ವಾರ್ಷಿಕ ನಿರ್ವಹಣೆಯಅವಧಿಯು ಮುಕ್ತಾಯಗೊಂಡಿದ್ದು, ಹೊಸದಾಗಿ 12 ಸಂಖ್ಯೆ ಸೋಲಾರ್ ಪವರ್ ಪ್ಯಾಕ್ ಸಿಸ್ಟಮ್ ಮತ್ತು 17 ಸಂಖ್ಯೆ ಸೋಲಾರ್ ಸ್ಟ್ರೀಟ್ ಲೈಟ್‌ಗಳ ವಾರ್ಷಿಕ ನಿರ್ವಹಣೆ ಮಾಡಲು ಇಚ್ಛೆವುಳ್ಳ ದರಖಾಸ್ತುದಾರರು ಏಳು ದಿನಗಳೊಳಗೆ ದರಪಟ್ಟಿ ನೀಡುವುದು.ಅ.21 ರ ನಂತರ ಬರುವ ದರಪಟ್ಟಿ ಸ್ವೀಕರಿಸುವುದಿಲ್ಲ.

## ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ; ನೀರಿನ ಸರಬರಾಜಿನಲ್ಲಿ ವ್ಯತ್ಯಯ

**ಬೆಂಗಳೂರು:** 110 ಹಳ್ಳಿಯ ವ್ಯಾಪ್ತಿಗೆ ಕಾವೇರಿ ಕುಡಿಯುವ ನೀರು ಸರಬರಾಜು ಮಾಡುವ ಸಲುವಾಗಿ ಜಿ.ಕೆ.ವಿ.ಕೆ ಅವರಣದಲ್ಲಿ ಜಲರೇಚಕ ಯಂತ್ರಾಗಾರದಿಂದ ಅಮೃತ್ ಕೊಳವೆ ಮಾರ್ಗಕ್ಕೆ ಜೋಡಣೆ ಕೆಲಸಗಳನ್ನು ಹಮ್ಮಿಕೊಂಡಿರುವ ಸಲುವಾಗಿ ಅಕ್ಟೋಬರ್ 19 ರಂದು ಬೆಳಿಗ್ಗೆ 9 ಗಂಟೆಯಿಂದ ಸಂಜೆ 7 ಗಂಟೆಯವರೆಗೆ ವಿವಿಧ ಪ್ರದೇಶಗಳಲ್ಲಿ ಕಾವೇರಿ ಕುಡಿಯುವ ನೀರಿನ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ರಾಜು ಕಾಲೋನಿ, ಸರ್ವೋದಯ ನಗರ, ಇಬ್ರಾಯಿಂ ಸ್ಟ್ರೀಟ್ -1 ರಿಂದ 9 ನೇ ರಸ್ತೆ, ನೋಬೆಲ್ ಸ್ಕೂಲ್ -1 ಮತ್ತು 2 ನೇ ಅಡ್ಡ ರಸ್ತೆ, ನೂರ್ ಲೇಔಟ್, ಶಾಂಪುರ ರೈಲ್ವೆ ಗೇಟ್-1 ಮತ್ತು 2 ನೇ ಅಡ್ಡ ರಸ್ತೆ, ವೈಯಾಲಿಕಾವಲ್ ಲೇಔಟ್-1 ರಿಂದ 9 ನೇ ಮುಖ್ಯ ರಸ್ತೆ, ಸಂದ್ಯಗಪ್ಪ ಲೇಔಟ್ - 1 ರಿಂದ 3ನೇ ಅಡ್ಡ ರಸ್ತೆ ವೀರಣ್ಣ ಪಾಳ್ಯ, ನಾರಾಯಣಸ್ವಾಮಿ ಲೇಔಟ್, ರೈಲ್ವೆ ಗೇಟ್, ವೈಯಾಲಿ ಕಾವಲ್ ಲೇಔಟ್-10 ರಿಂದ 16 ನೇ ಅಡ್ಡ ರಸ್ತೆ, ಪ್ರಕೃತಿ ಲೇಔಟ್, ಗುಂಡುತೋಪು, ಆಯಿಲ್ ಮಿಲ್ ರಸ್ತೆ (1 ರಿಂದ 15 ನೇ ಅಡ್ಡ ರಸ್ತೆ, ಕೆಳಭಾಗ ) 16ರಿಂದ 18 ನೇ ಅಡ್ಡ ರಸ್ತೆ (1 ರಿಂದ 15 ನೇ ಅಡ್ಡ ರಸ್ತೆ ಮೇಲ್ಭಾಗ) 3ನೇ ಬ್ಲಾಕ್ ಸರ್ವೀಸ್ ರಸ್ತೆ, ಹೆಚ್.ಆರ್ .ಬಿ.ಆರ್ ಲೇಔಟ್, ಆರ್.ಎಸ್ ಪಾಳ್ಯ, ಸದಾಶಿವ ದೇವಸ್ಥಾನ ರಸ್ತೆ, ಸತ್ಯ ಮೂರ್ತಿ ರಸ್ತೆ, ಆಯಿಲ್ ಮಿಲ್ ರಸ್ತೆ, ಕೆ.ಹೆಚ್.ಬಿ ಕ್ವಾಟ್ರಸ್ರ್, ಗುರುಮೂರ್ತಿ ರಸ್ತೆ, ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ನೀರು ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಸಾರ್ವಜನಿಕರು ಮಂಡಳಿಯೊಂದಿಗೆ ಸಹಕರಿಸಲು ಹಾಗೂ ಅಗತ್ಯವಿರುವ ನೀರನ್ನು ಶೇಖರಿಸಿಟ್ಟುಕೊಳ್ಳುವಂತೆ ಬೆಂಗಳೂರು ಜಲಮಂಡಳಿ ಸಾರ್ವಜನಿಕ ಸಂಪರ್ಕಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಕ್ಕಳಿಗೆ ಪಂಚತಂತ್ರ ಕಥೆ ಹೇಳುವ ಸ್ಪರ್ಧೆಯ ಬಹುಮಾನ ವಿತರಣಾ ಕಾರ್ಯಕ್ರಮ

**ಬೆಂಗಳೂರು:** ಅಖಿಲ ಭಾರತೀಯ ಸಾಹಿತ್ಯ ಪರಿಷದ್ ಬೆಂಗಳೂರು ಮಹಾನಗರದ ವತಿಯಿಂದ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಯ ಶಾಲೆಗಳಲ್ಲಿ 8, 9 ಮತ್ತು 10ನೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿ/ ವಿದ್ಯಾರ್ಥಿನಿಯರಿಗೆ ಇದೇ ಆಗಸ್ಟ್-ಸೆಪ್ಟೆಂಬರ್ ತಿಂಗಳಲ್ಲಿ ಪಂಚತಂತ್ರದ ಯಾವುದಾದರೂ ಒಂದು ಕಥೆಯನ್ನು, ಅದರ ನೀತಿಯನ್ನೂ ಸೇರಿಸಿ ಮಕ್ಕಳು ತಮ್ಮದೇ ವಾಕ್ಯಗಳಲ್ಲಿ ಕಥೆ ಹೇಳುವ ಸ್ಪರ್ಧೆ ಆಯೋಜಿಸಲಾಗಿತ್ತು.ಸ್ಪರ್ಧೆಯಔಲ್ಲಿ ಭಾಗವಹಿಸುವಿಕೆ ಸಂಪೂರ್ಣ ಉಚಿತವಾಗಿತ್ತು. ವಿದ್ಯಾರ್ಥಿಗಳು ಹಾಗೂ ಶಾಲೆಗಳಿಂದ ಅತ್ಯುತ್ತಮ ಸ್ಪಂದನೆ ದೊರಕಿತು. 95 ಶಾಲೆಗಳಿಂದ 520 ಮಕ್ಕಳುಭಾಗವಹಿಸಿದ್ದರು. ಇದೀಗ ಆಯ್ಕೆ ಪ್ರಕ್ರಿಯೆ ಪೂರ್ಣವಾಗಿದೆ.8,9 ಹಾಗೂ 10ನೇ ತರಗತಿಯ ವಿದ್ಯಾರ್ಥಿಗಳಿಗೆ ಪ್ರತಿ ತರಗತಿಗೆ ಪ್ರತ್ಯೇಕವಾಗಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಬಹುಮಾನಗಳನ್ನು, 6 ವಿಶೇಷ ಬಹುಮಾನಗಳನ್ನು ಹಾಗೂ 70 ಸಮಾಧಾನಕರ ಬಹುಮಾನಗಳನ್ನು ವಿತರಣೆ ಮಾಡಲಾಗುತ್ತದೆ.

ಅ.20ರಂದು ಬೆಂಗಳೂರಿನ ಎನ್.ಆರ್. ಕಾಲನಿಯಲ್ಲಿರುವ ಸಿ. ಅಶ್ವತ್ಥ್ ಕಲಾಭವನದಲ್ಲಿ ಬೆಳಗ್ಗೆ 10.00 ಗಂಟೆಗೆ ಬಹುಮಾನ ವಿತರಣಾ ಕಾರ್ಯಕ್ರಮವಿರಲಿದೆ.ಕಾರ್ಯಕ್ರಮದಲ್ಲಿ ಖ್ಯಾತ ವಾಗ್ಮಿಗಳು, ಸಂಸ್ಕೃತಿ ಚಿಂತಕರೂ ಆದ ಶ್ರೀಮತಿ ವಿ.ಬಿ. ಆರತಿ ಅವರು, ಜಸ್ಟ್ ಬುಕ್ಸ್ ಸಂಸ್ಥೆಯ ಮಾಲೀಕರಾದ ಸುರೇಶ್ ನರಸಿಂಹ ಅವರು ಮುಖ್ಯ ಅತಿಥಿಗಳಾಗಿರಲಿದ್ದಾರೆ. ಬೆಂಗಳೂರು ದಕ್ಷಿಣ ಅಧ್ಯಕ್ಷರಾದ ಡಾ. ಭಾನು ಅವರು, ಬೆಂಗಳೂರು ಗ್ರಾಮಾಂತರ ಅಧ್ಯಕ್ಷರಾದ ಘನಶ್ಯಾಮ್ ಅವರು ಉಪಸ್ಥಿತರಿರಲಿದ್ದಾರೆ.

# ಕನ್ನಡ ರಾಜ್ಯೋತ್ಸವ ಅರ್ಥಪೂರ್ಣ ಆಚರಣೆಗೆ ಸಿದ್ಧತೆ ಕೈಗೊಳ್ಳಿ

**ಬೆಂಗಳೂರು ಗ್ರಾಮಾಂತರ:** ನವೆಂಬರ್ 01 ರಂದು ದೇವನಹಳ್ಳಿ ಟೌನ್ ನ ಸರ್ಕಾರಿ ಪದವಿ ಪೂರ್ವ ಕಾಲೇಜು ಆಟದ ಮೈದಾನದಲ್ಲಿ 69ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಏರ್ಪಡಿಸಲಾಗಿದ್ದು, ಕಾರ್ಯಕ್ರಮವನ್ನು ವಿಜೃಂಭಣೆಯಿಂದ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಅಗತ್ಯವಾದ ಸಕಲ ಸಿದ್ದತೆಗಳನ್ನು ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ. ಎನ್ ಶಿವಶಂಕರ ಅವರು ಸೂಚಿಸಿದರು.

ದೇವನಹಳ್ಳಿ ತಾಲ್ಲೂಕಿನ ಬೀರಸಂದ್ರ, ಗ್ರಾಮದ ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಯವರ ಕಚೇರಿ ಸಭಾಂಗಣದಲ್ಲಿ ನಡೆದ 69ನೇ ಕನ್ನಡ ರಾಜ್ಯೋತ್ಸವ ದಿನಾಚರಣೆ ಪ್ರಯುಕ್ತ ಕರೆಯಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನವೆಂಬರ್ 01 ರಂದು ಜಿಲ್ಲಾಡಳಿತ ಭವನದ ಆವರಣದಲ್ಲಿ ಬೆಳಿಗ್ಗೆ 07:30 ಗಂಟೆಗೆ ಧ್ವಜಾರೋಹಣ ಹಾಗೂ ನೂತನವಾಗಿ ನಿರ್ಮಿಸಿರುವ ಹಲ್ಮಿಡಿ ಶಾಸನ ಅನಾವರಣ ಮಾಡಲಾಗುವುದು. ಬೆಳಿಗ್ಗೆ 09:00 ಗಂಟೆಗೆ ದೇವನಹಳ್ಳಿ ಟೌನ್ ನ ಸರ್ಕಾರಿ ಪದವಿ ಪೂರ್ವ ಕಾಲೇಜು ಆಟದ ಮೈದಾನದಲ್ಲಿ ಜಿಲ್ಲಾಮಟ್ಟದ ವೇದಿಕೆ ಕಾರ್ಯಕ್ರಮ ನಡೆಯಲಿದೆ. ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಬೆಳಿಗ್ಗೆ 08:00 ಗಂಟೆಗೆ ದೇವನಹಳ್ಳಿಯ ವೇಣುಗೋಪಾಲಸ್ವಾಮಿ ದೇವಸ್ಥಾನದಿಂದ ದೇವನಹಳ್ಳಿ ಕ್ರೀಡಾಂಗಣ ವರೆಗೆ ತಾಯಿ



ಭುವನೇಶ್ವರಿದೇವಿಯ ರಥದ ಮೆರವಣಿಗೆ ನಡೆಯಲಿದೆ ಎಂದರು.

ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆಯನ್ನು ಮುದ್ರಿಸಿ ಜನಪ್ರತಿನಿಧಿಗಳಿಗೆ ತಲುಪಿಸಿ ಎಂದು ದೇವನಹಳ್ಳಿ ತಾಲ್ಲೂಕು ತಹಶೀಲ್ದಾರ್ ಗೆ ಸೂಚಿಸಿದರು. ವೇದಿಕೆ ಮತ್ತು ಧ್ವಜ ಕಟ್ಟೆ ಅಲಂಕಾರವನ್ನು ಅಚ್ಚುಕಟ್ಟಾಗಿ ನೆರವೇರಿಸಿ, ಪಥ ಸಂಚಲನಕ್ಕೆ ಅಗತ್ಯ ಕ್ರಮ ವಹಿಸಿ ಎಂದು ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದರು. ಶಾಲಾ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮ ನಿಗದಿತ ಸಮಯದಲ್ಲಿ ಪೂರ್ಣಗೊಳಿಸಬೇಕು. ಲಘು ಉಪಹಾರ ವ್ಯವಸ್ಥೆಯು ಘಾಟಿ ಸುಬ್ರಮಣ್ಯ ದೇವಸ್ಥಾನ ವರು ನೀಡಲಿದ್ದು, ನಿರ್ವಹಣೆಯನ್ನು ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯವರು ನೋಡಿಕೊಳ್ಳಬೇಕು. ಆಯಾ ಇಲಾಖೆಗಳಿಗೆ ವಹಿಸಿರುವ ಜವಾಬ್ದಾರಿಯನ್ನು ನಿರ್ವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಕ್ರಮ ವಹಿಸಿ ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಡಾ.ಕೆ.ಎನ್ ಅನುರಾಧ, ಅಪರ ಜಿಲ್ಲಾಧಿಕಾರಿ ಆರ್.ಸುಮಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ರವಿಕುಮಾರ್ ಡಿ.ಎಂ, ದೇವನಹಳ್ಳಿ ತಹಶೀಲ್ದಾರ್ ಬಾಲಕೃಷ್ಣ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಕೃಷ್ಣಪ್ಪ, ಕನ್ನಡಪರ ಸಂಘಟನೆಗಳ ಮುಖ್ಯಸ್ಥರು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಜರಿದ್ದರು.

### ಜಿಲ್ಲಾ ಮಟ್ಟದ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಬೆಂಗಳೂರು ಗ್ರಾಮಾಂತರ: ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ವತಿಯಿಂದ ಕನ್ನಡ ರಾಜ್ಯೋತ್ಸವದ ಅಂಗವಾಗಿ ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ 50 ವರ್ಷ ಮೇಲ್ಪಟ್ಟ ಸಾಧಕರು/ ಗಣ್ಯರನ್ನು ಗೌರವಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತರು ತಮ್ಮ ಸ್ವ-ವಿವರಗಳನ್ನು ಆಕ್ಟೋಬರ್ 25ರ ಸಂಜೆ 5:00 ಗಂಟೆ ಒಳಗಾಗಿ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಗ್ರಾಮಾಂತರ ಜಿಲ್ಲೆ, ಜಿಲ್ಲಾಡಳಿತ ಭವನ ಚಪ್ಪರದಕಲ್ಲು ಕೊಠಡಿ ಸಂಖ್ಯೆ 118, ಮೊದಲನೆ ಮಹಡಿ ದೇವನಹಳ್ಳಿ ತಾಲ್ಲೂಕು ಇಲ್ಲಿಗೆ ಸಲ್ಲಿಸಬಹುದಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ರವಿಕುಮಾರ್ ಡಿ.ಎಂ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪೋಕ್ಸೋ ಕಾಯ್ದೆಯನ್ವಯ ಸಂತ್ರಸ್ತ ಮಕ್ಕಳಿಗೆ ಸೇವೆ ಸಲ್ಲಿಸಲು ಅರ್ಹರಿಂದ ಅರ್ಜಿ ಆಹ್ವಾನ

**ಬೆಂಗಳೂರು ಗ್ರಾಮಾಂತರ:** ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವತಿಯಿಂದ 2012ರ ಪೋಕ್ಸೋ ಕಾಯ್ದೆ ಅನ್ವಯ ಸಂತ್ರಸ್ಥ ಮಕ್ಕಳಿಗೆ ಬೆಂಬಲ ವ್ಯಕ್ತಿಗಳಾಗಿ ಸೇವೆ ಸಲ್ಲಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ಮಕ್ಕಳೊಂದಿಗೆ ಕೆಲಸ ಮಾಡುವಲ್ಲಿ ಕನಿಷ್ಠ 3 ವರ್ಷಗಳ ಅನುಭವದೊಂದಿಗೆ ಸಮಾಜ ಕಾರ್ಯ ವಿಷಯದಲ್ಲಿ ಪದವಿಯನ್ನು ಹೊಂದಿರಬೇಕು. ಪ್ರತಿ ಪ್ರಕರಣಕ್ಕೆ ರೂ.3000/-(ರೂಪಾಯಿ ಮೂರು ಸಾವಿರ) ಸಂಭಾವನೆ ನಿಗಧಿಗೊಳಿಸಲಾಗಿದೆ. ಮಕ್ಕಳ ಆರೈಕೆ ಕೇಂದ್ರದಲ್ಲಿ ಮಕ್ಕಳೊಂದಿಗೆ ಕೆಲಸ ಮಾಡುವ ಅಧಿಕಾರಿಗಳು ಮತ್ತು ಮಕ್ಕಳ ಹಕ್ಕುಗಳ ಕ್ಷೇತ್ರದಲ್ಲಿ ಕೆಲಸ ಮಾಡುವ ಯಾವುದೇ ಸಂಸ್ಥೆ ಕೂಡ ಅರ್ಜಿ ಸಲ್ಲಿಸಬಹುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ಕ್ಷೇತ್ರ ಕಾರ್ಯವನ್ನು ಮಾಡಲು ಮತ್ತು ಅಪರಾಧ ನ್ಯಾಯ ವ್ಯವಸ್ಥೆಯ ಮೂಲಕ ಮಕ್ಕಳು ಮತ್ತು ಅವರ ಕುಟುಂಬಗಳಿಗೆ ಸಹಾಯ ಮಾಡಲು ತರಬೇತಿ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ, ಭರ್ತಿ ಮಾಡಿದ ಅರ್ಜಿ ನಮೂನೆ ಹಾಗೂ ಅಗತ್ಯ ಪ್ರಮಾಣಪತ್ರಗಳೊಂದಿಗೆ ಇದೇ ಅಕ್ಟೋಬರ್ 24 ರಂದು ಸಂಜೆ 5:30ರ ಒಳಗಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಛೇರಿಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಅನೀತಾಲಕ್ಷ್ಮೀ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೇಂದ್ರೀಯ ಹಾಗೂ ವಿಭಾಗೀಯ ತನಿಖಾ ದಳಗಳ ಪ್ರಗತಿ ಪರಿಶೀಲನಾ ಸಭೆ

**ಬೆಂಗಳೂರು/ಹುಬ್ಬಳ್ಳಿ:** ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ, ಪ್ರಾದೇಶಿಕ ತರಬೇತಿ ಕೇಂದ್ರ, ಹುಬ್ಬಳ್ಳಿಯಲ್ಲಿ ಕೇಂದ್ರೀಯ ಹಾಗೂ ವಿಭಾಗೀಯ ತನಿಖಾ ದಳಗಳ ಪ್ರಗತಿ ಪರಿಶೀಲನಾ ಸಭೆ ಜರುಗಿತು. ಸಭೆಯಲ್ಲಿ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀಮತಿ ಪ್ರಿಯಾಂಗಾ ಎಂ. ಅವರು ಮಾತನಾಡಿ, ಸಂಸ್ಥೆಯ ಆದಾಯ ಸೋರಿಕೆಯನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ, ಸಂಸ್ಥೆಯ ಸಾರಿಗೆ ಆದಾಯ ಹೆಚ್ಚಿಸುವ ನಿಟ್ಟಿನಲ್ಲಿ ಪ್ರಾಮಾಣಿಕತೆಯಿಂದ ಹಾಗೂ ಶಿಸ್ತು ಮತ್ತು ಸನ್ನಡತೆಯಿಂದ ಕರ್ತವ್ಯ ನಿರ್ವಹಿಸುವಂತೆ ತನಿಖಾ ಸಿಬ್ಬಂದಿಗಳಿಗೆ ಸೂಚಿಸಿದರು. ಮುಖ್ಯ ಸಂಚಾರ ವ್ಯವಸ್ಥಾಪಕರಾದ ವಿವೇಕಾನಂದ ವಿಶ್ವಜ್ಞ ಹಾಗೂ ಉಪ ಮುಖ್ಯ ಸಂಚಾರ ವ್ಯವಸ್ಥಾಪಕರಾದ ಜಿ. ವಿಜಯಕುಮಾರ ಅವರು ತನಿಖಾ ಕಾರ್ಯದ ಪ್ರಗತಿ ಪರಿಶೀಲನೆ ಮಾಡಿ ತನಿಖಾ ಸಿಬ್ಬಂದಿಗಳಿಗೆ ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು. ಸಭೆಯಲ್ಲಿ ರವಿ ಅಂಚಗಾವಿ, ಹನುಮಗೌಡ ಜಿ, ವಿ.ಎನ್. ಮಾಕಣ್ಣವರ ಹಾಗೂ ತನಿಖಾ ಸಿಬ್ಬಂದಿಗಳು ಉಪಸ್ಥಿತರಿದ್ದರು. ಸಹಾಯಕ ಸಂಚಾರ ವ್ಯವಸ್ಥಾಪಕರಾದ ಶಿವಾನಂದ ನಾಗಾವಿ ಅವರು ಸ್ವಾಗತಿಸಿ, ವಂದಿಸಿದರು.

## ಮಾಹಿತಿ ತಂತ್ರಜ್ಞರ ಸೇವೆ ಪಡೆಯಲು ಅರ್ಜಿ ಆಹ್ವಾನ

**ಬೆಂಗಳೂರು:** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯದ ಕಛೇರಿಯಲ್ಲಿ ಇಲಾಖೆಯ ಯೋಜನೆಗಳನ್ನು ಸಮರ್ಪಕವಾಗಿ ಇ-ಆಫೀಸ್ ತಂತ್ರಾಂಶ ಹಾಗೂ ಇನ್ನಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಮಾಹಿತಿ ತಂತ್ರಜ್ಞರ / ಸಲಹೆಗಾರರ ಸೇವೆಯನ್ನು ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಯ್ಕೆಯಾದ ಅಭ್ಯರ್ಥಿಗೆ ಮಾಸಿಕ 60,000/- ರೂಪಾಯಿ ವೇತನ ನೀಡಲಾಗುವುದು. ಈ ಹುದ್ದೆಯು 6 ತಿಂಗಳ ಅವಧಿಯಾಗಿದ್ದು, ಅರ್ಜಿ ಸಲ್ಲಿಸಲು ಅಕ್ಟೋಬರ್ 25 ಕೊನೆಯ ದಿನಾಂಕವಾಗಿದೆ. ಅಭ್ಯರ್ಥಿಗಳನ್ನು ಸಂದರ್ಶನದ ಮುಖಾಂತರ ಆಯ್ಕೆ ಮಾಡಲಾಗುವುದು. ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕೆ ಗರಿಷ್ಟ ವಯೋಮಿತಿ 35 ವರ್ಷಗಳು ಮೀರಿರಬಾರದು.ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಮಾನ್ಯತೆ ಪಡೆದ ಸಂಸ್ಥೆ/ ವಿಶ್ವವಿದ್ಯಾಲಯದಿಂದ ಡಿಪ್ಲೊಮಾ ಪದವಿ/ ಕಂಪ್ಯೂಟರ್ ವಿಜ್ಞಾನ / ಐಟಿ ಅಥವಾ ಕಂಪ್ಯೂಟರ್ ಶಿಕ್ಷಣವನ್ನು ಪಡೆದಿರಬೇಕು. ಪ್ರತಿಷ್ಠಿತ ಸಂಸ್ಥೆ/ ಕಂಪನಿಯಲ್ಲಿ ಮಾಹಿತಿ ತಂತ್ರಜ್ಞಾನ/ಕಂಪ್ಯೂಟರ್‌ನಲ್ಲಿ ಕೆಲಸ ಮಾಡಿದ ಅನುಭವ ಹೊಂದಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು ಎಂದು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯದ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಕೆಲಸಕ್ಕೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ನಗರಸಭಾ ಕಾರ್ಯಾಲಯ, ಗೌರಿಬಿದನೂರು, ಸಾರ್ವಜನಿಕರಿಗೆ ತಿಳಿಯಪಡಿಸುವುದೇನಂದರೆ ಮಾನ್ಯ ಸರ್ವೋಚ್ಛ ನ್ಯಾಯಾಲಯದ ತೀರ್ಪಿನಂತೆ ಗೌರಿಬಿದನೂರು ನಗರವ್ಯಾಪ್ತಿಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಗಳ ಸಮೀಕ್ಷೆ ಕಾರ್ಯ ಕೈಗೊಳ್ಳಲಾಗಿದೆ. ಆದ್ದರಿಂದ ನಗರವ್ಯಾಪ್ತಿಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಕೆಲಸ ಮಾಡುತ್ತಿರುವವರು ಅಕ್ಟೋಬರ್ 24 ರೊಳಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ನಗರಸಭೆಯ ಆರೋಗ್ಯ ಶಾಖೆಯಲ್ಲಿ ಸಂಪರ್ಕಿಸಬಹುದು ಎಂದು ಗೌರಿಬಿದನೂರು ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉದ್ಯೋಗ ಖಾತರಿ ನಡಿಗೆ ಸಬಲತೆಯೆಡೆಗೆ ಅಭಿಯಾನಕ್ಕೆ ಚಾಲನೆ

**ಕೋಲಾರ:** ಉದ್ಯೋಗ ಖಾತರಿ ನಡಿಗೆ ಸಬಲತೆಯಡಿಗೆ ಅಭಿಯಾನದ ಪೋಸ್ಟರ್ , ಕೋಲಾರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು, ಹಾಗೂ ಆಡಳಿತಾಧಿಕಾರಿಗಳಾದ ಡಾ. ಏಕ್ರೂಪ್ ಕೌರರವರು ಹಾಗೂ ಕೋಲಾರ ಜಿಲ್ಲಾಧಿಕಾರಿಗಳಾದ ಅಕ್ರಂ ಪಾಷರವರು ಬಿಡಗಡೆ ಮಾಡಿದರು. ಮಹಾತ್ಮಗಾಂಧಿ ನರೇಗಾ ಯೋಜನೆಯ 2025-26ನೇ ಸಾಲಿನಲ್ಲಿ ''ಉದ್ಯೋಗ ಖಾತರಿ ನಡಿಗೆ ಸಬಲತೆಯಡೆಗೆ'' ಅಭಿಯಾನ ಆರಂಭಿಸಲಾಗಿದೆ. ಗ್ರಾಮೀಣ ಭಾಗದ ಜನರ ಅವಶ್ಯಕತೆಗಳಿಗೆ ಅನುಗುಣವಾಗಿ ಗ್ರಾಮ ಪಂಚಾಯತಿಯಿಂದ ಮುಂದಿನ ವರ್ಷದ ಕ್ರಿಯಾ ಯೋಜನೆ ತಯಾರಿಸಲಾಗುತ್ತಿದೆ. ಈ ಬಗ್ಗೆ ಕೋಲಾರ ಜಿಲ್ಲಾ ಪಂಚಾಯತಿ ಕಚೇರಿಯಲ್ಲಿ ನಡೆದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪೋಸ್ಟರ್ ಬಿಡುಗಡೆ ಮಾಡಿ, ಅಭಿಯಾನಕ್ಕೆ ಚಾಲನೆ ನೀಡಿದರು.

ಸಾರ್ವಜನಿಕರ ಸಹಭಾಗಿತ್ವಕ್ಕೆ ಹೆಚ್ಚು ಒತ್ತು: ನರೇಗಾ ಯೋಜನೆಯಡಿಯಲ್ಲಿ ಗ್ರಾಮೀಣ ಪ್ರದೇಶದ ಪ್ರತಿ ಅರ್ಹ ಕುಟುಂಬಕ್ಕೆ ವರ್ಷದಲ್ಲಿ 100 ದಿನಗಳ ಕೆಲಸ ನೀಡಲಾಗಿದೆ. ''ಉದ್ಯೋಗ ಖಾತರಿ ನಡಿಗೆ ಸಬಲತೆಯಡೆಗೆ'' ಅಭಿಯಾನದಲ್ಲಿ



ಸಾರ್ವಜನಿಕರು ಭಾಗವಹಿಸಿ, ಅಗತ್ಯ ಕಾಮಗಾರಿಗೆ ಬೇಡಿಕೆ ಸಲ್ಲಿಸಲು ಅವಕಾಶ ನೀಡಲಾಗಿದೆ. ಗ್ರಾಮ ಪಂಚಾಯತಿ ಮಟ್ಟದಲ್ಲಿ ನಡೆಯುವ ಗ್ರಾಮ ಸಭೆ, ವಾರ್ಡ್ ಸಭೆಯಲ್ಲಿ ಸಾರ್ವಜನಿಕರು ಭಾಗಿಯಾಗಿ ತಮಗೆ ಅಗತ್ಯವಾದ ವೈಯಕ್ತಿಕ ಕಾಮಗಾರಿಗೆ ಬೇಡಿಕೆ ಸಲ್ಲಿಸಬಹುದಾಗಿದೆ ಎಂದು ಅವರು ಈ ಸಂದರ್ಭದಲ್ಲಿ ತಿಳಿಸಿದರು.

ನರೇಗಾ ಯೋಜನೆಯಡಿಯಲ್ಲಿ ಗ್ರಾಮ ಪಂಚಾಯತಿವತಿಯಿಂದ ದನದ ಶೆಡ್, ಕುರಿ, ಮೇಕೆ ಶೆಡ್, ಕೋಳಿಶಡ್, ಹಂದಿ ಶೆಡ್, ಬಚ್ಚಲುಗುಂಡಿ, ಎರೆಹುಳ ಗೊಬ್ಬರ ತೊಟ್ಟಿ, ಕೃಷಿ ಇಲಾಖೆಯಡಿಯಲ್ಲಿ ಕೃಷಿ ಹೊಂಡ, ಕಂದಕಬದು ನಿರ್ಮಾಣಕ್ಕೆ ಆರ್ಥಿಕನೆರವು ನೀಡಲಾಗುವುದು. ತೋಟಗಾರಿಕೆ ಇಲಾಖೆಯಲ್ಲಿ ಮಾವು, ಬಾಳೆ, ನುಗ್ಗೆ, ಸೀಬೆ, ತೆಂಗು, ದಾಳಿಂಬೆ, ಕರೀಬೇವು, ವೀಳ್ಯದೆಲೆ, ಗುಲಾಬಿ, ಮಲ್ಲಿಗೆ, ಸೇರಿಂದ 36 ವಿವಿಧ ಬಹುವಾರ್ಷಿಕ ತೋಟಗಾರಿಕೆ ಬೆಳೆ ಬೆಳೆಯಲು ನರೇಗಾದಡಿಯಲ್ಲಿ ಧನಸಹಾಯ ನೀಡಲಾಗವುದು. ಕ್ಯೂಆರ್ ಕೋಡ್ ಬಳಸಿ ವೈಯಕ್ತಿಕ ಕಾಮಗಾರಿಗೆ ಬೇಡಿಕೆ ಸಲ್ಲಿಸಬಹುದಾಗಿದೆ ಎಂದರು.

ಈ ಅಭಿಯಾನವು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ನರೇಗಾ ಯೋಜನೆಯನ್ನು ಮತ್ತಷ್ಟು ಜನಸ್ನೇಹಿಯಾಗಿಸಿದೆ. ಸಾರ್ವಜನಿಕರು ಅಗತ್ಯವಾದ ಕಾಮಗಾರಿಗಳಿಗೆ ಬೇಡಿಕೆ ಸಲ್ಲಿಸಲು ಇಲಾಖೆ ಈಗ ಡಿಜಿಟಲ್ ಟಚ್ ನೀಡಿದೆ. ಬೆರಳ ತುದಿಯಲ್ಲೇ ಆನ್ ಲೈನ್ನಲ್ಲಿ ಕ್ಯೂ ಆರ್ ಕೋಡ್ ಬಳಸಿ, ಸರಳವಾಗಿ ಕಾಮಗಾರಿಗೆ ಬೇಡಿಕೆ ಸಲ್ಲಿಸವ ವಿಧಾನ ರೂಪಿಸಿದೆ. ರೈತರು ಮೊಬೈಲ್ನಲ್ಲಿ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ, ಜಿಲ್ಲೆ, ತಾಲೂಕು, ಗ್ರಾಮ ಪಂಚಾಯತಿ ಗ್ರಾಮ, ಉದ್ಯೋಗ ಚೀಟಿ ಸಂಖ್ಯೆ ನಮೂದಿಸಿ, ತಮಗೆ ಬೇಕಾದ ವೈಯಕ್ತಿಕ ಕಾಮಗಾರಿಗೆ ಬೇಡಿಕೆ ಸಲ್ಲಿಸಬಹುದು. ರೈತರು ಸಲ್ಲಿಸಿದ ಕಾಮಗಾರಿ ಬೇಡಿಕೆ, ಗ್ರಾಮ ಪಂಚಾಯತಿಗೆ ಸಲ್ಲಿಕೆಯಾಗಲಿದ್ದು, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಪರಿಶೀಲಿಸಿ, ಕ್ರಿಯಾ ಯೋಜನೆಯಲ್ಲಿ ಸೇರಿಸಿಕೊಳ್ಳಲಿದ್ದಾರೆ ಎಂದರು.

ಪ್ರಗತಿ ಪರಿಶೀಲನೆ ಸಭೆಯಲ್ಲಿ ನರೇಗಾದಡಿಯಲ್ಲಿ ಶಾಲಾ ಅಭಿವೃದ್ಧಿಗೆ ಸಂಬಧಿಸಿದ ಕಾಮಗಾರಿಗಳನ್ನು ಕೈಗೊಳ್ಳಲು ಸೂಚಿಸಿದರು. ಎಲ್ಲಾ ಶಾಲೆಗಳಿಗೆ ಕಾಂಪೌಂಡ್ ಹಾಗೂ ಮೈದಾನ ನಿರ್ಮಾಣಕ್ಕೆ ಹೆಚ್ಚಿನ ಆದ್ಯತೆ ನೀಡಲು ಸೂಚಿಸಿದರು. ನರೇಗಾ ಯೋಜನೆ ಸದ್ಬಳಕೆಗೆ ಕರೆ ನೀಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳಾದ ಬಿ. ಶಿವಕುಮಾರ್, ಸೇರಿದಂತೆ ಜಿಲ್ಲಾ ಮಟ್ಟದ ಎಲ್ಲಾ ಇಲಾಖೆ ಅಧಿಕಾರಿಗಳು, ಎಲ್ಲಾ ತಾಲ್ಲೂಕು ಕಾರ್ಯನಿರ್ವಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಸಿಬ್ಬಂದಿ ಹಾಜರಿದ್ದರು.

### ಬಂಪರ್ ಬೆಳೆ ನಿರೀಕ್ಷೆಯಲ್ಲಿ ರಾಗಿ ಬೆಳೆಗಾರರು

# ಜಡಿ ಮಳೆಯಿಂದ ರಾಗಿ ಬೆಳೆಗೆ ಕಳೆ

**ಹುಳಿಯಾರು:** ಕಳೆದ ಒಂದು ವಾರದಿಂದ ಚಿಕ್ಕನಾಯಕನಹಳ್ಳಿ ತಾಲೂಕಿನಲ್ಲಿ ಬೀಳುತ್ತಿರುವ ಮಳೆಯಿಂದ ತಾಲ್ಲೂಕಿನ ಸಾವಿರಾರು ಎಕರೆ ಪ್ರದೇಶದಲ್ಲಿ ಬೆಳೆದಿರುವ ರಾಗಿ ಬೆಳೆಗೆ ಜೀವದಾನ ಲಭಿಸಿದಂತಾಗಿದೆ. ಈ ವರ್ಷವೂ ರಾಗಿ ಕೈ ತಪ್ಪುವ ಬೀತಿಯಲ್ಲಿದ್ದ ರಾಗಿ ಬೆಳೆಗಾರರು ಈಗ ಬಂಪರ್ ಬೆಳೆ ನಿರೀಕ್ಷೆಯಲ್ಲಿದ್ದಾರೆ. ಜೊತೆಗೆ ರೈತರ ಮುಖದಲ್ಲಿ ಮಂದ ಹಾಸ ಮೂಡಲು ಕಾರಣವಾಗಿದೆ.

ಕಳೆದ ವರ್ಷ ಇಡೀ ತಾಲೂಕಿನಲ್ಲಿ ಮಳೆಯ ಕೊರತೆಯಾಗಿ ಬರಗಾಲ ಆವರಿಸಿತ್ತು. ತಾಲೂಕಿನ ವಾಣಿಜ್ಯ ಬೆಳೆಗಳಾದ ಹೆಸರು ಮತ್ತು ರಾಗಿ ಎರಡೂ ಕೈ ಕೊಟ್ಟಿತ್ತು. ಈ ವರ್ಷವೂ ಪೂರ್ವ ಮುಂಗಾರು ಒಳ್ಳೆ ಮಳೆಯಾಗಿದ್ದರೂ ತಡವಾಗಿ ಬಿದ್ದ ಪರಿಣಾಮ ಹೆಸರು ಬಿತ್ತನೆಗೆ ಹಿನ್ನಡೆಯಾಗಿತ್ತು. ಆದರೆ ನಂತರದ ದಿನಗಳಲ್ಲಿ ವಾಡಿಕೆಗಿಂತ ಹೆಚ್ಚು ಮಳೆ ಬಿದ್ದ ಪರಿಣಾಮ ರೈತರಲ್ಲಿ ಭರವಸೆ ಮೂಡಿಸಿತ್ತು. ಪರಿಣಾಮ ದಾಖಲೆಯ 31,500 ಹೆಕ್ಟರ್ ರಾಗಿ ಬಿತ್ತನೆ ಮಾಡಿ ಉತ್ತಮ ಇಳುವರಿಯ ನಿರೀಕ್ಷೆಯಲ್ಲಿ ತಾಲೂಕಿನ ರೈತರಿದ್ದರು.

ಉತ್ತಮ ಮಳೆಯಾಗುವ ನಿರೀಕ್ಷೆಯಲ್ಲಿ ಸಾಲಷಸೋಲ ಮಾಡಿ ತಮ್ಮ ಹೊಲಗಳಲ್ಲಿ ಬಿತ್ತನೆ ಮಾಡಿದ್ದರು. ಬಿದ್ದ ಸ್ವಲ್ಪ ಮಳೆಯಾಗಿದ್ದರಿಂದಾಗಿ ಉತ್ತಮ ಫಸಲು ಬರಲಿ ಎಂಬ ಕಾರಣಕ್ಕಾಗಿ ಕಳೆ ಕಿತ್ತು ಗೊಬ್ಬರ ಹಾಕಿದ್ದರು. ಆ ಬಳಿಕ ಮಳೆಯೇ ಬಾರದ ಕಾರಣ ರೈತರು ಚಿಂತಾಕ್ರಾಂತರಾಗಿದ್ದರು. ಬಾಣಲಿಯಿಂದ ಬೆಂಕಿಗೆ ಬಿದ್ದಂಗೆ ಎನ್ನುವಂತೆ ಮಳೆ ಇಲ್ಲದೆ ಕಂಗಾಲಾಗಿರುವ ರೈತರಿಗೆ ಉಷ್ಣಾಂಶ ಸಹ ಏರಿ ಬಿಸಿಲಿನ ತಾಪಕ್ಕೆ ರಾಗಿ ಪೈರು ಒಣಗಲಾರಂಭಿಸಿ ಬೆಳೆ ಹಾನಿಯ ಭೀತಿ ಎದುರಾಗಿ ರೈತರು ಮಳೆಗಾಗಿ ಮುಗಿಲು ನೋಡುವಂತಾಗಿತ್ತು. ಕೊಳವೆಬಾವಿಯಲ್ಲಿ ಹೆಚ್ಚು ನೀರು ಇರುವ ಕೆಲವು ರೈತರು ರಾಗಿ ಬೆಳೆಗೆ ತುಂತುರು ನೀರಾವರಿ ಮೂಲಕ ನೀರು ಹಾಯಿಸಿ ರಾಗಿ ಪೈರು ರಕ್ಷಣೆ ಮಾಡಿಕೊಂಡಿದ್ದರು. ಇನ್ನೂ ಕೆಲವರು ಅಕ್ಕಪಕ್ಕದ ತೋಟದವರಿಂದ ಇಂತಿಷ್ಟು ರಾಗಿ ಕೊಡುವ ಒಪ್ಪಂದ ಮಾಡಿಕೊಂಡು ನೀರು ಪಡೆದು ರಾಗಿ ಉಳಿಸಿಕೊಳ್ಳಲು ಪರದಾಡುತ್ತಿದ್ದರು. ಯಾವುದೇ ನೀರಿನ ವ್ಯವಸ್ಥೆ ಇಲ್ಲದ ರೈತರು ದೇವರ ಮೇಲೆ ಭಾರ ಹಾಕಿ ಕೃಪೆ ತೋರು ವರುಣ ಎಂದು



> ಚಿಕ್ಕನಾಯಕನಹಳ್ಳಿ ತಾಲೂಕು ಮಳೆಯಾಶ್ರಿತ ರಾಗಿ ಬೆಳೆಗಾರರೇ ಹೆಚ್ಚಾಗಿದ್ದಾರೆ. ಮಳೆಯಾದರೇ ಮಾತ್ರ ಬೆಳೆ ಎಂಬ ಪರಿಸ್ಥಿತಿಯಿದೆ. ಮಳೆ ನಂಬಿ ಬಿತ್ತಿದ್ದ ರಾಗಿ ತೆನೆ ಮೂಡುವ ಹಂತದಲ್ಲಿ ಮಳೆ ಇಲ್ಲದಾಗಿದ್ದು ರೈತರು ಮುಗಿಲು ನೋಡುವಂತಾಗಿತ್ತು. ಬಿತ್ತಿದ್ದ ಬೀಜವೂ ಧಕ್ಕಲಾರದ ಸ್ಥಿತಿಯಿತ್ತು. ಸಾಲ ಮಾಡಿಕೊಂಡಿದ್ದ ರೈತರು ಚಿಂತಾಕ್ರಾಂತರಾಗಿದ್ದರು. ಈಗ ಸುರಿದ ಮಳೆಯಿಂದ ರಾಗಿ ಸೇರಿದಂತೆ ತೊಗರಿ, ಸಾಮೆ, ಹುರುಳಿ ಬೆಳೆಗೆ ಹೆಚ್ಚು ಅನುಕೂಲವಾಗಿದೆ. ಇನ್ನೊಂದೆರಡು ಮಳೆ ಬಿದ್ದರೆ ಈ ವರ್ಷ ತಾಲೂಕಿನಲ್ಲಿ ದಾಖಲೆಯ ಇಳುವರಿ ಬರುವ ಸಾಧ್ಯತೆ ಇದೆ.
>
> | **ಕರಿಯಣ್ಣ** ತಾಲೂಕು ಅಧ್ಯಕ್ಷ, ರೈತ ಸಂಘ

> ತಾಲೂಕಿನಲ್ಲಿ ಈ ವರ್ಷ 31.500 ಹೆಕ್ಟರ್ ರಾಗಿ, 480 ಹೆಕ್ಟೇರ್ ತೊಗರಿ, 420 ಹೆಕ್ಟೇರ್ ಅವರೆ, 720 ಹೆಕ್ಟೇರ್ ಅಲಸಂದೆ ಬಿತ್ತಲಾಗಿತ್ತು. ಕಳೆದ ತಿಂಗಳು ಮಳೆ ಇಲ್ಲದೆ ಬೆಳೆ ಬಾಡುತ್ತಿತ್ತು. ಈಗ ತಾಲೂಕಿನಲ್ಲಿ ಉತ್ತಮ ಮಳೆಯಾಗಿರುವುದರಿಂದ ಎಕರೆಗೆ 6 ಕ್ವಿಂಟಲ್ ರಾಗಿ ಇಳುವರಿ ಬಂದೇ ಬರುತ್ತದೆ. ಹತ್ತದಿನೈದು ದಿನ ಬಿಟ್ಟು ಮತ್ತೊಮ್ಮೆ ಮಳೆ ಬಂದರಂತೂ 6 ಕ್ವಿಂಟಲ್‌ಗಿಂತಲೂ ಹೆಚ್ಚು ಇಳುವರಿ ಬರುತ್ತದೆ. ಸಾಮೆ, ತೊಗರಿ, ಅವರೆಗೂ ಅನುಕೂಲವಾಗಲಿದೆ. ಹೂವು ಕಟ್ಟುವ ಹಂತದಲ್ಲಿ ಕೀಟ ಬಾದೆ ಬಂದರೆ ಇಲಾಖೆಯನ್ನು ಸಂಪರ್ಕಿಸಿದರೆ ಔಷಧಿ ಕೊಡಲಾಗುವುದು.
>
> **ಶಿವರಾಜ್‌ಕುಮಾರ್** ಸಹಾಯಕ ಕೃಷಿ ನಿರ್ದೇಶಕ, ಚಿಕ್ಕನಾಯಕನಹಳ್ಳಿ

ಕೈ ಮುಗಿದು ಪ್ರಾರ್ಥಿಸುತ್ತಿದ್ದರು. ರೈತರ ಪ್ರಾರ್ಥನೆ ವರುಣನಿಗೆ ಮುಟ್ಟಿದ ಪರಿಣಾಮವೋ ಏನೋ ಕಳೆದ ಹತ್ತನ್ನೆರಡು ದಿನಗಳಿಂದ ತಾಲೂಕಿನಲ್ಲಿ ಉತ್ತಮ ಮಳೆಯಾಗುತ್ತಿದೆ. ಅದರಲ್ಲೂ ದಿನವಿಡೀ ಸುರಿದ ಜಡಿಮಳೆ ರಾಗಿ ಬೆಳೆಗೆ ಮರುಜೀವ ನೀಡಿ ರೈತರು ನಿಟ್ಟುಸಿರು ಬಿಡುವಂತೆ ಮಾಡಿದೆ.

ಚಿಕ್ಕನಾಯಕನಹಳ್ಳಿ ತಾಲೂಕಿನಲ್ಲಿ ಜೂನ್‌ನಲ್ಲಿ 107.9 ಮಿಮೀ, ಜುಲೈನಲ್ಲಿ 116.4 ಮಿಮೀ, ಆಗಸ್ಟ್‌ನಲ್ಲಿ 232 ಮಿಮೀ. ಮಳೆಬಿದ್ದಿತ್ತು. ಆದರೆ ಸೆಪ್ಟೆಂಬರ್ ಮಾಹೆಯಲ್ಲಿ ವಾಡಿಕೆ ಮಳೆ 160 ಮಿಮೀ. ಇದ್ದರೂ 37.4 ಮಿಮೀ ಮಳೆ ಮಾತ್ರ ಬಿದ್ದಿತ್ತು. ಅದರಲ್ಲೂ ಕೆಲ ಭಾಗದಲ್ಲಿ ಮಾತ್ರ ಬಿದ್ದಿತ್ತು. ವಾಡಿಕೆಗಿಮದ ಕಡಿಮೆ ಮಳೆ ಬಿದ್ದಿರುವುದು ರೈತನ ಆತಂಕಕ್ಕೆ ಕಾರಣವಾಗಿತ್ತು. ಅಕ್ಟೋಬರ್ ಮಾಹೆಯಲ್ಲಿ 79.9 ಮಿಮೀ ಮಳೆ ಬಿದ್ದು ರೈತನ ಮುಖದಲ್ಲಿ ಮಂದಹಾಸ ಮೂಡಿಸಿದೆ. ಮುಂಚೆ ಬಿತ್ತಿದ ರಾಗಿ ಈಗಾಗಲೇ ತೆನೆ ಹೊಡೆದಿದೆ. ತಡವಾಗಿ ಬಿತ್ತಿದ್ದ ರಾಗಿ ಇನ್ನೇನು ಕೆಲವೇ ದಿನಗಳಲ್ಲಿ ತೆನೆಯೊಡೆಯಲಿದೆ. ಮುಂದಿನ ದಿನಗಳಲ್ಲಿ ಒಂದೆರಡು ಉತ್ತಮ ಮಳೆ ಆದರೆ ಉತ್ತಮ ಇಳುವರಿ ಬರುವ ನಿರೀಕ್ಷೆ ಇದೆ. ಅಲ್ಲದೆ ರಾಗಿ ಹುಲ್ಲು ಕೂಡ ಚೆನ್ನಾಗಿ ಬೆಳೆದು ದನಕರಗಳ ಮೇವಿನ ಆರ್ಥಿಕ ಹೊರೆ ಕಡಿಮೆಯಾಗುತ್ತದೆ ಎಂದು ರೈತರು ಸಂತಸ ವ್ಯಕ್ತಪಡಿಸುತ್ತಿದ್ದಾರೆ.

# ಭೇತಾಳ ಪೀಠದಲ್ಲಿ ಮದ್ಯವರ್ಜನ ಶಿಬಿರ

**ಕೋಲಾರ:** ಕೆಜಿಎಫ್ ಸಮೀಪದ ಐವಾರಹಳ್ಳಿ ರಸ್ತೆಯಲ್ಲಿನ ಭೇತಾಳ ಭದ್ರಕಾಳಿ ಮಹಾಶಕ್ತಿ ಪೀಠಂನಲ್ಲಿ ಶುಕ್ರವಾರ ಕಾಟೇರಮ್ಮನ ಪೂಜೆ ಅದ್ದೂರಿಯಾಗಿ ನಡೆಯುವ ಜೊತೆಗೆ ಮದ್ಯವರ್ಜನ ಶಿಬಿರ ಹಾಗೂ ಬಿಪಿ,ಶುಗರ್ ,ಗ್ಯಾಸ್ಟಿಕ್ ಚಿಕಿತ್ಸೆ ನೀಡಲಾಯಿತು. ಹೌದು, ದೇವಾಲಯವೀಗ ಆರೋಗ್ಯ ಕೇಂದ್ರವಾಗಿ ಮಾರ್ಪಟ್ಟಿದ್ದು ಭಕ್ತರ ಜೊತೆಗೆ ರೋಗಿಗಳೂ ಸಹಾ ಕಾಟೇರಮ್ಮನ ಬಳಿಗೆ ಬರುತ್ತಿದ್ದು ಅಘೋರಿ ಚಂದ್ರನಾಥ ಸ್ವಾಮಿಗಳು ಪೂಜೆಯ ಜತೆಗೆ ಗಿಡಮೂಲಿಕೆಗಳ ಮೂಲಕ ಭಕ್ತರ ನಾನಾ ರೋಗಗಳಿಗೆ ಟ್ರೀಟ್ಮೆಂಟ್ ಕೊಡುತ್ತಿದ್ದಾರೆ.

ಹಿಂದೂ ಭಕ್ತರ ಜತೆಗೆ ಎಲ್ಲಾ ಸಮುದಾಯಗಳ ರೋಗಿಗಳೂ ಸಹಾ ಕಾಟೇರಮ್ಮನ ದೇಗುಲಕ್ಕೆ ಬಂದು ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುತ್ತಿದ್ದಾರೆ.

108 ಅಡಿಗಳ ಬೇತಾಳ ವಿಗ್ರಹ, ಭದ್ರಕಾಳಿ, ಕಾಲಭೈರವ, ಪ್ರತಿಂಗೀರ, ಕಾಟೇರಮ್ಮ, ಪಾರ್ವತಿದೇವಿ, ನಾಗಮ್ಮ, ವಿಷ್ಣುಮಾಯ, ಕರಿಕುಟ್ಟಿಚಾಟ ದೇವರುಗಳಿಗೆ ಸಂಪ್ರದಾಯದಂತೆ ಶುಕ್ರವಾರ ಬೆಳಿಗ್ಗೆಯಿಂದ ಮಧ್ಯಾಹ್ನದ ವರೆವಿಗೂ ವಿಶೇಷ ಪೂಜೆಗಳು ನಡೆದು ಮಹಾಮಂಗಳಾರತಿ ಮತ್ತು ಭಕ್ತರಿಗೆ ಪ್ರಸಾದವಿನಿಯೋಗ ನಡೆಯಿತು.

ಪ್ರಧಾನ ಅರ್ಚಕ ಅಘೋರಿ ಚಂದ್ರನಾಥ ಮಾತನಾಡಿ ಸುಮಾರು ವರ್ಷಗಳ ಕಾಲ ಕಾಶಿಯಲ್ಲಿ ಕಠಿಣ ಶ್ರಮದಿಂದ ವಿದ್ಯೆ ಸಿದ್ದಿಯಾಯಿತು. ನಂತರದಲ್ಲಿ ಭದ್ರಕಾಳಿ ಉಪಾಸನೆಯಿಂದ ಬೇತಾಳ ಸಿದ್ಧಿಯಾಯಿತು ಈ ಕಾರಣದಿಂದಾಗಿ ಪ್ರಪಂಪಚದ ಯಾವ ಭಾಗದಲ್ಲೂ ಕಾಣ ಸಿಗದ 108 ಅಡಿಗಳ ಬೇತಾಳವನ್ನು ನಿರ್ಮಿಸಲಾಗಿದೆ. ಪ್ರತೀ ಶುಕ್ರವಾರದಂದು ಜಿಲ್ಲೆಯ ಮತ್ತು ಪಕ್ಕದ ರಾಜ್ಯಗಳಾದ ಆಂಧ್ರ,ತೆಲಂಗಾಣ ,ತಮಿಳ್ನಾಡು ಮತ್ತು ಕೇರಳದಿಂದ ಭಕ್ತಾದಿಗಳೂ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ದೇವರ ಕೃಪೆಗೆ ಪಾತ್ರರಾಗುತ್ತಾರೆ ಎಂದರು. ಚಂದ್ರನಾಥ ಸ್ವಾಮಿಗಳು ಭಕ್ತರ ಸಮಸ್ಯೆಗಳನ್ನು ಆಲಿಸಿ ಪರಿಹಾರ ಸೂಚಿಸಿದರು. ಪ್ರಶ್ನೆ ಕೇಳಲು ನೂರಾರು ಭಕ್ತರು ಸಾಲುಗಟ್ಟಿ ನಿಂತಿದ್ದು ಸಂಜೆವರೆಗೆ ಚಂದ್ರನಾಥ ಸ್ವಾಮಿಗಳು ಭಕ್ತರೊಟ್ಟಿಗೆ ಸಂವಾದ ನಡೆಸಿ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಿದರು. ಮಹಿಳಾ ಭಕ್ತರ ದಂಡು ಮೇಳೈಸಿತ್ತು.



## ವಿದ್ಯುತ್ ಕಂಬ ಬದಲಿಸಿ

**ತಿಪಟೂರು:** ನೊಣವಿನಕೆರೆ ಹೋಬಳಿ ಬಿಸಿಲೇಹಳ್ಳಿ ಹಾಗೂ ಮಸವನಘಟ್ಟ ಮಾರ್ಗದ ಮಧ್ಯೆ ಬಿಸಿಲೆಹಳ್ಳಿ ಗ್ರಾಮದ ಸರ್ವೆ ನಂ46/2 ಬಿ.ಸಿ ಅಣ್ಣಯ್ಯ ಜಮೀನು, ಹಾಗೂ ಪಕ್ಕದ ಜಮೀನು 46/3 ಲಕ್ಕಯ್ಯ ಜಮೀನಿನ ಮಧ್ಯೆ ಇರುವ ತಂತಿ ಕಂಬ ದುರಾವಸ್ಥೆಯಲ್ಲಿದ್ದು ಯಾವುದೇ ಕ್ಷಣದಲ್ಲಿ ಅಪಾಯ ಎದುರಾಗುವ ಲಕ್ಷಣ ಕಾಣುತ್ತಿದೆ ಇತ್ತೀಚೆಗೆ ವಿದ್ಯುತ್ ಅವಘಡಗಳು ಸಮಸ್ಯೆ ಎದುರಾಗಿದೆ ಮಳೆಗಾಲ ಬಂದಾಗ ಜಮೀನಿನಲ್ಲಿ ಓಡಾಡಲು ಭಯವಾಗುತ್ತದೆ ಈ ವಿಚಾರವಾಗಿ ಸಾಕಷ್ಟು ಬಾರಿ ಬೆಸ್ಕಾಂ ಇಲಾಖೆಗೆ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಬೇರೆ ವಿದ್ಯುತ್ ಕಂಬ ಹಾಕಿ ಕೊಡಬೇಕೆಂದು ಜಮೀನಿನ ಮಾಲೀಕ ಬಿ.ಸಿ.ಅಣ್ಣಯ್ಯ, ಹಾಗೂ ಲಕ್ಕಯ್ಯ ಪತ್ರಿಕೆಗೆ ತಿಳಿಸಿದ್ದಾರೆ.



## ವಾಲ್ಮೀಕಿ ಮಹರ್ಷಿಗಳ ಜಯಂತಿ ಆಚರಣೆ

**ಮಾಲೂರು:** ವಾಲ್ಮೀಕಿ ಜಯಂತಿಯು ಪ್ರಖ್ಯಾತ ಋಷಿ ಮುನಿಗಳು ಮತ್ತು ರಾಮಾಯಣದ ಕರ್ತೃ ಮಹರ್ಷಿ ವಾಲ್ಮೀಕಿ ಅವರ ಜನ್ಮದಿನದಂದು ಆಚರಿಸಲಾಗುತ್ತದೆ ಎಂದು ಗ್ರಾ.ಪಂ.ಅಧ್ಯಕ್ಷೆ ಜಮುನಾಬಾಯಿ ರವರು ತಿಳಿಸಿದ್ದಾರೆ. ತಾಲ್ಲೂಕಿನ ಅಬ್ಬೇನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಹಮ್ಮಿಕೊಂಡಿದ್ದ ಶ್ರೀ ಮಹರ್ಷಿ ವಾಲ್ಮೀಕಿಗಳ ಜಯಂತೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ಈ ಸಂದರ್ಭದಲ್ಲಿ ಗ್ರಾ.ಪಂ.ಅಧ್ಯಕ್ಷೆ ಜಮುನಾ ಬಾಯಿ ಬಾಬುಸಿಂಗ್, ಪಿಡಿಒ ಎನ್.ದೀಪಾ. ಕಾರ್ಯದರ್ಶಿ ತುಳಸಿರಾಮ್, ಕ್ಲರ್ಕ್ ನಾಗರಾಜ್, ಮಮತಾ ಹಾಗೂ ಜಲಗಾರರು, ಸಿಬ್ಬಂದಿ ವರ್ಗದವರು ಇದ್ದರು.



## ರಾಜ್ಯ ಸರ್ಕಾರಿ ನೌಕರರ ಸಂಘದ ಚುನಾವಣೆ ಘೋಷಣೆ

**ಚಿಕ್ಕಬಳ್ಳಾಪುರ:** ಅಕ್ಟೋಬರ್ 18:2024-2029ನೇ ಅವಧಿಯ ಚಿಕ್ಕಬಳ್ಳಾಪುರ ಜಿಲ್ಲಾ ಶಾಖೆಯ ಕಾರ್ಯಕಾರಿ ಸಮಿತಿ ನಿರ್ದೇಶಕರ ಚುನಾವಣೆಯು ಘೋಷಣೆ ಆಗಿದ್ದು ವೇಳಾಪಟ್ಟಿಯ ವಿವರ ಇಂತಿದೆ. ಅಕ್ಟೋಬರ್ 28 ರಿಂದ ನವೆಂಬರ್ 7 ರವರೆಗೆ ಬೆಳಿಗ್ಗೆ 11 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ನಾಮಪತ್ರ ಸಲ್ಲಿಸಬಹುದು. ನಾಮಪತ್ರಗಳನ್ನು ನವೆಂಬರ್ 8 ರಂದು ಬೆಳಿಗ್ಗೆ 11 ಗಂಟೆಯವರೆಗೆ ಪರಿಶೀಲಿಸಲಾಗುವುದು ನಂತರ ಅರ್ಹ ಅಭ್ಯರ್ಥಿಗಳ ಹೆಸರನ್ನು ಅಂದೆ ಪ್ರಕಟಣೆ ಮಾಡಲಾಗುವುದು. ಉಮೇದುವಾರಿಕೆಯನ್ನು ನವೆಂಬರ್ 11 ರ ಸಂಜೆ 4:30 ಗಂಟೆಯವರೆಗೆ ವಾಪಸ್ಸು ಪಡೆಯಬಹುದು ನಂತರ ಚುನಾವಣಾ ಕಣದಲ್ಲಿ ಉಳಿದ ಅಭ್ಯರ್ಥಿಗಳ ಹೆಸರನ್ನು ನವೆಂಬರ್ 11ರ ಸಂಜೆ 5:30 ಗಂಟೆಗೆ ಪ್ರಕಟಣೆ ಮಾಡಲಾಗುವುದು. ಚುನಾವಣೆಯು ನವೆಂಬರ್ 16 ರಂದು ಬೆಳಿಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ನಗರದ ಸರ್ಕಾರಿ ನೌಕರರ ಸಂಘ(ತಾಯಿ ಮತ್ತು ಮಕ್ಕಳ ಆಸ್ಪತ್ರೆ ಎದುರು)ದ ಕಚೇರಿಯಲ್ಲಿ ನಡೆಯಲಿದೆ ಮತದಾನದ ನಂತರ ಅಂದೆ ಮತಗಳ ಎಣಿಕೆ ಂಟಿರಜಟ ಫಲಿತಾಂಶ ಸಹ ಪ್ರಕಟಣೆಯಾಗಲಿದೆ. ಚುನಾವಣೆಯ ಮತದಾನ ಮತ್ತು ಸ್ಪರ್ಧೆಯ ಪ್ರಕ್ರಿಯೆಗಳಲ್ಲಿ ಭಾಗವಹಿಸುವ ಮುನ್ನ ಸರ್ಕಾರಿ ನೌಕರರ, ಅಧಿಕಾರಿ ಬಂಧುಗಳು ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ಪರಿಶೀಲಿಸಿಕೊಳ್ಳಲು ರಾಜ್ಯ ಸರ್ಕಾರಿ ನೌಕರರ ಸಂಘದ ಚಿಕ್ಕಬಳ್ಳಾಪುರ ಜಿಲ್ಲಾ ಘಟಕದ ಅಧ್ಯಕ್ಷ ಜಿ. ಹರೀಶ್ ರವರು ಪ್ರಕಟಣೆ ಮೂಲಕ ಮನವಿ ಮಾಡಿದ್ದಾರೆ.

# ಮತ್ತೆ ಹಾಲಿನ ದರ ಹೆಚ್ಚಾದರೆ ಬಡ ಮಕ್ಕಳಿಗೆ ನೀರಾಲೇ ಗತಿ

**ಚಿತ್ರದುರ್ಗ:** ಮತ್ತೆ ರಾಜ್ಯದಲ್ಲಿ ಹಾಲಿನ ಬೆಲೆ ಐದು ರೂಪಾಯಿಯಷ್ಟು ಹೆಚ್ಚಾದರೆ, ಬಡ ಮಕ್ಕಳಿಗೆ, ಬಡ ತಾಯಂದಿರಿಗೆ, ಹಾಲುಣಿಸುವ ಬದಲು ನೀರಾಲನ್ನು ಉಣಿಸಬೇಕಾಗುತ್ತದೆ. ರೈತರ ಹೆಸರಿನಲ್ಲಿ ಬೆಲೆ ಏರಿಕೆ ಮಾಡಿದರೆ, ಜನ ಸಹಿಸಿಕೊಳ್ಳುತ್ತಾರೆ, ಏಕೆಂದರೆ ರೈತರ ಮೇಲೆ ಜನರಿಗೆ ಅಭಿಮಾನವಿದೆ, ಕನಿಕರವಿದೆ, ಪ್ರೇಮವಿದೆ, ಅದನ್ನೇ ಹಾಲು ಉತ್ಪಾದನಾ ಮಂಡಳಿಯವರು, ಬಳಕೆ ಮಾಡಿಕೊಂಡು ಗ್ರಾಹಕರನ್ನ ಶೋಷಿಸುವುದು ತರವಲ್ಲ. ಈಗಾಗಲೇ ಹೆಚ್ಚಿರುವ ಹಾಲಿನ ಬೆಲೆಯನ್ನು ಹೊಂದಿಸಲಾರದೆ, ಕುಟುಂಬಗಳು ಸಂಕಷ್ಟದಲ್ಲಿವೆ. ಮತ್ತೆ ಹಾಲಿನ ದರವನ್ನು ಏರಿಸುವುದರಿಂದ ಅವರಿಗೆ ಹಾಲು ಕೊಳ್ಳಲು ಸಾಧ್ಯವಾಗದಂತಹ ಪರಿಸ್ಥಿತಿ ನಿರ್ಮಾಣವಾಗುತ್ತದೆ. ಹಾಗಾಗಿ ರೈತರಿಗೆ ಬೇರೆ ರೀತಿಯಲ್ಲಿ ಸಹಾಯಧನವನ್ನು ಒದಗಿಸಿ, ಹಾಲಿನ ದರವನ್ನ ಹಾಗೆ ಉಳಿಸಿಕೊಳ್ಳಿ ಎಂದು ಕರ್ನಾಟಕ ಜ್ಞಾನ-ವಿಜ್ಞಾನ ಸಮಿತಿ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷರಾದ ಡಾ.ಎಚ್ ಕೆ ಎಸ್ ಸ್ವಾಮಿಯವರು ವಿನಂತಿಸಿಕೊಂಡಿದ್ದಾರೆ.

ಹಾಲು ಉತ್ಪಾದನೆ ಹೆಚ್ಚಾಗುತ್ತಿದೆ, ಅದಕ್ಕಾಗಿ ಪ್ರತಿ ಪಾಕೆಟ್ ನಲ್ಲಿ 50 ಎಮ್ ಎಲ್ ಹಾಲನ್ನ ಹೆಚ್ಚಿಗೆ ಹಾಕಿದ್ದೇವೆ ಎಂದು, ಕಳೆದ ಬಾರಿ ಹಾಲಿನ ಬೆಲೆಯನ್ನು ಏರಿಸಲಾಗಿತ್ತು. ಆಗಲು ಸಹ ಜನರು ಹಾಲನ್ನು ಹೆಚ್ಚಿಗೆ ನೀಡುತ್ತಿದ್ದಾರಲ್ಲ ಎಂದು ಸಹಿಸಿಕೊಂಡರು. ಆದರೆ ಈಗ ಮತ್ತೆ ಹಾಲಿನ ದರವನ್ನು ಹೆಚ್ಚಿಸಬೇಕು ಎಂಬ ಯೋಚನೆ ನಡೆಯುತ್ತಿದೆ ಎಂಬ ವಿಚಾರವನ್ನ ಟಿವಿ ಮತ್ತು ಪತ್ರಿಕೆಗಳಲ್ಲಿ ಓದಿಕೊಳ್ಳುವಂತಹ ಬಡ ಕುಟುಂಬಗಳು, ಲಘು ಹೃದಯಘಾತದಿಂದ ನಲುಗಿವೆ. ಈಗಾಗಲೇ ಕುಟುಂಬಗಳು ಅರ್ಧ ಲೀಟರ್ ಹಾಲು ತೆಗೆದುಕೊಂಡು, ಅದಕ್ಕೆ ಒಂದು ಅರ್ಧ ಲೀಟರ್ ನೀರು ಬೆರೆಸಿ, ಮಕ್ಕಳಿಗೆ ಕುಡಿಸಿ, ಅಪೌಷ್ಟಿಕ ಅಂಶವನ್ನು ಮಕ್ಕಳ ದೇಹಕ್ಕೆ ತುಂಬಿ, ಅನಾರೋಗ್ಯ ಪೀಡಿತವಾದಂತ ಮಕ್ಕಳನ್ನ ಬೆಳೆಸುತ್ತಿರುವುದನ್ನು ನೋಡಿದರೆ, ಬಡ ಜನರಿಗೆ ಯಾವಾಗ ಸಮೃದ್ಧವಾದ ಹಾಲು ದೊರಕಿತು ಎಂದು ಯೋಚಿಸುವಂತಾಗಿದೆ ಎಂದರು.

ಶ್ರೀಮಂತರು ಮತ್ತು ಮಧ್ಯಮ ವರ್ಗದವರು ಹೇಗಾದರೂ ಮಾಡಿ ಹಾಲು, ಮೊಸರು, ಬೆಣ್ಣೆ, ತುಪ್ಪವನ್ನ ಕೊಂಡುಕೊಂಡು ಬಳಕೆ ಮಾಡುತ್ತಿದ್ದಾರೆ, ಆದರೆ ಕೆಳಮಟ್ಟದಲ್ಲಿರುವ ಬಡವರಂತೂ, ಸ್ಲಂ ಗಳಲ್ಲಿ ವಾಸ ಮಾಡುತ್ತಿರುವವರು, ಬೀದಿಬದಿಯಲ್ಲಿ ವಾಸ ಮಾಡುತ್ತಿರುವರು, ಕಸ ಆರಿಸುವಂಥವರು, ತಮ್ಮ ಕುಟುಂಬಗಳನ್ನ ನಿರ್ವಹಣೆ ಮಾಡಲು ಪ್ರತಿದಿನ ಒಂದೊಂದು ರೂಪಾಯಿಗೂ ಸಹ ಕಷ್ಟ ಪಡುತ್ತಿದ್ದಾರೆ. ಅಂತವರ ಜೇಬಿನಿಂದ ಹೆಚ್ಚು ಹಣವನ್ನು ತೆಗೆದುಕೊಂಡು, ಲಾಭ



ಬಡುಕತನದಿಂದ ನಾವು ಯಾವುದೇ ವ್ಯವಹಾರವನ್ನು ಮಾಡಬಾರದು. ಬಡವರ ಜೇಬಿಗೆ ಕೈ ಹಾಕಲು ಬಹಳ ಯೋಚಿಸಬೇಕಾಗುತ್ತದೆ. ಅವರ ದುಡಿಮೆಯಲ್ಲಿ ಸ್ವಲ್ಪ ಪಾಲನ್ನು ಅವರು ಹಾಲಿಗೋಸ್ಕರ ತೆರೆದಿಟ್ಟುಕೊಂಡಿರುತ್ತಾರೆ, ಅದನ್ನು ಸಹ ನಾವು ಕಬಳಿಸಿ, ಹಾಲು ಕೊಳ್ಳದಂತೆ ಮಾಡುವುದಕ್ಕಿಂತ, ಅವರಿಗೊಂದಿಷ್ಟು ಕನಿಷ್ಠ ಪಕ್ಷ, ಕಡಿಮೆ ದರದಲ್ಲಾದರೂ ಹಾಲಿನ ಪ್ಯಾಕೆಟ್ ಗಳನ್ನು ಒದಗಿಸಿ, ಬಡವರ ಮಕ್ಕಳನ್ನು ಸಹ ಆರೋಗ್ಯಪೂರ್ಣರನ್ನಾಗಿ ಮಾಡಬೇಕಾಗಿದೆ ಎಂದರು.

ಶಾಲೆಗಳಲ್ಲಿ ಹಾಲು ಉತ್ಪಾದನೆ ಹೆಚ್ಚಾದಾಗ ಹಾಲಿನ ಪುಡಿಯನ್ನು ಒದಗಿಸಿ, ಮಕ್ಕಳಿಗೆ ಹಾಲು ಕುಡಿಯಲು ಪ್ರೋತ್ಸಾಹಿಸಲಾಯಿತು. ಆದರೆ ಶಾಲಾ ಮಕ್ಕಳು ಹಾಲು ಪುಡಿಯ ಹಾಲನ್ನು ಹೆಚ್ಚು ಕುಡಿಯಲಾರದೆ ಅವುಗಳಿಗೆ ಬೋರ್ನ್ವಿಟಾ, ಹಾರ್ಲಿಕ್ಸ್ ಮಿಶ್ರಣ ಮಾಡಿ ಹಾಲು ಸೇವನೆ ಮಾಡುತ್ತಾರೆ. ಕೆಲವು ಮಕ್ಕಳಿಗೆ ಬರಿ ಹಾಲೆಂದರೆ ಅಲರ್ಜಿಯಾಗಿದೆ. ಅಂತಹ ಮಕ್ಕಳಿಗೆ ಈ ರೀತಿ ರುಚಿಕರವಾದ ಪುಡಿಗಳನ್ನ ಮಿಶ್ರಣ ಮಾಡಿ ಹಾಲು ಕುಡಿಸುತ್ತಿರುತ್ತಾರೆ. ಶಾಲೆಗಳಲ್ಲಿ ಮಕ್ಕಳು ಪುಡಿ ಹಾಲನ್ನು ಕುಡಿಯಲಾರದೆ, ಸಿಂಕ್ ಗಳಿಗೆ, ಚರಂಡಿಗಳಿಗೆ, ಕಾಂಪೌಂಡಿನ ಹೊರಗೆ ಚೆಲ್ಲುವ ದೃಶ್ಯ ನೋಡಲು ಸಿಗುತ್ತದೆ. ಬಹಳಷ್ಟು ಶಾಲೆಗಳಲ್ಲಿ ಹಾಲಿನ ಪುಡಿಯನ್ನು ಸಹ ಸರಿಯಾಗಿ ಬಳಕೆ ಮಾಡಲಾರದೆ, ಅವು ಸಹ ಅವಧಿ ಮುಗಿದು ಬಿಸಾಡುವ ಪರಿಸ್ಥಿತಿಗೆ ಬಂದಿರುತ್ತದೆ. ಆದರೆ ನೈಜವಾದ ಹಾಲನ್ನ ಮಕ್ಕಳು ಬಹಳ ಪ್ರೀತಿಯಿಂದ ಸೇವನೆ ಮಾಡುತ್ತಾರೆ, ಹಾಗಾಗಿ ಹಾಲಿನ ದರವನ್ನ ಏಕಾಏಕಿ ಹೆಚ್ಚಿಸುವುದಕ್ಕಿಂತ ಅವುಗಳನ್ನ ನಿಧಾನಗತಿಯಲ್ಲಿ, ಬಹಳ ಅವಶ್ಯಕತೆ ಇದೆ ಎಂದಾಗ ಮಾತ್ರ ಹಾಲಿನ ದರವನ್ನು ಹೆಚ್ಚಿಸಬೇಕ. ಅಲ್ಲಿಯವರೆಗೂ ಹಾಲಿನ ಉತ್ಪಾದಕ ಮಂಡಳಿಯವರು ತಮ್ಮ ಆದಾಯದ ಮಿತಿಯನ್ನ ಕನಿಷ್ಠಪಕ್ಷಕ್ಕೆ ಇಟ್ಟುಕೊಂಡು, ಜನರ ಆರೋಗ್ಯ ಕ್ಕೋಸ್ಕರ ಹಾಲಿನ ದರವನ್ನು ನಿಯಂತ್ರಣದಲ್ಲಿಟ್ಟುಕೊಳ್ಳಬೇಕು. ರೈತರಿಗೆ ಸಂಕಷ್ಟಗಳು ಎದುರಾಗುತ್ತಿರುತ್ತದೆ, ಅವುಗಳನ್ನ ಬೇರೆ ರೀತಿ ಪರಿಹಾರ ನೀಡಿ, ಗ್ರಾಹಕರ ತಲೆಯ ಮೇಲೆ ಭಾರವನ್ನು ಹಾಕದೆ, ಗ್ರಾಹಕರನ್ನ ರಕ್ಷಿಸಬೇಕು. ರೈತರನ್ನೂ ಸಹ ರಕ್ಷಿಸಬೇಕು, ಅಂತಹ ಒಂದು ಸಮತೋಲನದಲ್ಲಿ ಹಾಲಿನ ವಿತರಣೆಯಾದರೆ ಉತ್ತಮ ಎಂದರು.

ಒಮ್ಮೆ ರೈತರು ಹಾಲಿನ ದರ ಕಡಿಮೆಯಾದಾಗ, ಸಿಟ್ಟಿನಿಂದ, ಕ್ರೋಷದಿಂದ, ಹಾಲನ್ನ ಚರಂಡಿಗೆ ಚೆಲ್ಲುವುದು, ಜಮೀನಿಗೆ ಚೆಲ್ಲುವುದು, ರಸ್ತೆಗೆ ಚೆಲ್ಲುವುದನ್ನು ನೋಡಿದರೆ, ಹಸಿದ ಮಕ್ಕಳಿಗೆ ಹಾಲುಣಿಸಲಾದರು ಹಾಲು ಸಿಗಬಹುದಾಗಿತ್ತಲ್ಲ, ನೀಡಬಹುದಾಗಿತ್ತಲ್ಲ ಎನ್ನುವ ಭಾವನೆ ಮೂಡುತ್ತದೆ. ಆದರೆ ರೈತರ ಆಕ್ರೋಶದ ಮುಂದೆ ಇವೆಲ್ಲವೂ ಸಹ ತಿರಸ್ಕಾರಕ್ಕೆ ಒಳಗಾಗುತ್ತವೆ. ಆದ್ದರಿಂದ ಹೆಚ್ಚು ಉತ್ಪಾದನೆಯಾದ ಹಾಲನ್ನ ಕಡಿಮೆ ದರದಲ್ಲಾದರೂ, ಬಡ ಮಕ್ಕಳಿಗೆ ವಿತರಣೆ ಮಾಡುವ ವ್ಯವಸ್ಥೆ ಮಾಡಬೇಕು. ಬೀದಿ ಬದಿ ಬದುಕುವ ನಾಯಿಗಳಿಗೆ ಆಹಾರ ವಿತರಣೆ ಮಾಡುವ ಸರ್ಕಾರಿ ಯೋಜನೆಗಳು ಅನುಷ್ಠಾನಕ್ಕೆ ಬರುತ್ತಿವೆ, ಆದರೆ ಸ್ಲಂ ಅಲ್ಲಿ ವಾಸ ಮಾಡುವ ಮಕ್ಕಳಿಗೆ ಹಾಲು ವಿತರಣೆ, ಪೌಷ್ಟಿಕಾಂಶಗಳ ವಿತರಣೆಯನ್ನು ಇನ್ನು ಕಾರ್ಯರೂಪಕ್ಕೆ ತರಲಾಗಿಲ್ಲ. ಬಡಮಕ್ಕಳು ಇನ್ನು ಸರಿಯಾಗಿ ಶಿಕ್ಷಣ ಪಡೆಯದೆ, ಬದುಕಲು ಆಸರೆ ಇಲ್ಲದೆ, ವಿದ್ಯುತ್ ವ್ಯವಸ್ಥೆ ಇಲ್ಲದೆ, ಸ್ವಚ್ಛಕುಡಿಯ ವ್ಯವಸ್ಥೆ ಇಲ್ಲದೆ, ಟೆಂಟ್ ಗಳಲ್ಲಿ ವಾಸ ಮಾಡಿಕೊಂಡು ಜೀವನ ಮಾಡುತ್ತಿದ್ದಾರೆ. ಇಂಥ ಬಡವರಿಗಾಗಿ ಕೆಲವೊಂದು ಯೋಜನೆಗಳನ್ನು ಅನುಷ್ಠಾನಕ್ಕೆ ತಂದು, ಅವರಿಗೆ ಕಡಿಮೆ ವೆಚ್ಚದಲ್ಲಿ ಹಾಲು ವಿತರಣೆ ಮಾಡಿ, ಅವರನ್ನು ಸಹ ನಾವು ರಕ್ಷಿಸಿಕೊಳ್ಳಬೇಕಾಗಿದೆ. ಪ್ರತಿಯೊಂದು ಮಗು ಸಹ ಈ ದೇಶದಲ್ಲಿ ಹುಟ್ಟಿದ ಮೇಲೆ ತನ್ನ ದೇಶದ ಮತ್ತು ಪೋಷಕರ ಜವಾಬ್ದಾರಿ ನನ್ನ ಹಾರೈಕೆಗೆ ಇವರೆಲ್ಲರೂ ಸಹಕರಿಸುತ್ತಾರೆ ಎಂದು ಮಗು ನಿರೀಕ್ಷೆಯಲ್ಲಿರುತ್ತದೆ. ಅಂತಹ ನಿರೀಕ್ಷೆಯನ್ನು ನಾವು ಸುಳ್ಳಾಗಿಸದೇ, ಬಹಳಷ್ಟು ವರ್ಷಗಳಿಂದ ಬಡತನದಲ್ಲಿ ಇಟ್ಟುಕೊಂಡಿರುವ ಕುಟುಂಬಗಳನ್ನು ಮೇಲೆತ್ತುವಂತ ಯೋಜನೆಗಳನ್ನ ಅನುಷ್ಠಾನಕ್ಕೆ ತಂದು, ಇಂತಹ ಮಕ್ಕಳಿಗೆ ಕಡಿಮೆ ದರದಲ್ಲಿ ಹಾಲು, ಹಣ್ಣು, ಪೌಷ್ಟಿಕಾಂಶಗಳ ವಿತರಣೆಯಾಗುವಂತೆ ಮಾಡಬೇಕೆಂದು ಪತ್ರಿಕಾ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡಿದ್ದಾರೆ.

## ರಾಜ್ಯಮಟ್ಟದ ಪ್ರಬಂಧ ಸ್ಪರ್ಧೆ

**ಮೈಸೂರು:** ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ವತಿಯಿಂದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 155ನೇ ಜಯಂತಿ ಅಂಗವಾಗಿ ವಿಜ್ಞಾನ ಮತ್ತು ತಂತ್ರಜ್ಞಾನ ಚಾಲಿತ ವಿಶ್ವವಿದ್ಯಾಲಯದಲ್ಲಿ 'ಗಾಂಧಿ ತತ್ವ ಸಿದ್ಧಾಂತಗಳ ಮಹತ್ವದ ಬಗ್ಗೆ' ವಿಶ್ಲೇಷಿಸಿ ಪ್ರಬಂಧ ಬರೆಯಲು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಜಿಲ್ಲಾ ಮತ್ತು ರಾಜ್ಯಮಟ್ಟದ ಪ್ರಬಂಧ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ. ಆಸಕ್ತರು ಜಿಲ್ಲಾ ಮಟ್ಟದ ಸ್ಪರ್ಧೆಗೆ ಪ್ರಬಂಧವನ್ನು ಬರೆದು ಅಕ್ಟೋಬರ್ 30 ರೊಳಗಾಗಿ kstaessay.kannada@gamil.comಮತ್ತು kstaessay.english@gmail.com Email ಮೂಲಕ ಕಳುಹಿಸಬಹುದು. ಜಿಲ್ಲಾ ಮಟ್ಟದಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ನವೆಂಬರ್ 12 ರಂದು ಆಯೋಜಿಸಲಾಗುವ ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಸ್ಥಳದಲ್ಲೇ ಪ್ರಬಂಧವನ್ನು ಕನ್ನಡ ಮತ್ತು ಇಂಗ್ಲೀಷ್ ಪ್ರತ್ಯೇಕ ಭಾಷೆಗಳಲ್ಲಿ ಬರೆಯಬಹುದಾಗಿದೆ. ಜಿಲ್ಲಾ ಮಟ್ಟದಲ್ಲಿ 'ಬಾಪೂಜಿ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ' ಹಾಗೂ ರಾಜ್ಯಮಟ್ಟದಲ್ಲಿ 'ವಿಜ್ಞಾನ ಮತ್ತು ತಂತ್ರಜ್ಞಾನ ಚಾಲಿತ ಪ್ರಪಂಚದಲ್ಲಿ ಗಾಂಧೀಜಿ ಚಿಂತನೆಗಳ ಪ್ರಸ್ತುತತೆ' ಎಂಬ ವಿಷಯದಲ್ಲಿ ಪ್ರಬಂಧ ಬರೆಯಬಹುದಾಗಿದ್ದು, ಬಹುಮಾನವನ್ನು ನ.14 ರಂದು ವಿತರಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ: ಚಂದ್ರಶೇಖರ ಮೂರ್ತಿ ಎಸ್. ರವರ ಮೊ.ಸಂ: 9686449019, 968691901 ದೂ.ಸಂ: 080-29721550 ಅಥವಾ www.kstacademy.in ವೆಬ್‌ಸೈಟ್ ಮೂಲಕ ವೀಕ್ಷಿಸಬಹುದು ಎಂದು ಎ.ಎಂ. ರಮೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತರಬೇತಿ ಶಿಬಿರ ಮುಂದೂಡಿಕೆ

**ರಾಮನಗರ:** 2024-25ನೇ ಸಾಲಿನ ಪರಿಶಿಷ್ಟ ಜಾತಿ ಉಪ ಯೋಜನೆಯಡಿ ಪರಿಶಿಷ್ಟ ಜಾತಿಯುವಕ/ಯುವತಿಯರಿಗೆಆಯೋಜಿಸಲಾಗಿದ್ದ ಹೊಲಿಗೆ ತರಬೇತಿ ಶಿಬಿರ ಹಾಗೂ ವಿಡಿಯೋಗ್ರಾಫಿತರಬೇತಿ ಶಿಬಿರವನ್ನು ಕಾರಣಾಂತರದಿಂದ ಮುಂದೂಡಲಾಗಿದೆ. ಮುಂಬರುವ ದಿನಗಳಲ್ಲಿ ಆಯೋಜಿಸಲಾಗುವ ತರಬೇತಿ ಶಿಬಿರದ ದಿನಾಂಕಗಳನ್ನು ತಿಳಿಸಲಾಗುವುದು.ಹೆಚ್ಚಿನ ಮಾಹಿತಿಗೆಯುವ ಸಬಲೀಕರಣ ಮತ್ತು ಕ್ರೀಡಾಇಲಾಖೆಯಸಹಾಯಕ ನಿರ್ದೇಶಕರನ್ನುಖುದ್ದಾಗಿಅಥವಾದೂ. ಸಂಖ್ಯೆ: 7338149456 ಅನ್ನು ಸಂಪರ್ಕಿಸುವಂತೆಯುವ ಸಬಲೀಕರಣ ಮತ್ತುಕ್ರೀಡಾಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

# ಮೂಲ ದಾಖಲೆ ನೋಡದೆ ಜೆರಾಕ್ಸ್‌ಗೆ ಅಧಿಕಾರಿಗಳ ಸಹಿ ಅಕ್ರಮಕ್ಕೆ ಕಾರಣ

**ಬೇಲೂರು:** ನಖಲಿ ಆಧಾರ್ ಕಾರ್ಡ್ ತಯಾರಿಸಿ ಕೊಡುತ್ತಿದ್ದಾರೆಂಬ ದೂರಿನ ಮೇಲೆ ತಾಲ್ಲೂಕಿನ ಬಿಕ್ಕೋಡು ಸೈಬರ್ ಕೇಂದ್ರ, ಹಾಗೂ ಗ್ರಾಮ ಒನ್ ಸೆಂಟರ್ ಮೇಲೆ ತಹಸೀಲ್ದಾರ್ ದಾಳಿ ನಡೆಸಿ ಪರಿಶೀಲಿಸಿದರು.

ಬಿಕ್ಕೋಡಿನ ಕರ್ನಾಟಕ ಜೆರಾಕ್ಸ್ ಆಂಡ್ ಕಂಪ್ಯೂಟರ್ ಸೆಂಟರ್ ಹಾಗೂ ಗ್ರಾಮ ಒನ್ ಕೇಂದ್ರ, ಪರಿಶೀಲಿಸಿದರು. ಹಾಸನ ಜಿಲ್ಲೆಯಲ್ಲಿ ನಖಲಿ ಆಧಾರ್ ಕಾರ್ಡುಗಳ ಹಾವಳಿ ಹೆಚ್ಚಾಗಿದೆ ಎಂಬ ದೂರಿನ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿಗಳು ಎಲ್ಲಾ ತಹಸೀಲ್ದಾರ್ ಅವರಿಗೆ ಪರಿಶೀಲನೆಗೆ ಸ್ಪಷ್ಟ ಸೂಚನೆ ನೀಡಿದ್ದರು. ದೂರು ಬಂದ ಹಿನ್ನಲೆಯಲ್ಲಿ ತಹಸೀಲ್ದಾರ್ ಎಂ.ಮಮತಾ ಅವರು, ಬಿಕ್ಕೋಡು ಉಪ ತಹಸೀಲ್ದಾರ್ ಪ್ರದೀಪ್, ಅರೇಹಳ್ಳಿ ಪಿಎಸ್ಐ ಶೋಭ ಅವರೊಂದಿಗೆ ದಾಳಿ ನಡೆಸಿ ಪರಿಶೀಲಿಸಿದರು. ಹೊರ ರಾಜ್ಯದವರಿಗೆ ನಖಲಿ ದಾಖಲೆಗಳ ಸೃಷ್ಟಿಸಿ, ಅಧಿಕಾರಿಗಳ ಸಹಿಯನ್ನು ಫೋರ್ಜರಿ ಮಾಡಿ, ನಖಲಿ ಆಧಾರ್ ಮಾಡಿಕೊಡುತ್ತಿರುವ ಬಗ್ಗೆ ದೂರು ಬಂದಿದ್ದು ನಖಲಿ ಆಧಾರ್ ಕಾರ್ಡುಗಳ ಮಾಡಿಕೊಡಬಾರದೆಂದು ಒಂದುವೇಳೆ ಮಾಡಿಕೊಟ್ಟರೆ



ಕ್ರಿಮಿನಲ್ ಕೇಸು ದಾಖಲಿಸಲಾಗುವುದು ಎಂದು ಜೆರಾಕ್ಸ್ ಸೆಂಟರ್ ಮಾಲೀಕ ಮೂರ್ತಿ ಹಾಗೂ ಗ್ರಾಮ ಒನ್ ಕೇಂದ್ರದ ದೀಕ್ಷಿತ್‌ಕುಮಾರ್ ಅವರಿಗೆ ಎಚ್ಚರಿಕೆ ನೀಡಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ತಹಸೀಲ್ದಾರ್, ಬಿಕ್ಕೋಡು, ಅರೇಹಳ್ಳಿ ಭಾಗದಲ್ಲಿ ಹೊರರಾಜ್ಯದಿಂದ ಬಂದಿರುವ ಕೂಲಿಕಾರ್ಮಿಕರಿಗೆ ಇತರರಿಗೆ ದಲ್ಲಾಳಿಗಳ ಮೂಲಕ ನಖಲಿ ಆಧಾರ್ ಕಾರ್ಡುಗಳನ್ನು ಮಾಡಿಕೊಡುತ್ತಿದ್ದಾರೆಂದು ದೂರು ಬಂದಿದ್ದರಿಂದ ದಾಳಿ ನಡೆಸಲಾಗಿದೆ. ಆಧಾರ್ ಕಾರ್ಡು ಮಾಡಿಕೊಡಲು ಅಗತ್ಯವಿರುವ ಕೆಲವೊಂದು ಜೆರಾಕ್ಸ್ ದಾಖಲೆಗಳಿಗೆ ಅಧಿಕಾರಿಗಳು, ವೈದ್ಯರು ಸಹಿ ಮಾಡಿಕೊಟ್ಟಿದ್ದಾರೆ. ಅದರ ಆಧಾರದ ಮೇಲೆ ಸೈಬರ್ ಸೆಂಟರ್‌ನವರು ಆಧಾರ್ ಕಾರ್ಡು ಮಾಡಿಕೊಟ್ಟಿದ್ದಾರೆ. ದಾಖಲೆಗಳ ಜೆರಾಕ್ಸ್ ಪ್ರತಿಗೆ ಸಹಿ ಹಾಕುವ ಮುಂಚೆ ಮೂಲ ದಾಖಲೆ ಪರಿಶೀಲಿಸದೆ ಸಹಿ ಹಾಕಬಾರದೆಂದು ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಆಧಾರ್ ಕಾರ್ಡು ಪಡೆದವರ ಮೂಲ ದಾಖಲಾತಿ ಪರಿಶೀಲಿಸಿ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಇದೆ ವೇಳೆ ಮಾತನಾಡಿದ ಕಾಫಿ ಬೆಳೆಗಾರ ಅಭಿಗೌಡ, ಬೇಲೂರು ತಾಲ್ಲೂಕಿನಲ್ಲಿ ಅಸ್ಸಾಂ, ಬಾಂಗ್ಲಾ ಮೂಲದ ವ್ಯಕ್ತಿಗಳು ಇದ್ದಾರೆ. ಕಾಫಿ ತೋಟದ ಕೆಲಸಕ್ಕೆಂದು ಇಲ್ಲಿಗೆ ಬಂದು ಸೇರಿಕೊಂಡಿದ್ದಾರೆ. ಇವರುಗಳು ಇಲ್ಲದಿದ್ದರೆ ಬೆಳೆಗಾರರಿಗೆ ತೊಂದರೆಯೇನೂ ಆಗುವುದಿಲ್ಲ. ಜೀವನೋಪಾಯಕ್ಕಾಗಿ ಶೇ.20 ಜನರ ಬಂದರೆ ದೇಶದ್ರೋಹದ ಕೆಲಸಕ್ಕೆ ಶೇ.80 ಬರುತ್ತಾರೆ. ಇವರುಗಳ ಬಗ್ಗೆ ತಾಲ್ಲೂಕು ಆಡಳಿತ ಹಾಗೂ ಪೊಲೀಸ್ ಇಲಾಖೆ ಗಮನ ಹರಿಸಬೇಕಿದೆ ಎಂದರು.

# ಬೇಲೂರು ಕೋಳಿ ಅಂಗಡಿ ಒಂದು ಕಡೆ ಮಾರಾಟ ವ್ಯವಸ್ಥೆ

**ಬೇಲೂರು:** ಪಟ್ಟಣದ ಜನವಸತಿ ಸ್ಥಳದಲ್ಲಿರುವ ಎಲ್ಲಾ ಕೋಳಿ ಅಂಗಡಿಗಳನ್ನು ಜನವಸತಿ ಇಲ್ಲದ ಸ್ಥಳದಲ್ಲಿ ಒಂದೇ ಕಡೆ ಇರುವಂತೆ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಪುರಸಭಾ ಅಧ್ಯಕ್ಷ ಎ.ಆರ್.ಅಶೋಕ್ ತಿಳಿಸಿದರು.

ಪಟ್ಟಣದ ಹೊಳೆಬೀದಿಯಲ್ಲಿ ಕೋಳಿ ಅಂಗಡಿಗಳ ಸಂಖ್ಯೆ ಮಿತಿ ಮೀರುತ್ತಿದ್ದು ವಾಸ ಮಾಡಲು ತೊಂದರೆಯಾಗುತ್ತಿದೆ, ಕೋಳಿ ಅಂಗಡಿಗಳ ತೆರವುಗೊಳಿಸಬೇಕೆಂದು ನಿವಾಸಿಗಳು ನೀಡಿದ ಮನವಿ ಪತ್ರ ಸ್ವೀಕರಿಸಿ ಮಾತನಾಡಿ, ಈಗ ಇರುವ ಅಂಗಡಿಗಳ ಮಾಲೀಕರಿಗೆ ಶುಚಿತ್ವ ಕಾಪಾಡುವಂತೆ ಸೂಚಿಸಲಾಗುವುದು, ಇನ್ನುಮುಂದೆ ಯಾವುದೇ ಅಂಗಡಿಗೆ ಪರವಾನಗಿ ನೀಡುವುದಿಲ್ಲ, ಯಗಚಿ ಸೇತುವೆ ಅಕ್ಕಪಕ್ಕದಲ್ಲಿ ಪುರಸಭೆಯ ಸ್ಥಳ ಇರುವ ಬಗ್ಗೆ ಮಾಹಿತಿ ಇದ್ದು ಅಲ್ಲಿ ಮಳಿಗೆಗಳ ನಿರ್ಮಿಸಬಹುದೆ ಅಥವಾ ಬಾಡಿಗೆ ಪಡೆದು ನೀಡಬಹುದೆ ಎಂಬುದನ್ನು ಸದಸ್ಯರೊಂದಿಗೆ ಚರ್ಚಿಸಿ ತೀರ್ಮಾನ ಕೈಗೊಳ್ಳಲಾಗುವುದು. ಒಟ್ಟಾರೆ ಎಲ್ಲಾ ಕೋಳಿ ಅಂಗಡಿಗಳನ್ನು ಒಂದು ಕಡೆಗೆ ಸ್ಥಳಾಂತರಿಸಲಾಗುವುದು ಎಂದರು.

6ನೇ ವಾರ್ಡಿನ ನಿವಾಸಿಗಳಾದ ಲಲಿತಾ, ಭವ್ಯ, ವೀಣಾ, ಅನಿತ ಇವರುಗಳು, ಅಂಬೇಡ್ಕರ್ ಭವನದ ಹತ್ತಿರ ಕೋಳಿ ಅಂಗಡಿ ಇತ್ತೆಂಬ ಕಾರಣಕ್ಕೆ ಅಲ್ಲಿದ್ದ 20 ಕೋಳಿ ಅಂಗಡಿಗಳ ತೆಗೆಸಲಾಯಿತು. ನಂತರ ಹೊಳೇಬೀದಿಯಲ್ಲಿ ಖಾಸಗಿ ವ್ಯಕ್ತಿಗಳ ಸ್ಥಳದಲ್ಲಿ ಕೋಳಿ ಅಂಗಡಿ ಆರಂಭಕ್ಕೆ ಅನುಮತಿ ನೀಡಲಾಗುತ್ತಿದ್ದು ಈಗಾಗಲೇ ಹಲವು ಕೋಳಿ ಅಂಗಡಿಗಳು ತಲೆ ಎತ್ತಿವೆ. ಇದರಿಂದ ಗಲೀಜು ಹೆಚ್ಚಾಗಿ ಸಾಂಕ್ರಾಮಿಕ ರೋಗಗಳಿಗೆ ಅವಕಾಶವಾಗಿದೆ. ಕಿರಿದಾದ ರಸ್ತೆಯಲ್ಲಿ ಇರುವ ನಾಲ್ಕು ಶಾಲಾ ಕಾಲೇಜು ಮಕ್ಕಳು ಇದೆ ರಸ್ತೆಯಲ್ಲಿ ಓಡಾಡಬೇಕಿದೆ, ಇದು ಜನವಸತಿ ಸ್ಥಳವಾಗಿದೆ. ಆದ್ದರಿಂದ ಕೋಳಿ ಅಂಗಡಿಗಳನ್ನು ತೆಗೆಸಬೇಕೆಂದು ಒತ್ತಾಯಿಸಿದರು.

ಈ ಸಂದರ್ಭ ಮುಖ್ಯಾಧಿಕಾರಿ ಸುಜಯಕುಮಾರ್, ನಿವಾಸಿಗಳಾದ ಮೀನಾಕ್ಷಿ, ರಂಗಮ್ಮ, ಸುಬ್ರಹ್ಮಣ್ಯ, ಭವ್ಯ, ಸಂಧ್ಯಾ, ನಟರಾಜ್, ದೀಪು ಕೆಂಪದೇವಮ್ಮ, ರತ್ನಮ್ಮ, ಗುರುಬಸವೇಗೌಡ, ಮುಕ್ತಾರ್ ಅಹ್ಮದ್, ಯೋಗೇಶ್, ಹರೀಶ್ ಇತರರು ಇದ್ದರು.



## ಜಿಲ್ಲಾಧಿಕಾರಿ ಯಶವಂತ್ ವಿ.ಗುರುಕರ್ ಮಾಹಿತಿ

# ಚನ್ನಪಟ್ಟಣ ಬೈ ಎಲೆಕ್ಷನ್‌ಗೆ ಸಜ್ಜು

**ರಾಮನಗರ:** ಚನ್ನಪಟ್ಟಣ ವಿಧಾನಸಭಾಕ್ಷೇತ್ರಕ್ಕೆ ಉಪಚುನಾವಣೆ ಘೋಷಣೆಯಾಗಿದ್ದು, ಈ ಉಪ ಚುನಾವಣೆಯನ್ನು ಮುಕ್ತ, ನ್ಯಾಯಸಮ್ಮತ, ಪಾರದರ್ಶಕವಾಗಿ ಮಾಡಲುಜಿಲ್ಲಾಡಳಿತ ಸಕಲ ರೀತಿಯಲ್ಲಿ ಸಜ್ಜುಗೊಂಡಿದೆಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ಯಶವಂತ್ ವಿ.ಗುರುಕರ್ ತಿಳಿಸಿದರು.

ಜಿಲ್ಲಾ ಪಂಚಾಯತ್‌ನ ಮಿನಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಅ. 18 ರಂದು ಚುನಾವಣೆಯ ಅಧಿಸೂಚನೆ ಪ್ರಕಟವಾಗಲಿದ್ದು,ಅ. 25 ನಾಮಪತ್ರ ಸಲ್ಲಿಸಲುಕೊನೆಯ ದಿನ. ಅ. 28 ರಂದು ನಾಮಪತ್ರ ಪರಿಶೀಲನೆ ನಡೆಯಲಿದೆ. ಅ. 30 ನಾಮಪತ್ರ ಹಿಂಪಡೆಯಲುಕೊನೆಯ ದಿನವಾಗಿದೆ.ನವೆಂಬರ್ 13ರಂದುಚುನಾವಣೆಗೆ ಮತದಾನನಡೆಯಲಿದೆ. ನವೆಂಬರ್ 23 ಮತಎಣಿಕೆಕಾರ್ಯ ನಡೆಯಲಿದ್ದು, ನವೆಂಬರ್ 25 ರಂದುಚುನಾವಣಾ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದು ತಿಳಿಸಿದರು.

ಚುನಾವಣೆ ಘೋಷಣೆಯಾದ ದಿನದಿಂದಲೇಜಿಲ್ಲೆಯಾದ್ಯಂತ ಮಾದರಿಚುನಾವಣಾ ನೀತಿ ಸಂಹಿತೆಜಾರಿಯಲ್ಲಿರುತ್ತದೆ.ರಾಮನಗರ ಉಪವಿಭಾಗಾಧಿಕಾರಿಗಳು ಚನ್ನಪಟ್ಟಣ ವಿಧಾನಸಭಾ ಕ್ಷೇತ್ರಕ್ಕೆಚುನಾವಣಾಧಿಕಾರಿಗಳಾಗಿರುತ್ತಾರೆ ಎಂದವರು ತಿಳಿಸಿದರು. ಚನ್ನಪಟ್ಟಣ ವಿಧಾನಸಭಾಕ್ಷೇತ್ರದಲ್ಲಿ 2,32,836 ಮತದಾರರಿದ್ದು, ಅವರಲ್ಲಿ1,12,271 ಪುರುಷ ಮತದಾರರು ಹಾಗೂ 1,20,557 ಮಹಿಳಾ ಮತದಾರರಿದ್ದಾರೆ.8ಜನತೃತೀಯ ಲಿಂಗಿ ಮತದಾರರಿದ್ದಾರೆ.85 ವರ್ಷಕ್ಕೂ ಮೇಲ್ಪಟ್ಟ1,613 ಮತದಾರರಿದ್ದು, ಅವರಲ್ಲಿ612 ಪುರುಷಮತದಾರರು ಹಾಗೂ 1,001ಮಹಿಳಾ ಮತದಾರರಿದ್ದಾರೆ.3,011 ಜನ ದಿವ್ಯಾಂಗ ಮತದಾರರಿದ್ದು,ಅವರಲ್ಲಿ 1,669 ಪುರುಷ ಮತದಾರರು ಹಾಗೂ 1,342 ಮಹಿಳಾ ಮತದಾರರಿದ್ದಾರೆ. 8,338 ಯುವ ಮತದಾರರಿದ್ದು, 4,268 ಪುರುಷಮತದಾರರು ಹಾಗೂ 4,069 ಮಹಿಳಾ ಮತದಾರರಿದ್ದಾರೆ.ಒಬ್ಬರುತೃತೀಯ ಲಿಂಗಿ ಮತದಾರರಿದ್ದಾರೆ.47 ಸೇವಾ ಮತದಾರರ ಪೈಕಿ 44 ಪುರುಷ ಮತದಾರರು ಹಾಗೂ 3 ಮಹಿಳಾ ಮತದಾರರಿದ್ದಾರೆ ಎಂದು ಮಾಹಿತಿ ನೀಡಿದರು. ಜಿಲ್ಲೆಯಾದ್ಯಂತಒಟ್ಟು 16 ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಲಾಗಿದ್ದು,ಅದರಲ್ಲಿಮಾಗಡಿ ವಿಧಾನಸಭಾ ಕ್ಷೇತ್ರದಲ್ಲಿ4, ರಾಮನಗರ ವಿಧಾನಸಭಾಕ್ಷೇತ್ರದಲ್ಲಿ2, ಕನಕಪುರ ವಿಧಾನಸಭಾ ಕ್ಷೇತ್ರದಲ್ಲಿ1 ಹಾಗೂ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ9 ಚೆಕ್‌ಪೋಸ್ಟ್ ಸ್ಥಾಪಿಸಲಾಗಿದೆ ಎಂದುತಿಳಿಸಿದರು.




ಚನ್ನಪಟ್ಟಣ ವಿಧಾನಸಭಾಕ್ಷೇತ್ರ ವ್ಯಾಪ್ತಿಯಲ್ಲಿ 276 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ.ಅದರಲ್ಲಿ62 ನಗರವ್ಯಾಪ್ತಿಯ ಪ್ರದೇಶದಲ್ಲಿ ಹಾಗೂ214 ಗ್ರಾಮಾಂತರ ಪ್ರದೇಶದಲ್ಲಿ ಸ್ಥಾಪಿಸಲಾಗಿದೆಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ನೇತೃತ್ವದಲ್ಲಿ ಸ್ವೀಪ್ ವತಿಯಿಂದವಿವಿಧ ಚಟುವಟಿಕೆಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಾರ್ತಿಕ್ ರೆಡ್ಡಿ ಮಾತನಾಡಿ, ಈ ಚುನಾವಣೆಯುಹೈ ವೋಲ್ಟೇಜ್ ಉಪ ಚುನಾವಣೆಯಾಗಿರುವುದರಿಂದ ಮುಂಜಾಗ್ರತ ಕ್ರಮವಾಗಿ 17 ಜನರನ್ನುಗಡಿಪಾರು ಮಾಡಿಆದೇಶ ಹೊರಡಿಸಲುಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ.ಅದರಲ್ಲಿ ಈಗಾಗಲೇ ಒಬ್ಬರನ್ನುಬೀದರ್‌ಗೆಗಡಿಪಾರು ಮಾಡಲಾಗಿದೆ ಎಂದರು.

ಜಿಲ್ಲೆಯಲ್ಲಿ ಶಸ್ತ್ರಾಸ್ತ್ರಗಳನ್ನು ಹೊಂದಿರುವವರು ಹಿಂತಿರುಗಿಸಬೇಕಿದ್ದು, ಇದಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿದ ಕೂಡಲೇ ಹಿಂಪಡೆಯಲಾಗುವುದು, ವಿವಿಧ ಬ್ಯಾಂಕ್ ಸೆಕ್ಯೂರಿಟಿ ಗಾರ್ಡ್‌ಗಳಲ್ಲಿರುವ ಶಸ್ತ್ರಾಸ್ತ್ರಗಳನ್ನು ಪಡೆದುಕೊಳ್ಳಲು ಜಿಲ್ಲಾಧಿಕಾರಿಗಳ ನೇತೃತ್ವದ ಸಮಿತಿಯಲ್ಲಿಇದಕ್ಕೆಅನುಮತಿ ಪಡೆಯಬೇಕಿದೆ ಎಂದು ತಿಳಿಸಿದರು. ಚುನಾವಣೆಮಾದರಿ ನೀತಿಸಂಹಿತೆ ಜಾರಿಯಲ್ಲಿರುವಈ ಅವಧಿಯಲ್ಲಿವ್ಯಕ್ತಿಯೊಬ್ಬರುಗರಿಷ್ಠ 50,000 ರೂ.ಗಳ ನಗದನ್ನು ಸಾಗಿಸಬಹುದಾಗಿದೆ.ಅದಕ್ಕೂ ಹೆಚ್ಚಿನ ಮೊತ್ತಕೊಂಡೊಯ್ಯಬೇಕಾದರೆಅಗತ್ಯ ದಾಖಲಾತಿಗಳನ್ನು ಹೊಂದಿರಬೇಕು.ಜಿಲ್ಲೆಯಲ್ಲಿ ಈಗಾಗಲೇ 10 ಪ್ಯಾರಾ ಮಿಲಿಟರಿ ಫೋರ್ಸ್ ನಿಯೋಜಿಸುವಂತೆ ಮನವಿಸಲ್ಲಿಸಲಾಗಿದ್ದು, 650 ಜನ ಪೊಲೀಸರನ್ನು ನಿಯೋಜಿಸಲಾಗಿದೆ ಎಂದರು. ಪತ್ರಿಕಾ ಗೋಷ್ಠಿಯಲ್ಲಿಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕಅಧಿಕಾರಿ ದಿಗ್ವಿಜಯ್ ಬೋಡ್ಕೆ, ಅಪರಜಿಲ್ಲಾಧಿಕಾರಿಆರ್.ಚಂದ್ರಯ್ಯ ಉಪಸ್ಥಿತರಿದ್ದರು.

# ಪಲ್ಲಕ್ಕಿಯಲ್ಲಿ ದೇವರ ಮೆರವಣಿಗೆ

**ಮಾಲೂರು:** ವಾಲ್ಮೀಕಿ ಮಹರ್ಷಿ ಶ್ರೇಷ್ಠ ಕವಿಗಳಲ್ಲಿ ಒಬ್ಬರು. ರಾಮಾಯಣದಂತಹ ಮಹಾಕಾವ್ಯವನ್ನು ರಚಿಸಿದವರು. ರಾಮಾಯಣ ಬರೆದದ್ದು ಕೂಡ ಮಹರ್ಷಿ ವಾಲ್ಮೀಕಿ. ಆದುದರಿಂದ ಇದನ್ನು ವಾಲ್ಮೀಕಿ ರಾಮಾಯಣ ಎಂದು ಕರೆಯಲಾಗುತ್ತದೆ. ವಾಲ್ಮೀಕಿ ಜಯಂತಿಯನ್ನು ವಾಲ್ಮೀಕಿಯವರ ಜನ್ಮದಿನವನ್ನಾಗಿ ಆಚರಿಸಲಾಗುತ್ತದೆ.

ಮಾಲೂರು ತಾಲ್ಲೂಕಿನ ತೊರ್ನಹಳ್ಳಿ ಗ್ರಾಮದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯ ಕಾರ್ಯಕ್ರಮದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ, ಸುಗ್ಗಲಮ್ಮ ದೇವಿ, ಆಂಜನೇಯ ಸ್ವಾಮಿ, ಭೀಮೇಶ್ವರ ಸ್ವಾಮಿ, ಮುನೇಶ್ವರ ಸ್ವಾಮಿ, ದೊಡ್ಡಮ್ಮ ದೇವಿ, ಸಪ್ಪಲಮ್ಮ ದೇವಿ, ಧರ್ಮರಾಯ ಸ್ವಾಮಿ, ಲಗುಮಮ್ಮ ದೇವರುಗಳ ಬೆಳ್ಳಿ ಪಲ್ಲಕ್ಕಿಗಳ ಮೆರವಣಿಗೆ ಅದ್ದೂರಿಯಾಗಿ ನಡೆಯಿತು. ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲರಿಗೂ ಪ್ರಸಾದ, ಹಾಗೂ ಸಿಹಿಯನ್ನು ನೀಡಲಾಯಿತು. ಕಾರ್ಯಕ್ರಮದಲ್ಲಿ ವಾದ್ಯಗೋಷ್ಠಿನೋಡುಗರಕಣ್ಮನಸೆಳೆಯಿತು. ಶ್ರೀ ವಾಲ್ಮೀಕಿ ಮಹರ್ಷಿಗಳು ಜಗತ್ತಿನಲ್ಲಿ ಸತ್ವಯುತವಾದ ಮತ್ತು ಮೌಲ್ಯಯುತವಾದ ಸಾಹಿತ್ಯ ಸೃಷ್ಟಿಗೆ ಪ್ರೇರಣೆಯಾಗಿದ್ದಾರೆ. ಅಲ್ಲದೆ ಅವರ ಆದರ್ಶಗಳು ನಮಗೆ ದಾರಿದೀಪಯಿದ್ದಂತೆ ಎಂದು ತೊರ್ನಹಳ್ಳಿಯ ಶ್ರೀ ವಾಲ್ಮೀಕಿ ನಾಯಕ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ತಿಳಿಸಿದರು. ಈ ಕಾರ್ಯಕ್ರಮದಲ್ಲಿ ತೊರ್ನಹಳ್ಳಿಯ ಶ್ರೀ ವಾಲ್ಮೀಕಿ ನಾಯಕ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು, ತೊರ್ನಹಳ್ಳಿ, ಬೈರನಹಳ್ಳಿ, ಸೊಣ್ಣನಾಯಕನಹಳ್ಳಿ ಗ್ರಾಮಸ್ಥರು ಹಾಗೂ ಊರಿನ ಕಿರಿಯರು, ಹಿರಿಯರು ಉಪಸ್ಥಿತರಿದ್ದರು.



# ಮಾನವ ಕಳ್ಳ ಸಾಗಾಣಿಕೆಯ ಬಗ್ಗೆ ಅರಿವು

**ವಿಜಯಪುರ:** ಅಕ್ಟೋಬರ್ 19ರಂದು ಮಾನವ ಕಳ್ಳ ಸಾಗಾಣಿಕೆಯ ಬಗ್ಗೆ ಅರಿವು ಮೂಡಿಸುವ ಮೌನ ನಡಿಗೆ ಆಯೋಜಿಸಲಾದೆ ಎಂದು ರಾಜ್ಯ ರಾಷ್ಟ್ರೀಯ ಯುವ ಯೋಜನೆಯ ರಾಜ್ಯ ಸಂಯೋಜಕ ಡಾ.ವಿ.ಪ್ರಶಾಂತ ತಿಳಿಸಿದರು.

ನಾಗಾರ್ಜುನ ಕಾಲೇಜ್ ಆವರಣದಲ್ಲಿ, ಮಾನವ ಕಳ್ಳ ಸಾಗಾಣಿಕೆಯ ಕುರಿತು ಜನರಲ್ಲಿ ಅರಿವು ಮೂಡಿಸುವ ಮೌನ ಮೆರವಣಿಗೆಯ ಪೂರ್ವಭಾವಿ ಸಭೆಯಲ್ಲಿ, ದಿ ಮೊಮೆಂಟ್ ಇಂಡಿಯಾ, ಕರ್ನಾಟಕ ವಲಯ ರಾಷ್ಟ್ರೀಯ ಯುವ ಯೋಜನೆ, ಚಿಕ್ಕಮರಳಿಯ ನಾಗಾರ್ಜುನ ಕಾಲೇಜ್ ಆಫ್ ಮ್ಯಾನೇಜ್ಮೆಂಟ್ ಸ್ಟಡೀಸ್ ನ ರಾಷ್ಟ್ರೀಯ ಸೇವಾ ಯೋಜನೆ ಘಟಕ, ಜಂಗಮಕೋಟೆಯ ಬಾಲಾಜಿ ವಿದ್ಯಾನಿಕೇತನ ಮತ್ತು ಗ್ರಾಮ ಜ್ಯೋತಿ ಸೊಸೈಟಿ ಮದನಪಲ್ಲಿ ಅವರ ಸಹಯೋಗದೊಂದಿಗೆ ಅಕ್ಟೋಬರ್ 19 ಶನಿವಾರ ದಂದು ಮಾನವ ಕಳ್ಳ ಸಾಗಾಣಿಕೆಯ ಕುರಿತು ಜನರಲ್ಲಿ ಅರಿವು ಮೂಡಿಸುವ ಮೌನ ಮೆರವಣಿಗೆಯನ್ನು ಮೇಲ್ಕಂಡ ಸಂಸ್ಥೆಗಳ ಆಶ್ರಯದಲ್ಲಿ ಬೆಂಗಳೂರು ಗ್ರಾಮಾಂತರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆ ಗಳಲ್ಲಿ ಮೇಲ್ಕಂಡ ಸಂಸ್ಥೆಗಳ ಸಂಯುಕ್ತಾ ಶ್ರಯದಲ್ಲಿ ಆಯೋಜಿಸಲಾಗಿದೆ ಎಂದರು. ಇವರು ಸುದ್ದಿಗಾದೊಂದಿಗೆ ಮಾತನಾಡಿ ನಾಳೆ ಭಾರತ ದೇಶಾದ್ಯಂತ ವಿವಿಧ ರಾಜ್ಯಗಳ ಜಿಲ್ಲೆಗಳಲ್ಲಿ ಸರಿ ಸುಮಾರು ವಿಭಿನ್ನ 110 ಸ್ಥಳಗಳಲ್ಲಿ ಹಾಗೂ ಒಂದೇ ಸಮಯದಲ್ಲಿ ಮಾನವ ಕಳ್ಳ ಸಾಗಾಣಿಕೆಯ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಮೌನ ನಡಿಗೆಯನ್ನು ಆಯೋಜಿಸಲಾಗಿದ್ದು ಈ ಮೌನ ನಡೆಗೆಯ ಉದ್ದೇಶ




ಮಾನವ ಕಳ್ಳ ಸಾಗಾಣಿಕೆಯ ನಿರ್ಮೂಲನೆ ಅಂದರೆ ಮಕ್ಕಳನ್ನು ಅಪಹರಿಸಿ ಭಿಕ್ಷಾಟನೆ ಹಾಗೂ ಇತರೆ ಕೆಲಸಗಳಲ್ಲಿ ತೊಡಗಿಸಿ ಕೊಳ್ಳುವುದು, ಮಾನವರನ್ನು ಹಾಗೂ ಹಿರಿಯ ನಾಗರೀಕರನ್ನು ಅಪಹರಿಸಿ ಅವರ ಅಂಗಾಂಗಗಳನ್ನು ಪಡೆದುಕೊಳ್ಳುವುದು ಹಾಗೂ ಹೆಣ್ಣು ಮಕ್ಕಳ ಅಪಹರಣದ ಬಗ್ಗೆ ವಿಶೇಷ ಜನಜಾಗೃತಿ ಮೂಡಿಸುವ ಬಿತ್ತಿ ಪತ್ರದ ಈ ಮೌನ ಮೆರವಣಿಗೆಯಾಗಿದೆ ಹಾಗೂ ಯಾಗಿದ್ದು ತಮ್ಮ ಬಳಿ ಅಪರಿಚಿತ ಯಾರಾದರೂ ಅನುಮಾನದ ವ್ಯಕ್ತಿಗಳು ಕಂಡು ಬಂದಲ್ಲಿ ಟೋಲ್ ಫ್ರೀ ಸಂಖ್ಯೆ 100 ಅಥವಾ ಚೈಲ್ಡ್‌ಲೈನ್ ಸಂಖ್ಯೆ 1098ಗೆ ತಕ್ಷಣವೇ ತಿಳಿಸುವ ಕುರಿತು ಜನ ಜಾಗೃತಿ ಮೂಡಿಸಲಾಗುವುದು ಎಂದರು. ಈ ಮೌನ ನಡಿಗೆ ಯ ಜಿಲ್ಲಾ ಸಹಾಯಕ ಸ್ವಯಂಸೇವಕರಾಗಿ ನಾಗಾರ್ಜುನ ಕಾಲೇಜ್ ಆಫ್ ಮ್ಯಾನೇಜ್ಮೆಂಟ್ ಸ್ಟಡೀಸ್ ನ ರಾಷ್ಟ್ರೀಯ ಸೇವಾ ಯೋಜನೆಯ ಎನ್.ಎಸ್.ಎಸ್ ಸ್ವಯಂ ಸೇವಕರಾದ ಆರ್.ಬಿ ಮುನೇಗೌಡ, ಡಿ.ಯಶ್ವಂತ್, ಪಿ.ನಂದನ್,ಎಂ. ನಿತಿನ್, ಹೆಚ್.ವಿ.ಲಿಖಿತ್ ಕುಮಾರ್ ಹಾಗೂ ಹೆಚ್.ಆರ್. ನಿತಿನ್ ಕುಮಾರ್ ಇವರನ್ನು ಆಯ್ಕೆ ಮಾಡಿ ತರಬೇತಿ ನೀಡಲಾಯಿತು. ಈ ಮೌನ ನಡಿಗೆಯ ಉದ್ಘಾಟನೆಯನ್ನು ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರಾದ ಡಾ.ಎನ್. ಆನಂದಮ್ಮ ಉದ್ಘಾಟಿಸಲಿದ್ದು ಕಾರ್ಯಕ್ರಮದ ಉಪಸ್ಥಿತಿಯಲ್ಲಿ ನಾಗಾರ್ಜುನ ಕಾಲೇಜ್ ಆಫ್ ಮ್ಯಾನೇಜ್ಮೆಂಟ್ ಸ್ಟಡೀಸ್ ನ ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥೆ ಕುಸುಮ, ವಿಜ್ಞಾನ ವಿಭಾಗದ ಮುಖ್ಯಸ್ಥೆ ವಿದ್ಯಾ ಶ್ರೀ,ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮಾಧಿಕಾರಿ ವಿ.ವಿಶ್ವಾಸ್, ಜಂಗಮಕೋಟೆಯ ಬಾಲಾಜಿ ವಿದ್ಯಾನಿಕೇತನ ದ ಅಧ್ಯಕ್ಷ ಎಂ ಮುನಿರಾಜು, ಆಡಳಿತಾಧಿಕಾರಿ ಪ್ರಭ ಪ್ರಶಾಂತ್, ಮುಖ್ಯ ಶಿಕ್ಷಕರಾದ ಮಾಲ,ಹರೀಶ್, ಸಹ ಶಿಕ್ಷಕಿ ಪುಷ್ಪ, ರಾಷ್ಟ್ರೀಯ ಯುವ ಯೋಜನೆಯ ರಾಜ್ಯ ಸಂಯೋಜಕ ಡಾ.ವಿ. ಪ್ರಶಾಂತ, ಬೆಂಗಳೂರಿನ ಕರ್ನಾಟಕ ರಾಜ್ಯ ಮಡಿವಾಳರ ಸಂಘದ ರಾಜ್ಯ ನಿರ್ದೇಶಕ ಬಿಜ್ಜವಾದ ಬಿ.ಕೆ.ಮಧು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

## ಇಂದು ವಿದ್ಯುತ್ ವ್ಯತ್ಯಯ

**ಮಂಡ್ಯ:** 66/11 ಕೆ.ವಿ. ಮಂಡ್ಯ ವಿದ್ಯುತ್ ವಿತರಣಾಕೇಂದ್ರದಿಂದ ಹೊರಡುವಎಫ್-6 ಹೊಸಹಳ್ಳಿ ಗಡಿಘಟಿಟಿ ಫೀಡರ್ ನಲ್ಲಿಅಕ್ಟೋಬರ್ 19ರಂದುತುರ್ತುಕಾರ್ಯನಿರ್ವಹಣೆ ಕೆಲಸ ಹಮ್ಮಿಕೊಳ್ಳಲಾಗಿದೆ. ಅಕ್ಟೋಬರ್ 19ರಂದು ಬೆಳಿಗ್ಗೆ 9-00 ರಿಂದ ಸಂಜೆ 5-00 ಗಂಟೆಯವರೆಗೆನಗರ ಪ್ರದೇಶಗಳಾದ ಸುಭಾಷ್‌ನಗರ, ಆಶೋಕ ನಗರ, ವಿದ್ಯಾನಗರ, ವಿ.ವಿ. ರೋಡ್, ಹೊಸಹಳ್ಳಿ, ವಿನಾಯಕ ಬಡಾವಣೆ, ನೂರು ಅಡಿ ರೋಡ್, ನೆಹರು ನಗರ, ಹಾಲಹಳ್ಳಿ, ಹೌಸಿಂಗ್ ಬೋರ್ಡ್ 1 2 ಹಂತ, ದ್ವಾರಕನಗರ, ಗಾಂಧಿನಗರ, NGO'S layout, ಶ್ರೀ ರಾಮ ನಗರ, ಕಾವೇರಿ ನಗರ 1 2 ನೇ ಹಂತ, ಚಂದ್ರದರ್ಶನ, ಚಾಮುಂಡೇಶ್ವರಿ ನಗರ, ಅನ್ನಪೂರ್ಣೇಶ್ವರಿ ನಗರಎರಡನೇ ಹಂತ, ಶಂಕರನಗರ, ಕ್ಯಾತುಂಗೆರೆ ಬಡಾವಣೆ , ಶಂಕರಪ್ಪ ಬಡಾವಣೆ, ಮಿಮ್ಸ್‌ಆಸ್ಪತ್ರೆ ಹಾಗೂ ಗ್ರಾಮಾಂತರ ಪ್ರದೇಶಗಳಾದ ಕಾರಸವಾಡಿ, ಮಂಗಲ, ಹನಿಯಂಬಾಡಿ, ಚೀರನಹಳ್ಳಿ, ಹೆಬ್ಬಕವಾಡಿ, ಕೊತ್ತತ್ತಿ, ಮೊತ್ತಹಳ್ಳಿ, ಬೇವಿನಹಳ್ಳಿ, ಹುಲ್ಲುಕೆರೆ, ಎ. ಹುಲಿಕೆರೆ, ಬಿ.ಹುಲಿಕೆರೆ. ಮತ್ತು ಐ.ಪಿ ಮಾರ್ಗಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ ್ಯತ್ಯಯವಾಗಲಿದೆಎಂದುಮಂಡ್ಯಸೆಸ್ಕ್, ಕಾ ಮತ್ತು ಪಾ ಮಂಡ್ಯ ವಿಭಾಗದಕಾರ್ಯ ನಿರ್ವಾಹಕಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನ್ಯಾಷನಲ್ ಇ ಸ್ಕಾಲರ್‌ಶೀಪ್ ಯೋಜನೆಯಡಿ ಅರ್ಜಿಆಹ್ವಾನ

**ಮಂಡ್ಯ:** ಸಾಮಾಜಿಕ ನ್ಯಾಯ ಸಚಿವಾಲಯ ಮತ್ತು ವಿಕಲಾಂಗ ವ್ಯಕ್ತಿಗಳ ಸಬಲೀಕರಣ ಇಲಾಖೆ ವತಿಯಿಂದ 2024-25 ನೇ ಸಾಲಿಗೆ ನ್ಯಾಷನಲ್ ಇ ಸ್ಕಾಲರ್‌ಶೀಪ್ ಯೋಜನೆಯಡಿ ವಿಕಲಚೇತನ ವಿದ್ಯಾರ್ಥಿಗಳು ಸ್ಕಾಲರ್‌ಶೀಪ್ ಪಡೆಯಲುಆನ್‌ಲೈನ್ ಮೂಲಕ ಅರ್ಜಿಆಹ್ವಾನಿಸಲಾಗಿದೆ. ಅರ್ಹ ವಿಕಲಚೇತನಪ್ರೀ ಮೆಟ್ರಿಕ್, ಪೋಸ್ಟ್ ಮೆಟ್ರಿಕ್ ಹಾಗೂ ಟಾಪ್‌ಕ್ಲಾಸ್ ವಿದ್ಯಾರ್ಥಿಗಳುಅರ್ಜಿ ಸಲ್ಲಿಸಲುಅಕ್ಟೋಬರ್31 ಕೊನೆಯ ದಿನಾಂಕವಾಗಿದ್ದು,ಆನ್ ಲೈನ್ ವೆಬ್ ಸೈಟ್https://scholarship.gov.in/ ಮೂಲಕ ಅರ್ಜಿ ಸಲ್ಲಿಸಬಹುದಾಗಿರುತ್ತದೆ.ಹೆಚ್ಚಿನ ವಿಕಲಚೇತನರ ವಿದ್ಯಾರ್ಥಿಗಳು NSP (National Scholarship Portal) ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿಎಲ್ಲಾ ಶಾಲಾ ಕಾಲೇಜುಗಳ ಮುಖ್ಯಸ್ಥರುಗಳನ್ನು ಸಂಪರ್ಕಿಸುವುದುಎಂದುಮಂಡ್ಯಜಿಲ್ಲಾಅಂಗವಿಕಲರ ಹಾಗೂ ಹಿರಿಯನಾಗರೀಕರಕಲ್ಯಾಣಾಧಿಕಾರಿಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿಆಹ್ವಾನ

**ಮಂಡ್ಯ:** ಪೋಕ್ಸೋಕಾಯ್ದೆಯಡಿ ಸಂತ್ರಸ್ಥ ಮಕ್ಕಳಿಗೆ ಬೆಂಬಲ ವ್ಯಕ್ತಿಗಳಾಗಿ ಸೇವೆ ಸಲ್ಲಿಸಲುಅರ್ಹ ಅಭ್ಯರ್ಥಿಗಳಿಂದ ಅರ್ಜಿಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ಮಕ್ಕಳೊಂದಿಗೆ ಕೆಲಸ ಮಾಡುವಲ್ಲಿ ಕನಿಷ್ಠ ಮೂರು ವರ್ಷಗಳ ಅನುಭವದೊಂದಿಗೆ ಸಮಾಜಕಾರ್ಯ ವಿಷಯದಲ್ಲಿ ಪದವಿಯನ್ನು ಹೊಂದಿರಬೇಕು ಮಕ್ಕಳ ಆರೈಕೆಕೇಂದ್ರದಲ್ಲಿ ಮಕ್ಕಳೊಂದಿಗೆ ಕೆಲಸ ಮಾಡುವ ಅಧಿಕಾರಿಗಳು ಮತ್ತು ಮಕ್ಕಳ ಹಕ್ಕುಗಳ ಕ್ಷೇತ್ರದಲ್ಲಿ ಕೆಲಸ ಮಾಡುವಯಾವುದೇ ಸಂಸ್ಥೆ ಕೂಡಅರ್ಜಿ ಸಲ್ಲಿಸಬಹುದು. ಪ್ರತಿ ಪ್ರಕರಣಕ್ಕೆ ರೂ.3000/-ಗಳ ಸಂಭಾವನೆ ನಿಗದಿ ಪಡಿಸಲಾಗಿದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಕ್ಷೇತ್ರಕಾರ್ಯ ಮಾಡಲು ಮತ್ತುಅಪರಾಧ ನ್ಯಾಯ ವ್ಯವಸ್ಥೆ ಮೂಲಕ ಮಕ್ಕಳ ಮತ್ತುಅವರ ಕುಟುಂಬಗಳಿಗೆ ಸಹಾಯ ಮಾಡಲುತರಬೇತಿ ನೀಡಲಾಗುತ್ತದೆ. ಆಸಕ್ತ ಅಭ್ಯರ್ಥಿಗಳು ಅರ್ಜಿ ನಮೂನೆಯನ್ನುಮಂಡ್ಯಜಿಲ್ಲಾ ಮಕ್ಕಳ ರಕ್ಷಣಾಘಟಕಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಿಂದ ಪಡೆದುಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿದಅರ್ಜಿಯನ್ನುಅಕ್ಟೋಬರ್ 23 ರೊಳಗೆ ಮಂಡ್ಯಜಿಲ್ಲಾ ಮಕ್ಕಳ ರಕ್ಷಣಾಘಟಕಕ್ಕೆ ಸಲ್ಲಿಸುವುದುಎಂದುಮಂಡ್ಯಜಿಲ್ಲಾ ಮಕ್ಕಳ ರಕ್ಷಣಾಘಟಕದಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಸಲ್ಲಿಕೆಅವಧಿ ವಿಸ್ತರಣೆ

**ಮಂಡ್ಯ:** ಮೆಟ್ರಿಕ್ ನಂತರದ ಕೋರ್ಸ್‌ಗಳಾದ ಸ್ನಾತಕೋತ್ತರ ಪದವಿ, ವೃತ್ತಿಪರ ಪದವಿ ಮತ್ತು ವೃತ್ತಿಪರ ಸ್ನಾತಕೋತ್ತರ ಪದವಿಗಳಿಗೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ - 1 ರಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ 2024-25ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣಇಲಾಖೆಯ ಮೂಲಕ ನೀಡಲಾಗುತ್ತಿರುವ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ ಮತ್ತು ವಿದ್ಯಾಸಿರಿ(ಊಟ ಮತ್ತು ವಸತಿ ಸಹಾಯಯೋಜನೆ) ಸೌಲಭ್ಯಕ್ಕಾಗಿಆನ್‌ಲೈನ್ ಮೂಲಕ ಅರ್ಜಿಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲುಅಂತಿಮದಿನಾಂಕವನ್ನುನವೆಂಬರ್ 30ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ.8050770005 ನ್ನು ಸಂಪರ್ಕಿಸಬಹುದಾಗಿದೆಎಂದು ಮಂಡ್ಯತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಇಲಾಖೆಯತಾಲ್ಲೂಕು ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ಬೆಂಗಳೂರಿನಲ್ಲಿ ಉದ್ಯೋಗ ಮೇಳ

**ರಾಮನಗರ:** ಭಾರತ ಸರ್ಕಾರದಅಧೀನದಲ್ಲಿ ಬರುವಎನ್ ಐಇಎಲ್‌ಐಟಿ, ಕಾರ್ಮಿಕ ಮತ್ತುಉದ್ಯೋಗ ಮಂತ್ರಾಲಯದ ನ್ಯಾಷನಲ್‌ಕೆರಿಯರ್ ಸರ್ವಿಸ್ (ಎನ್‌ಸಿಎಸ್), ಕೌಶಲ್ಯಾಭಿವೃದ್ಧಿ ಇಲಾಖೆ ಹಾಗೂ ನಿಗಮ, ಕೈಗಾರಿಕಾತರಬೇತಿ ಮತ್ತುಉದ್ಯೋಗ ಇಲಾಖೆಗಳ ಸಹಕಾರದೊಂದಿಗೆಬೆಂಗಳೂರು ನಗರಜಿಲ್ಲೆಯರಾಜಾಜಿನಗರದ2ನೇ ಬ್ಲಾಕ್‌ನ28ನೇ ಕ್ರಾಸ್‌ನಲ್ಲಿರುವಕೆ.ಎಲ್.ಇ ಸಂಸ್ಥೆಯಎಸ್. ನಿಜಲಿಂಗಪ್ಪ ಮಹಾವಿದ್ಯಾಲಯದಲ್ಲಿಇದೇ ಅ. 20ರಂದುಉದ್ಯೋಗ ಮೇಳ ಆಯೋಜಿಸಲಾಗಿದೆ. ಉದ್ಯೋಗ ಮೇಳದಲ್ಲಿ ರಾಜ್ಯದವಿವಿಧಭಾಗಗಳಿಂದ ಹೆಚ್ಚು ಉದ್ಯೋಗಾಕಾಂಕ್ಷಿಗಳು ಮತ್ತುರಾಜ್ಯದಎಲ್ಲಾ ವಲಯಗಳಿಂದ 100ಕ್ಕೂ ಹೆಚ್ಚಿನ ಪ್ರತಿಷ್ಠಿತಬೃಹತ್, ಮಧ್ಯಮ, ಸಣ್ಣಉದ್ಯೋಗದಾತರ ಸಂಸ್ಥೆಗಳು ಭಾಗವಹಿಸಲಿದ್ದು, ಜಿಲ್ಲೆಯ ಉದ್ಯೋಗಾಕಾಂಕ್ಷಿಗಳು ಜಾಲತಾಣ https://jobfair.calicut.nielit.in ಮೂಲಕ ನೋಂದಾಯಿಸಿಕೊಂಡು ಉದ್ಯೋಗ ಮೇಳದಲ್ಲಿ ಭಾಗವಹಿಸುವಂತೆಜಿಲ್ಲಾಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿತಿಳಿಸಿದ್ದಾರೆ.

# ಪದವಿ ವಿದ್ಯಾರ್ಥಿಗಳಿಗಾಗಿ ಉಚಿತವಾಗಿ ಕಂಪ್ಯೂಟರ್ ಕಲಿಕೆ

**ಹುಳಿಯಾರು:** ಹುಳಿಯಾರು-ಕೆಂಕೆರೆ ಬಿಎಂಎಸ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಐಕ್ಯೂಎ.ಸಿ ಹಾಗೂ ಪ್ಲೇಸ್ಮೆಂಟ್ ಸೆಲ್ ವತಿಯಿಂದ ವಿದ್ಯಾರ್ಥಿಗಳಿಗಾಗಿ ಉಚಿತವಾಗಿ ಕಂಪ್ಯೂಟರ್ ಸಾಕ್ಷರತಾ ಕಲಿಕೆ ಕಾರ್ಯಕ್ರಮಕೆ ಚಾಲನೆ ಕೊಡಲಾಯಿತು.

ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ವೀರಣ್ಣ ಎಸ್.ಸಿ ರವರು ಮಾತನಾಡುತ್ತಾ ದೈನಂದಿನ ಜೀವನದಲ್ಲಿ ಕಂಪ್ಯೂಟರ್ ಕಲಿಕೆ ಮಹತ್ವಪೂರ್ಣ ಪಾತ್ರ ವಹಿಸಿದ್ದು ಬದುಕಿನ ಸರಳತೆಗಾಗಿ ಕಂಪ್ಯೂಟರ್ ಶಿಕ್ಷಣ ಅನಿವಾರ್ಯ. ಜಾಗತಿಕ ಕಾಲಘಟ್ಟದಲ್ಲಿ ಕಂಪ್ಯೂಟರ್ ಶಿಕ್ಷಣ ಸಾರ್ವತ್ರಿಕ ವಿಷಯವಾಗಿದೆ. ವಿದ್ಯಾರ್ಥಿಗಳು ಇರುವುದರಲ್ಲಿಯೇ ತೃಪ್ತಿಪಟ್ಟುಕೊಂಡು ಜೀವನ ಮತ್ತು ವಿದ್ಯಾಭ್ಯಾಸ ಸಾಗಿಸಬೇಕು. ಭವಿಷ್ಯದ ನಿರ್ಮಾಣಕ್ಕೆ ಕಂಪ್ಯೂಟರ್ ಕಲಿಕೆ ಸಾಧನವಾಗಿದೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಆ ಸಾಧನೆಗೆ ಮುಂದಾಗಬೇಕು ಎಂದು ಹೇಳಿದರು.

ಪ್ಲೇಸ್ಮೆಂಟ್ ಸೆಲ್ ಸಂಯೋಜಕರಾದ ಡಾ.ಸುಷ್ಮಾ ಎಲ್ ಬಿರಾದರ್ ಮಾತನಾಡುತ್ತಾ ಕಂಪ್ಯೂಟರ್ ಜ್ಞಾನ ಇರದಿದ್ದರೆ ಯಾವುದೇ ಪದವಿ ಪರಿಪೂರ್ಣವಾಗಲಾರದು ಎಂದರು. ಐಕ್ಯೂಎಸಿ ಸಂಚಾಲಕರಾದ ಪ್ರೊ. ಮಂಜುನಾಥ್ ಕೆ.ಎಸ್ ಮಾತನಾಡುತ್ತಾ ಕಂಪ್ಯೂಟರ್ ಶಿಕ್ಷಣದಿಂದ ವಿದ್ಯಾರ್ಥಿಗಳು ಹಣಕಾಸಿನ ಮಿತ




ವ್ಯಯ ಸಾಧಿಸಬಹುದು. ಜೀವನಕ್ಕೆ ಬೇಕಾದ ಅಗತ್ಯ ಕೌಶಲ್ಯವನ್ನು ಕಂಪ್ಯೂಟರ್ ಜ್ಞಾನ ಕಲಿಸಬಲ್ಲದು ಎಂದರು.

ವಿಷಯದ ಸಂಪನ್ಮೂಲ ವ್ಯಕ್ತಿಗಳಾದ ತಿಪ್ಪೇಸ್ವಾಮಿ ಎಂ.ಕೆ ಮಾತನಾಡುತ್ತಾ ಇಪ್ಪತ್ತನೇ ಶತಮಾನದ ಕಾಲಘಟ್ಟವು ಡಿಜಿಟಲ್ ಯುಗ ಹಾಗೂ ಸ್ಪರ್ಧಾತ್ಮಕ ಯುಗವಾಗಿದ್ದು ವಿದ್ಯಾರ್ಥಿಗಳು ನೀವು ವಿದ್ಯಾರ್ಥಿಗಳು ಮಾತ್ರವಲ್ಲ ಸ್ಪರ್ಧಾರ್ಥಿಗಳು ಕೂಡ ಹೌದು. ಕಂಪ್ಯೂಟರ್ ಕಲಿಕೆಯಿಂದ ನೀವಿರುವ ಜಾಗದಲ್ಲೇ ಉದ್ಯೋಗವನ್ನ ಗಿಟ್ಟಿಸಿಕೊಳ್ಳಬಹುದು. ನಮ್ಮ ಕಾಲೇಜಿನಲ್ಲಿ ವಿನೂತನ ಕಾರ್ಯಕ್ರಮ ಇದಾಗಿದ್ದು ಯಶಸ್ವಿ ಬದುಕಿಗೆ ಕಂಪ್ಯೂಟರ್ ಶಿಕ್ಷಣ ಊರುಗೋಲಾಗಿ ನಿಲ್ಲಬಲ್ಲದು. ಕಂಪ್ಯೂಟರ್ ಶಿಕ್ಷಣ ಬಹು ಆಯಾಮತೆಯನ್ನು ಪಡೆದುಕೊಂಡಿದ್ದು ಇದರ ಕಲಿಕೆ ಅನಿವಾರ್ಯ ಎಂದರು. ಕಾಲೇಜಿನ ದೈಹಿಕ ಶಿಕ್ಷಣ ನಿರ್ದೇಶಕರಾದ ಪ್ರೊ.ಯೋಗೇಶ್ ರವರು ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಕಲಿಕೆ ಜೀವನದ ಒಂದು ಕೌಶಲ್ಯವಾಗಿದ್ದು ಇದನ್ನು ದಾಟಿ ಕೊಂಡೆ ಮುಂದೆ ಸಾಗಬೇಕು. ವಿದ್ಯಾರ್ಥಿಗಳಿಗೆ ಇದೊಂದು ವರದಾನ ಇದ್ದಂತೆ ಸಮರ್ಪಕವಾಗಿ ಸದುಪಯೋಗಪಡಿಸಿಕೊಳ್ಳಿ ಎಂದು ಹಾರೈಸಿದರು. ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಡಾ.ಮೋಹನ್ ಮಿರ್ಲೆ ಮಾತನಾಡುತ್ತಾ ಕಂಪ್ಯೂಟರ್ ಕಲಿಯದ ವ್ಯಕ್ತಿ ಅನಕ್ಷರಸ್ಥನಿಗೆ ಸಮ. ಹಾಗಾಗಿ ಕಂಪ್ಯೂಟರ್ ಕಲಿಕೆ ಜೀವನದ ಅವಿಭಾಜ್ಯ ಅಂಗವಾಗಿದೆ ಎಂದರು. ಈ ಕಾರ್ಯಕ್ರಮವನ್ನು ದ್ವಿತೀಯ ಬಿಎ ವಿದ್ಯಾರ್ಥಿನಿ ರಾಜೇಶ್ವರಿ ಎಂ.ಬಿ ನಿರೂಪಿಸಿ ಭಾವನಾ ಟಿ ಸ್ವಾಗತಿಸಿದರು. ವರಲಕ್ಷ್ಮಿ ಪ್ರಾರ್ಥನೆಯ ಮೂಲಕ ಶುಭ ಹಾರೈಸಿದರು.

# ಭಾರತೀಯ ಪರಂಪರೆಯ ದಿವ್ಯ ಶಕ್ತಿ ಮಹರ್ಷಿ ವಾಲ್ಮೀಕಿ

**ಚಾಮರಾಜನಗರ:** ಭಾರತೀಯ ಸಾಹಿತ್ಯ ,ಸಂಸ್ಕೃತಿ ,ಪರಂಪರೆಯ ದಿವ್ಯ ಶಕ್ತಿ ಮಹರ್ಷಿ ವಾಲ್ಮೀಕಿ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು, ರಾಷ್ಟ್ರ ಯುವ ಪ್ರಶಸ್ತಿ ಪುರಸ್ಕೃತ ಸುರೇಶ್ ಎನ್ ಋಗ್ವೇದಿ ತಿಳಿಸಿದರು.

ಅವರು ಕನ್ನಡ ಸಾಹಿತ್ಯ ಪರಿಷತ್ತಿನ ಸಭಾಂಗಣದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಹಮ್ಮಿಕೊಂಡಿದ್ದ ಮಹರ್ಷಿ ವಾಲ್ಮೀಕಿ ಜನ್ಮದಿನದ ಅಧ್ಯಕ್ಷತೆ ವಹಿಸಿ ಮಾತನಾಡುತ್ತ ವಾಲ್ಮೀಕಿ ರಾಮಾಯಣವು ಇಡೀ ವಿಶ್ವದ ಮಾನವನ ದಿವ್ಯ ಗ್ರಂಥವಾಗಿದೆ. ರಾಮಾಯಣವು ಮಾನವನ ಶ್ರೇಷ್ಠ ಜೀವನಕ್ಕೆ ಅಗತ್ಯವಾದ ಎಲ್ಲ ಸಂದೇಶಗಳನ್ನು, ಚಿಂತನೆಗಳನ್ನು ,ಮೌಲ್ಯಗಳನ್ನು, ನೀಡಿರುವ ಮಹಾಕಾವ್ಯವಾಗಿದೆ. ಅದನ್ನು ಅಧ್ಯಯನ ಮಾಡುವ ಸಮಗ್ರವಾಗಿ ತಿಳಿಯುವ ಮೂಲಕ ಮಾನವ ಜನ್ಮವನ್ನು ಸಾರ್ಥಕ ಪಡಿಸಿಕೊಳ್ಳಬಹುದು. ರಾಮಾಯಣ ಗ್ರಂಥವನ್ನು ಮನೆಮನೆಗಳಿಗೆ ತಲುಪಿಸುವ ಕಾರ್ಯವನ್ನು ಸಾಹಿತ್ಯ ಚಿಂತಕರು ಯೋಚಿಸಬೇಕು ಎಂದು ತಿಳಿಸಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯರು ಹಾಗೂ ಶ್ರೀ ರಾಮಶೇಷ ಪಾಠಶಾಲೆಯ ಪ್ರಾಚಾರ್ಯರಾದ ಪ್ರದೀಪ್ ಕುಮಾರ್ ದೀಕ್ಷಿತ್ ಉದ್ಘಾಟನೆ ನೆರವೇರಿಸಿ ಮಹರ್ಷಿ ವಾಲ್ಮೀಕಿ ಅವರ ಜನ್ಮ ರಹಸ್ಯ, ವೃತ್ತಾಂತಗಳು ಹಾಗೂ ರಾಮಾಯಣದ ರಚನೆ ಬಗ್ಗೆ ಸಮಗ್ರವಾಗಿ ವಿವರಿಸಿ ವಾಲ್ಮೀಕಿ ಅವರು ಭಾರತೀಯ ಚಿಂತನೆಯ ಮಹಾನ್ ವ್ಯಕ್ತಿ. ರಾಮಾಯಣದ ಮೂಲಕ ಸತ್ಯ



,ನಿಷ್ಠೆ ,ಪ್ರಾಮಾಣಿಕತೆ, ಗೌರವ, ಪ್ರೀತಿ, ವಿಶ್ವಾಸ ಹಾಗೂ ಜೀವನ ಮೌಲ್ಯಗಳನ್ನು ವ್ಯಕ್ತಪಡಿಸಿ ಸಮಗ್ರವಾದ ಮಾನವನ ವಿಕಾಸಕ್ಕೆ ಅರ್ಥಪೂರ್ಣವಾಗಿ ವಿವರಿಸಿದ್ದಾರೆ. ವಾಲ್ಮೀಕಿ ರಾಮಾಯಣವನ್ನೂ ಸಂಶೋಧಿಸಿ ಯುವಕರಿಗೆ ಮತ್ತು ಮಕ್ಕಳಿಗೆ ಪಠ್ಯದಲ್ಲಿ ಅಳವಡಿಸಿ ಬಾಲ್ಯದಿಂದಲೂ ಸಮಗ್ರತೆಯ ಭಾರತೀಯ ಚಿಂತನೆಗಳನ್ನು ತಿಳಿಸುವ ಕಾರ್ಯವನ್ನು ಮಾಡಬೇಕಿದೆ. ರಾಮಾಯಣ ಮಹಾಕಾವ್ಯವನ್ನು ಅರಿತು ಆ ಎಲ್ಲಾ ಆದರ್ಶಗಳನ್ನು ಪಾಲಿಸುವ ದಿಕ್ಕಿನಲ್ಲಿ ಪ್ರತಿಯೊಬ್ಬರು ಅರಿತಾಗ ರಾಮ ರಾಜ್ಯದ ಕನಸು ನನಸಾಗುತ್ತದೆ .ರಾಮ ರಾಜ್ಯವು ಪ್ರತಿಯೊಬ್ಬರು ಸಂತೋಷ ,ನೆಮ್ಮದಿ, ಪ್ರೀತಿಯ, ಗೌರವದಿಂದ ಸಹಬಾಳ್ವೆಯ ಜೀವನವನ್ನು ಉನ್ನತಗೊಳಿಸಿಕೊಂಡು ಬದುಕುವುದೇ ಆಗಿದೆ . ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಮಹಾಕವಿ ವಾಲ್ಮೀಕಿ ಅವರ ಜನ್ಮದಿನವನ್ನು ಆಚರಿಸಿ ಚಿಂತಿಸಿ ಅರಿಯುವ ಕಾರ್ಯಕ್ರಮ ಉನ್ನತವಾದದ್ದು ಎಂದರು. ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯರಾದ ವೀರಶೆಟ್ಟಿಯವರು ರಾಮಾಯಣದ ಕೆಲವು ಶ್ಲೋಕಗಳನ್ನು ಗಮಕದ ಮೂಲಕ ವಾಚಿಸಿದರು. ಅಖಿಲ ಕರ್ನಾಟಕ ಕನ್ನಡ ಮಹಾಸಭಾದ ರಾಜ್ಯ ಅಧ್ಯಕ್ಷರಾದ ಶ್ರೀನಿವಾಸ ಗೌಡ ಮಾತನಾಡಿ ಮಹರ್ಷಿ ವಾಲ್ಮೀಕಿ ಅವರು ಅಮೂಲ್ಯವಾದ ಸಾಹಿತ್ಯವನ್ನು ರಚಿಸಿದ್ದಾರೆ. ರಾಮ ರಾಜ್ಯದ ಪರಿಕಲ್ಪನೆ ಮಹೋನ್ನತವಾದದ್ದು. ಭಾರತವಲ್ಲದೆ ವಿಶ್ವದ ಅನೇಕ ದೇಶಗಳಲ್ಲಿ ರಾಮಾಯಣದ ಬಗ್ಗೆ ಚಿಂತನ ಮಂಥನ ನಡೆಸಿ ಪಠ್ಯದಲ್ಲಿ ಅಳವಡಿಸಿಕೊಂಡು ಸನ್ಮಾರ್ಗದಲ್ಲಿ ಹೋಗಲು ದಾರಿದೀಪವಾಗಿದೆ ಎಂದರು

ಕನ್ನಡ ಸಾಹಿತ್ಯ ಪರಿಷತ್ತಿನ ನಿರ್ದೇಶಕರಾದ ಬಿಕೆ ಆರಾಧ್ಯ, ಶಿವಲಿಂಗ ಮೂರ್ತಿ, ಸರಸ್ವತಿ , ಪರಮೇಶ್ವರಪ್ಪ,ಕನ್ನಡ ಹೋರಾಟಗಾರರಾದ ನಂಜುಂಡಸ್ವಾಮಿ . ಲೋಕೇಶ್ ಇದ್ದರು.

ಸಂಜೆ ಟಿಪ್ಸ್




## ಉಷಾದ ಹೊಸ ಶ್ರೇಣಿಯ ವಾಟರ್ ಹೀಟರ್ ಗಳು: ಪ್ರತಿ ಮನೆಗೂ ವಿಶ್ವಾಸಾರ್ಹ ಸೌಖ್ಯ

ಚಳಿಗಾಲ ಹತ್ತಿರದಲ್ಲಿರುವುದರಿಂದ ವಿಶ್ವಾಸಾರ್ಹ ವಾಟರ್ ಹೀಟರ್ ಮನೆಯಲ್ಲಿನ ಸೌಖ್ಯ ಹೆಚ್ಚಿಸಬಲ್ಲದು. ಉಷಾ ವಾಟರ್ ಹೀಟರ್ ಗಳು ದಕ್ಷತೆಯನ್ನು ದೀರ್ಘಬಾಳಿಕೆಯೊಂದಿಗೆ ಸಂಯೋಜಿಸಿ ಅತ್ಯಂತ ಚಳಿಯ ದಿನಗಳಲ್ಲೂ ಬೆಚ್ಚಗಿನ ನೀರಿನ ಸ್ಥಿರವಾದ ಪೂರೈಕೆ ನೀಡುತ್ತವೆ. ಪ್ರತಿದಿನದ ಅಗತ್ಯಗಳನ್ನು ಪೂರೈಸಲು ವಿನ್ಯಾಸಗೊಳಿಸಲಾದ ಇದು ಸುರಕ್ಷಿತ ಕಾರ್ಯ ನಿರ್ವಹಣೆ ಮತ್ತು ವಿದ್ಯುತ್ ಉಳಿಸುವ ವಿಶೇಷತೆಗಳನ್ನು ಹೊಂದಿದ್ದು ಮುಂದಿನ ಋತುವಿಗೆ ಪ್ರಾಯೋಗಿಕ ಆಯ್ಕೆಯಾಗಿಸಿದೆ. ಬೆಳಗಿನ ಸ್ನಾನವಿರಲಿ ಅಥವಾ ದಿನದ ಕೆಲಸ ಮುಗಿಸಿದ ನಂತರದ ಬೆಚ್ಚನೆಯ ಜಳಕವಿರಲಿ ಈ ವಾಟರ್ ಹೀಟರ್ ಗಳನ್ನು ನಿಮಗೆ ಈ ಚಳಿಗಾಲದ ಮಾಸಗಳನ್ನು ಸುಲಭ ಮತ್ತು ಅನುಕೂಲಕರವಾಗಿ ಎದುರಿಸಲು ನೆರವಾಗಲು ನಿರ್ಮಿಸಲಾಗಿದೆ. ಉಷಾ ಅಕ್ವಾ ಹೊರೈಝೂನ್ ವಾಟರ್ ಹೀಟರ್ ನಿಮ್ಮ ಕೈಯಳತೆಯಲ್ಲಿ ಬಿಸಿನೀರು ಇರುತ್ತದೆ, ಇದು ಸೊಗಸನ್ನು ತಂತ್ರಜ್ಞಾನದೊಂದಿಗೆ ಸಂಯೋಜಿಸಿ ನಿಮ್ಮ ಸ್ನಾನದ ಅನುಭವ ಎತ್ತರಿಸುವುದಲ್ಲದೆ ಸರಿಸಾಟಿ ಇರದ ವಿಶ್ವಾಸಾರ್ಹತೆ ಮತ್ತು ಸುರಕ್ಷತೆ ನೀಡುತ್ತದೆ. ಉಷಾ ಅಕ್ವಾ ಹೊರೈಝೂನ್ ವಾಟರ್ ಹೀಟರ್ ರೂಪ ಮತ್ತು ಕಾರ್ಯದ ಪರಿಪೂರ್ಣ ಸಂಯೋಜನೆಯಾಗಿದೆ. ಗುಣಮಟ್ಟ ಮತ್ತು ಸುರಕ್ಷತೆಗೆ ಉಷಾದ ಬದ್ಧತೆಯಿಂದ ಬಳಕೆದಾರರಿಗೆ ಕಾರ್ಯಕ್ಷಮತೆ ಮಾತ್ರವಲ್ಲದೆ ದೀರ್ಘಬಾಳಿಕೆಯ ಉತ್ಪನ್ನ ನೀಡುತ್ತದೆ. ಅದು ಎರಡು ಮಾದರಿಗಳಲ್ಲಿ ಲಭ್ಯವಿದ್ದು 15 ಲೀಟರ್ ಗಳ ಮಾದರಿ ರೂ.13490/- ಮತ್ತು 25 ಲೀಟರ್ ಮಾದರಿ ಬೆಲೆ ರೂ.15990/- ಹೊಂದಿದೆ. ಉಷಾ ಹೊಸದಾಗಿ ಬಿಡುಗಡೆ ಮಾಡಿದ ಸೈಲಾಂಡ್ರಾ ವಾಟರ್ ಹೀಟರ್ ದಕ್ಷತೆ, ಸುರಕ್ಷತೆ ಮತ್ತು ದೀರ್ಘಬಾಳಿಕೆಯ ಪರಿಪೂರ್ಣ ಸಂಯೋಜನೆಯಾಗಿದ್ದು ಎಲ್ಲ ಬಗೆಯ ಬಿಸಿನೀರಿನ ಅಗತ್ಯಗಳನ್ನು ಪೂರೈಸಲು ವಿನ್ಯಾಸಗೊಳಿಸಲಾಗಿದೆ. ಈ ವಾಟರ್ ಹೀಟರ್ ವೇಗದಲ್ಲಿ ಬಿಸಿಯಾಗುವುದೇ ಅಲ್ಲದೆ ಸ್ಟೈಲಿಷ್, ಆಧುನಿಕ ವಿನ್ಯಾಸವು ಯಾವುದೇ ಮನೆಗೆ ಹೊಂದಿಕೊಳ್ಳುತ್ತದೆ. ಅದು ಕ್ವಿಕ್ ಶವರ್ ಆಗಿರಲಿ, ದೀರ್ಘವಾದ ವಿರಾಮದ ಸ್ನಾನವಿರಲಿ ಉಷಾ ಸೈಲಾಂಡ್ರಾ ವಾಟರ್ ಹೀಟರ್ ಉತ್ತಮ ಕಾರ್ಯಕ್ಷಮತೆ ನೀಡುತ್ತದೆ.


# ಮೊಟ್ಟೆ ದೋಸೆ

## ಪಾಕ ಶಾಲೆ



### ಬೇಕಿರುವ ಸಾಮಗ್ರಿ

ದೋಸೆ ಹಿಟ್ಟು, ಈರುಳ್ಳಿ: 1, ಸಣ್ಣದಾಗಿ ಕತ್ತರಿಸಿದ್ದು, ಹಸಿರು ಮೆಣಸಿನಕಾಯಿ: 2, ಮೊಟ್ಟೆ: 2, ಉಪ್ಪು: 1/2 ಟೀಸ್ಪೂನ್, ಕೆಂಪು ಮೆಣಸಿನ ಪುಡಿ: 1/2 ಟೀಸ್ಪೂನ್, ಕೊತ್ತಂಬರಿ ಸೊಪ್ಪು: 1 ಟೀಸ್ಪೂನ್.

### ಮಾಡುವ ವಿಧಾನ

ಒಂದು ಬಟ್ಟಲಿನಲ್ಲಿ, ಮೊಟ್ಟೆ, ಉಪ್ಪು ಮತ್ತು ಕೆಂಪು ಮೆಣಸಿನ ಪುಡಿಯನ್ನು ಸೇರಿಸಿ ಮತ್ತು ಅದನ್ನು ಚೆನ್ನಾಗಿ ಕದಡಿ. ಒಂದು ಪ್ಯಾನ್ ಮೇಲೆ ದೋಸೆ ಹಿಟ್ಟನ್ನು ಹಾಕಿ ನಂತರ ಅದಕ್ಕೆ ಈರುಳ್ಳಿ ಮತ್ತು ಹಸಿರು ಮೆಣಸಿನಕಾಯಿಯನ್ನು ಸೇರಿಸಿ. ನಂತರ, ಚೆನ್ನಾಗಿ ಕದಡಿದ ಮೊಟ್ಟೆಯ ಹಿಟ್ಟನ್ನು ದೋಸೆಯ ಮೇಲೆ ಹಾಕಿ, ಮೊಟ್ಟೆ ಅರೆ-ಬೆಂದ ನಂತರ, ಕೊತ್ತಂಬರಿ ಸೊಪ್ಪನ್ನು ಸೇರಿಸಿ. ದೋಸೆ ಬೆಂದ ನಂತರ, ಪ್ಯಾನ್ ನಿಂದ ತೆಗೆದು ತಟ್ಟೆಗೆ ಹಾಕಿ.

# ಬದನೆಕಾಯಿ ಸೇವನೆಗೂ ಮುನ್ನ ಇದನ್ನು ತಿಳಿಯಿರಿ



## ಹೆಲ್ತ್ ಟಿಪ್ಸ್

ಬದನೆಕಾಯಿ ತರಕಾರಿಗಳಲ್ಲಿ ಒಂದು. ಇದರಿಂದ ಮಾಡಿದ ಪಲ್ಯ, ಸಾಂಬಾರು, ಗೊಜ್ಜು ಎಲ್ಲವೂ ರುಚಿಕರವಾಗಿರುತ್ತದೆ. ಆದರೆ ಇದು ಬಾಯಿಗೆ ರುಚಿ ನೀಡುವುದು ಮಾತ್ರವಲ್ಲ ದೇಹದ ಆರೋಗ್ಯಕ್ಕೂ ಒಳ್ಳೆಯದು. ಬದನೆಕಾಯಿಯಲ್ಲಿ ಫೈಬರ್, ತಾಮ್ರ, ಮ್ಯಾಂಗನೀಸ್, ಬಿ -6 ಮತ್ತು ಥಿಯಾಮಿನ್ ಸಮೃದ್ಧವಾಗಿದೆ. ಹಾಗೂ ಇದು ಇತರ ಜೀವಸತ್ವಗಳು ಮತ್ತು ಖನಿಜಗಳನ್ನು ಸಹ ಹೊಂದಿರುತ್ತದೆ. ಹಾಗಂತ ಬದನೆಕಾಯಿ ಎಲ್ಲರಿಗೂ ಒಳ್ಳೆಯದಲ್ಲ!ಕೆಲವೊಂದು ಆರೋಗ್ಯ ಸಮಸ್ಯೆಇರುವವರು ಇದರಿಂದ ದೂರ ಉಳಿಯುವುದೇ ಒಳ್ಳೆಯದು.

ಬದನೆಕಾಯಿಯಲ್ಲಿರುವ ಫೈಟೋಕೆಮಿಕಲ್ ನಾಸುನಿನ್ ಎಂಬ ಅಂಶ ಕಬ್ಬಿಣಾಂಶವನ್ನು ಹೀರಿಕೊಳ್ಳುತ್ತದೆ. ಇದರಿಂದ ದೇಹಕ್ಕೆ ಕಬ್ಬಿಣಾಂಶ ಸಿಗುವುದಿಲ್ಲ. ಇದರಿಂದ ರಕ್ತಹೀನತೆ ಸಮಸ್ಯೆ ಕಾಡಬಹುದು. ಹಾಗಾಗಿ ದೇಹದಲ್ಲಿ ಹೆಚ್ಚು ಕಬ್ಬಿಣಾಂಶವನ್ನು ಹೊಂದಿರುವ ಜನರು ಇದನ್ನು ಸೇವಿಸಬಹುದು.

ಬದನೆಕಾಯಿಗಳಲ್ಲಿರುವ ನೈಟ್ ಶೇಡ್ಗಳು ಸೋಲನೈನ್ಗಳನ್ನು ಹೊಂದಿರುತ್ತವೆ. ಇವು ವಿಷಕಾರಿಯಾಗಿರುತ್ತವೆ. ಸೋಲನೈನ್ಗಳು ಬದನೆಕಾಯಿ ಸಸ್ಯ ಬೆಳೆಯುವಾಗ ಅದಕ್ಕೆ ರಕ್ಷಣೆಯನ್ನು ನೀಡುತ್ತದೆ. ಹಾಗಾಗಿ ಈ ಅಂಶ ಬದನೆಕಾಯಿಯಲ್ಲೂ ಇರುತ್ತದೆ. ಹಾಗಾಗಿ ಬದನೆಕಾಯಿಯನ್ನು ತಿನ್ನುವುದರಿಂದ ಗಂಟಲಿನಲ್ಲಿ ಉರಿ, ವಾಕರಿಕೆ ಮತ್ತು ಹೃದಯದ ಸಮಸ್ಯೆಯೆಳಿಗೆ ಕಾರಣವಾಗಬಹುದು. ಇದು ಕೆಲವೊಮ್ಮೆ ಸಾವಿಗೆ ಕಾರಣವಾಗಬಹುದು.

ಕೆಲವೊಂದು ತರಕಾರಿ, ಹಣ್ಣುಗಳು ಅಲರ್ಜಿಯ ಪ್ರತಿಕ್ರಿಯೆಯನ್ನು ಪ್ರಚೋದಿಸುತ್ತವೆ. ಇದಕ್ಕೆ ಕಾರಣ ಅವುಗಳಲ್ಲಿರುವ ಲಿಪಿಡ್ ಎಂಬ ಪ್ರೋಟೀನ್. ಹಾಗಾಗಿ ಇದನ್ನು ಸೇವಿಸಿದವರಿಗೆ ಚರ್ಮದಲ್ಲಿ ದದ್ದುಗಳು, ಊತ ಮತ್ತು ಉಸಿರಾಟದ ತೊಂದರೆಗಳು ಕಾಡುತ್ತದೆ

ಬದನೆಕಾಯಿಗಳು ಆಕ್ಸಲೇಟ್ಗಳನ್ನು ಹೊಂದಿರುತ್ತವೆ. ಈ ಆಕ್ಸಲೇಟ್ಗಳನ್ನು ದೇಹ ಹೀರಿಕೊಂಡರೆ ಇದರಿಂದ ಕಿಡ್ನಿಯಲ್ಲಿ ಕಲ್ಲುಗಳು ಬೆಳೆಯುತ್ತದೆ. ಹಾಗಾಗಿ ಕಿಡ್ನಿಯಲ್ಲಿ ಕಲ್ಲಿನ ಸಮಸ್ಯೆ ಇರುವವರು ಇದನ್ನು ಹೆಚ್ಚು ತಿನ್ನಬೇಡಿ.

# ದಾಸವಾಳ ಹೂವಿನ ಫೇಸ್ ಪ್ಯಾಕ್

## ಬ್ಯೂಟಿ ಟಿಪ್ಸ್



ಹಿಂದಿನಿಂದಲೂ ಮಹಿಳೆಯರು ತಮ್ಮ ಸೌಂದರ್ಯ ವರ್ಧನೆಗೆ ವಿಶೇಷ ಕಾಳಜಿ ವಹಿಸುತ್ತಾರೆ. ಮಾರುಕಟ್ಟೆಯಲ್ಲಿ ಸಿಗುವ ಸೌಂದರ್ಯವರ್ಧಕಗಳನ್ನು ಬಳಸಿ ಸುಂದರವಾಗಿ ಕಾಣಲು ಬಯಸುತ್ತಾರೆ. ಹಾಗೂ ಪಾರ್ಲರ್ ಮೊರೆ ಹೋಗುತ್ತಾರೆ. ಮನೆಯಲ್ಲಿ ಕೆಲವು ತರಕಾರಿ, ಹಣ್ಣಿನ ಫೇಸ್ ಪ್ಯಾಕ್ ಹಚ್ಚಿಕೊಂಡು ತ್ವಚೆಯ ಸೌಂದರ್ಯ ಇಮ್ಮಡಿಗೊಳಿಸಿಕೊಳ್ಳುವ ಬಗ್ಗೆ ನಿಮಗೆ ತಿಳಿದಿದೆ. ಆದರೆ ಕೆಲವು ಸುಲಭವಾಗಿ ಸಿಗುವಂತಹ ಹೂವಿನಿಂದಲೂ ಫೇಸ್ ಪ್ಯಾಕ್ ತಯಾರಿಸಬಹುದು. ದಾಸವಾಳ ಹೂವಿನ 2 ಎಸಳುಗಳನ್ನು 2 ಚಮಚ ಮೊಸರಿನಲ್ಲಿ ಸೇರಿಸಿ ರುಬ್ಬಿ ಅದಕ್ಕೆ 4-5 ಹನಿ ನಿಂಬೆ ರಸ ಸೇರಿಸಿ ಮುಖಕ್ಕೆ ಹಚ್ಚಿಕೊಳ್ಳಿರಿ. 20 ನಿಮಿಷದ ನಂತರ ಮುಖ ತೊಳೆದರೆ ಬೇಸಿಗೆಯ ಬಿಸಿಲಿನಿಂದ ಬಸವಳಿದ ಚರ್ಮಕ್ಕೆ ಒಳ್ಳೆಯ ಪ್ಯಾಕ್ ಆಗುತ್ತದೆ. ಗುಲಾಬಿ ಹೂವಿನ ದಳಗಳನ್ನು ಬಿಡಿಸಿ ಸ್ವಲ್ಪ ನೀರಿನಲ್ಲಿ ಅರ್ಧ ಗಂಟೆ ಕಾಲ ನೆನೆಸಿಡಿ. ಅದಕ್ಕೆ 1 ಸ್ಪೂನ್ ಜೇನುತುಪ್ಪ ಸೇರಿಸಿ ರುಬ್ಬಿ ಅದನ್ನು ಮುಖಕ್ಕೆ ಹಚ್ಚಿ ಅರ್ಧ ಗಂಟೆ ನಂತರ ತೊಳೆದುಕೊಂಡರೆ ಮುಖ ಹೂವಿನಂತೆ ಅರಳುವುದು.

# ನಟಿ ಶ್ರೀಲೀಲಾ ಹೊಸ ಗಾಸಿಪ್ ವೈರಲ್



ತೆಲುಗು ಇಂಡಸ್ಟ್ರಿಯಲ್ಲಿ ಶ್ರೀಲೀಲಾ ಅವರ ಹೆಸರು ಇತ್ತೀಚಿನವರೆಗೂ ಪ್ರಚಾರದಲ್ಲಿದೆ. ಶ್ರೀಲೀಲಾ ಸರಣಿ ಚಿತ್ರಗಳಿಂದ ಸದ್ದು ಮಾಡಿದರು. ಯುವ ನಾಯಕರಲ್ಲದೆ, ಈ ನಟಿ ಸೂಪರ್ ಸ್ಟಾರ್ ಮಹೇಶ್ ಬಾಬು ಅವರೊಂದಿಗೆ ಕೂಡ ನಟಿಸಿದ್ದಾರೆ. ಆದರೆ ಸದ್ಯಕ್ಕೆ ಶ್ರೀಲೀಲಾ ಹವಾ ಕಡಿಮೆಯಾಗಿದೆ ಎಂದೇ ಹೇಳಬೇಕು. ಆಕೆಯ ಚಿತ್ರಗಳು ಬಾಕ್ಸಾಫಿಸ್ನಲ್ಲಿ ವಿಫಲವಾದಾಗ, ನಟಿಗೆ ಆಫರ್ಗಳು ಕಡಿಮೆಯಾದವು.

ಆದರೆ ತೆಲುಗಿನಲ್ಲಿ ಅವಕಾಶಗಳು ಕಡಿಮೆಯಾದರೂ ನಟಿಗೆ ತಮಿಳು, ಹಿಂದಿ ಭಾಷೆಗಳಲ್ಲಿ ಸಾಲು ಸಾಲು ಅವಕಾಶಗಳು ಬರುತ್ತಿವೆ. ಇತ್ತೀಚೆಗಷ್ಟೇ 'ಗುಡ್ ಬ್ಯಾಡ್ ಅಗ್ಲಿ' ಸಿನಿಮಾದಲ್ಲಿ ತಮಿಳು ಸ್ಟಾರ್ ಅಜಿತ್ ನಾಯಕಿಯಾಗಿ ಆಯ್ಕೆಯಾಗಿದ್ದಾರೆ ಎಂಬ ಸುದ್ದಿ ಬಂದಿತ್ತು. ಹೀಗಿರುವಾಗ ಇದೀಗ ಶ್ರೀಲೀಲಾ ಬಾಲಿವುಡ್ ಎಂಟ್ರಿಗೆ ರೆಡಿಯಾಗಿದ್ದಾರೆ. ಸ್ಟಾರ್ ಹೀರೋ ಸೈಫ್ ಅಲಿ ಖಾನ್ ಪುತ್ರ ಇಬ್ರಾಹಿಂ ಖಾನ್ ಸದ್ಯ 'ದಿಲಾರ್' ಸಿನಿಮಾ ಮಾಡುತ್ತಿದ್ದಾರೆ. ನಾಯಕಿಯಾಗಿ ಶ್ರೀಲೀಲಾ ಆಯ್ಕೆಯಾಗಿದ್ದಾರೆ ಎಂಬ ಮಾತು ಕೇಳಿಬರುತ್ತಿದೆ.

ಇದೆಲ್ಲದರ ಮಧ್ಯೆ, ಸಾಮಾಜಿಕ ಮಾಧ್ಯಮದಲ್ಲಿ ಸಕ್ರಿಯವಾಗಿರುವ ಶ್ರೀಲೀಲಾ ನಿಯಮಿತವಾಗಿ ತಮ್ಮ ಇತ್ತೀಚಿನ ಫೋಟೋಶೂಟ್ಗಳು ಮತ್ತು ವೈಯಕ್ತಿಕ ವಿಷಯಗಳನ್ನು ಸಾಮಾಜಿಕ ಮಾಧ್ಯಮದ ಮೂಲಕ ತಮ್ಮ ಅಭಿಮಾನಿಗಳೊಂದಿಗೆ ಹಂಚಿಕೊಳ್ಳುತ್ತಾರೆ. ಶ್ರೀಲೀಲಾ ಇತ್ತೀಚೆಗಷ್ಟೇ ತಮ್ಮ ಇನ್ಸ್ಟಾಗ್ರಾಂನಲ್ಲಿ ಕೆಲವು ಫೋಟೋಗಳನ್ನು ಹಂಚಿಕೊಂಡಿದ್ದಾರೆ. ಈ ಫೋಟೋಗಳನ್ನು ನೋಡಿದರೆ ಶ್ರೀಲೀಲಾ ಫಾರಿನ್ ಗೆ ಹೋಗಿರುವುದು ಸ್ಪಷ್ಟವಾಗಿದೆ. ಆದರೆ, ಶ್ರೀಲೀಲಾ ಶೇರ್ ಮಾಡಿರುವ ಫೋಟೋಗಳಲ್ಲಿ ಒಬ್ಬ ವ್ಯಕ್ತಿಯೂ ಕಾಣಿಸಿಕೊಂಡಿದ್ದಾರೆ.

ಒಂದು ಫೋಟೋದಲ್ಲಿ, ಶ್ರೀಲೀಲಾ ಒಬ್ಬ ಹುಡುಗನೊಂದಿಗೆ ಮಾತನಾಡುತ್ತಿದ್ದಾಳೆ. ಆದರೆ ಶ್ರೀಲೀಲಾ ಆ ಹುಡುಗನ ಮುಖ ಬಹಿರಂಗವಾಗದಂತೆ ಎಚ್ಚರ ವಹಿಸಿದ್ದರು. ಹಾಗಾದರೆ ಆ ಹುಡುಗ ಯಾರು? ಅವನೊಂದಿಗೆ ಏನು ಮಾತನಾಡುತ್ತಿದ್ದಾಳೆ ಶ್ರೀಲೀಲಾ ಏಕಾಏಕಿ ಪ್ಯಾರಿಸ್ ಗೆ ಹೋಗಿದ್ದು, ಶ್ರೀಲೀಲಾ ತನ್ನ ಬಾಯ್ ಫ್ರೆಂಡ್ ಜೊತೆ ಫಾರಿನ್ ಟೂರ್ ಹೋಗಿದ್ದು ಏಕೆ ಎಂದು ನೆಟಿಜನ್ ಗಳು ನಾನಾ ರೀತಿಯಲ್ಲಿ ಚರ್ಚಿಸುತ್ತಿದ್ದಾರೆ. ಸದ್ಯ, ಶ್ರೀಲೀಲಾ ಅವರು ಹಂಚಿಕೊಂಡಿರುವ ಫೋಟೋಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿವೆ.

# ಟೀಂ ಇಂಡಿಯಾ ಆಟಗಾರರನ್ನು ಭೇಟಿಯಾದ ಬೆಂಗಳೂರಿನ ಐದು ಮಕ್ಕಳು

ಭಾರತದಲ್ಲಿ ಕ್ರಿಕೆಟ್ ಕೇವಲ ಒಂದು ಕ್ರೀಡೆಯಾಗಿ ಮಾತ್ರವೇ ಉಳಿದಿಲ್ಲ, ಬದಲಾಗಿ ಕ್ರಿಕೆಟ್ ಅನ್ನುವುದು ಲಕ್ಷಾಂತರ ಜನರ ಭಾವನೆ ಉದ್ದೀಪಿಸುವ, ಉತ್ಸಾಹ ಹೊಮ್ಮಿಸುವ ಮತ್ತು ಸ್ಫೂರ್ತಿ ಒದಗಿಸುವ ಅಂಶವಾಗಿ ಬೆಳೆದಿದೆ. ಕ್ರಿಕೆಟ್ ಆಟವು ಪ್ರಧಾನವಾಗಿರುವ ಸಮುದಾಯದಲ್ಲಿ ಬೆಳೆದ ನಾವು ಬಹುತೇಕರು ನೆರೆಹೊರೆಯಲ್ಲಿದ್ದ ಯಾರದೋ ಮನೆಯ ಟೀವಿಯಲ್ಲಿ ಕ್ರಿಕೆಟ್ ನೋಡಿದ ನೆನಪು ಹೊಂದಿದ್ದೇವೆ ಮತ್ತು ರೇಡಿಯೋಗಳಲ್ಲಿ ಕ್ರಿಕೆಟ್ ಕಾಮೆಂಟರಿ ಕೇಳಿದ ಸಿಹಿ ಅನುಭವ ಹೊಂದಿದ್ದೇವೆ. ಒಂದೋ ನಮ್ಮ ಫೇವರಿಟ್ ಕ್ರಿಕೆಟ್ ಆಟಗಾರರನ್ನು ಹತ್ತಿರದಿಂದ ನೋಡುವುದು ಅಥವಾ ಕ್ರೀಡಾಂಗಣದಲ್ಲಿ ಲೈವ್ ಆಗಿ ಕ್ರಿಕೆಟ್ ಪಂದ್ಯಗಳನ್ನು ನೋಡುವುದು ನಮ್ಮಲ್ಲಿ ಬಹುತೇಕರಿಗೆ ಕನಸಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಪರಿಕ್ರಮ ಹ್ಯುಮಾನಿಟಿ ಫೌಂಡೇಷನ್ ನ ಐದು ಮಕ್ಕಳು ಅತ್ಯಪೂರ್ವ ಅವಕಾಶವನ್ನು ತಮ್ಮದಾಗಿಸಿಕೊಂಡಿದ್ದಾರೆ. ಆ ಐದು ಮಕ್ಕಳು ಭಾರತೀಯ ಕ್ರಿಕೆಟ್ ತಂಡದ ಆಟಗಾರರನ್ನು ಭೇಟಿ ಮಾಡುವ ಕನಸಿನ ಕ್ಷಣಗಳನ್ನು ಎದುರುಗೊಂಡಿದ್ದು ಮಾತ್ರವಲ್ಲ, ಜೊತೆಗೆ ಭಾರತೀಯ ಕ್ರಿಕೆಟ್ ಆಟಗಾರರ ಜೊತೆ ನೆಟ್ ನಲ್ಲಿ ಕ್ರಿಕೆಟ್ ಪ್ರಾಕ್ಟೀಸ್ ಮಾಡುವ ಅತ್ಯಪೂರ್ವ ಅವಕಾಶವನ್ನು ಕೂಡ ಗಳಿಸಿಕೊಂಡಿದ್ದಾರೆ.

ಎಸ್ಬಿಐ ಲೈಫ್ ಇನ್ಶೂರೆನ್ಸ್ ಮತ್ತು ಬಿಸಿಸಿಐ ಸಂಸ್ಥೆಗಳು ಜೊತೆಗೂಡಿ ಮೀಟ್ ಆಂಡ್ ಗ್ರೀಟ್ ಕಾರ್ಯಕ್ರಮವನ್ನು ಆಯೋಜಿಸಿದ್ದು, ಆ ಸೌಹಾರ್ದ ಭೇಟಿಯ ಕಾರ್ಯಕ್ರಮದ ಮೂಲಕ ಪರಿಕ್ರಮ ಹ್ಯುಮಾನಿಟಿ ಫೌಂಡೇಶನ್ ನ ಐದು ಆರ್ಥಿಕವಾಗಿ ಹಿಂದುಳಿದ ವರ್ಗದ ಮಕ್ಕಳು ಭಾರತೀಯ ಕ್ರಿಕೆಟ್ ಆಟಗಾರರನ್ನು ಹತ್ತಿರದಿಂದ ಭೇಟಿ ಮಾಡಿದರು. ಈ ಸಂದರ್ಭದಲ್ಲಿ ಸಂಜು ಸ್ಯಾಮ್ಸನ್ ರಿಂದ ವಿಕೆಟ್ ಕೀಪಿಂಗ್ ಸಲಹೆಗಳನ್ನು ಪಡೆದರು. ಅದ್ಭುತ ಬೌಲರ್ ಆಗಿರುವ ಅರ್ಶದೀಪ್ ಸಿಂಗ್ ಅವರ ಬೌಲಿಂಗ್ ದಾಳಿಯನ್ನು ಎದುರಿಸಿದರು. ವಿಶೇಷವಾಗಿ ಪ್ರಸ್ತುತ ಭಾರತೀಯ ಟಿ20 ಕ್ರಿಕೆಟ್ ತಂಡದ ನಾಯಕರಾಗಿರುವ ಸೂರ್ಯಕುಮಾರ್ ಯಾದವ್ ಅವರ ಜೊತೆ ಬ್ಯಾಟಿಂಗ್ ಮಾಡುವ ಅಪೂರ್ವ ಅವಕಾಶ ಗಳಿಸಿಕೊಂಡರು.



ಆರ್ಥಿಕವಾಗಿ ಹಿಂದುಳಿದ ವರ್ಗದ ಮಕ್ಕಳಿಗೆ ಶಿಕ್ಷಣ ಒದಗಿಸುವ ಮತ್ತು ಅವರ ಸಮಗ್ರ ಅಭಿವೃದ್ಧಿ ಉಂಟಾಗುವಂತೆ ನೆರವಾಗುವ ಮೂಲಕ ಅವರ ಜೀವನವನ್ನು ಉತ್ಕೃಷ್ಟಗೊಳಿಸುವುದು ಎಸ್ಬಿಐ ಲೈಫ್ ಇನ್ಶೂರೆನ್ಸ್ ನ ಈ ಯೋಜನೆಯ ಮೂಲ ಉದ್ದೇಶವಾಗಿದೆ. ಜೊತೆಗೆ ಆ ಮಕ್ಕಳು ಅವರ ಉತ್ತಮ ಭವಿಷ್ಯಕ್ಕಾಗಿ ದೊಡ್ಡ ಕನಸುಗಳನ್ನು ಕಾಣಲು ಮತ್ತು ಅವರ ಆಸೆ ಆಕಾಂಕ್ಷೆಗಳನ್ನು ಪೂರೈಸಲು ಪ್ರೇರೇಪಿಸುವ ಉದ್ದೇಶವೂ ಸಂಸ್ಥೆಯ ಮುಂದೆ ಇದೆ. ಪರಿಕ್ರಮ ಹ್ಯುಮಾನಿಟಿ ಫೌಂಡೇಶನ್ ನ ಮಕ್ಕಳ ಜೊತೆಗೆ ಕ್ರಿಕೆಟ್ ತಾರೆಯರು ಕಳೆದ ಸಮಯವು ಸಣ್ಣದೊಂದು ಉತ್ತಮ ಕೆಲಸ ಕೂಡ ಕೆಲವರಿಗೆ ಎಷ್ಟು ಮಹತ್ವದ ನೆನಪುಗಳನ್ನು ಕೊಡಬಹುದು ಎಂಬುದಕ್ಕೆ ಸಾಕ್ಷಿಯಾಗಿದೆ. ಜೊತೆಗೆ ಮಕ್ಕಳಿಗೆ ದೊಡ್ಡ ಕನಸನ್ನು ಕಾಣಲು ಈ ಭೇಟಿಯುವ ಉತ್ತೇಜನ ನೀಡಿದೆ.

ಆರ್ಥಿಕವಾಗಿ ಹಿಂದುಳಿದ ವರ್ಗದ ಮಕ್ಕಳಿಗೆ ಶಿಕ್ಷಣ ಒದಗಿಸುವ ಮತ್ತು ಅವರ ಸಮಗ್ರ ಅಭಿವೃದ್ಧಿ ಉಂಟಾಗುವಂತೆ ನೆರವಾಗುವ ಮೂಲಕ ಅವರ ಜೀವನವನ್ನು ಉತ್ಕೃಷ್ಟಗೊಳಿಸುವುದು ಎಸ್ಬಿಐ ಲೈಫ್ ಇನ್ಶೂರೆನ್ಸ್ ನ ಈ ಯೋಜನೆಯ ಮೂಲ ಉದ್ದೇಶವಾಗಿದೆ. ಜೊತೆಗೆ ಆ ಮಕ್ಕಳು ಅವರ ಉತ್ತಮ ಭವಿಷ್ಯಕ್ಕಾಗಿ ದೊಡ್ಡ ಕನಸುಗಳನ್ನು ಕಾಣಲು ಮತ್ತು ಅವರ ಆಸೆ ಆಕಾಂಕ್ಷೆಗಳನ್ನು ಪೂರೈಸಲು ಪ್ರೇರೇಪಿಸುವ ಉದ್ದೇಶವೂ ಸಂಸ್ಥೆಯ ಮುಂದೆ ಇದೆ.ಈ ಕಾರ್ಯಕ್ರಮದ ಭಾಗವಾಗಿ ದೀಪಿಕಾ ಎಂ, ಮೈಲಾರಿ ಎನ್, ಅನನ್ಯಾ ವಿ, ನವ ಪ್ರಣವ್ ಮತ್ತು ಪಾವ್ ಗೌಹಾವ್ರೊ ಎಲ್ ಐವರು ಮಕ್ಕಳು ನವದೆಹಲಿಯ ಅರುಣ್ ಜೇಟ್ಲಿ ಸ್ಟೇಡಿಯಂನಲ್ಲಿ ನಡೆದ ಭಾರತ ವರ್ಸಸ್ ಬಾಂಗ್ಲಾದೇಶ ಕ್ರಿಕೆಟ್ ತಂಡಗಳ ನಡುವಿನ ಅಂತಾರಾಷ್ಟ್ರೀಯ ಟಿ20 ಪಂದ್ಯವನ್ನು ವೀಕ್ಷಿಸುವ ಅಪೂರ್ವ ಅವಕಾಶವನ್ನು ಪಡೆದರು.

ಈ ಕುರಿತು ಮಾತನಾಡಿದ ಎಸ್ಬಿಐ ಲೈಫ್ ನ ಕಾರ್ಪೊರೇಟ್ ಕಮ್ಯುನಿಕೇಶನ್ ಮತ್ತು ಸಿಎಸ್ಆರ್ ವಿಭಾಗದ ಬ್ರ್ಯಾಂಡ್ ಮುಖ್ಯಸ್ಥ ಶ್ರೀ ರವೀಂದ್ರ ಶರ್ಮಾ ಅವರು, ''ಈ ಮಕ್ಕಳು ತಮ್ಮ ಜೀವನದಲ್ಲಿ ಬಹಳ ಮಹತ್ವದ ಕ್ಷಣವನ್ನು ಕಳೆಯಲು, ಅದ್ಭುತ ನೆನಪನ್ನು ಅನುಭವಿಸಲು ಸಹಾಯ ಮಾಡುವ ನಿಟ್ಟಿನಲ್ಲಿ ನಾವು ಸಣ್ಣ ಪಾತ್ರವನ್ನು ವಹಿಸಿದ್ದಕ್ಕಾಗಿ ಹೆಮ್ಮೆ ಪಡುತ್ತೇವೆ. ನಾವು ಎಸ್ಬಿಐ ಲೈಫ್ ಸಂಸ್ಥೆಯು ಬಿಸಿಸಿಐ ಜೊತೆಗೆ ಸಹಯೋಗ ಮಾಡಿಕೊಳ್ಳುವ ಮೂಲಕ ಕ್ರಿಕೆಟ್ ಕ್ರೀಡೆಗೆ ಬೆಂಬಲ ಸೂಚಿಸುವುದರ ಜೊತೆಗೆ ರಾಷ್ಟ್ರದಾದ್ಯಂತ ಇರುವ ಅಭಿಮಾನಿಗಳಿಗೆ ಸ್ಫೂರ್ತಿ ನೀಡುವ ಮತ್ತು ದೊಡ್ಡ ಕನಸುಗಳನ್ನು ಇಟ್ಟುಕೊಳ್ಳಲು ಹಾಗೂ ಆ ಕನಸುಗಳನ್ನು ನನಸು ಮಾಡಲು ಶ್ರಮ ವಹಿಸಲು ಅವರಿಗೆ ಪ್ರೇರೇಪಣೆ ನೀಡುತ್ತೇವೆ. ಮಕ್ಕಳ ಜೊತೆಗೆ ಕಾಲವನ್ನು ಕಳೆಯುವ ಮೂಲಕ, ಆಟ ಆಡುವ ಮೂಲಕ, ಆ ಮಕ್ಕಳಿಗೆ ಜೀವಮಾನದ ನೆನಪುಗಳನ್ನು ನೀಡಿದ ಮತ್ತು ಅವರು ದೊಡ್ಡ ಕನಸುಗಳನ್ನು ಕಾಣಲು ಹಾಗೂ ಅದನ್ನು ನನಸು ಮಾಡಿಕೊಳ್ಳಲು ಪ್ರೇರೇಪಣೆ ನೀಡಿದ ಜನಪ್ರಿಯ ಕ್ರಿಕೆಟ್ ಆಟಗಾರರಾದ ಸೂರ್ಯಕುಮಾರ್ ಯಾದವ್, ಅರ್ಶದೀಪ್ ಸಿಂಗ್ ಮತ್ತು ಸಂಜು ಸ್ಯಾಮ್ಸನ್ ಅವರಂತಹ ಪ್ರತಿಭಾವಂತರಿಗೆ ನಾವು ಕೃತಜ್ಞರಾಗಿರುತ್ತೇವೆ. ಈ ರೀತಿಯ ಯೋಜನೆಗಳ ಮೂಲಕ ಎಸ್ಬಿಐ ಲೈಫ್ ಸಂಸ್ಥೆಯು ಮಕ್ಕಳಿಗೆ ನೆರವು ನೀಡಲು, ಪ್ರೋತ್ಸಾಹಿಸಲು ಮತ್ತು ಸಬಲೀಕರಣಗೊಳಿಸಲು ಬದ್ಧವಾಗಿದೆ. ಆ ಮೂಲಕ ತರಗತಿಯ ಒಳಗೆ ಮತ್ತು ಹೊರಗೆ ಅವರು ಇಟ್ಟುಕೊಂಡಿರುವ ಕನಸನ್ನು ನನಸು ಮಾಡಲು ನೆರವು ಒದಗಿಸಲಾಗುತ್ತದೆ'' ಎಂದು ಹೇಳಿದರು.



ಜಯಶ್ರೀ.ಬಿ.ಆರ್

ಖ್ಯಾತ ಜ್ಯೋತಿಷಿ

ದೂರವಾಣಿ-9964739507

www.jyotishyavaastu.com

# ರಾಶಿ ಭವಿಷ್ಯ

**ಮೇಷ:** ಆರ್ಥಿಕ ಲಾಭ, ಕೌಟುಂಬಿಕ ಸಹಕಾರ, ವಿದ್ಯಾಭ್ಯಾಸದಲ್ಲಿ ಅನುಕೂಲ, ಸ್ಥಿರಾಸ್ತಿಯಿಂದ ಲಾಭ.

**ವೃಷಭ:** ಯತ್ನ ಕಾರ್ಯಗಳಲ್ಲಿ ಎಳೆದಾಟ, ದೂರ ಪ್ರದೇಶದಲ್ಲಿ ಉದ್ಯೋಗ ಲಾಭ, ಪ್ರಯಾಣದಲ್ಲಿ ಅನುಕೂಲ, ವಿದ್ಯಾಭ್ಯಾಸದಲ್ಲಿ ಪ್ರಗತಿ.

**ಮಿಥುನ:** ಆರ್ಥಿಕ ಚೇತರಿಕೆ, ಮಕ್ಕಳ ಸಹಕಾರ, ಪಿತ್ರಾರ್ಜಿತ ಸ್ವತ್ತಿನಿಂದ ಲಾಭ, ಕೋರ್ಟ್ ಕೇಸುಗಳಲ್ಲಿ ಅಡೆತಡೆ.

**ಕಟಕ:** ವ್ಯವಹಾರದಲ್ಲಿ ಉತ್ತಮ ಅವಕಾಶ, ಮಿತ್ರರೊಂದಿಗೆ ಮನಸ್ತಾಪ, ಕೌಟುಂಬಿಕ ಕಲಹ, ಅವಮಾನ.

**ಸಿಂಹ:** ದೂರ ಪ್ರದೇಶದಲ್ಲಿ ಅನುಕೂಲ, ದಾಂಪತ್ಯದಲ್ಲಿ ಮನಸ್ತಾಪ, ಸ್ತ್ರೀಯರಿಂದ ನಷ್ಟ, ವಿದ್ಯಾಭ್ಯಾಸದಲ್ಲಿ ಮಂದತ್ವ.

**ಕನ್ಯಾ:** ವ್ಯವಹಾರದಲ್ಲಿ ಅಡೆತಡೆ, ಅಧಿಕಾರಿಗಳಿಂದ ಅನುಕೂಲ, ಮಾತಿನಿಂದ ಸಮಸ್ಯೆ, ಕುಟುಂಬದ ಸಹಕಾರ.

**ತುಲಾ:** ಯತ್ನ ಕಾರ್ಯಗಳಲ್ಲಿ ವಿಳಂಬ, ಜಿಗುಪ್ಸೆ-ಆಲಸ್ಯ-ಸೋಮಾರಿತನ, ಭವಿಷ್ಯದ ಚಿಂತೆ, ಶತ್ರು ಉಪಟಳ.

**ವೃಶ್ಚಿಕ:** ಸಂಗಾತಿ ನಡವಳಿಕೆಯಿಂದ ಬೇಸರ, ಪಾಲುದಾರಿಕೆಯಲ್ಲಿ ನಷ್ಟ, ಶುಭ ಕಾರ್ಯಗಳಲ್ಲಿ ನಿರಾಸಕ್ತಿ, ಉದ್ಯೋಗದಲ್ಲಿ ಅಸಂತೃಪ್ತಿ.

**ಧನಸ್ಸು:** ವ್ಯವಹಾರದಲ್ಲಿ ಹಿನ್ನಡೆ, ಶತ್ರು ಉಪಟಳ, ನೆರೆಹೊರೆಯವರಿಂದ ಕಿರಿಕಿರಿ, ಅನಿರೀಕ್ಷಿತ ಪ್ರಯಾಣ.

**ಮಕರ:** ಆರ್ಥಿಕ ಪ್ರಗತಿ, ಮಕ್ಕಳಿಂದ ಸಹಕಾರ, ಉತ್ಸಾಹದಿಂದ ಕಾರ್ಯ ಚಟುವಟಿಕೆ, ಪ್ರೀತಿ ಪ್ರೇಮದ ತೊಳಲಾಟ.

**ಕುಂಭ:** ವ್ಯವಹಾರದಲ್ಲಿ ಅನಾನುಕೂಲ, ಸಾಲದ ಚಿಂತೆ, ಶತ್ರು ಕಾಟ, ವಿದ್ಯಾಭ್ಯಾಸದಲ್ಲಿ ಮಂದತ್ವ, ಆರೋಗ್ಯದಲ್ಲಿ ವ್ಯತ್ಯಾಸ.

**ಮೀನ:** ತಂದೆಯಿಂದ ಅನುಕೂಲ, ಉದ್ಯೋಗ ನಷ್ಟ, ಪ್ರೀತಿ ಪ್ರೇಮ ಭಾವನೆಗಳ ತೊಳಲಾಟ.

# ವಿಶ್ವ ಮಾನವೀಯ ಕ್ರಿಯೆಯ ದಿನ




ವಿಶ್ವ ಮಾನವೀಯ ಕಾರ್ಯ ದಿನವನ್ನು ಪ್ರತಿ ವರ್ಷ ಅಕ್ಟೋಬರ್ 19 ರಂದು ಆಚರಿಸಲಾಗುತ್ತದೆ. ಮಾನವೀಯ ಕಾರಣಗಳ ಹುತಾತ್ಮರಿಗೆ ವಿಶೇಷ ಮೆಚ್ಚುಗೆ ಮತ್ತು ಗೌರವವನ್ನು ತೋರಿಸಲು ದಿನವನ್ನು ಕಾಯ್ದಿರಿಸಲಾಗಿದೆ. ಮಾನವೀಯ ಕ್ರಮಕ್ಕಾಗಿ ಸಾರ್ವಜನಿಕ ಬೆಂಬಲದ ಸಾಮೂಹಿಕ ಜಾಗತಿಕ ಪ್ರದರ್ಶನಕ್ಕೆ ವೀಕ್ಷಣೆ ಕರೆ ನೀಡುತ್ತದೆ. ಆಡಳಿತ ಮಂಡಳಿಗಳು ವಿಫಲವಾದಾಗ, ಲಾಭೋದ್ದೇಶವಿಲ್ಲದ ಮತ್ತು ಮಾನವೀಯ ಸಂಸ್ಥೆಗಳು ಹೆಜ್ಜೆ ಹಾಕುತ್ತವೆ. ಆದರೆ ಮುಂಚೂಣಿಯಲ್ಲಿರುವ ಮೂಲಕ ಮಾನವೀಯತೆಗೆ ಸೇವೆ ಸಲ್ಲಿಸುವುದು ತೀವ್ರವಾದ ಪರಿಣಾಮಗಳನ್ನು ಉಂಟುಮಾಡುತ್ತದೆ, ಅದು ಸಾಮಾನ್ಯವಾಗಿ ಮಾರಕವಾಗಬಹುದು. ವಿಶ್ವ ಮಾನವೀಯ ಕ್ರಿಯೆಯ ದಿನವು ಇತರರನ್ನು ಉಳಿಸುವಾಗ ಮರಣ ಹೊಂದಿದವರನ್ನು ಗೌರವಿಸುತ್ತದೆ. ವಿಶ್ವ ಮಾನವೀಯ ಕ್ರಿಯೆಯ ದಿನವು ಅಗತ್ಯವಿರುವ ಇತರರಿಗೆ ಸಹಾಯ ಮಾಡಲು ಪ್ರತಿಕೂಲ ಮತ್ತು ಅಪಾಯವನ್ನು ಎದುರಿಸುವ ಮುಂಚೂಣಿಯ ಯೋಧರನ್ನು ಗುರುತಿಸುತ್ತದೆ. ಕಳೆದ ವರ್ಷಗಳ ಕೆಲವು ವಿಷಯಗಳು 'ಕರುಣೆಗಾಗಿ ಚಾರ್ಟರ್' ಮತ್ತು 'ತೀವ್ರ ಹಸಿವನ್ನು ನಿರ್ಮೂಲನೆ ಮಾಡುವುದು.' ವಿಶ್ವ ಮಾನವೀಯ ಕಾರ್ಯ ದಿನವು ಜಾಗತಿಕ ಮಾನವೀಯ ಉಪಕ್ರಮಗಳ ಉತ್ಸಾಹ ಮತ್ತು ಜಗತ್ತಿನಾದ್ಯಂತ ಮಾನವೀಯ ಶಕ್ತಿಗಳ ಕೆಲಸವನ್ನು ಆಚರಿಸಲು ಒಂದು ಅವಕಾಶವಾಗಿದೆ. ಮಾನವೀಯ ಜಗತ್ತಿಗೆ ಮನವಿಯು ಕಾರ್ಯಸೂಚಿಯ ಮೇಲ್ಭಾಗದಲ್ಲಿ ಉಳಿದಿದೆಯಾದರೂ, ಈ ದಿನವು ಪ್ರಾಥಮಿಕವಾಗಿ ಸ್ವಯಂಸೇವಕರು, ಕಾರ್ಯಕರ್ತರು ಮತ್ತು ಬೆಂಬಲ ಸಿಬ್ಬಂದಿಯನ್ನು ಉದ್ದೇಶಕ್ಕಾಗಿ ತಮ್ಮ ಜೀವನವನ್ನು ತ್ಯಾಗ ಮಾಡಿದವರನ್ನು ಗೌರವಿಸುತ್ತದೆ. ಮಾನವೀಯ ಕ್ರಿಯೆಯ ವ್ಯಾಖ್ಯಾನವು 'ಜನಾಂಗ, ಲಿಂಗ, ಜನಾಂಗೀಯತೆ, ರಾಜಕೀಯ ಸಂಬಂಧ ಅಥವಾ ಧರ್ಮವನ್ನು ಪರಿಗಣಿಸದೆ ಮಾನವ ಘನತೆಯನ್ನು ಕಾಪಾಡಿಕೊಳ್ಳುವುದು, ದುಃಖವನ್ನು ನಿವಾರಿಸುವುದು ಮತ್ತು ಜೀವಗಳನ್ನು ಉಳಿಸುವುದು. ಮಾನವೀಯತೆಯ ಸಂದೇಶವಾಹಕರು ಎಂದು ಕರೆಯಲ್ಪಡುವ ಗುಂಪಿನ ಸದಸ್ಯರು ಪಟ್ಟಿಮಾಡಿದ ಜಾಗತಿಕ ಆವೇಗದ ಅರ್ಥವನ್ನು ಮುಂದುವರಿಸಲು ವಿಶ್ವಮಾನವೀಯ ದಿನ ಮತ್ತು ಇತರ ವಿಶ್ವಸಂಸ್ಥೆಯ ಅಂಗಸಂಸ್ಥೆ ರಜಾದಿನಗಳನ್ನು ವಿಶ್ವ ಮಾನವೀಯ ಕ್ರಿಯೆಯ ದಿನವನ್ನು ಅನುಸರಿಸಲಾಗುತ್ತದೆ. ತಮ್ಮ ಸಾಮಾನ್ಯ ಸಂದೇಶವನ್ನು ವರ್ಧಿಸಲು ಜಾಗತಿಕ ಮಾನವೀಯ ನೆರವಿನ ಯಶಸ್ಸು ಮತ್ತು ವೈಫಲ್ಯಗಳನ್ನು ಹಂಚಿಕೊಳ್ಳುವುದರೊಂದಿಗೆ ಕೆಲವು ಸಾಮಾಜಿಕ ಮಾಧ್ಯಮ ಕ್ರಿಯೆಗೆ ದಿನವು ಕರೆ ನೀಡುತ್ತದೆ.ಪ್ರಪಂಚದಾದ್ಯಂತದ ಮಾನವತಾವಾದಿಗಳು ಲಕ್ಷಾಂತರ ಜೀವಗಳನ್ನು ಉಳಿಸಲು ಮತ್ತು ಶತಕೋಟಿ ಜನರಿಗೆ ನಿಸ್ವಾರ್ಥವಾಗಿ ಸೇವೆ ಸಲ್ಲಿಸಲು ನಮ್ಮ ಪ್ರಶಂಸೆ ಮತ್ತು ಬೆಂಬಲಕ್ಕೆ ಅರ್ಹರು. ಈ ದಿನವು ಮಾನವೀಯತೆಯ ಗಡಿಗಳನ್ನು ಪರಿಶೀಲಿಸುತ್ತದೆ.

# ಜಗ್ಗಿವಾಸುದೇವ್‌ಗೆ ಬಿಗ್ ರಿಲೀಫ್ ಇಶಾ ಫೌಂಡೇಶನ್ ವಿರುದ್ಧದ ಕೇಸ್ ವಜಾ



**ನವದೆಹಲಿ:** ಸದ್ಗುರು ಜಗ್ಗಿ ವಾಸುದೇವ್‌ಗೆ ಬಿಗ್ ರಿಲೀಫ್ ಸಿಕ್ಕಿದೆ. ತಮ್ಮ ಮಕ್ಕಳನ್ನು ತಮಿಳುನಾಡಿನ ಕೊಯಮತ್ತೂರಿನಲ್ಲಿರುವ ಇಶಾ ಫೌಂಡೇಶನ್‌ನ ಆಶ್ರಮದಲ್ಲಿ ಅಕ್ರಮವಾಗಿ ಇಟ್ಟುಕೊಳ್ಳಲಾಗಿದೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಸದ್ಗುರು ಜಗ್ಗಿ ವಾಸುದೇವ್ ವಿರುದ್ಧ ದಾಖಲಾಗಿದ್ದ ಪ್ರಕರಣವನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿದೆ. ತಮ್ಮ ಇಬ್ಬರು ಹೆಣ್ಣು ಮಕ್ಕಳ ತಲೆಕೆಡಿಸಿ ಬಲವಂತವಾಗಿ ಬಂಧಿಸಿ ಆಶ್ರಮದಲ್ಲಿ ಇರಿಸಲಾಗಿದೆ ಎಂದು ವ್ಯಕ್ತಿಯೊಬ್ಬರು ನೀಡಿದ್ದ ದೂರಿನ ಅಡಿಯಲ್ಲಿ ನಡೆಯುತ್ತಿದ್ದ ಎಲ್ಲ ಪ್ರಕ್ರಿಯೆಗಳನ್ನು ಸುಪ್ರೀಂ ಕೋರ್ಟ್ ಶುಕ್ರವಾರ ರದ್ದುಗೊಳಿಸಿದೆ.

ನ್ಯಾಯಾಲಯವು ಇಬ್ಬರು ಮಹಿಳೆಯ ಜತೆ ಮಾತನಾಡಿ ಅವರ ಹೇಳಿಕೆಗಳನ್ನು ದಾಖಲಿಸಿಕೊಂಡಿತ್ತು. ಅವರು ಈಶಾ ಫೌಂಡೇಷನ್‌ನಲ್ಲಿನ ತಮ್ಮ ಸ್ವ ಇಚ್ಛೆಯಿಂದ ವಾಸವಾಗಿದ್ದೇವೆ ಎಂದು ಹೇಳಿಕೆ ನೀಡಿದ್ದರು. ಆಶ್ರಮದಲ್ಲಿ ಯಾರನ್ನೂ ಅಕ್ರಮವಾಗಿ ಇರಿಸಿಲ್ಲ ಎನ್ನುವುದು ಅಲ್ಲಿನ ನಿವಾಸಿಗಳೇ ಹೇಳಿಕೆ ನೀಡಿದ್ದಾರೆ. ಅಕ್ರಮವಾಗಿ ಇರಿಸಿರುವ ಬಗ್ಗೆ ಪೂರಕ ಸಾಕ್ಷ್ಯಾಧಾರಗಳು ಇಲ್ಲದೇ ಇರುವುದರಿಂದ ಪ್ರಕರಣ ವಜಾಗೊಳಿಸಲಾಗಿದೆ ಎಂದು ಸುಪ್ರೀಂ ತನ್ನ ಆದೇಶದಲ್ಲಿ ತಿಳಿಸಿದೆ.

**ಏನಿದು ಪ್ರಕರಣ?:** ನಿವೃತ್ತ ಪ್ರೊಫೆಸರ್ ಎಸ್ ಕಾಮರಾಜ್ ಅವರು ಮದ್ರಾಸ್ ಹೈಕೋರ್ಟ್‌ನಲ್ಲಿ ಫೌಂಡೇಶನ್ ವಿರುದ್ಧ ಅರ್ಜಿ ಸಲ್ಲಿಸಿದ್ದರು. ಅವರ ತಮ್ಮ ಪುತ್ರಿಯರಾದ ಲತಾ ಮತ್ತು ಗೀತಾ ಅವರನ್ನು ಆಶ್ರಮದಲ್ಲಿ ಒತ್ತೆಯಾಳಾಗಿ ಇರಿಸಲಾಗಿದೆ. ಒತ್ತಾಯ ಪೂರ್ವಕವಾಗಿ ಅವರನ್ನು ಸನ್ಯಾಸಿನಿ ಮಾಡಲಾಗಿದೆ ಎಂದು ಅವರು ಆರೋಪಿಸಿದ್ದರು. ಈ ಅರ್ಜಿಯನ್ನು ಪುರಸ್ಕರಿಸಿದ್ದ ಮದ್ರಾಸ್ ಹೈಕೋರ್ಟ್ ಇಶಾ ಫೌಂಡೇಶನ್‌ಗೆ ಸಂಬಂಧಿಸಿದ ಎಲ್ಲಾ ಅಪರಾಧ ಪ್ರಕರಣಗಳಲ್ಲಿ ತಮಿಳುನಾಡು ಪೊಲೀಸರು ತನಿಖೆ ನಡೆಸಿ ವರದಿ ಸಲ್ಲಿಸಬೇಕು ಎಂದು ಆದೇಶಿಸಿತ್ತು. ಮರುದಿನ ಅಕ್ಟೋಬರ್ 1 ರಂದು, ಸುಮಾರು 150 ಪೊಲೀಸರು ತನಿಖೆಗಾಗಿ ಆಶ್ರಮದ ಮೇಲೆ ದಾಳಿ ನಡೆಸಿದ್ದರು. ಹೈಕೋರ್ಟ್ ಆದೇಶವನ್ನು ಇಶಾ ಫೌಂಡೇಶನ್ ಸುಪ್ರೀಂನಲ್ಲಿ ಪ್ರಶ್ನಿಸಿತ್ತು. ಸುಪ್ರೀಂಕೋರ್ಟ್ ವಿಚಾರಣೆಯಲ್ಲಿ 2009ರಲ್ಲಿ ಇಬ್ಬರು ಆಶ್ರಮಕ್ಕೆ ಬಂದಿದ್ದರು ಎಂದು ಇಶಾ ಫೌಂಡೇಶನ್ ತಿಳಿಸಿತ್ತು. ಆಗ ಅವರ ವಯಸ್ಸು 24 ಮತ್ತು 27 ವರ್ಷ ಆಗಿತ್ತು. ಇಬ್ಬರೂ ಸಹೋದರಿಯರು ತಮ್ಮ ಸ್ವಂತ ಇಚ್ಛೆಯ ಮೇರೆಗೆ ಇಲ್ಲೇ ನೆಲೆಸಿದ್ದಾರೆ ಎಂದು ಹೇಳಿತ್ತು.

## ನನಗೆ ಯಾವ ಸಹೋದರಿಯೂ ಇಲ್ಲ :ಪ್ರಹ್ಲಾದ್ ಜೋಶಿ

**ನವದೆಹಲಿ:** ನನಗೆ ಯಾವ ಸಹೋದರಿಯೂ ಇಲ್ಲ. ಗೋಪಾಲ್ ಜೋಶಿ ಮೇಲಿನ ಪ್ರಕರಣಕ್ಕೂ ನನಗೂ ಯಾವುದೇ ಸಂಬಂಧ ಇಲ್ಲ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹೇಳಿಕೆ ನೀಡಿದ್ದಾರೆ. ಬೆಂಗಳೂರಿನಲ್ಲಿ ದಾಖಲಾಗಿರುವ ಬಿಜೆಪಿ ಟಿಕೆಟ್ ವಂಚನೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ಮಾತನಾಡಿದ ಜೋಶಿ, ನನಗೆ ಯಾವುದೇ ಸಹೋದರಿಯೇ ಇಲ್ಲ. ನನ್ನ ತಾಯಿಗೆ ಗೋಪಾಲ್ ಜೋಶಿ ಸೇರಿ ನಾಲ್ವರು ಮಕ್ಕಳು. ಆದರೆ ಗೋಪಾಲ್ ಜೋಶಿ ಅವರೊಂದಿಗೆ ಕಳೆದ 32 ವರ್ಷಗಳಿಂದ ಯಾವುದೇ ಸಂಪರ್ಕದಲ್ಲಿ ಇಲ್ಲ ಎಂದು ತಿಳಿಸಿದರು. ಗೋಪಾಲ್ ಜೋಶಿ ಮಾತ್ರವಲ್ಲ, ಯಾರೊಂದಿಗೂ ನನ್ನ ಹೆಸರು ಉಲ್ಲೇಖಿಸದಂತೆ 2013ರಲ್ಲಿ ಬೆಂಗಳೂರಿನ ಸಿವಿಲ್ ಕೋರ್ಟ್ ತಡೆಯಾಜ್ಞೆ ನೀಡಿದೆ. ನ್ಯಾಯಾಲಯದ ಅಫಿಡವಿಟ್ನಲ್ಲಿ ಅದರ ವಿವರ ಇದೆ. ಅವರ ಪ್ರಕರಣಕ್ಕೂ ನನಗೂ ಯಾವುದೇ ಸಂಬಂಧ ಇಲ್ಲ ಎಂದು ಸ್ಪಷ್ಟಪಡಿಸಿದರು.



## ಇಸ್ರೇಲ್ ಪ್ರಧಾನಿಗೆ ಕರೆ ಮಾಡಿದ ಅಮೆರಿಕ ಅಧ್ಯಕ್ಷ ಬೈಡನ್ ಅಭಿನಂದನೆ



**ಗಾಜಾ:** ಹಮಾಸ್ ಉಗ್ರ ಸಂಘಟನೆಯ ಮುಖ್ಯಸ್ಥ ಯಾಹ್ಯಾ ಸಿನ್ವಾರ್ ಹತ್ಯೆಯನ್ನು ಇಸ್ರೇಲ್ ದೃಢಪಡಿಸಿದೆ. ಗಾಜಾದಲ್ಲಿ ಸಿನ್ವಾರ್ ಸೇರಿದಂತೆ ಮೂವರು ಉಗ್ರರನ್ನು ಇಸ್ರೇಲ್ ಪಡೆ ಕೊಂದು ಹಾಕಿದೆ.

ಇದರ ಬೆನ್ನಲ್ಲೇ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹುಗೆ ಅಮೆರಿಕ ಅಧ್ಯಕ್ಷ ಜೋ ಬೈಡನ್ ಅಭಿನಂದನೆ ಸಲ್ಲಿಸಿದ್ದಾರೆ. ನೆತನ್ಯಾಹು ಅವರಿಗೆ ಕರೆ ಮಾಡಿದ ಅಮೆರಿಕ ಅಧ್ಯಕ್ಷ ಬೈಡನ್ ಅಭಿನಂದನೆ ಸಲ್ಲಿಸಿದ್ದು, ಉಗ್ರರ ವಿರುದ್ಧ ಇಸ್ರೇಲ್ ದಿಟ್ಟ ನಿರ್ಧಾರ ಕೈಗೊಂಡಿದೆ ಎಂದು ಹೇಳಿದ್ದಾರೆ.

ಕಾರ್ಯಾಚರಣೆಯಲ್ಲಿ ಅಮೆರಿಕ ಸೇನೆ ಭಾಗಿಯಾಗಿಲ್ಲ. ದಿಟ್ಟ ನಿಲುವು ಕೈಗೊಂಡು ಉಗ್ರರ ವಿರುದ್ಧ ಇಸ್ರೇಲ್ ಹೋರಾಟ ನಡೆಸುತ್ತಿದೆ. ಉಗ್ರರ ವಿರುದ್ಧ ಇಸ್ರೇಲ್ ನಡೆಸುತ್ತಿರುವ ಕಾರ್ಯಾಚರಣೆಗೆ ಅಮೆರಿಕದ ಬೆಂಬಲ ಇದೆ ಎಂದು ಬೈಡನ್ ಅಭಯ ನೀಡಿದ್ದಾರೆ. 2023ರ ಅಕ್ಟೋಬರ್ 7ರಂದು ಇಸ್ರೇಲ್ ಮೇಲೆ ಹಮಾಸ್ ಉಗ್ರರು ದಾಳಿ ನಡೆಸಿದ್ದರು. ಈ ದಾಳಿಯ ಮಾಸ್ಟರ್ ಮೈಂಡ್ ಆಗಿದ್ದ ಸಿನ್ವಾರ್ ನನ್ನು ಹತ್ಯೆ ಮಾಡಲಾಗಿದೆ.

# ಕೆನಡಾದ ಗಡಿ ಪೊಲೀಸ್ ಅಧಿಕಾರಿ ವಿರುದ್ಧ ಭಾರತ ಭಯೋತ್ಪಾದನೆ ಪ್ರಕರಣ ದಾಖಲು



**ನವದೆಹಲಿ:** ಭಾರತ ಮತ್ತು ಕೆನಡಾ ನಡುವಿನ ಹದಗೆಡುತ್ತಿರುವ ಸಂಬಂಧಗಳ ನಡುವೆ, ಕೆನಡಾದಿಂದ ಗಡಿಪಾರು ಮಾಡಲು ಭಾರತ ಆಗ್ರಹಿಸುತ್ತಿರುವ ಭಯೋತ್ಪಾದಕರ ಪಟ್ಟಿಯಲ್ಲಿ ಕೆನಡಾದ ಗಡಿ ಸೇವಾ ಸಂಸ್ಥೆ ಅಧಿಕಾರಿಯ ಹೆಸರನ್ನು ಭಾರತ ಸೇರಿಸಿದೆ. ಹೌದು, ಅಚ್ಚರಿಯ ಬೆಳವಣಿಗೆಯೊಂದರಲ್ಲಿ, ಕೆನಡಾದ ಗಡಿ ಪೊಲೀಸ್ ಅಧಿಕಾರಿ ಕೆನಡಿಯನ್ ಬಾರ್ಡರ್ ಸರ್ವಿಸ್ ಏಜೆನ್ಸಿ (ಸಿಬಿಎಸ್‌ಎ)ನ ಹೆಸರು ಭಾರತವು ಕೆನಡಾದಿಂದ ಗಡಿಪಾರು ಮಾಡಲು ಬಯಸುತ್ತಿರುವ ಪರಾರಿಯಾದ ಭಯೋತ್ಪಾದಕರ ಪಟ್ಟಿಯಲ್ಲಿ ಕಾಣಿಸಿಕೊಂಡಿದೆ. ಕೆನಡಾದಿಂದ ಪೌರತ್ವ ಪಡೆದ ಮತ್ತು ಕಳೆದ ವರ್ಷ ಕೊಲ್ಲಲ್ಪಟ್ಟ ಅಕ್ರಮ ವಲಸಿಗ ಖಲಿಸ್ತಾನಿ ಭಯೋತ್ಪಾದಕ ಹರ್ದೀಪ್ ಸಿಂಗ್ ನಿಜ್ಜರ್ ಹತ್ಯೆಯಲ್ಲಿ ಭಾರತದ ರಾಜತಾಂತ್ರಿಕರ ಕೈವಾಡವಿದೆ ಎಂದು ಕೆನಡಾದ ಪ್ರಧಾನಿ ಜಸ್ಟಿನ್ ಟ್ರುಡೊ ಅವರ ಇತ್ತೀಚಿನ ಆರೋಪಗಳು ಕೆನಡಾ ಸರ್ಕಾರವು ಖಲಿಸ್ತಾನಿ ಭಯೋತ್ಪಾದಕರನ್ನು ಬೆಂಬಲಿಸುತ್ತಿರುವ ಬಗ್ಗೆ ಮತ್ತೊಮ್ಮೆ ಗಮನ ಸೆಳೆದಿದೆ. ಕೆನಡಾದಲ್ಲಿ ಸಕ್ರಿಯವಾಗಿರುವ ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್ ಭಾರತೀಯ ಸರ್ಕಾರಿ ಏಜೆಂಟರೊಂದಿಗೆ ಸಂಪರ್ಕ ಹೊಂದಿದೆ ಎಂದು ರಾಯಲ್ ಕೆನಡಿಯನ್ ಮೌಂಟೆಡ್ ಪೊಲೀಸ್ ಕೆಲವು ದಿನಗಳ ಹಿಂದೆ ಹೇಳಿತ್ತು. ಇದಾದ ನಂತರ, ಭಾರತದ ವಿದೇಶಾಂಗ ಸಚಿವಾಲಯವು ಕೆನಡಾ ಸರ್ಕಾರವು ಬಿಷ್ಣೋಯ್ ಗ್ಯಾಂಗ್‌ನ ಸದಸ್ಯರನ್ನು ಗಡಿಪಾರು ಮಾಡಬೇಕೆಂಬ ಭಾರತದ ಮನವಿಯನ್ನು ನಿರ್ಲಕ್ಷಿಸಿದೆ ಎಂದು ಹೇಳಿದೆ. ವರದಿಗಳ ಪ್ರಕಾರ, ನಿಷೇಧಿತ ಇಂಟರ್ ನ್ಯಾಶನಲ್ ಸಿಖ್ ಯೂತ್ ಫೆಡರೇಶನ್ (ಐಎಸ್ ವೈಎಫ್) ಸದಸ್ಯ ಮತ್ತು ಸಿಬಿಎಸ್‌ಎಯಲ್ಲಿ ಉದ್ಯೋಗಿಯಾಗಿರುವ ಸಂದೀಪ್ ಸಿಂಗ್ ಸಿಧು ಅವರನ್ನು ಪಂಜಾಬ್‌ನಲ್ಲಿ ಭಯೋತ್ಪಾದಕ ಚಟುವಟಿಕೆಗಳನ್ನು ಉತ್ತೇಜಿಸುವಲ್ಲಿ ತೊಡಗಿಸಿಕೊಂಡಿದ್ದಕ್ಕಾಗಿ ಈ ಪಟ್ಟಿಗೆ ಸೇರಿಸಲಾಗಿದೆ.

ತನ್ನ ಗಡಿಯೊಳಗೆ ಕಾರ್ಯಾಚರಿಸುತ್ತಿರುವ ಭಾರತ ವಿರೋಧಿ ಅಂಶಗಳ ವಿರುದ್ಧ ಕೆನಡಾ ಸರ್ಕಾರ ಕ್ರಮ ಕೈಗೊಳ್ಳಲು ವಿಫಲವಾಗಿರುವ ಬಗ್ಗೆ ಭಾರತದ ವಿದೇಶಾಂಗ ವ್ಯವಹಾರಗಳ ಸಚಿವಾಲಯ ತೀವ್ರ ಕಳವಳ ವ್ಯಕ್ತಪಡಿಸಿದೆ. ಕಳೆದ ಎರಡು ದಶಕಗಳಲ್ಲಿ ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್‌ಗೆ ಸಂಬಂಧಿಸಿದ ವ್ಯಕ್ತಿಗಳು ಸೇರಿದಂತೆ ಕೆನಡಾದೊಂದಿಗೆ 26 ಭಾರತೀಯ ಹಸ್ತಾಂತರ ವಿನಂತಿಗಳು ಬಾಕಿ ಉಳಿದಿವೆ ಎಂದಿದ್ದಾರೆ.

## 2 ಸಾವಿರಕ್ಕೂ ಹೆಚ್ಚು ಉದ್ಯೋಗಿಗಳ ವಜಾಗೊಳಿಸಿದ ನೋಕಿಯಾ!

**ಬೀಜಿಂಗ್:** ಫೋನ್ ತಯಾರಕ ಕಂಪನಿ ನೋಕಿಯಾ ಚೀನಾದಾದ್ಯಂತ ತನ್ನ 2,000 ಕ್ಕೂ ಹೆಚ್ಚು ಉದ್ಯೋಗಿಗಳನ್ನು ವಜಾಗೊಳಿಸಿದೆ ಎಂದು ವರದಿಯಾಗಿದೆ. ನೋಕಿಯಾ ವೆಚ್ಚಗಳನ್ನು ಕಡಿಮೆ ಮಾಡುವ ಪ್ರಯತ್ನದ ಭಾಗವಾಗಿ ಚೀನಾದಲ್ಲಿ 2,000 ಕ್ಕೂ ಅಧಿಕ ಉದ್ಯೋಗಿಗಳನ್ನು ವಜಾಗೊಳಿಸಿದೆ. ಈ ಮೂಲಕ ಕಂಪನಿ ಚೀನಾದಾದ್ಯಂತ ಹೊಂದಿರುವ ಐದನೇ ಒಂದು ಭಾಗದಷ್ಟು ಉದ್ಯೋಗಿಗಳನ್ನು ಕಿತ್ತೊಗೆದಿದೆ. ಮಾತ್ರವಲ್ಲದೇ ಯುರೋಪ್ನಲ್ಲಿಯೂ ಕಂಪನಿ ಸುಮಾರು 350 ಉದ್ಯೋಗಿಗಳನ್ನು ವಜಾಗೊಳಿಸುವ ಕುರಿತು ಮಾತುಕತೆ ನಡೆಸಿದೆ ಎನ್ನಲಾಗಿದೆ. ಡಿಸೆಂಬರ್ 2023 ರ ಹೊತ್ತಿಗೆ ನೋಕಿಯಾ ಗ್ರೇಟರ್ ಚೀನಾದಲ್ಲಿ 10,400 ಉದ್ಯೋಗಿಗಳನ್ನು ಮತ್ತು ಯುರೋಪ್ನಲ್ಲಿ 37,400 ಉದ್ಯೋಗಿಗಳನ್ನು ಹೊಂದಿತ್ತು. ವೆಚ್ಚವನ್ನು ಕಡಿಮೆ ಮಾಡುವ ಸಲುವಾಗಿ 2026 ರ ವೇಳೆಗೆ 14,000 ಉದ್ಯೋಗಿಗಳನ್ನು ಕಡಿತಗೊಳಿಸಲು ಕಂಪನಿಯು ಕಳೆದ ವರ್ಷ ಯೋಜನೆಗಳನ್ನು ಹಾಕಿತ್ತು. ಅದರ ಭಾಗವಾಗಿ ಈಗ 2,000 ಉದ್ಯೋಗಿಗಳು ವಜಾಗೊಂಡಿದ್ದಾರೆ.




## ದುಬೈನಲ್ಲಿ ಶರದ್ ಪವಾರ್, ದಾವೂದ್ ಇಬ್ರಾಹಿಂನನ್ನು ಭೇಟಿಯಾಗಿದ್ದರು: ಪ್ರಕಾಶ್

**ಮುಂಬೈ:** ನ್ಯಾಶನಲಿಸ್ಟ್ ಕಾಂಗ್ರೆಸ್ ಪಾರ್ಟಿ (ಎನ್‌ಸಿಪಿ-ಎಸ್‌ಪಿ) ಮುಖ್ಯಸ್ಥ ಶರದ್ ಪವಾರ್ ಮುಖ್ಯಮಂತ್ರಿಯಾಗಿದ್ದಾಗ ದುಬೈನಲ್ಲಿ ದಾವೂದ್ ಇಬ್ರಾಹಿಂನನ್ನು ಭೇಟಿಯಾಗಿದ್ದರು ಎಂದು ವಂಚಿತ್ ಬಹುಜನ ಆಘಾಡಿ (ವಿಬಿಎ) ಮುಖ್ಯಸ್ಥ ಅಂಬೇಡ್ಕರ್ ಅವರ ಮೊಮ್ಮಗ ಪ್ರಕಾಶ್ ಅಂಬೇಡ್ಕರ್ ಸ್ಫೋಟಕ ಹೇಳಿಕೆ ನೀಡಿದ್ದಾರೆ. ಅವರು ಮುಖ್ಯಮಂತ್ರಿಯಾಗಿದ್ದಾಗ ದಾವೂದ್ ಇಬ್ರಾಹಿಂನನ್ನು ಭೇಟಿ ಮಾಡಲು ಕೇಂದ್ರ ಸರ್ಕಾರ ಅನುಮತಿ ನೀಡಿದೆಯೇ ಎಂಬುದನ್ನು ಖಚಿತಪಡಿಸಲು ದಾಖಲೆಗಳನ್ನು ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದ್ದಾರೆ. ಶರದ್ ಪವಾರ್ ಅವರು 1988 ರಿಂದ 1991 ರವರೆಗೆ ಮುಖ್ಯಮಂತ್ರಿಯಾಗಿದ್ದರು. ಆ ಅವಧಿಯಲ್ಲಿ ವಿದೇಶ ಪ್ರವಾಸ ಮಾಡಿದ್ದರು. ಮೊದಲು ಲಂಡನ್‌ಗೆ ಹೋಗಿದ್ದರು, ನಂತರ ಕ್ಯಾಲಿಫೋರ್ನಿಯಾದಲ್ಲಿ ಸಭೆ ಒಂದರ ಸಲುವಾಗಿ ಎರಡು ದಿನ ಕಳೆದಿದ್ದರು. ಬಳಿಕ ದುಬೈನಲ್ಲಿ ದಾವೂದ್ ಇಬ್ರಾಹಿಂನನ್ನು ಭೇಟಿಯಾದರು. ಆ ದಿನ ಸಂಜೆ ಪವಾರ್ ಲಂಡನ್‌ಗೆ ತೆರಳಿ ಎರಡು ದಿನಗಳ ನಂತರ ಭಾರತಕ್ಕೆ ಮರಳಿದ್ದರು. ಈ ಸಭೆಗೆ ಕೇಂದ್ರ ಸರ್ಕಾರ ಅನುಮತಿ ನೀಡಿತ್ತಾ ಎಂದು ಅವರು ಪ್ರಶ್ನಿಸಿದ್ದಾರೆ.ನಾನು ಯಾವುದೇ ಆರೋಪ ಮಾಡಿಲ್ಲ, ಆದರೆ ನಾನು ಕೆಲವು ಸತ್ಯಗಳನ್ನು ಸಮಾಜದ ಮುಂದಿಟ್ಟಿದ್ದೇನೆ. ಪವಾರ್ ಅವರು ಕೇಂದ್ರ ಸರ್ಕಾರದ ಅನುಮತಿಯಿಲ್ಲದೆ ವಿದೇಶ ಪ್ರವಾಸ ಮಾಡಲು ಸಾಧ್ಯವಿಲ್ಲ. ಅಲ್ಲದೇ ಸಭೆಗಳ ವರದಿಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆಯೇದಾವುದ್ ಇಬ್ರಾಹಿಂ ಹಾಗೂ ಪವಾರ್ ಅವರ ಈ ಭೇಟಿಯ ವಿಶೇಷತೆ ಏನು ಎಂದು ಬಹಿರಂಗಗೊಳಿಸಬೇಕು ಎಂದು ಒತ್ತಾಯಿಸಿದ್ದಾರೆ.

# ಕೋಲ್ಕತ್ತಾ ಆಸ್ಪತ್ರೆಯಲ್ಲಿ ಭಾರಿ ಬೆಂಕಿ ಅವಘಡ: ಐಸಿಯುನಲ್ಲಿದ್ದ ರೋಗಿ ಸಾವು



**ಕೋಲ್ಕತ್ತಾ:** ಕೋಲ್ಕತ್ತಾದ ಇಎಸ್‌ಐ ಆಸ್ಪತ್ರೆಯಲ್ಲಿ ಭಾರಿ ಬೆಂಕಿ ಅವಘಡ ಸಂಭವಿಸಿದ್ದು, ಐಸಿಯುನಲ್ಲಿದ್ದ ಓರ್ವ ರೋಗಿ ಸಾವನ್ನಪ್ಪಿದ್ದಾನೆ.

ಕೋಲ್ಕತ್ತಾದ ಸೀಲ್ದಾಹ್ ಪ್ರದೇಶದಲ್ಲಿರುವ ಇಎಸ್‌ಐ ಸರ್ಕಾರಿ ಆಸ್ಪತ್ರೆಯಲ್ಲಿ ಅ.18 ಬೆಳಿಗ್ಗೆ ಬೆಂಕಿ ಕಾಣಿಸಿಕೊಂಡಿದೆ. ತಕ್ಷಣ ಸ್ಥಳಕ್ಕೆ 10 ಅಗ್ನಿಶಾಮಕ ವಾಹನಗಳು ಧಾವಿಸಿದ್ದು, ಬೆಂಕಿ ನಂದಿಸುವ ಕಾರ್ಯದಲ್ಲಿ ತೊಡಗಿಕೊಂಡರು. ಈ ವೇಳೆ ಕೇವಲ 20 ನಿಮಿಷದಲ್ಲಿ 80 ರೋಗಿಗಳನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲಾಗಿದ್ದು, ಐಸಿಯುನಲ್ಲಿದ್ದ ಓರ್ವ ರೋಗಿ ಸಾವನ್ನಪ್ಪಿದ್ದಾನೆ ಎಂದು ತಿಳಿಸಿದ್ದಾರೆ.

ಮೊದಲು ಆಸ್ಪತ್ರೆಯ ಒಂದು ಕೋಣೆಯಲ್ಲಿ ಬೆಂಕಿ ಕಾಣಿಸಿಕೊಂಡಿತು. ಬೇರೆ ಕೋಣೆಗಳಿಗೆ ಹರಡುವ ಮುನ್ನ ಬೆಂಕಿಯನ್ನು ಹತೋಟಿಗೆ ತರಲಾಯಿತು. ಆದರೆ ಬೆಂಕಿ ಹೊತ್ತಿಕೊಳ್ಳಲು ನಿಖರವಾದ ಕಾರಣ ಏನು ಎಂಬುವುದು ತಿಳಿದು ಬಂದಿಲ್ಲ. ಕೆಲವು ರೋಗಿಗಳು ಬೆಂಕಿ ಕಾಣಿಸಿಕೊಂಡ ಬಳಿಕ ತಮ್ಮ ಆರೈಕೆದಾರರ ಜೊತೆ ಹೊರಗೆ ಬಂದಿದ್ದು, ಇನ್ನುಳಿದ ಕೆಲವರನ್ನು ಬೇರೆ ಕಡೆಗೆ ಸ್ಥಳಾಂತರಿಸಲಾಯಿತು. ಸದ್ಯ ಚಿಕಿತ್ಸೆಗಾಗಿ ರೋಗಿಗಳನ್ನು ಬೇರೆ ಆಸ್ಪತ್ರೆಗೆ ವರ್ಗಾವಣೆ ಮಾಡಲಾಗಿದೆ. ಸ್ಥಳಕ್ಕೆ ಪಶ್ಚಿಮ ಬಂಗಾಳದ ಅಗ್ನಿಶಾಮಕ ಹಾಗೂ ತುರ್ತು ಸೇವೆಗಳ ಸಚಿವ ಸುಜಿತ್ ಬೋಸ್ ಭೇಟಿ ನೀಡಿದರು. ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಟಿ.ಕೆ.ದತ್ತಾ ಮಾತನಾಡಿ, ಇದೊಂದು ಭಯಾನಕ ಅಗ್ನಿ ಅವಘಡ. ಐಸಿಯುನಲ್ಲಿ ದಾಖಲಾಗಿದ್ದ ಓರ್ವ ರೋಗಿಯ ಹೊರತಾಗಿ, ಕೇವಲ 20 ನಿಮಿಷದಲ್ಲಿ ಎಲ್ಲಾ ರೋಗಿಗಳನ್ನು ಪ್ರಾಣಾಪಾಯದಿಂದ ರಕ್ಷಿಸುವಲ್ಲಿ ಯಶಸ್ವಿಯಾಗಿದ್ದೇವೆ. ಐಸಿಯುನಲ್ಲಿದ್ದ ಓರ್ವ ರೋಗಿಯ ಸಾವಿಗೆ ಕಾರಣ ಇನ್ನೂ ತಿಳಿದು ಬಂದಿಲ್ಲ. ಇನ್ನಿತರ ಯಾವುದೇ ಗಾಯಗಳಾಗಿಲ್ಲ. ಕೋಣೆಯಲ್ಲಿ ಹೊಗೆ ಕಾಣಿಸಿದ್ದನ್ನು ಕಂಡ ಕೆಲ ರೋಗಿಗಳು ಕಿಟಕಿಯಿಂದ 'ನಮ್ಮನ್ನು ಉಳಿಸಿ' ಎಂದು ಕಿರುಚುತ್ತಿದ್ದರು ಎಂದು ನಡೆದ ಅವಘಡದ ಕುರಿತು ವಿವರಿಸಿದರು.

## ಬ್ರಿಕ್ ಶೃಂಗಸಭೆ: ರಷ್ಯಾಗೆ ಪ್ರಧಾನಿ ಮೋದಿ ಭೇಟಿ

**ರಷ್ಯಾ:** ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಆಹ್ವಾನದ ಮೇರೆಗೆ ಪ್ರಧಾನಿ ನರೇಂದ್ರ ಮೋದಿ ಬ್ರಿಕ್ಸ್ ಶೃಂಗಸಭೆಗಾಗಿ ರಷ್ಯಾಗೆ ತೆರಳಲಿದ್ದಾರೆ. ಅಕ್ಟೋಬರ್ 22ಕ್ಕೆ ರಷ್ಯಾಗೆ ತೆರಳಲಿದ್ದು ಎರಡು ದಿನಗಳ ಕಾಲ ಅಲ್ಲಿರಲಿದ್ದಾರೆ. ಸೆಪ್ಟೆಂಬರ್ನಲ್ಲಿ, ರಷ್ಯಾ ಅಧ್ಯಕ್ಷ ಪುಟಿನ್ ಅವರು ಕಜಾನ್ನಲ್ಲಿ ನಡೆಯಲಿರುವ ಬ್ರಿಕ್ಸ್ ಶೃಂಗಸಭೆಯಲ್ಲಿ ಅಕ್ಟೋಬರ್ 22 ರಂದು ದ್ವಿಪಕ್ಷೀಯ ಸಭೆಯನ್ನು ಪ್ರಸ್ತಾಪಿಸುವ ಮೂಲಕ ಪಿಎಂ ಮೋದಿಯವರಿಗೆ ಆಹ್ವಾನವನ್ನು ನೀಡಿದರು. ಆಹ್ವಾನವನ್ನು ನೀಡುವಾಗ ಅಧ್ಯಕ್ಷ ಪುಟಿನ್ ಅವರು ಪ್ರಧಾನಿ ಮೋದಿಯನ್ನು ಒಳ್ಳೆಯ ಸ್ನೇಹಿತ ಎಂದು ಬಣ್ಣಿಸಿದ್ದರು. ಈ ವರ್ಷದಲ್ಲಿ ಪ್ರಧಾನಿ ಮೋದಿಯವರ ಎರಡನೇ ರಷ್ಯಾ ಭೇಟಿ ಇದಾಗಿದೆ. ಅವರು ರಷ್ಯಾದ ಅಧ್ಯಕ್ಷರೊಂದಿಗೆ ಅನೌಪಚಾರಿಕ ಭೇಟಿಗಾಗಿ ಮಾಸ್ಕೋಗೆ ತೆರಳಿದ್ದರು. ಮಾಸ್ಕೋಗೆ ಅವರ ಪ್ರವಾಸವು ಉಕ್ರೇನ್ ಮೇಲೆ ರಷ್ಯಾದ ಆಕ್ರಮಣದ ನಂತರ ಅವರ ಮೊದಲನೆಯದು.



## ಹಮಾಸ್ ಮುಖ್ಯಸ್ಥನ ಸಾವಿನ ಮೂಲಕ ಅಮಾಯಕರ ಸಾವಿಗೆ ನ್ಯಾಯ ಸಿಕ್ಕಿದೆ: ಕಮಲಾ ಹ್ಯಾರಿಸ್



**ಅಮೆರಿಕ:** ಹಮಾಸ್ ಮುಖ್ಯಸ್ಥ ಯಾಹ್ಯಾ ಸಿನ್ವಾರ್ ಹತ್ಯೆಯ ಮೂಲಕ ಸಾವಿರಾರು ಅಮಾಯಕರ ಸಾವಿಗೆ ನ್ಯಾಯ ಸಿಕ್ಕಿದೆ ಎಂದು ಅಮೆರಿಕ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಹೇಳಿದ್ದಾರೆ.

ಅಕ್ಟೋಬರ್ 7 ರಿಂದ ಪ್ರಾರಂಭವಾಗಿರುವ ಯುದ್ಧದಲ್ಲಿ ಹಮಾಸ್ ಸಾಕಷ್ಟು ಮಂದಿಯನ್ನು ಭೀಕರವಾಗಿ ಹತ್ಯೆ ಮಾಡಲಾಗಿದ್ದು, ಹಲವರನ್ನು ಒತ್ತೆಯಾಳಾಗಿರಿಸಿಕೊಂಡು ಹತ್ಯೆ ಮಾಡಲಾಗಿದೆ.

ಇದೀಗ ಹಮಾಸ್ ಮುಖ್ಯಸ್ಥ ಯಾಹ್ಯಾ ಸಿನ್ವಾರ್ ಹತ್ಯೆಯಿಂದ ಅವರೆಲ್ಲರ ಸಾವಿಗೆ ನ್ಯಾಯ ಸಿಕ್ಕಂತಾಗಿದೆ ಎಂದು ಕಮಲಾ ತಿಳಿಸಿದ್ದಾರೆ.

ಯಾಹ್ಯಾ ಸಿನ್ವಾರ್ ಸಾವಿನಿಂದ ಅಮೆರಿಕ, ಇಸ್ರೇಲ್ ಮತ್ತು ಇಡೀ ಜಗತ್ತು ಖುಷಿಯಾಗಿದೆ. ಗಾಜಾದಲ್ಲಿ ಯುದ್ಧವನ್ನು ಕೊನೆಗೊಳಿಸಲು ಇದು ಒಂದು ಅವಕಾಶವಾಗಿದೆ ಎಂದು ಕಮಲಾ ಹ್ಯಾರಿಸ್ ತಿಳಿಸಿದ್ದಾರೆ.

ಹಮಾಸ್ ನಾಯಕ ಯಾಹ್ಯಾ ಸಿನ್ವಾರ್ ಗಾಜಾದಲ್ಲಿ ತಮ್ಮ ಕಾರ್ಯಾಚರಣೆಯೊಂದರಲ್ಲಿ ಕೊಲ್ಲಲ್ಪಟ್ಟಿದ್ದಾರೆ ಎಂದು ಇಸ್ರೇಲಿ ಅಧಿಕಾರಿಗಳು ನನ್ನ ರಾಷ್ಟ್ರೀಯ ಭದ್ರತಾ ತಂಡಕ್ಕೆ ತಿಳಿಸಿದ್ದಾರೆ. ಡಿಎನ್‌ಎ ಪರೀಕ್ಷೆ ಕೂಡ ಹಮಾಸ್ ನಾಯಕನ ಸಾವನ್ನು ದೃಢಪಡಿಸಿದೆ. ಇಸ್ರೇಲ್, ಅಮೆರಿಕ ಮತ್ತು ಇಡೀ ಜಗತ್ತಿಗೆ ಇದು ಒಳ್ಳೆಯ ದಿನ ಎಂದು ಅಮೆರಿಕ ಅಧ್ಯಕ್ಷ ಜೋ ಬೈಡನ್ ಹೇಳಿದ್ದಾರೆ. ಹಮಾಸ್ ನಾಯಕರಾಗಿ ಯಾಹ್ಯಾ ಸಿನ್ವಾರ್ ಅವರು ಸಾವಿರಾರು ಇಸ್ರೇಲಿಗಳು, ಪ್ಯಾಲೆಸ್ತೀನಿಯನ್ನರು, ಅಮೆರಿಕ ಮತ್ತು 30 ಕ್ಕೂ ಹೆಚ್ಚು ದೇಶಗಳ ನಾಗರಿಕರ ಸಾವಿಗೆ ಕಾರಣರಾಗಿದ್ದಾರೆ ಎಂದು ಹೇಳಿದರು.

## ರಶ್ಯಕ್ಕೆ ನೆರವಾಗಲು ಯೋಧರ ರವಾನಿಸಲಿರುವ ಉತ್ತರ ಕೊರಿಯಾ



**ಸಿಯೋಲ್:** ಉಕ್ರೇನ್ ವಿರುದ್ಧದ ಯುದ್ಧದಲ್ಲಿ ರಶ್ಯಕ್ಕೆ ನೆರವಾಗಲು ಉತ್ತರ ಕೊರಿಯಾ ದೊಡ್ಡ ಪ್ರಮಾಣದ ಪಡೆಗಳನ್ನು ಕಳುಹಿಸಲು ನಿರ್ಧರಿಸಿದೆ ಎಂದು ದಕ್ಷಿಣ ಕೊರಿಯಾದ ಗುಪ್ತಚರ ಇಲಾಖೆಯ ಮಾಹಿತಿಯನ್ನು ಆಧರಿಸಿ ಯೊನ್ಹಾಪ್ ಸುದ್ದಿಸಂಸ್ಥೆ ಶುಕ್ರವಾರ ವರದಿ ಮಾಡಿದೆ. ವಿಶೇಷ ಪಡೆ ಸೇರಿದಂತೆ 12,000 ಯೋಧರ ನಾಲ್ಕು ಬ್ರಿಗೇಡ್ಗಳನ್ನು ರಶ್ಯಕ್ಕೆ ಕಳುಹಿಸಲು ಉತ್ತರ ಸರಕಾರ ನಿರ್ಧರಿಸಿರುವ ಬಗ್ಗೆ ಮಾಹಿತಿಯಿದೆ. ತುಕಡಿಗಳನ್ನು ರವಾನಿಸುವ ಪ್ರಕ್ರಿಯೆ ಈಗಾಗಲೇ ಪ್ರಾರಂಭವಾಗಿದೆ ಎಂದು ವರದಿ ತಿಳಿಸಿದೆ. ಉಕ್ರೇನ್ ವಿರುದ್ಧದ ಯುದ್ಧದಲ್ಲಿ ರಶ್ಯಕ್ಕೆ ನೆರವಾಗಲು ಉತ್ತರ ಕೊರಿಯಾ 10,000 ಯೋಧರಿಗೆ ತರಬೇತಿ ನೀಡುತ್ತಿದೆ ಎಂದು ಉಕ್ರೇನ್ ಅಧ್ಯಕ್ಷ ವೊಲೊದಿಮಿರ್ ಝೆಲೆನ್ಸ್ಕಿ ಗುರುವಾರ ಹೇಳಿದ್ದರು. ನೇಟೊ ರಕ್ಷಣಾ ಸಚಿವರ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು ಯುದ್ಧದಲ್ಲಿ ತನಗಾದ ಭಾರೀ ಹಾನಿಯನ್ನು ಸರಿದೂಗಿಸಲು, ಮತ್ತು ಯುವ ರಶ್ಯನ್ನರು ಸೇನೆಗೆ ಸೇರಲು ಹಿಂದೇಟು ಹಾಕುತ್ತಿರುವುದರಿಂದ ಉತ್ತರ ಕೊರಿಯಾದ ಪಡೆಯನ್ನು ರಶ್ಯ ಅವಲಂಬಿಸಿದೆ ಎಂದವರು ಹೇಳಿದ್ದಾರೆ. ಈ ಮಧ್ಯೆ, ಶುಕ್ರವಾರ ಭದ್ರತಾ ಅಧಿಕಾರಿಗಳ ತುರ್ತು ಸಭೆ ನಡೆಸಿದ ದಕ್ಷಿಣ ಕೊರಿಯಾ ಅಧ್ಯಕ್ಷ ಯೂನ್ ಸುಕ್ ಯಿಯೋಲ್ 'ರಶ್ಯ ಮತ್ತು ಉತ್ತರ ಕೊರಿಯಾ ನಡುವಿನ ನಿಕಟ ಮಿಲಿಟರಿ ಸಂಬಂಧವು ಶಸ್ತ್ರಾಸ್ತ್ರ ವರ್ಗಾವಣೆಯನ್ನು ಮೀರಿ ತುಕಡಿ ನಿಯೋಜನೆಯ ಹಂತಕ್ಕೆ ಮುಂದುವರಿದಿದೆ. ಈ ಬೆಳವಣಿಗೆಯು ನಮ್ಮ ದೇಶಕ್ಕಷ್ಟೇ ಅಲ್ಲ, ಅಂತರಾಷ್ಟ್ರೀಯ ಸಮುದಾಯಕ್ಕೂ ಗಮನಾರ್ಹವಾದ ಮಿಲಿಟರಿ ಬೆದರಿಕೆಯನ್ನು ಒಡ್ಡುತ್ತದೆ' ಎಂದು ಕಳವಳ ವ್ಯಕ್ತಪಡಿಸಿರುವುದಾಗಿ ವರದಿಯಾಗಿದೆ.

# ಮದರ್ ಕೇರ್ ಜತೆಗೆ ಜಂಟಿ ಉದ್ಯಮಕ್ಕೆ ಮುಂದಾದ ರಿಲಯನ್ಸ್ ಬ್ರ್ಯಾಂಡ್ಸ್

**ಮುಂಬೈ:** ರಿಲಯನ್ಸ್ ಬ್ರ್ಯಾಂಡ್ಸ್ ಯುಕೆ (ಆರ್ ಬಿಎಲ್ ಯುಕೆ) ಜೊತೆಗೆ ಜಂಟಿ ಉದ್ಯಮಕ್ಕೆ ಮದರ್ ಕೇರ್ ಮುಂದಾಗಿದೆ. ಈ ಮೂಲಕವಾಗಿ ದಕ್ಷಿಣ ಏಷ್ಯಾದ ತನ್ನ ಕಾರ್ಯತಂತ್ರದಲ್ಲಿ ಬದಲಾವಣೆಗೆ ಮುಂದಾಗಿದೆ. ಈ ಹೊಸ ಉದ್ಯಮದಲ್ಲಿ ರಿಲಯನ್ಸ್ ಶೇಕಡಾ 51ರಷ್ಟು ಪಾಲು ಹೊಂದಿದ್ದರೆ, ಮದರ್ ಕೇರ್ ಪಾಲು ಶೇಕಡಾ 49ರಷ್ಟು ಇರುತ್ತದೆ. ಈ ಹೊಸ ಉದ್ಯಮದ ಮೂಲಕ ಭಾರತ, ನೇಪಾಳ. ಶ್ರೀಲಂಕಾ ಭೂತಾನ್ ಹಾಗೂ ಬಾಂಗ್ಲಾದೇಶ ವ್ಯವಹಾ ರಗಳನ್ನು ನೋಡಿಕೊಳ್ಳಲಾಗುತ್ತದೆ.

ಆರ್ ಬಿಎಲ್ ಯುಕೆ ಹದಿನಾರು ಮಿಲಿಯನ್ ಯುರೋ, ಅಂದರೆ 145,82,24,000 ರೂಪಾಯಿ, ಅಂದರೆ ಈ ದಿನದ ಲೆಕ್ಕಕ್ಕೆ ಭಾರತೀಯ ರೂಪಾಯಿ ಲೆಕ್ಕದಲ್ಲಿ ನೂರಾ ನಲವತ್ತಾರು ಕೋಟಿಯಷ್ಟಾಗುತ್ತದೆ.

''ಮದರ್ ಕೇರ್ ಎಂಬುದು ವರ್ಷಗಳಿಂದ ಭಾರತದಲ್ಲಿ ಪೋಷಕರಿಗೆ ನಂಬಿಕಸ್ತ ಹೆಸರು. ಈ ಜಂಟಿ ಉದ್ಯಮವು ನಮ್ಮ ಪಾಲುದಾರಿಕೆಯಲ್ಲಿ ಹೊಸ ಅಧ್ಯಾಯವನ್ನು ತೆರೆಯಲಿದೆ,'' ಎಂದು ರಿಲಯನ್ಸ್ ಬ್ರ್ಯಾಂಡ್ಸ್ ಕಾರ್ಯನಿರ್ವಾಹಕ ನಿರ್ದೇಶಕ ದರ್ಶನ್ ಮೆಹ್ತಾ ಹೇಳಿದ್ದಾರೆ.

ಮೊದಲಿಗೆ 2018ನೇ ಇಸವಿಯಲ್ಲಿ ಯು. ಕೆ. ಮೂಲದ ಮದರ್ ಕೇರ್ ಬ್ರ್ಯಾಂಡ್ ಅನ್ನು ಭಾರತೀಯ ಮಾರುಕಟ್ಟೆಗೆ ರಿಲಯನ್ಸ್ ಬ್ರ್ಯಾಂಡ್ಸ್ ಹಕ್ಕುಗಳನ್ನು ಸ್ವಾಧೀನ ಮಾಡಿಕೊಂಡಿತ್ತು. ಇ-ಕಾಮರ್ಸ್ ಪ್ಲಾಟ್ ಫಾರ್ಮ್ ಹೊರತುಪಡಿಸಿ, ಇಪ್ಪತ್ತೈದು ನಗರಗಳಲ್ಲಿ ಎಂಬತ್ತೇಳು ಮಳಿಗೆಗಳನ್ನು ರಿಲಯನ್ಸ್ ಬ್ರ್ಯಾಂಡ್ಸ್ ನಡೆಸುತ್ತಿದೆ.

''ರಿಲಯನ್ಸ್ ಜತೆಗೆ ಇನ್ನೂ ನಿಕಟವಾಗಿ ಕೆಲಸ ಮಾಡುವ ಈ ಬಾಂಧವ್ಯದೊಂದಿಗೆ ಈ ಒಪ್ಪಂದವು ದಕ್ಷಿಣ ಏಷ್ಯಾದಲ್ಲಿ ನಮ್ಮ ಕಾರ್ಯಾಚರಣೆಯನ್ನು ಇನ್ನಷ್ಟು ಬಲಗೊಳಿಸಿದೆ. ನಮ್ಮ ಜತೆಗೆ ಈಗಾಗಲೇ ಫ್ರಾಂಚೈಸಿ ಭಾಗೀದಾರ ಕೂಡ ಆಗಿರುವ, ಮದರ್ ಕೇರ್ ಬ್ರ್ಯಾಂಡ್ ಸಾಮರ್ಥ್ಯವನ್ನು ಸ್ಪಷ್ಟವಾಗಿ ತಿಳಿದಿರುವಂಥ ರಿಲಯನ್ಸ್ ಜೊತೆಗೆ ಇದು ಸಾಧ್ಯವಾಗುತ್ತಿದೆ,'' ಎಂದು ಮದರ್ ಕೇರ್ ಮುಖ್ಯಸ್ಥರಾದ ಕ್ಲೈವ್ ವ್ಹೀಲಿ ಹೇಳಿದ್ದಾರೆ. ರಿಲಯನ್ಸ್ ಬ್ರ್ಯಾಂಡ್ಸ್ ಎಂಬುದು ರಿಲಯನ್ಸ್ ರೀಟೇಲ್ ವೆಂಚರ್ಸ್ ಅಂಗಸಂಸ್ಥೆಯಾಗಿದೆ. 2017ರಲ್ಲಿ ಇದು ಕಾರ್ಯಾರಂಭ ಮಾಡಿತು. ಫ್ಯಾಷನ್ ಹಾಗೂ ಲೈಫ್ ಸ್ಟೈಲ್ ವಿಭಾಗದಲ್ಲಿ ಲಕ್ಷುರಿಯಿಂದ ಪ್ರೀಮಿಯಂ ಸೆಗ್ಮೆಂಟ್ ತನಕ ಜಾಗತಿಕ ಮಟ್ಟದಲ್ಲಿ ಬ್ರ್ಯಾಂಡ್ ಗಳನ್ನು ಹುಟ್ಟುಹಾಕಬೇಕು ಮತ್ತು ಕಟ್ಟಬೇಕು ಎಂಬ ಗುರಿಯೊಂದಿಗೆ ಇದನ್ನು ಆರಂಭಿಸಲಾಗಿದೆ.

# ಟ್ರಂಪ್‌ಗಿಂತ ಕಮಲಾ ಹ್ಯಾರಿಸ್ ಮುನ್ನಡೆ ; ಸಮೀಕ್ಷೆ



ವಾಷಿಂಗ್ಟನ್: ಅಮೆರಿಕದ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಅವರು ಪ್ರಮುಖ ಯುದ್ಧಭೂಮಿ ರಾಜ್ಯಗಳಲ್ಲಿ ಕಪ್ಪು ಮತದಾರರಲ್ಲಿ ಅಮೆರಿಕದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗಿಂತ ಗಣನೀಯ ಮುನ್ನಡೆಯನ್ನ ಕಾಯ್ದುಕೊಂಡಿದ್ದಾರೆ ಎಂದು ಇತ್ತೀಚಿನ ಸಮೀಕ್ಷೆಯೊಂದು ತಿಳಿಸಿದೆ.

ಆದಾಗ್ಯೂ, ನಿರ್ಧರಿಸದ ಕಪ್ಪು ಮತದಾರರ ಗಮನಾರ್ಹ ಭಾಗವು ಮುಂಬರುವ ಅಧ್ಯಕ್ಷೀಯ ಚುನಾವಣೆಯ ಫಲಿತಾಂಶವನ್ನು ನಿರ್ಧರಿಸುವಲ್ಲಿ ಪ್ರಮುಖ ಪಾತ್ರ ವಹಿಸಬಹುದು.

ಹೊವಾರ್ಡ್ ಯೂನಿವರ್ಸಿಟಿ ಇನಿಶಿಯೇಟಿವ್ ಆನ್ ಪಬ್ಲಿಕ್ ಒಪಿನಿಯನ್ ನಡೆಸಿದ ಸಮೀಕ್ಷೆಯಲ್ಲಿ, ಯುದ್ಧಭೂಮಿ ರಾಜ್ಯಗಳಾದ ಅರಿಜೋನಾ, ಜಾರ್ಜಿಯಾ, ಮಿಚಿಗನ್, ನೆವಾಡಾ, ಉತ್ತರ ಕೆರೊಲಿನಾ, ಪೆನ್ಸಿಲ್ವೇನಿಯಾ ಮತ್ತು ವಿಸ್ಕಾನ್ಸಿನ್ನ 981 ಕಪ್ಪು ಮತದಾರರಿಂದ ಪ್ರತಿಕ್ರಿಯೆಗಳನ್ನ ಸಂಗ್ರಹಿಸಲಾಗಿದೆ.

ಮುಂಬರುವ ಚುನಾವಣೆಯಲ್ಲಿ ಡೆಮಾಕ್ರಟಿಕ್ ಅಧ್ಯಕ್ಷೀಯ ಅಭ್ಯರ್ಥಿಯನ್ನ ಬೆಂಬಲಿಸಲು ಶೇಕಡಾ 84ರಷ್ಟು ಜನರು ಉದ್ದೇಶಿಸಿದ್ದರೆ, ಕೇವಲ ಎಂಟು ಪ್ರತಿಶತದಷ್ಟು ಜನರು ಮಾತ್ರ ಅವರ ರಿಪಬ್ಲಿಕನ್ ಪ್ರತಿಸ್ಪರ್ಧಿಗೆ ಮತ ಚಲಾಯಿಸಲು ಯೋಜಿಸಿದ್ದಾರೆ ಮತ್ತು ಇನ್ನೂ ಎಂಟು ಪ್ರತಿಶತದಷ್ಟು ಜನರು ಇನ್ನೂ ನಿರ್ಧರಿಸಿಲ್ಲ ಎಂದು ಫಲಿತಾಂಶಗಳು ತೋರಿಸುತ್ತವೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಪಾರ್ಕ್‌ನಲ್ಲಿ ಹಾಟ್ ಪೋಸ್ ಕೊಟ್ಟ ಸೋನು



ಸೋಷಿಯಲ್ ಮೀಡಿಯಾ ಸ್ಟಾರ್, ಬಿಗ್ ಬಾಸ್ ಸ್ಪರ್ಧಿ ಸೋನು ಶ್ರೀನಿವಾಸ್ ಗೌಡ ಹಾಟ್ ಫೋಟೋಗಳು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಲು ಶುರುವಾಗಿದೆ.

ಮಾಡರ್ನ್ ಲುಕ್‌ನಲ್ಲಿ ಕಾಣಿಸಿಕೊಳ್ಳುವುದಕ್ಕೂ ಸೈ, ಮಂಗಳ ಗೌರಿ ಆಗಿರುವುದಕ್ಕೂ ಸೈ ಎನ್ನುವ ಸೋನು ಗೌಡ ಇದೀಗ ಪಾರ್ಕ್‌ನಲ್ಲಿ ಹಾಟ್ ಡ್ರೆಸ್ ಧರಿಸಿ ಹಾಟ್ ಫೋಟೋ ಕೊಟ್ಟಿದ್ದಾರೆ.

ಕಪ್ಪು ಬಣ್ಣದ ಜೀನ್ಸ್ ಪ್ಯಾಂಟ್‌ಗೆ ಹಳದಿ ಬಣ್ಣದ ಕ್ರಾಪ್ ಟಾಪ ಧರಿಸಿದ್ದಾರೆ. ಫಿಲಾ ಎನ್ನುವ ಜನಪ್ರಿಯ ಫ್ಯಾಷನ್ ಬ್ರ್ಯಾಂಡ್ ಟಾಪ್ ಇದು. ಹೀಗಾಗಿ ಸೋನು ಸಿಕ್ಕಾಪಟ್ಟೆ ಹಾಟ್ ಲುಕ್‌ನಲ್ಲಿ ಪೋಸ್ ಕೊಟ್ಟಿದ್ದಾರೆ.

ದೀಪ್ ಜಾಸ್ತಿ ಆಯ್ತು, ಟಾಪ್ ತುಂಬಾ ತುಂಡ ಆಯ್ತು ಎಂದು ನೆಟ್ಟಿಗರು ಕಾಲೆಳೆಯುತ್ತಿದ್ದಾರೆ. ಅಲ್ಲದೆ ಹಬ್ಬದ ದಿನ ರೇಶ್ಮೆ ಸೀರೆ ಹಾಕ್ತೀರಾ, ಬೇರೆ ದಿನ ಈ ಅವತಾರದಲ್ಲಿ ಕಾಣಿಸುತ್ತೀರಾ ಎಂದು ಕಾಲೆಳೆದಿದ್ದಾರೆ.

ಸದ್ಯ ಸೋನು ಗೌಡ ಸೋಷಿಯಲ್ ಮೀಡಿಯಾದಲ್ಲಿ ಪ್ರತಿಷ್ಠಿತ ಬ್ರ್ಯಾಂಡ್‌ಗಳ ಜಾಹೀರಾತು ಮಾಡುತ್ತಾರೆ ಇಲ್ಲವಾದರೆ ತಮ್ಮ ಯೂಟ್ಯೂಬ್ ಚಾನೆಲ್‌ನಲ್ಲಿ ವಿಭಿನ್ನ ಬ್ಲಾಗ್‌ಗಳ ಮೂಲಕ ಜನರನ್ನು ಮನೋರಂಜಿಸುತ್ತಾರೆ.

ಸೋನು ಹುಟ್ಟೂರಿನಲ್ಲಿ ಮನೆ ಕಟ್ಟಿಸುತ್ತಿದ್ದಾರೆ. ಮನೆ ಗೃಹಪ್ರವೇಶ ಹಂತಕ್ಕೆ ಬಂದಿದೆ ಎಂದು ಡಿ-ಮಾರ್ಟ್‌ನಲ್ಲಿ ಸಾಮಾಗ್ರಿಗಳ ಶಾಪಿಂಗ್ ಮಾಡಿರುವ ವಿಡಿಯೋವನ್ನು ಅಪ್ಲೋಡ್ ಮಾಡಿದ್ದಾರೆ.

# 'ಜೈ ಹನುಮಾನ್' ಸೀಕ್ವೆಲ್‌ನಲ್ಲಿ ರಿಷಬ್ ಶೆಟ್ಟಿ?



ರಾಷ್ಟ್ರ ಪ್ರಶಸ್ತಿ ವಿಜೇತ ನಟ ರಿಷಬ್ ಶೆಟ್ಟಿ ಅವರು 'ಕಾಂತಾರ ಚಾಪ್ಟರ್ 1'ರಲ್ಲಿ ಬ್ಯುಸಿಯಾಗಿದ್ದಾರೆ. ಇದೀಗ 'ಜೈ ಹನುಮಾನ್ ಪಾರ್ಟ್ 2'ನಲ್ಲಿ ರಿಷಬ್ ನಟಿಸಲಿದ್ದಾರೆ ಎನ್ನಲಾದ ಸುದ್ದಿಯೊಂದು ಗಾಂಧಿನಗರದಲ್ಲಿ ಹರಿದಾಡುತ್ತಿದೆ.

ಸೂಪರ್ ಹಿಟ್ ಚಿತ್ರ ಜೈ ಹನುಮಾನ್ ಸಿನಿಮಾದ ಸೀಕ್ವೆಲ್‌ಗೆ ಸಿದ್ಧತೆ ನಡೆಯುತ್ತಿದೆ. ಈ ಚಿತ್ರದ ಪಾರ್ಟ್ 2ನಲ್ಲಿ ರಿಷಬ್ ಶೆಟ್ಟಿ ಪ್ರಮುಖ ಪಾತ್ರದಲ್ಲಿ ನಟಿಸಲು ಚಿತ್ರತಂಡ ನಟನನ್ನು ಅಪ್ರೋಚ್ ಮಾಡಿದ್ದಾರೆ ಎನ್ನಲಾಗಿದೆ. ಈ ಕುರಿತು ರಿಷಬ್ ಆಗಲಿ, ನಿರ್ಮಾಣ ಸಂಸ್ಥೆ ಆಗಲಿ ಯಾವುದೇ ಅಧಿಕೃತ ಮಾಹಿತಿ ನೀಡಿಲ್ಲ. ಇದು ಸದ್ಯ ಹರಿದಾಡುತ್ತಿರುವ ಗಾಸಿಪ್ ಅಥವಾ ನಿಜ ಸಂಗತಿನಾ? ಎಂಬುದನ್ನು ಚಿತ್ರತಂಡ ತಿಳಿಸುವವರೆಗೂ ಕಾದುನೋಡಬೇಕಿದೆ.

ಅಂದಹಾಗೆ, 2024ರಲ್ಲಿ ತೆರೆಕಂಡ 'ಜೈ ಹನುಮಾನ್' ಚಿತ್ರದಲ್ಲಿ ತೇಜ ಸಜ್ಜಾ ಮತ್ತು ಅಮೃತಾ ಅಯ್ಯರ್ ಜೋಡಿಯಾಗಿ ನಟಿಸಿದ್ದರು. ಈ ಚಿತ್ರಕ್ಕೆ ಪ್ರಶಾಂತ್ ವರ್ಮಾ ಆಕ್ಷನ್ ಕಟ್ ಹೇಳಿದ್ದರು. ಇದೀಗ ಇದರ ಎರಡನೇ ಭಾಗಕ್ಕೆ ತೆರೆಮರೆಯಲ್ಲಿ ತಯಾರಿ ನಡೆಯುತ್ತಿದೆ.



# ಘರುವಾಯ್ತು ಶ್ರೀಮುರಳಿ ಬಘೀರನ ಘರ್ಜನೆ
# ರುಧಿರ ಧಾರಾ ಸಾಂಗ್ ರಿಲೀಸ್!



ರೋರಿಂಗ್ ಸ್ಟಾರ್ ಶ್ರೀಮುರಳಿ ನಟನೆಯ ಬಘೀರ ರಿಲೀಸ್‌ಗೆ ಎರಡು ವಾರ ಬಾಕಿ. ಅರೇ ರಿಲೀಸ್ ಇಷ್ಟು ಹತ್ತಿರದಲ್ಲಿದ್ದರು ಇನ್ನೂ ಪಬ್ಲಿಸಿಟಿ ಇಲ್ಲವಲ್ಲಾ ಅಂತ ಫ್ಯಾನ್ಸ್ ಮಾತನಾಡ್ತಿರೋ ಹೊತ್ತಲ್ಲೇ, ಬಘೀರ ತನ್ನ ಸಾಂಗ್ ಮೂಲ ಭರ್ಜರಿ ಸೌಂಡ್ ಮಾಡಿದ್ದಾನೆ. ಬಘೀರನ ರುಧಿರ ಧಾರಾ ಅನ್ನೋ ಮಾಸ್ ಸಾಂಗ್ ರಿಲೀಸ್ ಆಗಿದ್ದು, ಟ್ರೆಂಡ್ ಸೃಷ್ಟಿಸ್ತಾ ಇದೆ.

ಯೆಸ್! ರೋರಿಂಗ್ ಸ್ಟಾರ್ ಶ್ರೀಮುರಳಿ ನಟನೆಯ ಬಘೀರ ಸಿನಿಮಾದ ಮೊದಲ ಸಾಂಗ್ ರಿಲೀಸ್ ಆಗಿದೆ. ಹೊಂಬಾಳೆ ಪ್ರೊಡಕ್ಷನ್ಸ್ ನಿರ್ಮಿಸಿರೋ ಈ ಸಿನಿಮಾ ಮೇಲೆ ಪ್ರೇಕ್ಷಕರಿಗೆ ದೊಡ್ಡ ನಿರೀಕ್ಷೆ ಇದೆ. ಮೂರು ವರ್ಷಗಳ ಬಳಿಕ ಬರ್ತಾ ಇರೋ ಶ್ರೀಮುರಳಿ ನಟನೆಯ ಸಿನಿಮಾ ಇದು. ಸಹಜವಾಗೇ ಶ್ರೀಮುರುಳಿ ಫ್ಯಾನ್ಸ್‌ಗೆ ಚಿತ್ರದ ಬಗ್ಗೆ ದೊಡ್ಡ ಹೋಪ್ ಇದೆ. ಆದ್ರೆ ರಿಲೀಸ್ ಇಷ್ಟು ಹತ್ತಿರ ಬಂದ್ರೂ ಇನ್ನೂ ಪ್ರಚಾರ ಮಾಡ್ತಿಲ್ಲವಲ್ಲ ಅಂತ ಫ್ಯಾನ್ಸ್ ಬೇಸರಗೊಂಡಿದ್ದರು. ಅವರ ಬೇಸರ ತಣಿಸುವಂತೆ ,ಮೂಡಿಬಂದಿದೆ ಬಘೀರ ಮೊದಲ ಸಾಂಗ್.

ಬಘೀರ ಸಿನಿಮಾಗೆ ಅಜನೀಶ್ ಲೋಕನಾಥ್ ಮ್ಯೂಸಿಕ್ ಕಂಪೋಸ್ ಮಾಡಿದ್ದಾರೆ. ಶ್ರೀಮುರಳಿ ಪಾತ್ರದ ಝಲಕ್‌ನ ಬಿಚ್ಚಿಟ್ಟಿರುವ ಈ ಹಾಡು ಫ್ಯಾನ್ಸ್‌ಗೆ ಕಿಕ್ ಕೊಡ್ತಾ ಇದೆ. ರುಧಿರ ಧಾರಾ ಹಾಡಿಗೆ ಅನಿರುದ್ಧ್ ಶಾಸ್ತ್ರಿ ಧ್ವನಿಯಾಗಿದ್ದು ಹಾಡು ಕನ್ನಡ ಹಾಗೂ ತೆಲುಗು ಎರಡೂ ಭಾಷೆಗಳಲ್ಲಿ ರಿಲೀಸ್ ಆಗಿದೆ. ಬಘೀರ ಮೊದಲ ಸಾಂಗ್ ನೋಡಿದವರು ಇದರಲ್ಲಿ ಅದ್ಭುತ ಕಂಟೆಂಟ್ ಇರುವಂತಿದೆ ಅಂತ ಕಾಮೆಂಟ್ ಮಾಡ್ತಾ ಇದ್ದಾರೆ. ಅದರಲ್ಲೂ ಈ ಸಿನಿಮಾಗೆ ಕೆಜಿಎಫ್ ಮಾಂತ್ರಿಕ ಪ್ರಶಾಂತ್ ನೀಲ್ ಕಥೆಯನ್ನ ರೆಡಿ ಮಾಡಿಕೊಟ್ಟಿದ್ದಾರೆ. ನೀಲ್ ಹೆಣೆದಿರೋ ಉಗ್ರ ವೀರಾವೇಷದ ಕಥೆಗೆ ಡಾ.ಸೂರಿ ಆಕ್ಷನ್ ಕಟ್ ಹೇಳಿದ್ದಾರೆ. ಬಘೀರಗೆ ಸಿನಿಮಾಗಾಗಿ ಮೂರು ವರ್ಷಗಳ ಸಮಯ ಕೊಟ್ಟಿರೋ ಶ್ರೀಮುರಳಿ, ಈ ಚಿತ್ರದ ಮೇಲೆ ಸಿಕ್ಕಾಪಟ್ಟೆ ನಿರೀಕ್ಷೆ ಇಟ್ಟುಕೊಂಡಿದ್ದಾರೆ. ಇಲ್ಲಿ ಖಾಕಿಧಾರಿಯ ಪಾತ್ರದಲ್ಲಿ ಶ್ರೀಮುರುಳಿ ಮಿಂಚಿದ್ದು ಭರ್ಜರಿ ಆಕ್ಷನ್ ಡ್ರಾಮಾದೊಂದಿಗೆ ಫ್ಯಾನ್ಸ್ ಮುಂದೆ ಬರ್ತಾ ಇದ್ದಾರೆ.

ಇದೇ ಅಕ್ಟೋಬರ್ 31ಕ್ಕೆ ಬಘೀರ ಪ್ರೇಕ್ಷಕರ ಎದುರು ಬರಲಿದೆ. ಸದ್ಯ ಸಾಂಗ್ ಮೂಲಕ ಸೌಂಡ್ ಶುರುಮಾಡಿರೋ ಬಘೀರ , ಥಿಯೇಟರ್ ಅಂಗಳದಲ್ಲಿ ಘರ್ಜಿಸೋ ತಯಾರಿಯಲ್ಲಿದ್ದಾನೆ. ಬಘೀರನ ಅಬ್ಬರ ಕಾಣೋದಕ್ಕೆ ನೀವು ಕೂಡ ಸಜ್ಜಾಗಿ.

## ರಚಿನ್ ಅಮೋಘ ಶತಕ, ಇತಿಹಾಸ ನಿರ್ಮಿಸಿದ ಕಿವೀಸ್
# 356 ರನ್‌ಗಳ ಭರ್ಜರಿ ಮುನ್ನಡೆ





ರಚಿನ್ ರವೀಂದ್ರ, ಭರ್ಜರಿ ಶತಕ ಹಾಗೂ ಟಿಮ್ ಸೌಥಿ ಅರ್ಧಶತಕದ ನೆರವಿನಿಂದ ನ್ಯೂಜಿಲೆಂಡ್ ಮೊದಲ ಇನ್ನಿಂಗ್ಸ್‌ನಲ್ಲಿ 402 ರನ್ ಗಳಿಸಿದ್ದು, ಭಾರತದ ವಿರುದ್ಧ 356 ರನ್ ಮುನ್ನಡೆ ಕಾಯ್ದುಕೊಂಡಿದೆ. ಈ ಮೂಲಕ ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ನ್ಯೂಜಿಲೆಂಡ್ ತಂಡವು ಭಾರತದ ವಿರುದ್ಧ ಮೊದಲ ಇನ್ನಿಂಗ್ಸ್‌ನಲ್ಲಿ 350ಕ್ಕೂ ಅಧಿಕ ರನ್‌ಗಳ ಮುನ್ನಡೆ ಕಾಯ್ದುಕೊಂಡ ವಿಶೇಷ ಸಾಧನೆ ಮಾಡಿದೆ.

ಇಲ್ಲಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಕಿವೀಸ್ 3ನೇ ದಿನ ಅದ್ಭುತ ಪ್ರದರ್ಶನ ನೀಡಿದೆ. 134 ರನ್‌ಗಳ ಮುನ್ನಡೆಯೊಂದಿಗೆ ಕ್ರೀಸ್ ಆರಂಭಿಸಿದ್ದ ಕಿವೀಸ್ ಮುಂದಿನ 99 ರನ್ ಗಳಿಸುವಷ್ಟರಲ್ಲಿ ಪ್ರಮುಖ 4 ವಿಕೆಟ್ ಕಳೆದುಕೊಂಡಿತ್ತು. ಈ ವೇಳೆ ಕ್ರೀಸ್‌ನಲ್ಲಿ ಭದ್ರವಾಗಿ ನೆಲೆಯೂರಿದ ರಚಿನ್ ರವೀಂದ್ರ, ಹಾಗೂ ಟಿಮ್ ಸೌಥಿ ಜೋಡಿ ಸ್ಫೋಟಕ ಪ್ರದರ್ಶನ ನೀಡಿತು.

132 ಎಸೆತಗಳಲ್ಲಿ ಈ ಜೋಡಿ 137 ರನ್ ಸಿಡಿಸಿತ್ತು. ಬಳಿಕ ವೇಗಿ ಮೊಹಮ್ಮದ್ ಸಿರಾಜ್ ಟಿಮ್ ಸೌಥಿ ಅವರನ್ನು ಪೆವಿಲಿಯನ್‌ಗಟ್ಟುವ ಮೂಲಕ ಇವರಿಬ್ಬರ ಆರ್ಭಟಕ್ಕೆ ಬ್ರೇಕ್ ಹಾಕಿದರು. ಆದ್ರೆ ಕೊನೆಯವರೆಗೂ ಹೋರಾಡಿದ ರಚಿನ್ ರವೀಂದ್ರ, ಶತಕ ಸಿಡಿಸಿ ತಂಡದ ಮೊತ್ತ ಹೆಚ್ಚಿಸಲು ಸಹಕಾರಿಯಾದರು.

ಮೊದಲ ಇನ್ನಿಂಗ್ಸ್‌ನಲ್ಲಿ ಕಿವೀಸ್ ಪರ ರಚಿನ್ ರವೀಂದ್ರ, ಭರ್ಜರಿ 137 ರನ್ (157 ಎಸೆತ, 13 ಬೌಂಡರಿ, 4 ಸಿಕ್ಸರ್) ಚಚ್ಚಿದರು. ಇನ್ನುಳಿದಂತೆ ಡಿವೋನ್ ಕಾನ್ವೆ 91 ರನ್ (105 ಎಸೆತ, 3 ಸಿಕ್ಸರ್, 11 ಬೌಂಡರಿ), ಟಿಮ್ ಸೌಥಿ 65 ರನ್ (73 ಎಸೆತ, 5 ಬೌಂಡರಿ, 4 ಸಿಕ್ಸರ್), ವಿಲ್ ಯಂಗ್ 33 ರನ್, ಟಾಮ್ ಲಾಥಮ್ 15 ರನ್, ಡೇರಿಲ್ ಮಿಚೆಲ್ 18 ರನ್, ಗ್ಲೆನ್ ಫಿಲಿಪ್ಸ್ 14 ರನ್, ಮ್ಯಾಟ್ ಹೆನ್ರಿ 8 ರನ್, ಆಜಾಜ್ ಪಟೇಲ್ 4 ರನ್, ಟಾಮ್ ಬ್ಲಂಡೆಲ್ 5 ರನ್ ಗಳಿಸಿದ್ರೆ, ವಿಲಿಯಂ ಒ ರೂರ್ಕಿ ರನ್ ಗಳಿಸದೇ ಕ್ರೀಸ್‌ನಲ್ಲಿ ಉಳಿದರು.

**46ಕ್ಕೆ ನೆಲಕಚ್ಚಿದ್ದ ಭಾರತ:** ಇದಕ್ಕೂ ಮುನ್ನ ಬ್ಯಾಟಿಂಗ್ ಮಾಡಿದ್ದ ಟೀಂ ಇಂಡಿಯಾ ಮೊದಲ ಇನ್ನಿಂಗ್ಸ್‌ನಲ್ಲಿ 46 ರನ್ ಗಳಿಗೆ ಆಲೌಟ್ ಆಗಿತ್ತು. ಈ ಮೂಲಕ ತವರಿನಲ್ಲಿ ನಡೆದ ಟೆಸ್ಟ್ ಕ್ರಿಕೆಟ್‌ನಲ್ಲಿ 3ನೇ ಅತೀ ಕಡಿಮೆ ರನ್ ಗಳಿಸಿದ ಕೆಟ್ಟ ದಾಖಲೆಯನ್ನೂ ಹೆಗಲಿಗೇರಿಸಿಕೊಂಡಿತು.

# 1,338 ದಿನಗಳ ಬಳಿಕ ತವರಿನಲ್ಲಿ ಟೆಸ್ಟ್ ಪಂದ್ಯ ಗೆದ್ದ ಪಾಕ್



ಕಳಪೆ ಬೌಲಿಂಗ್, ಫೀಲ್ಡಿಂಗ್ ಪ್ರದರ್ಶನದಿಂದಾಗಿ ಮೊದಲ ಟೆಸ್ಟ್ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ಹೀನಾಯ ಸೋಲು ಕಂಡಿದ್ದ ಪಾಕಿಸ್ತಾನ ಕ್ರಿಕೆಟ್ ತಂಡ 2ನೇ ಪಂದ್ಯದಲ್ಲಿ ಅಮೋಘ ಪ್ರದರ್ಶನ ನೀಡಿದೆ. ಇಂಗ್ಲೆಂಡ್ ವಿರುದ್ಧ 152 ರನ್‌ಗಳ ಭರ್ಜರಿ ಗೆಲುವು ಸಾಧಿಸುವ ಮೂಲಕ ತನ್ನ ವಿರುದ್ಧ ಟೀಕಾಕಾರರಿಗೆ ತಿರುಗೇಟು ನೀಡಿದೆ.

ಈ ಮೂಲಕ ಇಂಗ್ಲೆಂಡ್ ವಿರುದ್ಧ ಮೂರು ಪಂದ್ಯಗಳ ಟೆಸ್ಟ್ ಸರಣಿಯನ್ನಾಡುತ್ತಿರುವ ಪಾಕ್ 1-1 ಅಂತರದಲ್ಲಿ ಸಮಬಲ ಸಾಧಿಸಿದೆ. ಜೊತೆಗೆ 1,338 ದಿನಗಳ ಸುದೀರ್ಘ ಕಾಯುವಿಕೆಯ ಬಳಿಕ ತವರಿನಲ್ಲಿ ಟೆಸ್ಟ್ ಗೆಲುವಿನ ಬರ ನೀಗಿಸಿಕೊಂಡಿದೆ. ಅನುಭವಿ ಆಟಗಾರರನ್ನು ಏಕಾಏಕಿ ತಂಡದಿಂದ ಹೊರಗಿಟ್ಟಿರುವುದು ತಂಡದ ಮೇಲೆ ಮಾತ್ರವಲ್ಲದೇ ಪಾಕಿಸ್ತಾನದ ಕ್ರಿಕೆಟ್ ಮೇಲೆ ಪರಿಣಾಮ ಬೀರಲಿದೆ ಎಂದು ಮಾಜಿ ಕ್ರಿಕೆಟಿಗರು ಟೀಕಿಸಿದ್ದರು. ಆದರೆ ಯಾವುದಕ್ಕೂ ಸೊಪ್ಪು ಹಾಕದ ಪಿಸಿಬಿ ಹೊಸ ಆಟಗಾರರ ಮೇಲೆ ಭರವಸೆ ಇಟ್ಟಿತ್ತು. ಅದರಂತೆ ಹೊಸದಾಗಿ ಆಯ್ಕೆಯಾದ ಆಟಗಾರರು ಮಂಡಳಿಯ ನಿರ್ಧಾರವನ್ನು ಎತ್ತಿ ಹಿಡಿದಿದ್ದಾರೆ.

**ಸ್ಪಿನ್ನರ್ ಗಳ ಕೈಚಳಕ:** ಪಾಕ್ ತಂಡದ ಸ್ಪಿನ್ನರ್‌ಗಳಾದ ಸಾಜಿದ್ ಖಾನ್ ಮತ್ತು ನೂಮನ್ ಅಲಿ ಅವರ ಕೈಚಳಕದಿಂದಾಗಿ ಇಂಗ್ಲೆಂಡ್ ವಿರುದ್ಧ ಟೆಸ್ಟ್ ಪಂದ್ಯ ಗೆದ್ದು ಬೀಗಿದೆ. ಇದು ತಂಡದಲ್ಲಿ ಹೊಸ ಹುರುಪಿಗೆ ಕಾರಣವಾಗಿದೆ.

ಟಾಸ್ ಗೆದ್ದು ಬ್ಯಾಟಿಂಗ್ ಆಯ್ದುಕೊಂಡಿದ್ದ ಪಾಕ್ ತಂಡ ಮೊದಲ ಇನ್ನಿಂಗ್ಸ್‌ನಲ್ಲಿ ಕಮ್ರಾನ್ ಘುಲಾಮ್ ಅವರ ಅಮೋಘ ಶತಕದ (118 ರನ್, 224 ಎಸೆತ, 11 ಬೌಂಡರಿ, 1 ಸಿಕ್ಸರ್) ನೆರವಿನಿಂದ 366 ರನ್ ಕಲೆಹಾಕಿತ್ತು. ಬಾಬರ್ ಆಜಂ ಬದಲಿಗೆ ಕಣಕ್ಕಿಳಿದಿದ್ದ ಘುಲಾಮ್ ಚೊಚ್ಚಲ ಪ್ರಯತ್ನದಲ್ಲೇ ಶತಕ ಸಿಡಿಸಿ ಸೈ ಎನಿಸಿಕೊಂಡರು. ಇದರೊಂದಿಗೆ ಸೈಯಮ್ ಅಯೂಬ್ ಅಯೂಬ್ ಅರ್ಧಶತಕ ತಂಡಕ್ಕೆ ಮತ್ತಷ್ಟು ಬಲ ನೀಡಿತ್ತು. ಇನ್ನುಳಿದಂತೆ ಮೊದಲ ಇನ್ನಿಂಗ್ಸ್‌ನಲ್ಲಿ ಪಾಕ್ ಪರ ಮೊಹಮ್ಮದ್ ರಿಜ್ವಾನ್ 41 ರನ್, ಸಲ್ಮಾಮ್ ಆಘಾ 41 ರನ್ , ಅಮೀರ್ ಜಮಾಲ್ 37 ರನ್‌ಗಳ ಕೊಡುಗೆ ನೀಡಿದರು.

ಮೊದಲ ಇನ್ನಿಂಗ್ಸ್‌ನಲ್ಲಿ ಇಂಗ್ಲೆಂಡ್ ಪರ ಜಾಕ್ ಲೀಚ್ 4 ವಿಕೆಟ್ ಪಡೆದರೆ, ಬ್ರೈಡನ್ ಕಾರ್ಸ್ 3 ವಿಕೆಟ್, ಮ್ಯಾಥೀವ್ ಪಾಟ್ಸ್ 2 ವಿಕೆಟ್ ಹಾಗೂ ಶೋಯೆಬ್ ಬಶೀರ್ 1 ವಿಕೆಟ್ ಪಡೆದರು.

ಇನ್ನೂ ಮೊದಲ ಇನ್ನಿಂಗ್ಸ್‌ನಲ್ಲಿ ಪಾಕ್‌ಗೆ ಪ್ರತ್ಯುತ್ತರವಾಗಿ ಬ್ಯಾಟ್ ಬೀಸಿದ ಇಂಗ್ಲೆಂಡ್ ಬೆನ್ ಡಕೆಟ್ ಶತಕದೊಂದಿಗೆ (114 ರನ್, 129 ಎಸೆತ, 16 ಬೌಂಡರಿ) 291 ರನ್ ಗಳಿಸಲಷ್ಟೇ ಸಾಧ್ಯವಾಯಿತು. ಇನ್ನೂ 2ನೇ ಇನ್ನಿಂಗ್ಸ್‌ನಲ್ಲಿ 221 ರನ್‌ಗಳಿಗೆ ಆಲೌಟ್ ಆಯಿತು. ಪರಿಣಾಮ ಗೆಲ್ಲಲು 297 ರನ್‌ಗಳ ಗುರಿ ಪಡೆದ ಇಂಗ್ಲೆಂಡ್ ತಂಡ ಸ್ಪಿನ್ನರ್‌ಗಳ ದಾಳಿ ಎದುರಿಸಲಾಗದೇ ಕೇವಲ 144 ರನ್ ಗಳಿಗೆ ಆಲೌಟ್ ಆಯಿತು. ನಾಯಕ ಬೆನ್ ಸ್ಟೋಕ್ಸ್ 37 ರನ್ ಹೊರತುಪಡಿಸಿದರೆ ಉಳಿದ ಬ್ಯಾಟರ್‌ಗಳು ಬಹುಬೇಗನೆ ಪೆವಿಲಿಯನ್ ಪರೇಡ್ ನಡೆಸಿದರು.

## ಪಂಚಮಸಾಲಿ ಮೀಸಲಾತಿ ಹೋರಾಟಕ್ಕೆ ಮರುಜೀವ
# ಜಯ ಮೃತ್ಯುಂಜಯ ಸ್ವಾಮೀಜಿ ಶಕ್ತಿ ಪ್ರದರ್ಶನ





**ಬೆಂಗಳೂರು:** ಪಂಚಮಸಾಲಿ 2ಎ ಮೀಸಲಾತಿ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಗೃಹ ಕಚೇರಿ ಕೃಷ್ಣಾದಲ್ಲಿ ಶುಕ್ರವಾರ ಸಭೆ ನಡೆಯಿತು. ಸಭೆಯಲ್ಲಿ ಪಂಚಮಸಾಲಿ ಪೀಠದ ಬಸವಜಯ ಮೃತ್ಯುಂಜಯಶ್ರೀ ಸೇರಿದಂತೆ ಸಮುದಾಯದ ಘಟನಾನುಘಟಿ ನಾಯಕರೇ ಭಾಗಿಯಾದರು. ಸಚಿವರಾದ ಶಿವರಾಜ ತಂಗಡಗಿ, ಲಕ್ಷ್ಮೀ ಹೆಬ್ಬಾಳ್ಕರ್, ಶಾಸಕರಾದ ವಿಜಯಾನಂದ್ ಕಾಶಪ್ಪನವರ್, ವಿನಯ್ ಕುಲಕರ್ಣಿ, ಶಾಸಕ ಯತ್ನಾಳ್ ಸೇರಿದಂತೆ ಹಲವರು ಭಾಗಿಯಾದರು. ಹೋರಾಟಕ್ಕೆ ನ್ಯಾಯ ಒದಗಿಸಿಕೊಡುವಂತೆ ಎಲ್ಲರೂ ಸಿಎಂಗೆ ಒತ್ತಾಯ ಮಾಡಿದರು.

ಪಂಚಮಸಾಲಿ 2ಎ ಮೀಸಲಾತಿಗೆ ಈ ಹಿಂದೆ ದೊಡ್ಡ ಹೋರಾಟವೇ ನಡೆದಿದೆ. ಬಸವ ಜಯಮೃತ್ಯುಂಜಯ ಸ್ವಾಮೀಜಿ ನೇತೃತ್ವದಲ್ಲಿ ಸಾಕಷ್ಟು ಪ್ರತಿಭಟನೆಗಳು ಕೂಡ ನಡೆದಿವೆ. ಅದೆಷ್ಟೋ ಗಡುವುಗಳು ಅಂತ್ಯವಾಗಿದೆ. ಇದೀಗ ಸರ್ಕಾರದ ಮೂಲಕ ನಮಗೆ ನ್ಯಾಯ ಸಿಗುವುದಿಲ್ಲ ಎಂದು ಅರಿತ ಸ್ವಾಮೀಜಿ ಹೊಸ ಹಾದಿಯನ್ನೇ ಹಿಡಿದಿದ್ದಾರೆ. ನ್ಯಾಯಾಲಯದಲ್ಲಿ ವಕೀಲರ ಮೂಲಕ ಹೋರಾಟಕ್ಕೆ ಸಜ್ಜಾಗಿದ್ದಾರೆ.

**ಕಾಲ್ನಡಿಗೆಯ ಮೂಲಕ ಸ್ವಾಮೀಜಿ ಶಕ್ತಿ ಪ್ರದರ್ಶನ:** ಸಭೆಗೂ ಮುನ್ನ ಕೂಡಲ ಸಂಗಮ ಪೀಠಾಧ್ಯಕ್ಷ ಜಯ ಮೃತ್ಯುಂಜಯ ಸ್ವಾಮೀಜಿ ನೇತೃತ್ವದಲ್ಲಿ ಕಾಲ್ನಡಿಗೆ ಹಮ್ಮಿಕೊಳ್ಳಲಾಗಿತ್ತು. ಕಾಲ್ನಡಿಗೆಯಲ್ಲಿ ಪಂಚಮಸಾಲಿ ಸಮುದಾಯದ ನಾಯಕರೇ ಸೇರಿದ್ದರು. ವಕೀಲರು ದಂಡೇ ಬಂದಿತ್ತು. ಬೆಂಗಳೂರಿನ ಶಿವಾನಂದ ಸರ್ಕಲ್ ಬಳಿಯ ಗಾಂಧಿ ಭವನದಿಂದ ಸಿಎಂ ಗೃಹ ಕಚೇರಿಗೆ ಕಾಲ್ನಡಿಗೆಯಲ್ಲೇ ತೆರಳಲಾಯಿತು. ಕಾಲ್ನಡಿಗೆಯಲ್ಲಿ ಸ್ವಾಮೀಜಿಗೆ ಬಿಜೆಪಿ ಶಾಸಕ ಯತ್ನಾಳ್ ಸೇರಿದಂತೆ ರಾಜಕೀಯ ನಾಯಕರು ಸಾಥ್ ಕೊಟ್ಟರು.

**ನಮ್ಮ ಸಮಾಜದ ಋಣ ನಿಮ್ಮ ಮೇಲೆ ಇದೆ: ಸ್ವಾಮೀಜಿ:** ಕಾಲ್ನಡಿಗೆಯಲ್ಲಿ ಮತನಾಡಿದ ಜಯ ಮೃತ್ಯುಂಜಯ ಸ್ವಾಮೀಜಿ, ಕಳೆದ 30 ವರ್ಷಗಳಿಂದ ಹಕ್ಕೊತ್ತಾಯ ಆಗಿದೆ. 3 ವರ್ಷಗಳಿಂದ ನಿರಂತರ ಹೋರಾಟ ಮಾಡಿದ್ದೇವೆ. ನಮ್ಮ ಸಮಾಜದ ಋಣ ನಿಮ್ಮ ಮೇಲಿದೆ, ಮೊದಲು ಮೀಸಲಾತಿ ಕೊಡಿ ಎಂದು ಸಿದ್ದರಾಮಯ್ಯ ಅವರನ್ನು ಉದ್ದೇಶಿಸಿ ಆಗ್ರಹಿಸಿದರು.

**ಸಿಎಂ ಜೊತೆ ಫೋನ್‌ನಲ್ಲಿ ಸ್ವಾಮೀಜಿ ಮಾತು:** ಕಾಲ್ನಡಿಗೆ ಸಂದರ್ಭ ಮಾಜಿ ಸಚಿವರಾದ ವಿನಯ್ ಕುಲಕರ್ಣಿ, ಸಿಸಿ ಪಾಟೀಲ್, ಶಾಸಕ ಬಸನಗೌಡ ಪಾಟೀಲ್ ಯತ್ನಾಳ ಭಾಗಿಯಾಗಿದ್ದರು. ಇದೇ ವೇಳೆ ಮಾಜಿ ಸಚಿವ ವಿನಯ್ ಕುಲಕರ್ಣಿ ತಮ್ಮ ಫೋನನಿಂದಲೇ ಸಿಎಂಗೆ ಕರೆ ಮಾಡಿ ಬಸವ ಜಯಮೃತ್ಯುಂಜಯ ಸ್ವಾಮೀಜಿ ಕೈಗೆ ಕೊಟ್ಟರು. ಈ ವೇಳೆ ಸಿಎಂ ಜೊತೆಗೆ ಸ್ವಾಮೀಜಿ ಎರಡು ನಿಮಿಷ ಮಾತನಾಡಿದರು. ಸಿಎಂ ನಮಗೆ ಸಮಯ ನಿಗದಿ ಮಾಡಿ ತಿಳಿಸುವವರಗೂ ನಾವು ಹೋರಾಟ ಕೈ ಬಿಡಲ್ಲ ಎಂದು ಸ್ವಾಮೀಜಿ ಪಟ್ಟು ಹಿಡಿದರು.

ಬಳಿಕ ಮಾತನಾಡಿದ ಜಯಮೃತ್ಯಂಜಯ ಸ್ವಾಮೀಜಿ, ಸಿಎಂ ನಮ್ಮ ಹೋರಾಟಕ್ಕೆ ಮಣಿದು ಸಭೆ ಕರೆದಿದ್ದಾರೆ ಎಂದರು. 2 ಬಾರಿ ಸಭೆ ಮಾಡುತ್ತೇವೆ ಎಂದು ಮಾತುಕೊಟ್ಟಿದ್ದಾರೆ ಎಂದರು.

## ಮುಡಾ ಕೇಸ್‌ನಲ್ಲಿ ಹಣಕಾಸು ವಹಿವಾಟು ನಡೆದಿಲ್ಲ
# ಹಣಕಾಸಿನ ವಿಚಾರ ಎಲ್ಲೂ ತನಿಖೆಯಾಗಿಲ್ಲ



**ಬೆಂಗಳೂರು:** ಇಡಿ ದಾಳಿಯು ಸರ್ವೇ ಸಾಮಾನ್ಯವಾಗಿದೆ. ಇಡಿ ತನಿಖೆ ಮಾಡಬೇಕು ಅಂದರೆ ಅವರು ಕೆಲವೊಂದು ಪ್ರೊಸೀಜರ್ ಫಾಲೋ ಮಾಡಬೇಕು. ಅವರ ಕಾರ್ಯವೈಖರಿ ಪಾರದರ್ಶಕವಾಗಿರಬೇಕು. ಇಲ್ಲಿ ಯಾವುದೇ ಹಣಕಾಸು ವಹಿವಾಟು ನಡೆದಿಲ್ಲ. ಹಣಕಾಸಿನ ವಿಚಾರ ಎಲ್ಲೂ ತನಿಖೆಯಾಗಿಲ್ಲ ಎಂದು ಮಾಜಿ ಸಂಸದ ಡಿ.ಕೆ.ಸುರೇಶ್ ಹೇಳಿದ್ದಾರೆ.

ಈ ಬಗ್ಗೆ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಇಡಿಯವರು ಹತ್ತು ಹದಿನೈದು ದಿನದ ಹಿಂದೆ ಪ್ರಕರಣ ದಾಖಲು ಮಾಡಿಕೊಂಡಿದ್ದರು. ಅವರ ದಾಳಿ ಸರ್ವೇ ಸಾಮಾನ್ಯವಾದದ್ದು. ಇಲ್ಲಿ ಯಾವುದೇ ಹಣಕಾಸು ವಹಿವಾಟು ನಡೆದಿಲ್ಲ. ಹಣಕಾಸಿನ ವಿಚಾರ ಎಲ್ಲೂ ತನಿಖೆಯಾಗಿಲ್ಲ. ಕೊನೆಗೆ ಈ ಕೇಸ್‌ನಲ್ಲಿ ಏನೂ ಇಲ್ಲ ಅನ್ನೋದು ಅವರಿಗೆ ಗೊತ್ತಾಗುತ್ತದೆ ಎಂದರು.

ಈ ಪ್ರಕರಣ ಸರ್ಕಾರದ ನಡುವಿನ ವ್ಯವಹಾರವಾಗಿದೆ ಹೊರತು ಖಾಸಗಿ ವ್ಯಕ್ತಿಗಳಿಗೆ ಸಂಬಂಧ ಪಟ್ಟಿದ್ದು ಅಲ್ಲ. ಲೋಕಾಯುಕ್ತದಲ್ಲಿ 120 ಬಿ ಹಾಕಿದ್ದಾರೆ. ಇದರಲ್ಲಿ ಲೋಕಾಯುಕ್ತ ಪ್ರವೇಶಕ್ಕೆ ಅವಕಾಶವಿದೆ. ಆ ನಿಟ್ಟಿನಲ್ಲಿ ತನಿಖೆ ನಡೆದಾಗ ಸತ್ಯಾಂಶ ಹೊರಗೆ ಬರುತ್ತದೆ. ಇದೊಂದು ರಾಜಕೀಯ ಪ್ರೇರಿತ ದಾಳಿ, ಪ್ರಕರಣವಾಗಿದೆ. ಇಲ್ಲಿ ಯಾವುದೇ ಸತ್ಯಾಂಶ ಇಲ್ಲ. ಇದರ ಬಗ್ಗೆ ನ್ಯಾಯಾಲಯದಲ್ಲಿ ಕೂಲಂಕಷವಾಗಿ ತನಿಖೆ ನಡೆದಿದೆ. ಇದಕ್ಕೆ ಸಿಎಂ ಹೆದರಬೇಕಿಲ್ಲ. ಇದರಲ್ಲಿ ಏನು ಇಲ್ಲ ಎಂದು ಅವರಿಗೂ ಕೊನೆಗೆ ಅರಿವಾಗುತ್ತದೆ ಎಂದು ತಿಳಿಸಿದರು.

ಇಡಿ ವಿರುದ್ಧ ನಾಗೇಂದ್ರ ಆರೋಪ ವಿಚಾರವಾಗಿ ಪ್ರತಿಕ್ರಿಯಿಸಿ, ವಿರೋಧ ಪಕ್ಷದ ಮೇಲಿನ ದಾಳಿ ಹೊಸದೇನಲ್ಲ. ಬಲಿಷ್ಠವಾಗಿರುವ ರಾಜಕೀಯ ನಾಯಕರನ್ನು ಕುಗ್ಗಿಸುವುದಕ್ಕೆ ಇಂತಹ ಕೆಲಸ ಮಾಡುತ್ತಿದ್ದಾರೆ. ಅದಕ್ಕೆ ಅವರು ವಿರೋಧ ಪಕ್ಷದ ಮೇಲೆ ಐಟಿ, ಇಡಿ, ಸಿಬಿಐಯನ್ನು ಅಸ್ತ್ರವಾಗಿ ಬಳಸಿಕೊಳ್ಳುತ್ತಿದ್ದಾರೆ. ನಮ್ಮ ವಿಪಕ್ಷಗಳ ಮೇಲೆ ಆ ಅಸ್ತ್ರಗಳನ್ನು ಪದೇ ಪದೇ ಪ್ರಯೋಗ ಮಾಡ್ತಿದ್ದಾರೆ. ನಮಗೆ ಅನುಕೂಲ ಆಗುತ್ತೆ ಎಂದು ಕಳೆದ 10 ವರ್ಷಗಳಿಂದ ಅವರು ಇದನ್ನೇ ಮಾಡುತ್ತಿದ್ದಾರೆ ಎಂದು ಹರಿಹಾಯ್ದರು.

ಚನ್ನಪಟ್ಟಣ ಚುನಾವಣೆ ಟಿಕೆಟ್ ವಿಚಾರವಾಗಿ ಮಾತನಾಡಿ, ಸಹೋದರನ ಜೊತೆ ಪ್ರತಿದಿನ ಭೇಟಿ ಮಾಡುತ್ತೇನೆ. ಅದರಲ್ಲಿ ಹೊಸದೇನು ಇಲ್ಲ, ಕ್ಷೇತ್ರಕ್ಕೆ ಸಂಬಂಧಿಸಿದಂತೆ ಚರ್ಚಿಸಿದ್ದೇವೆ. ಅಭ್ಯರ್ಥಿ ತಯಾರಿ ಬಗ್ಗೆ ಮಾತನಾಡಿದ್ದೇವೆ. ಮುಖಂಡರು ಕಾರ್ಯಕರ್ತರ ಜೊತೆ ಚರ್ಚಿಸಿದ್ದೇವೆ. ಜನ ನನಗೆ ವಿಶ್ರಾಂತಿ ಕೊಟ್ಟಿದ್ದಾರೆ. ವಿಶ್ರಾಂತಿ ತೆಗೆದುಕೊಳ್ಳಿ ಎಂದಿದ್ದಾರೆ. ಅಚ್ಚರಿಯ ಅಭ್ಯರ್ಥಿಯನ್ನ ನಮ್ಮ ಪಕ್ಷ ಕೊಡಲಿದೆ ಎಂದು ತಿಳಿಸಿದರು.

ಮೈತ್ರಿಕೂಟದದಿಂದ ಅಚ್ಚರಿ ಅಭ್ಯರ್ಥಿ ಬರುವ ವಿಚಾರದ ಬಗ್ಗೆ ಪ್ರತಿಕ್ರಿಯಿಸಿ, ಮೈತ್ರಿಕೂಟಕ್ಕೂ ನಮಗೂ ಸಂಬಂಧವಿಲ್ಲ. ನೀವು ಯಾರನ್ನ ಮೈತ್ರಿಕೂಟದ ಅಭ್ಯರ್ಥಿ ಅಂತೀರೋ ಗೊತ್ತಿಲ್ಲ. ನಾವು ಕಳೆದ ಮೂರು ತಿಂಗಳಿಂದ ಕೆಲಸ ಮಾಡುತ್ತಿದ್ದೇವೆ. ಚನ್ನಪಟ್ಟಣಕ್ಕೆ ಹೊಸದಿಕ್ಕು ಕೊಡುತ್ತಿದ್ದೇವೆ. ಸಿಎಂ, ಡಿಸಿಎಂ ಕೂಡ ಕೆಲಸ ಮಾಡುತ್ತಿದ್ದಾರೆ. ಚನ್ನಪಟ್ಟಣ ಗೆಲ್ಲೋಕೆ ಬೇಕಾದ ಪ್ರಯತ್ನ ಮಾಡುತ್ತಿದ್ದೇವೆ ಎಂದು ಹೇಳಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com